ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ನವೆಂಬರ್ 14 ಗುರುವಾರ 2024

₹4

ಸಂಪುಟ: 45 | ಸಂಚಿಕೆ: 207 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com



ಮನೆಯಲ್ಲಿ ಅಕ್ರಮವಾಗಿ ಗಾಂಜಾ ಸಂಗ್ರಹಿಸಿದ್ದ ಇಬ್ಬರ ಬಂಧನ


ಉದಯಗಿರಿ ಪೊಲೀಸರು ಗಾಂಜಾ ವಶಪಡಿಸಿಕೊಂಡಿರುವುದು.

ಮೈಸೂರು, ನ.13(ಆರ್‌ಕೆ)– ಮನೆಯೊಂದರ ಮೇಲೆ ನಿನ್ನೆ (ಮಂಗಳವಾರ) ದಾಳಿ ನಡೆಸಿದ ಉದಯಗಿರಿ ಠಾಣೆ ಪೊಲೀಸರು ಇಬ್ಬರನ್ನು ಬಂಧಿಸಿ, 154.5 ಕೆ.ಜಿ. ಗಾಂಜಾ ವಶಪಡಿಸಿಕೊಂಡಿದ್ದಾರೆ.

ದಾಳಿ ವೇಳೆ ಆರೋಪಿಗಳು ಅಕ್ರಮವಾಗಿ ಪ್ಲಾಸ್ಟಿಕ್ ಚೀಲಗಳಲ್ಲಿ ಗಾಂಜಾ ಸಂಗ್ರಹಿಸಿಟ್ಟು ಮಾರಾಟ ಮಾಡುತ್ತಿದ್ದುದು ತಿಳಿದು ಬಂದ ಹಿನ್ನೆಲೆಯಲ್ಲಿ ಎನ್‌ಡಿಪಿಎಸ್ ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಂಡು ಇಬ್ಬರನ್ನು ಬಂಧಿಸಿ, ತಲೆಮರೆಸಿಕೊಂಡಿರುವ ಪ್ರಮುಖ ಆರೋಪಿ ಪತ್ತೆಗೆ ಪೊಲೀಸರು ವ್ಯಾಪಕ ಶೋಧ ನಡೆಸುತ್ತಿದ್ದಾರೆ.

ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಮಾರ್ಗದರ್ಶನದಂತೆ ಕಾನೂನು ಸುವ್ಯವಸ್ಥೆ ವಿಭಾಗದ ಡಿಸಿಪಿ ಎಂ. ಮುತ್ತುರಾಜು ಅವರ ನೇತೃತ್ವದಲ್ಲಿ ದೇವರಾಜ ವಿಭಾಗದ ಎಸಿಪಿ ಶಾಂತಮಲ್ಲಪ್ಪ, ಉದಯಗಿರಿ ಠಾಣೆ ಇನ್‌ಸ್ಪೆಕ್ಟರ್ ಕೆ.ಎನ್.ಸುಧಾಕರ್, ಸಬ್‌ಇನ್ಸ್‌ಪೆಕ್ಟರ್‌ಗಳಾದ ಜಿ.ನಾಗರಾಜ ನಾಯಕ, ರೂಪೇಶ್ ಹಾಗೂ ಸಿಬ್ಬಂದಿಗಳಾದ ಸಿ.ರಾಜು, ಮಹೇಶ್, ಶಿವಪ್ರಸಾದ್, ರಾಜೇಶ, ಕರಿಯಪ್ಪ ಪ್ರಕಾಶ್ ರಾಥೋಡ್, ಸಂತೋಷ್ ಪವಾರ್, ಸುಹೇಲ್, ರಾಜೇಶ್, ಆದರ್ಶ್, ನಂದಿತಾ ಹಾಗೂ ನಾಜಿಯಾ ಷರೀಫ್ ಅವರು ಪತ್ತೆ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರು.

ಶಾಸಕರಿಂದ ಅಂಗವಿಕಲರಿಗೆ ವಾಹನ ವಿತರಣೆ


ಕೃಷ್ಣರಾಜ ಕ್ಷೇತ್ರದ ವ್ಯಾಪ್ತಿಯಲ್ಲಿ ಅಂಗವಿಕಲರಿಗೆ ಮೈಸೂರು ಮಹಾನಗರ ಪಾಲಿಕೆಯ ಶೇ.5ರ ಅನುದಾನದಡಿಯಲ್ಲಿ ತ್ರಿಚಕ್ರ ವಾಹನವನ್ನು ಶಾಸಕ ಟಿ.ಎಸ್. ಶ್ರೀವತ್ಸ ವಿತರಿಸಿದರು. ಈ ವೇಳೆ ಹೇಮಂತ್‌ಗೌಡ, ವೇಣು ಗೋಪಾಲ್, ರಾಜೇಶ್, ಜೋಗಿಮಂಜು, ರಮೇಶ್, ಸೋಮಸುಂದರ್ ಮತ್ತಿತರರಿದ್ದರು.

'ಆಡಳಿತ ಸುಧಾರಣಾ ಆಯೋಗದ ಶಿಫಾರಸ್ಸುಗಳು' ಕುರಿತು ಇಂದು ಉಪನ್ಯಾಸ

ಮೈಸೂರು, ನ.13(ಆರ್‌ಕೆ)– ಮೈಸೂರಿನ ಮಾನಸಗಂಗೋತ್ರಿಯಲ್ಲಿರುವ ಮಾನವಿಕ ಸಭಾಂಗಣದಲ್ಲಿ ನಾಳೆ (ನ.14) ಬೆಳಗ್ಗೆ 11 ಗಂಟೆಗೆ 'ಕರ್ನಾಟಕದ ಎರಡನೇ ಆಡಳಿತ ಸುಧಾರಣಾ ಆಯೋಗದ ಶಿಫಾರಸ್ಸುಗಳು' ಎಂಬ ವಿಷಯ ಕುರಿತಂತೆ ವಿಶೇಷ ಉಪನ್ಯಾಸ ಏರ್ಪಡಿಸಲಾಗಿದೆ.

ಮೈಸೂರು ವಿಶ್ವವಿದ್ಯಾನಿಲಯದ ರಾಜ್ಯಶಾಸ್ತ್ರ ಅಧ್ಯಯನ ವಿಭಾಗ, ಆಧುನಿಕ ಸುಧಾರಣಾ ಅಧ್ಯಯನ ವಿಭಾಗ ಹಾಗೂ ಭಾರತೀಯ ಆಡಳಿತ ಸಂಸ್ಥೆ ಇವರ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಿರುವ ವಿಶೇಷ ಉಪನ್ಯಾಸದಲ್ಲಿ ರಾಜ್ಯ ಸರ್ಕಾರದ ನಿವೃತ್ತ ಮುಖ್ಯ ಕಾರ್ಯದರ್ಶಿ ಹಾಗೂ ಕರ್ನಾಟಕ ಆಡಳಿತ ಸುಧಾರಣಾ ಆಯೋಗ–2ರ ಅಧ್ಯಕ್ಷ ತ.ಮ. ವಿಜಯಭಾಸ್ಕರ್ ಅವರು ಸಂಪನ್ಮೂಲ ವ್ಯಕ್ತಿಯಾಗಿ ಪಾಲ್ಗೊಂಡು ವಿಚಾರ ಮಂಡನೆ ಮಾಡುವರು. ಮೈಸೂರು ವಿಶ್ವವಿದ್ಯಾನಿಲಯದ ರಾಜ್ಯಶಾಸ್ತ್ರ ಅಧ್ಯಯನ ವಿಭಾಗದ ಅಧ್ಯಕ್ಷ ಪ್ರೊ.ಕೃಷ್ಣ ಹೊಂಬಳ ಅಧ್ಯಕ್ಷತೆ ವಹಿಸಲಿರುವ ಕಾರ್ಯಕ್ರಮದಲ್ಲಿ ಭಾರತೀಯ ಸಾರ್ವಜನಿಕ ಆಡಳಿತ ಸಂಸ್ಥೆ ಮೈಸೂರು ಸ್ಥಳೀಯ ಶಾಖೆಯ ಅಧ್ಯಕ್ಷ ಡಿ.ಎಸ್.ರವಿಕುಮಾರ್ ಹಾಗೂ ಕಾರ್ಯದರ್ಶಿ ಜೆ.ಸೋಮಶೇಖರ್ ಅವರು ಪಾಲ್ಗೊಳ್ಳಲಿದ್ದಾರೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ತುಳಸಿ ಹಬ್ಬ ಆಚರಣೆ...


ಮೈಸೂರಿನ ಇರ್ವಿನ್ ರಸ್ತೆಯಲ್ಲಿರುವ ಪಂಚಮುಖಿ ಆಂಜನೇಯ ಸ್ವಾಮಿ ದೇವಸ್ಥಾನದಲ್ಲಿ ಕಾರ್ತಿಕ ಮಾಸ ಹಾಗೂ ತುಳಸಿ ಹಬ್ಬದ ಪ್ರಯುಕ್ತ ತುಳಸಿ ಕಟ್ಟೆಗೆ ಅಲಂಕರಿಸಿ ಪೂಜೆ ನೆರವೇರಿಸಿ, ನಂತರ ಭಕ್ತಾದಿಗಳಿಗೆ ದೇವಸ್ಥಾನದ ಪ್ರಧಾನ ಅರ್ಚಕ ವಿದ್ವಾನ್ ಎಸ್.ಕೃಷ್ಣಮೂರ್ತಿ ಉಚಿತವಾಗಿ ತುಳಸಿ ಗಿಡ ವಿತರಿಸಿದರು. ಇದೇ ವೇಳೆ ನವೀನಾಕ್ಷ, ಜಯಮ್ಮ, ಶ್ರೀನಿವಾಸ್ ಇನ್ನಿತರರು ಹಾಜರಿದ್ದರು.


ಬೈಕಿಗೆ ಸಾರಿಗೆ ಬಸ್ ಡಿಕ್ಕಿ: ಸವಾರನಿಗೆ ತೀವ್ರ ಗಾಯ

ಮೈಸೂರು, ನ.13(ಆರ್‌ಕೆ)– ಬೈಕ್‌ಗೆ ನಗರ ಘಟಕದ ಸಾರಿಗೆ ಬಸ್ ಡಿಕ್ಕಿ ಹೊಡೆದ ಪರಿಣಾಮ ಸವಾರ ತೀವ್ರವಾಗಿ ಗಾಯಗೊಂಡಿರುವ ಘಟನೆ ಇಂದು ಬೆಳಗ್ಗೆ ಮೈಸೂರಿನ ಲಷ್ಕರ್ ಪೊಲೀಸ್ ಠಾಣೆ ಎದುರು ನೆಹರು ಸರ್ಕಲ್‌ನಲ್ಲಿ ಸಂಭವಿಸಿದೆ.

ಮೈಸೂರಿನ ಎನ್.ಆರ್.ಮೊಹಲ್ಲಾ ನಿವಾಸಿ ರಾಜೇಶ್ (28) ಗಾಯಗೊಂಡವರಾಗಿದ್ದು, ಆತನನ್ನು ತಕ್ಷಣ ಕೆ.ಆರ್. ಆಸ್ಪತ್ರೆಗೆ ಕರೆದೊಯ್ದು ಪ್ರಥಮ ಚಿಕಿತ್ಸೆ ಕೊಡಿಸಿದ ಬಳಿಕ ಹೆಚ್ಚಿನ ಚಿಕಿತ್ಸೆಗಾಗಿ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಕಾಲಿನ ಮೂಳೆ ಮುರಿದಿದ್ದ ಆತನಿಗೆ ಖಾಸಗಿ ಆಸ್ಪತ್ರೆಯಲ್ಲಿ ಇಂದು ಶಸ್ತ್ರಚಿಕಿತ್ಸೆ ಮಾಡಲಾಯಿತು. ಕೆಎಸ್‌ಆರ್‌ಟಿಸಿ ಗ್ರಾಮಾಂತರ ಬಸ್ ನಿಲ್ದಾಣದಿಂದ ಇರ್ವಿನ್ ರಸ್ತೆ ಕಡೆಗೆ ಬಂದ ಸಾರಿಗೆ ಬಸ್ ಎದುರಿನಿಂದ ಬರುತ್ತಿದ್ದ ಬೈಕಿಗೆ ಬೆಳಗ್ಗೆ 10 ಗಂಟೆ ವೇಳೆ ನೆಹರು ಸರ್ಕಲ್‌ನಲ್ಲಿ ಡಿಕ್ಕಿ ಹೊಡೆಯಿತು. ಸ್ಥಳಕ್ಕೆ ಧಾವಿಸಿದ ಎನ್.ಆರ್.ಸಂಚಾರ ಠಾಣೆ ಪೊಲೀಸರು ರಾಜೇಶ್‌ನನ್ನು ಆಸ್ಪತ್ರೆಗೆ ಕರೆದೊಯ್ದು ಪ್ರಕರಣ ದಾಖಲಿಸಿಕೊಂಡಿದ್ದಾರೆ.

ನಿಧನ

ಬೆಣಗನಹಳ್ಳಿಯ ದೇವಲಿಂಗಮ್ಮ



ಕೆ.ಆರ್.ನಗರ, ನ. 13– ಸಾಲಿಗ್ರಾಮ ತಾಲೂಕಿನ ಚುಂಚನಕಟ್ಟೆ ಹೋಬಳಿ ಬೆಣಗನಹಳ್ಳಿ ಗ್ರಾಮದ ದೇವಲಿಂಗಮ್ಮ (97) ಮಂಗಳವಾರ ನಿಧನರಾದರು. ಮೃತರು ಐವರು ಪುತ್ರಿಯರು, ಓರ್ವ ಪುತ್ರ ಸೇರಿದಂತೆ ಅಪಾರ ಬಂಧು ವರ್ಗ ಅಗಲಿದ್ದಾರೆ. ಅಂತ್ಯಕ್ರಿಯೆ ಬುಧವಾರ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಕೆ.ರಾಜೀವ್



ಮೈಸೂರಿನ ಶ್ರೀ ಕನಕದಾಸ ಪತ್ತಿನ ಸಹಕಾರ ಸಂಘದ ನಿರ್ದೇಶಕರು ಮತ್ತು ಕಾಂಗ್ರೆಸ್ ಮುಖಂಡರಾದ ಕೆ.ರಾಜೀವ್(43) ಬುಧವಾರ ಬೆಳಗ್ಗೆ ಹೃದಯಾಘಾತದಿಂದ ತಮ್ಮ ನಿವಾಸದಲ್ಲಿ ನಿಧನರಾದರು. ಚಾಮರಾಜ ಮೊಹಲ್ಲಾ ದಿವಾನ್ಸ್ ರಸ್ತೆಯ ನಿವಾಸಿಯಾದ ರಾಜೀವ್ ಅವರು ಶಾಸಕ ಕೆ.ಹರೀಶ್‌ಗೌಡರ ನಿಕಟ ವಲಯದಲ್ಲಿ ಗುರುತಿಸಿಕೊಂಡಿದ್ದರು. ಪತ್ನಿ ವೃಂದ, ಪುತ್ರ, ತಂದೆ–ತಾಯಿ ಸೇರಿದಂತೆ ಅಪಾರ ಬಂಧು–ವರ್ಗ ಅಗಲಿದ್ದಾರೆ. ಬುಧವಾರ ಸಂಜೆ ಚಾಮುಂಡಿಬೆಟ್ಟದ ತಪ್ಪಲಿನ ಹರಿಶ್ಚಂದ್ರ ಘಾಟ್‌ನಲ್ಲಿ ಅಂತ್ಯಕ್ರಿಯೆ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಶ್ರೀರಾಂಪುರ ಪಟ್ಟಣ ಪಂಚಾಯಿತಿಯಲ್ಲಿ ಹಣ ದುರುಪಯೋಗ

ಕರ್ನಾಟಕ ವೀರಕೇಸರಿ ಪಡೆಯಿಂದ ಪ್ರತಿಭಟನೆ


ಶ್ರೀರಾಂಪುರ ಪಟ್ಟಣ ಪಂಚಾಯಿತಿಯಲ್ಲಿ ರಾಜಸ್ವ ನಿರೀಕ್ಷಕ, ಕರ ವಸೂಲಿಗಾರ ಹಣ ದುರುಪಯೋಗ ಮಾಡಿಕೊಂಡಿರುವ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ಕರ್ನಾಟಕ ವೀರಕೇಸರಿ ಪಡೆ ವತಿಯಿಂದ ಜಿಲ್ಲಾಧಿಕಾರಿ ಕಚೇರಿ ಬಳಿ ಬುಧವಾರ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ನ.13(ಜಿಎ)–ಶ್ರೀರಾಂಪುರ ಪಟ್ಟಣ ಪಂಚಾಯಿತಿಯಲ್ಲಿ ರಾಜಸ್ವ ನಿರೀಕ್ಷಕ, ಕರ ವಸೂಲಿಗಾರ ಹಣ ದುರುಪಯೋಗ ಮಾಡಿಕೊಂಡಿದ್ದು ಅವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ಕರ್ನಾಟಕ ವೀರಕೇಸರಿ ಪಡೆ ವತಿಯಿಂದ ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ನಡೆಸಲಾಯಿತು.

ಶ್ರೀರಾಂಪುರ ಪಟ್ಟಣ ಪಂಚಾಯಿತಿಯಲ್ಲಿ ಕರ ವಸೂಲಿಗಾರ ಕುಮಾರಸ್ವಾಮಿ, ರಾಜಸ್ವ ನಿರೀಕ್ಷಕ ಶಕೀಲ್ ಅಹಮ್ಮದ್ ಸೇರಿ ಖಾತೆದಾರರಿಂದ ವಸೂಲಿ ಮಾಡಿರುವ ಸುಮಾರು 1,16,965 ರೂ.ಗಳನ್ನು ಪಟ್ಟಣ ಪಂಚಾಯಿತಿ ಖಾತೆಗೆ ವರ್ಗಾಯಿಸದೆ ತಮ್ಮ ಸ್ವಂತ ಖಾತೆಗೆ ವರ್ಗಾಯಿಸಿಕೊಂಡು ಹಣ ದುರುಪಯೋಗ ಪಡಿಸಿಕೊಂಡಿರುವುದು ತನಿಖೆಯಲ್ಲಿ ಸಾಬೀತಾಗಿದೆ. ಆದರೆ, ಇವರ ವಿರುದ್ಧ ಮೇಲಾಧಿಕಾರಿಗಳು ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ. ಕೇವಲ ಕಾರಣ ಕೇಳಿ ನೋಟಿಸ್ ನೀಡಿದಂತೆ ನಾಟಕವಾಡುತ್ತಿದ್ದಾರೆ ಎಂದು ಪ್ರತಿಭಟನಾಕಾರರು ದೂರಿದರು.

ಶ್ರೀರಾಂಪುರ ಪಟ್ಟಣ ಪಂಚಾಯಿತಿ ಖಾತೆದಾರರಿಗೆ ನೀಡುವ ನಮೂನೆ–3ಗೆ ಅರ್ಜಿ ಸಲ್ಲಿಸುವ ಅರ್ಜಿದಾರರಿಗೆ ಒಂದೊಂದು ಸಬೂಬು ಹೇಳಿ ಅಲೆಸುತ್ತಿದ್ದಾರೆ. ಮಧ್ಯವರ್ತಿಗಳ ಮೂಲಕ ಬಂದರೆ ಕ್ಷಣಮಾತ್ರದಲ್ಲಿಯೇ ನಮೂನೆ–3 ಮಾಡಿಕೊಡುತ್ತಾರೆ. ಆದರೆ, ನೇರವಾಗಿ ಅರ್ಜಿ ಸಲ್ಲಿಸುವ ಖಾತೆದಾರರಿಗೆ ದಾಖಲೆಗಳು ಸರಿ ಇಲ್ಲವೆಂದು ಸಬೂಬು ಹೇಳುತ್ತಾ ಕಚೇರಿಗೆ ಅಲೆದಲೆದು ಸಾಕಾಗುವಂತೆ ಮಾಡುತ್ತಾರೆ. ಇಲ್ಲಿ ಜನಪ್ರತಿನಿಧಿಗಳು ಇಲ್ಲದ ಕಾರಣ ಮಧ್ಯವರ್ತಿಗಳ ಪಡೆಯೇ ಇದೆ. ಸಾರ್ವಜನಿಕರು ಯಾವುದೇ ಸೇವೆ ಪಡೆಯಬೇಕಾದರೆ ಮಧ್ಯವರ್ತಿಗಳ ಮೂಲಕ ಬಂದರೆ ಕ್ಷಣಮಾತ್ರದಲ್ಲಿ ಖಾತೆ, ಕಂದಾಯ, ನಮೂನೆ–3 ಸಿಗುತ್ತದೆ. ಇಲ್ಲವಾದರೆ ಸರ್ಕಾರಿ ಸವಲತ್ತು ಬಡವರಿಗೆ ಗಗನಕುಸುಮದಂತಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸರ್ಕಾರದಿಂದ ಬರುವ ಹಣ ಸರ್ಕಾರದಿಂದ ಅನ್ಯಕ್ರಾಂತ (ಅಲಿನೇಷನ್) ಆಗದ ಖಾಸಗಿ ಬಡಾವಣೆಗಳ ಅಭಿವೃದ್ಧಿಗೆ ದುರುಪಯೋಗ ಮಾಡಿಕೊಂಡು ನಮೂನೆ–3ನ್ನು ನಿಯಮಗಳ ಪ್ರಕಾರ ಅನಧಿಕೃತ ಎಂದು ಕೊಡುವ ಬದಲು ಕೆಲವು ಪ್ರಭಾವಿ ಮುಖಂಡರುಗಳಿಗೆ ಅಧಿಕೃತವೆಂದು ನೀಡಿದ್ದಾರೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಶೇ.24ರ ಯೋಜನೆಯ ಅಭಿವೃದ್ಧಿಯ ಹಣ ಕೂಡ ದುರುಪಯೋಗ ಮಾಡಿಕೊಂಡಿದ್ದಾರೆ. ನಮೂನೆ–3ಗೆ ಅರ್ಜಿ ಸಲ್ಲಿಸಲು ಸಕಾಲ ರೀತಿಯಲ್ಲಿ ಆನ್‌ಲೈನ್ ಅರ್ಜಿಯನ್ನು ಕಡ್ಡಾಯವಾಗಿ ಅಳವಡಿಸಬೇಕು. ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕೂಡಲೇ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಮಧುವನ ಚಂದ್ರು, ವಿಷ್ಣು, ಸಿದ್ದರಾಜು, ಚೌಡನಾಯಕ, ಮರಿಸ್ವಾಮಿ ಸೇರಿದಂತೆ ಮತ್ತಿತರರು ಪಾಲ್ಗೊಂಡಿದ್ದರು.

ನ.16, ಮಧುಮೇಹ ಕುರಿತು ವಾಕಥಾನ್

ಮೈಸೂರು, ನ.13(ಜಿಎ)–ಮೈಸೂರಿನ ನ್ಯೂ ಡಯಾಕೇರ್ ಕೇಂದ್ರದ ವತಿಯಿಂದ ವಿಶ್ವ ಮಧುಮೇಹ ದಿನಾಚರಣೆ ಅಂಗವಾಗಿ ನ.16ರಂದು ಮಧುಮೇಹ ಅರಿವು ಕುರಿತ ವಾಕಥಾನ್ ಆಯೋಜಿಸಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಕೇಂದ್ರದ ವ್ಯವಸ್ಥಾಪಕ ನಿರ್ದೇಶಕ ಡಾ.ಎ.ಆರ್. ರೇಣುಕಾ ಪ್ರಸಾದ್ ಈ ವಿಷಯ ತಿಳಿಸಿ, ಅಂದು ಬೆಳಗ್ಗೆ ಏಳಕ್ಕೆ ಕೇಂದ್ರದ ಬಳಿ ವಾಕಥಾನ್‌ಗೆ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕ ಟಿ.ಎಸ್. ಶ್ರೀವತ್ಸ ಚಾಲನೆ ನೀಡುವರು. ಕೇಂದ್ರದಿಂದ ಆರಂಭವಾಗುವ ವಾಕಾಥಾನ್ ಫ್ಯಾಷನ್ ಫ್ಯಾಕ್ಟರಿ ಮುಂಭಾಗ ಸಾಗಿ ಕೃಷ್ಣರಾಜ ಬುಲೇವಾರ್ಡ್ ಬಳಿಯ ನ್ಯಾಯಾಲಯ ಮೂಲಕ ಎಂ.ಜಿ.ರಸ್ತೆ ಮೂಲಕ ಆರ್‌ಟಿಓ ಮೂಲಕ ಮರಳಿ ಕೇಂದ್ರಕ್ಕೆ ಬರಲಿದೆ ಎಂದರು. ವಾಕಥಾನ್‌ನಿಂದ ವಾಪಸಾದ ಬಳಿಕ ಥೈರಾಯಿಡ್, ಮಧುಮೇಹ ಹಾಗೂ ರಕ್ತದೊತ್ತಡದ ಬಗ್ಗೆ ಉಚಿತ ಪರೀಕ್ಷಾ ಶಿಬಿರ ಆಯೋಜಿಸಲಾಗಿದೆ. ವಾಕಥಾನ್‌ನಲ್ಲಿ ಪಾಲ್ಗೊಳ್ಳುವವರು ನೋಂದಾಯಿಸಿಕೊಳ್ಳಲು ನ. 14 ಕೊನೆ ದಿನ. ಹೆಚ್ಚಿನ ಮಾಹಿತಿಗೆ ದೂ. 0821– 4252800 ಸಂಪರ್ಕಿಸಬಹುದಾಗಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ಆರ್ಯನ್ ಗಂಧದಗುಡಿ, ಡಾ.ನವ್ಯಪ್ರಸಾದ್, ಅನುಕುಮಾರ್ ಉಪಸ್ಥಿತರಿದ್ದರು.

ವಿದ್ಯಾರ್ಥಿಗಳ ಮಾನಸಿಕ ಆರೋಗ್ಯ ಸಮಸ್ಯೆ ಕುರಿತು ಸಂಶೋಧನೆ

ಮೈಸೂರು,ನ.13(ಜಿಎ)– ಮೈಸೂರಿನ ವಿಶ್ವ ಪ್ರಾಣಿಕ್ ಹೀಲಿಂಗ್ ಫೌಂಡೇಷನ್ ಸಂಶೋಧನಾ ಕೇಂದ್ರದ ವತಿಯಿಂದ ವಿದ್ಯಾರ್ಥಿಗಳು ಎದುರಿಸುವ ಮಾನಸಿಕ ಆರೋಗ್ಯ ಸಮಸ್ಯೆ ಕುರಿತ ಸವಾಲುಗಳ ಬಗ್ಗೆ ನೆರವಾಗಲು ಹೊಸ ಮಾರ್ಗ ಕಂಡು ಹಿಡಿಯುವ ನಿಟ್ಟಿನಲ್ಲಿ ಸಂಶೋಧನೆ ಕೈಗೊಳ್ಳಲಾಗುತ್ತಿದೆ. ಈ ಸಂಶೋಧನೆಗೆ 18ರಿಂದ 22 ವರ್ಷ ವಯಸ್ಸಿನ ವಿದ್ಯಾರ್ಥಿಗಳು ಪಾಲ್ಗೊಳ್ಳಬಹುದು ಎಂದು ಸಂಶೋಧನಾ ವಿಭಾಗದ ಮುಖ್ಯಸ್ಥರಾದ ಶ್ರೀಕಾಂತ್ ಜೋಯಿಸ್ ತಿಳಿಸಿದರು.


ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇದು ಐದು ವಾರಗಳ ಅಧ್ಯಯನವಾಗಿದ್ದು, ಭಾಗವಹಿಸುವವರು ತಮ್ಮ ಮಾನಸಿಕ ಹಾಗೂ ಭಾವನಾತ್ಮಕ ಸ್ಥಿತಿ ಕುರಿತು ಉತ್ತರಿಸಬೇಕಾಗುತ್ತದೆ. ಇವರಿಗೆ ಅಗತ್ಯವಿದ್ದಲ್ಲಿ ಪ್ರಾಣಿಕ್ ಚಿಕಿತ್ಸೆ ನೀಡಲಾಗುವುದು. ಈ ಅಧ್ಯಯನದ ವೇಳೆ ಕಂಡು ಬರುವ ಫಲಿತಾಂಶವನ್ನು ವಿವಿಧ ಪ್ರತಿಷ್ಠಿತ ನಿಯತಕಾಲಿಕೆಗಳಲ್ಲಿ ಪ್ರಕಟಿಸಲಾಗುವುದು. ಭಾಗವಹಿಸುವವರಿಗೆ ಪ್ರಯಾಣ ಭತ್ಯೆ ನೀಡಲಾಗುವುದು. ಆಸಕ್ತ ವಿದ್ಯಾರ್ಥಿಗಳು ಮಾಹಿತಿಗೆ ದೂ. 0821–2340673 ಅಥವಾ 99160 02540 ಅನ್ನು ಸಂಪರ್ಕಿಸಬಹುದು ಎಂದರು. ಸುದ್ದಿಗೋಷ್ಠಿಯಲ್ಲಿ ಡಾ.ನಾಗೇಂದ್ರಪ್ರಸಾದ್, ರೂಪಾ, ಮಾನಸ, ವಿನು, ಡಾ.ಮಂಜುನಾಥ್ ಉಪಸ್ಥಿತರಿದ್ದರು.

ಕುರುಬ ಸಮುದಾಯದ ಓಲೈಕೆಗಾಗಿ ಮಹಾರಾಷ್ಟ್ರಕ್ಕೆ ಸಿದ್ದರಾಮಯ್ಯ

ಬೆಂಗಳೂರು: ರಾಜ್ಯದ ಮೂರು ಕ್ಷೇತ್ರಗಳ ಉಪ ಚುನಾವಣೆಗೆ ತೆರೆ ಬಿದ್ದಿದೆ, ಹೀಗಾಗಿ ಸಿಎಂ ಸಿದ್ದರಾಮಮಯ್ಯ ನೆರೆ ರಾಜ್ಯ ಮಹಾರಾಷ್ಟ್ರಕ್ಕೆ ನವೆಂಬರ್ 15ರಂದು ತೆರಳಲಿದ್ದು, ಅಲ್ಲಿ ಕಾಂಗ್ರೆಸ್ ಪರ ಪ್ರಚಾರ ನಡೆಸಲಿದ್ದಾರೆ.

ಅಸಾಧಾರಣ ಅಹಿಂದ ನಾಯಕ ಮತ್ತು ಕುರುಬ ಐಕಾನ್ ಆಗಿರುವ ಸಿದ್ದರಾಮಯ್ಯ ಅವರು ಧಂಗರ್–ಕುರುಬ ಮತ ಬ್ಯಾಂಕ್ ಅನ್ನು ಒಟ್ಟುಗೂಡಿಸುವ ನಿರೀಕ್ಷೆಯಿದೆ. ಒಂದು ಕೋಟಿಗೂ ಹೆಚ್ಚು ಜನಸಂಖ್ಯೆಯಿರುವ ಪ್ರಭಾವಿ ಬಣವಾಗಿರುವ ದಂಗರ್ ಕುರುಬ ಸಮುದಾಯ ಚುನಾವಣೆಯಲ್ಲಿ ಮಹತ್ತರ ಪ್ರಭಾವ ಬೀರುವ ಸಾಧ್ಯತೆಯಿದೆ. ಎರಡು ದಿನಗಳ ಪ್ರವಾಸದಲ್ಲಿ ಸಿದ್ದರಾಮಯ್ಯ ಸಮುದಾಯವನ್ನು ಓಲೈಸಲು ಸರಣಿ ರ್‍ಯಾಲಿಗಳನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಅವರ ಭೇಟಿಯು ದಕ್ಷಿಣ ಮಹಾರಾಷ್ಟ್ರದಲ್ಲಿ ಪ್ರಭಾವವನ್ನು ಬೀರಲು ಮತ್ತು ನಿರ್ಣಾಯಕ ನೆಲೆಯನ್ನು ಭದ್ರಪಡಿಸಲಿದೆ ಎಂದು ಹೇಳಲಾಗುತ್ತಿದೆ. ವಿಶೇಷವಾಗಿ ಸಾಂಗ್ಲಿ ಮತ್ತು ಕೊಲ್ಲಾಪುರದ ಸುತ್ತಲೂ ವಿಶೇಷವಾಗಿ ಪ್ರಚಾರ ನಡೆಸಲಿದ್ದಾರೆ. ಈ ಪ್ರದೇಶದಲ್ಲಿ ಧಂಗರ್–ಕುರುಬರು ಗಣನೀಯ ಸಂಖ್ಯೆಯಲ್ಲಿದ್ದಾರೆ ಎಂದು ಮುಖ್ಯಮಂತ್ರಿ ಕಚೇರಿ ಮೂಲಗಳು ಖಚಿತಪಡಿಸಿವೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

14.11.2024 ಗುರುವಾರ, ಮಳೆ ನಕ್ಷತ್ರ: ವಿಶಾಖ, 06.11.2024 ರಿಂದ 18.11.2024 ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ಶರದ್ ಋತು, ಕಾರ್ತಿಕ ಮಾಸ, ಶುಕ್ಲ ಪಕ್ಷ, ತಿಥಿ: ತ್ರಯೋದಶಿ, ನಕ್ಷತ್ರ: ಅಶ್ವಿನಿ, ರಾಹುಕಾಲ: ಮಧ್ಯಾಹ್ನ 1.30 ರಿಂದ 3 ಗಂಟೆಯವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಕತ್ತು ನೋವು, ಸೊಂಟ ನೋವು, ಭುಜದ ನೋವು ಇತರೆ ತೊಂದರೆಗಳಿಗೆ ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9ರಿಂದ.

■ **ಶ್ರೀ ಶಿವಯೋಗಿಸ್ವಾಮಿ ಪ್ರೌಢಶಾಲೆ ಹಾಗೂ ಪಿಯು ಕಾಲೇಜು, ಮೈಸೂರು ಜಿಲ್ಲಾ ಅಂಧತ್ವ ನಿವಾರಣೆ ಸಂಸ್ಥೆ, ಎಂಆರ್‌ಸಿ ಚಾರಿಟೆಬಲ್ ಟ್ರಸ್ಟ್ ಕಣ್ಣಿನ ಆಸ್ಪತ್ರೆ :** ಉಚಿತ ಕಣ್ಣಿನ ಪೊರೆ ತಪಾಸಣೆ ಮತ್ತು ಚಿಕಿತ್ಸಾ ಶಿಬಿರ, ಸ್ಥಳ: ಶಾಲಾ ಆವರಣ, ಶ್ರೀ ಶಿವಯೋಗಿಸ್ವಾಮಿ ಪ್ರೌಢಶಾಲೆ ಹಾಗೂ ಪಿಯು ಕಾಲೇಜು, ಗಾಂಧಿನಗರ, ಬೆಳಗ್ಗೆ 9 ರಿಂದ.

■ **ನವಕರ್ನಾಟಕ ಪಬ್ಲಿಕೇಷನ್ಸ್ ಪ್ರೈವೇಟ್ ಲಿಮಿಟೆಡ್ :** ಕನ್ನಡ ರಾಜ್ಯೋತ್ಸವ ಪ್ರಯುಕ್ತ ವಿಶೇಷ ರಿಯಾಯಿತಿ ಮಾರಾಟ, ಸ್ಥಳ: ಮಾರಾಟ ಮಳಿಗೆ, ರಾಮಸ್ವಾಮಿ ವೃತ್ತ, ಬೆಳಗ್ಗೆ 9.30 ರಿಂದ.

■ **ಜೆಎಸ್‌ಎಸ್ ಆಸ್ಪತ್ರೆ :** ವಿಶ್ವ ಮಧುಮೇಹ ದಿನದ ಪ್ರಯುಕ್ತ ವಾಕಥಾನ್, ಅತಿಥಿಗಳು : ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿ ಪ್ರಭಾರ ಉಪಕುಲಪತಿ ಡಾ.ಹೆಚ್. ಬಸವನಗೌಡಪ್ಪ, ಸ್ಥಳ: ಜೆಎಸ್‌ಎಸ್ ಆಸ್ಪತ್ರೆ, ಮಹಾತ್ಮ ಗಾಂಧಿ ರಸ್ತೆ, ಬೆಳಗ್ಗೆ 9.30ಕ್ಕೆ.

■ **ರಾಮ್‌ಸನ್ಸ್ ಪ್ರತಿಷ್ಠಾನ:** ಬೊಂಬೆ ಮನೆ, ದಸರೆ ಬೊಂಬೆ ಪ್ರದರ್ಶನದ 20ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆ ಮೇಲೆ, ನಜರ್‌ಬಾದ್ ಮುಖ್ಯ ರಸ್ತೆ ಬೆಳಗ್ಗೆ 10ರಿಂದ.

■ **ಭಾರತೀಯ ಅಂಚೆ ಇಲಾಖೆ :** 38ನೇ ಅಖಿಲ ಭಾರತ ಅಂಚೆ ಬ್ಯಾಡ್ಮಿಂಟನ್ ಪಂದ್ಯಾವಳಿ ಸಮಾರೋಪ ಸಮಾರಂಭ, ಮುಖ್ಯ ಅತಿಥಿಗಳು : ಅಂಚೆ ಸೇವಾ ಮಂಡಳಿ ಸದಸ್ಯ ಆಶಿಶ್ ಕುಮಾರ್, ಉಪಸ್ಥಿತರು : ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಶ್ರೀಮತಿ ಅಶ್ವಿನಿ ಅಕ್ಕುಂಜಿ, ಮುಖ್ಯ ಪೋಸ್ಟ್ ಮಾಸ್ಟರ್ ಎಸ್. ರಾಜೇಂದ್ರಕುಮಾರ್, ಸ್ಥಳ: ಚಾಮುಂಡಿ ವಿಹಾರ ಒಳಾಂಗಣ ಕ್ರೀಡಾಂಗಣ, ಸಂಜೆ 4.30ಕ್ಕೆ.

■ **ಕಾವೇರಿ ಆಯುರ್ವೇದ ಆಸ್ಪತ್ರೆ :** ಕೂದಲು ಉದುರುವಿಕೆಗೆ ಉಚಿತ ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ದೇವೇಗೌಡ ಸರ್ಕಲ್ ಹತ್ತಿರ, ಕೆಬಿಎಲ್ ಲೇಔಟ್, ಬೆಳಗ್ಗೆ 10 ಗಂಟೆಯಿಂದ.

■ **ಪ್ರೀತಿ ಕ್ಯಾನ್ಸರ್ ಸೆಂಟರ್ :** ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ, ಸ್ಥಳ: ಪ್ರೀತಿ ಕ್ಯಾನ್ಸರ್ ಸೆಂಟರ್, ಲಕ್ಷ್ಮೀಪುರಂ, ಬೆಳಗ್ಗೆ 10 ರಿಂದ.

■ **ಶಾರದಾ ವಿಲಾಸ ಫಾರ್ಮಸಿ ಕಾಲೇಜು :** ವಿಶ್ವ ಮಧುಮೇಹ ದಿನಾಚರಣೆ, ಮುಖ್ಯ ಅತಿಥಿಗಳು : ಕಾಮಾಕ್ಷಿ ಆಸ್ಪತ್ರೆಯ ಫಿಸಿಷಿಯನ್ ಡಾ. ಎಂ. ಶ್ರೀನಿವಾಸ, ಗೌರವ ಅತಿಥಿಗಳು : ಎಂಎಂಸಿಆರ್‌ಐ ಜನರಲ್ ಮೆಡಿಸಿನ್ ವಿಭಾಗದ ಮುಖ್ಯಸ್ಥ ಡಾ. ರಂಗಸ್ವಾಮಿ, ಸರ್ಕಾರಿ ನರ್ಸಿಂಗ್ ಕಾಲೇಜು ಪ್ರಿನ್ಸಿಪಾಲ್ ಡಾ. ನಂದಪ್ರಕಾಶ್, ಕೃಷ್ಣ ಆಯುರ್ವೇದ ಕೇಂದ್ರದ ಸಂಸ್ಥಾಪಕ ಡಾ. ಎಲ್.ಪಿ. ಅವಿನಾಶ್, ಅಧ್ಯಕ್ಷತೆ : ಶಾರದಾ ವಿಲಾಸ ಫಾರ್ಮಸಿ ಕಾಲೇಜು ಪ್ರಿನ್ಸಿಪಾಲ್ ಡಾ. ಹನುಮಂತಾಚಾರ್ ಜೋಷಿ, ಸ್ಥಳ : ಪ್ರೊ. ಚಿನ್ನಸ್ವಾಮಿ ಶೆಟ್ಟಿ ಕಾನ್ಫರೆನ್ಸ್ ಹಾಲ್, ಬೆಳಗ್ಗೆ 10.30ಕ್ಕೆ.

■ **ಜೆಎಸ್‌ಎಸ್ ಮಹಿಳಾ ಪದವಿಪೂರ್ವ ಕಾಲೇಜು:** ಬೆಳಗ್ಗೆ 10.30ಕ್ಕೆ ಸಂಭ್ರಮ–2024, ಅಂತರ ಕಾಲೇಜು ನೃತ್ಯ ಸ್ಪರ್ಧೆ, ಉದ್ಘಾಟನೆ: ನಟ ಮತ್ತು ನಿರೂಪಕ ಕಾರ್ತಿಕ್ ಮಹೇಶ್, ಮುಖ್ಯ ಅತಿಥಿಗಳು: ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಮರಿಸ್ವಾಮಿ, ಅಧ್ಯಕ್ಷತೆ: ಕಾಲೇಜು ಶಿಕ್ಷಣ ವಿಭಾಗದ ಸಹಾಯಕ ನಿರ್ದೇಶಕ ಬಿ.ನಿರಂಜನಮೂರ್ತಿ; ಸಂಜೆ 4ಕ್ಕೆ ಸಮಾರೋಪ ಸಮಾರಂಭ, ಮುಖ್ಯ ಅತಿಥಿಗಳು : ನೃತ್ಯಗಿರಿ ಪ್ರದರ್ಶಕ ಕಲೆಗಳ ಸಂಶೋಧನಾ ಕೇಂದ್ರ ನಿರ್ದೇಶಕ ವಿದುಷಿ ಡಾ. ಕೃಪಾ ಫಡ್ಕೆ, ಅಧ್ಯಕ್ಷತೆ: ಕಾಲೇಜು ಶಿಕ್ಷಣ ವಿಭಾಗದ ನಿರ್ದೇಶಕ ಪ್ರೊ.ಆರ್.ಮೂಗೇಶಪ್ಪ, ಸ್ಥಳ: ಕಾಲೇಜು ಆವರಣ, ಸರಸ್ವತಿಪುರಂ.

■ **ಮೈಸೂರು ಜಿಲ್ಲಾ ಸಹಕಾರ ಒಕ್ಕೂಟ:** ವಿಕಸಿತ ಭಾರತ ನಿರ್ಮಾಣದಲ್ಲಿ ಸಹಕಾರ ಸಂಸ್ಥೆಗಳ ಪಾತ್ರ ಕುರಿತು 71ನೇ ಅಖಿಲ ಭಾರತ ಸಹಕಾರ ಸಪ್ತಾಹ ಆಚರಣೆ, ಧ್ವಜಾರೋಹಣ: ಮೈಸೂರು ಜಿಲ್ಲಾ ಸಹಕಾರ ಒಕ್ಕೂಟದ ಅಧ್ಯಕ್ಷ ಡಾ.ಹೆಚ್.ವಿ.ರಾಜೀವ್, ಉದ್ಘಾಟನೆ: ಶಾಸಕ ಜಿ.ಟಿ.ದೇವೇಗೌಡ, ಉಪಸ್ಥಿತರು: ಆರ್.ಚಲುವರಾಜು, ಬಿ.ಎನ್.ಸದಾನಂದ, ಡಾ.ಎಂ.ಬಿ.ಮಂಜೇಗೌಡ, ವೈ.ಬೈರಪ್ಪ, ಹೆಚ್.ಎಸ್.ಪ್ರಶಾಂತ್ ತಾತಾಚಾರ್, ಉಮಾಶಂಕರ್, ಸ್ಥಳ: ಜಿಲ್ಲಾ ಸಹಕಾರ ಯೂನಿಯನ್ ಸಭಾಂಗಣ, ಬೆಳಗ್ಗೆ 10ಕ್ಕೆ.

■ **ಶರಣ ಸಾಹಿತ್ಯ ಪರಿಷತ್ತು, ಮೈಸೂರು ನಗರ ಘಟಕ, ಶ್ರೀ ನಟರಾಜ ಪ್ರತಿಷ್ಠಾನ ಮತ್ತು ಶ್ರೀ ನಟರಾಜ ಆಂಗ್ಲ ಮಾಧ್ಯಮ ಪ್ರೌಢಶಾಲೆ:** ವಚನ ಸಾಹಿತ್ಯ ರಸಪ್ರಶ್ನೆ ಸ್ಪರ್ಧೆ ಹಾಗೂ ಮಕ್ಕಳ ದಿನಾಚರಣೆ, ಸಾನ್ನಿಧ್ಯ : ಶ್ರೀ ಹೊಸಮಠದ ಶ್ರೀ ಚಿದಾನಂದ ಸ್ವಾಮೀಜಿ, ಉದ್ಘಾಟನೆ : ಪತ್ರಕರ್ತ ಸಿ.ಕೆ. ಮಹೇಂದ್ರ, ಶ್ರೀ ನಟರಾಜ ಪ್ರತಿಷ್ಠಾನದ ವಿಶೇಷಾಧಿಕಾರಿ ಪ್ರೊ. ಎಸ್. ಶಿವರಾಜಪ್ಪ ಅವರಿಂದ ವಚನ ಸಾಹಿತ್ಯದಲ್ಲಿ ಸಾಮಾಜಿಕತೆ ಕುರಿತು ಉಪನ್ಯಾಸ, ಅಧ್ಯಕ್ಷತೆ : ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಮ.ಗು.ಸದಾನಂದಯ್ಯ, ಸ್ಥಳ: ಶ್ರೀ ನಟರಾಜ ಸಭಾ ಮಂಟಪ, ಶ್ರೀ ಹೊಸಮಠ, ಬೆಳಗ್ಗೆ 11ಕ್ಕೆ.

■ **ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿ, ಜೆಎಸ್‌ಎಸ್ ಮೆಡಿಕಲ್ ಕಾಲೇಜು:** 34ನೇ ವಾರ್ಷಿಕ ಕರ್ನಾಟಕ ಅಸೋಸಿಯೇಷನ್ ಆಫ್ ಕಮ್ಯೂನಿಟಿ ಹೆಲ್ತ್ ಕಾನ್ಫರೆನ್ಸ್, ಕಾಚ್‌ಕಾನ್–2024, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಮುಖ್ಯ ಅತಿಥಿಗಳು: ನ್ಯಾಷನಲ್ ಅಕಾಡೆಮಿ ಆಫ್ ಮೆಡಿಕಲ್ ಸೈನ್ಸಸ್ ಕಾರ್ಯದರ್ಶಿ ಡಾ.ಉಮೇಶ್ ಕಪಿಲ್, ಗೌರವ ಅತಿಥಿಗಳು: ಜೆಎಸ್‌ಎಸ್ ಉನ್ನತ ಶಿಕ್ಷಣ ಅಕಾಡೆಮಿ ಕುಲಸಚಿವ ಡಾ.ಬಿ.ಮಂಜುನಾಥ, ಅಧ್ಯಕ್ಷತೆ: ಜೆಎಸ್‌ಎಸ್ ಮೆಡಿಕಲ್ ಕಾಲೇಜು ಪ್ರಿನ್ಸಿಪಾಲ್ ಡಾ.ಹೆಚ್.ಬಸವನಗೌಡಪ್ಪ, ಸ್ಥಳ: ಶ್ರೀರಾಜೇಂದ್ರ ಸಭಾಂಗಣ, ಜೆಎಸ್‌ಎಸ್ ಮೆಡಿಕಲ್ ಕಾಲೇಜು, ಬೆಳಗ್ಗೆ 11ಕ್ಕೆ.

■ **ಮೈಸೂರು ವಿಶ್ವವಿದ್ಯಾನಿಲಯ, ರಾಜ್ಯಶಾಸ್ತ್ರ ಅಧ್ಯಯನ ವಿಭಾಗ, ಸಾರ್ವಜನಿಕ ಆಡಳಿತ ಅಧ್ಯಯನ ವಿಭಾಗ, ಭಾರತೀಯ ಸಾರ್ವಜನಿಕ ಆಡಳಿತ ಸಂಸ್ಥೆ:** ಕರ್ನಾಟಕದ 2ನೇ ಆಡಳಿತ ಸುಧಾರಣಾ ಆಯೋಗದ ಶಿಫಾರಸುಗಳು ಕುರಿತು ಉಪನ್ಯಾಸ, ಸಂಪನ್ಮೂಲ ವ್ಯಕ್ತಿ: ತ.ಮ.ವಿಜಯ ಭಾಸ್ಕರ್, ಅಧ್ಯಕ್ಷತೆ: ರಾಜ್ಯಶಾಸ್ತ್ರ ಅಧ್ಯಯನ ವಿಭಾಗದ ಅಧ್ಯಕ್ಷ ಪ್ರೊ.ಕೃಷ್ಣ ಹೊಂಬಳ, ಉಪಸ್ಥಿತರು: ಲೆಕ್ಕ ಪರಿಶೋಧಕ ಬಿ.ಎಸ್.ರವಿಕುಮಾರ್, ಹಿರಿಯ ಪ್ರಾಧ್ಯಾಪಕ ಡಾ.ಜೆ.ಸೋಮಶೇಖರ್, ಸ್ಥಳ: ಮಾನವಿಕ ಸಭಾಂಗಣ, ಮಾನಸಗಂಗೋತ್ರಿ, ಬೆಳಗ್ಗೆ 11ಕ್ಕೆ

■ **ಜಗದ್ಗುರು ಶ್ರೀ ವೀರಸಿಂಹಾಸನ ಮಹಾ ಸಂಸ್ಥಾನ ಮಠ (ಶ್ರೀ ಸುತ್ತೂರು ಕ್ಷೇತ್ರ, ಮೈಸೂರು ಜಿಲ್ಲೆ):** ಆದಿ ಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳವರ ಕರ್ತೃ ಗದ್ದುಗೆ ಶ್ರೀ ಮಹದೇಶ್ವರರ ಸನ್ನಿಧಿ, ಶ್ರೀ ವೀರಭದ್ರೇಶ್ವರ ಮತ್ತು ಶ್ರೀ ಸೋಮೇಶ್ವರ ದೇವಸ್ಥಾನಗಳ ಕಾರ್ತಿಕ ಮಾಸದ ವಿಶೇಷ ಪೂಜಾ ಕಾರ್ಯಕ್ರಮಗಳು, ಸ್ಥಳ: ಮಠದ ಆವರಣ, ಸಂಜೆ

■ **ಡ್ರೀಮ್ಸ್ ಇಂಕ್ ಇನ್ನೋವೇಷನ್ ಕ್ರ್ಯೂ ಇವೆಂಟ್ಸ್ ಅಂಡ್ ಆಡ್ಸ್ :** ಬೃಹತ್ ಎಜುಕೇಷನ್ ಫೇರ್, ಉದ್ಘಾಟನೆ : ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಉಪಸ್ಥಿತರು : ಕ್ವಿಜ್ ಮಾಸ್ಟರ್ ಡಾ. ಎನ್.ಸೋಮೇಶ್ವರ, ಸ್ಥಳ: ಮಹಾರಾಜ ಕಾಲೇಜು ಮೈದಾನ, ಸಂಜೆ 5ಕ್ಕೆ.

■ **ಶ್ರೀ ರಾಮಕೃಷ್ಣ ಆಶ್ರಮ :** ಸ್ವಾಮಿ ಜ್ಞಾನಯೋಗಾನಂದ ಅವರಿಂದ ಶ್ರೀ ಮದ್ಭಗವದ್ಗೀತಾ ಕುರಿತು ಉಪನ್ಯಾಸ, ಸ್ಥಳ: ಸ್ವಾಮಿ ಶಾಂಭವಾನಂದಜೀ ಸ್ಮಾರಕ ಸಭಾಂಗಣ, ಯಾದವಗಿರಿ, ಸಂಜೆ 6 ರಿಂದ.

■ **ರಂಗಾಯಣ :** ರಂಗಭೀಷ್ಮ ಬಿ.ವಿ.ಕಾರಂತ ಕಾಲೇಜು ರಂಗೋತ್ಸವ, ಹುಣಸೂರಿನ ಮರದೂರು ಲಾ ಸಲೆಟ್ ಪದವಿಪೂರ್ವ ಕಾಲೇಜಿನ ವಿದ್ಯಾರ್ಥಿಗಳಿಂದ ಕುವೆಂಪುರವರ ಕಥೆ ಆಧಾರಿತ ನಾಗಿ–ಕರಿಸಿದ್ದ ನಾಟಕ ಪ್ರದರ್ಶನ, ರಂಗರೂಪ, ನಿರ್ದೇಶನ : ಎ.ಎಸ್. ಸುಭಾಷ್, ಸ್ಥಳ: ಭೂಮಿಗೀತ ರಂಗಮಂದಿರ, ಸಂಜೆ 6.30ಕ್ಕೆ.

■ **ಮೈಸೂರು ವಿಶ್ವವಿದ್ಯಾನಿಲಯ, ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ಅಧ್ಯಯನ ವಿಭಾಗ :** ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ, ಗ್ರಂಥಾಲಯ ಸಂಸ್ಕೃತಿ, ಉದ್ಘಾಟನೆ : ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಮ.ಗು. ಸದಾನಂದಯ್ಯ, ಅಧ್ಯಕ್ಷತೆ : ಹಿರಿಯ ಪ್ರಾಧ್ಯಾಪಕ ಡಾ. ಎಂ. ಚಂದ್ರಶೇಖರ, ಉಪಸ್ಥಿತರು : ದೇವರಾಜ ಅರಸು ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಗ್ರಂಥಪಾಲಕ ಡಾ. ಎಂ.ವಿ. ಜಗದೀಶ, ಸ್ಥಳ: ಡಾ.ಎಸ್.ಆರ್. ರಂಗನಾಥನ್ ಸಭಾಂಗಣ, ಮಾನಸಗಂಗೋತ್ರಿ, ಸಂಜೆ 4ಕ್ಕೆ.

■ **ಬುದ್ಧ ಬಳಗ :** ಒಂದು ದಿನದ ಸಂಶೋಧನಾ ಕಾರ್ಯಾಗಾರ, ಉದ್ಘಾಟನೆ : ಮೈಸೂರು ವಿವಿ ಕುಲಪತಿ ಪ್ರೊ. ಎನ್.ಕೆ. ಲೋಕನಾಥ್, ಅಧ್ಯಕ್ಷತೆ : ಬುದ್ಧ ಬಳಗದ ಅಧ್ಯಕ್ಷ ಜಗದೀಶ್ ಮಹದೇವಯ್ಯ, ಉಪಸ್ಥಿತರು : ಸಮಾಜ ಸೇವಕ ಚಂದ್ರು ಮಳವಳ್ಳಿ, ಸ್ಥಳ: ಇಎಂಆರ್‌ಸಿ ಸಭಾಂಗಣ, ಬೆಳಗ್ಗೆ 10.30ಕ್ಕೆ.

■ **ಸುಯೋಗ್ ಆಸ್ಪತ್ರೆ :** ಸುಯೋಗ್ ಡಯಾಬಿಟಿಕ್ಸ್ ಹೆಲ್ತ್ ಕ್ಲಬ್, ವಿಶ್ವ ಸಕ್ಕರೆ ಕಾಯಿಲೆ ದಿನಾಚರಣೆ ಅಂಗವಾಗಿ ಸಿಹಿ ಸತ್ಯಾಗ್ರಹ ಆಂದೋಲನದ ಉದ್ಘಾಟನೆ, ಉದ್ಘಾಟನೆ : ಕುವೆಂಪು ವಿವಿ ವಿಶ್ರಾಂತ ಉಪ ಕುಲಪತಿ ಡಾ. ಕೆ. ಚಿದಾನಂದಗೌಡ, ಉಪಸ್ಥಿತರು : ಸುಯೋಗ್ ಆಸ್ಪತ್ರೆ ಅಧ್ಯಕ್ಷ ಡಾ. ಎಸ್.ಪಿ. ಯೋಗಣ್ಣ, ಹೆಚ್.ಎಸ್. ರಮೇಶ್ ಚಂದ್ರ, ಪತ್ರಕರ್ತರ ಸಂಘದ ಅಧ್ಯಕ್ಷ ಕೆ. ದೀಪಕ್, ಡಾ. ಟಿ.ಎಂ. ಅಭಿಷೇಕ್, ಎಂ. ಸದಾನಂದ, ಶ್ರೀಮತಿ ಸುಧಾ ಯೋಗಣ್ಣ, ಅಧ್ಯಕ್ಷತೆ : ಸುಯೋಗ್ ಡಯಾಬಿಟಿಕ್ ಹೆಲ್ತ್ ಕ್ಲಬ್ ಅಧ್ಯಕ್ಷ ಎಸ್.ಕೆ. ನಂಜಪ್ಪ, ಸ್ಥಳ: ಸುಯೋಗ್ ಆಸ್ಪತ್ರೆ ಆವರಣ, ಬೆಳಗ್ಗೆ 10.30ಕ್ಕೆ.

■ **ವಾತ್ಸಲ್ಯ ಶಿಕ್ಷಣ ಮಹಾವಿದ್ಯಾಲಯ, ಶ್ರೀ ನಟರಾಜ ಸ್ನಾತಕೋತ್ತರ ಅಧ್ಯಯನ ಕೇಂದ್ರ :** ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ, ಸಾನ್ನಿಧ್ಯ : ಶ್ರೀ ಚಿದಾನಂದ ಸ್ವಾಮೀಜಿ, ಉದ್ಘಾಟನೆ : ಪ್ರೊ. ಎಸ್. ಶಿವರಾಜಪ್ಪ, ಉಪಸ್ಥಿತರು : ಡಾ. ಎಂ. ಶಾರದಾ, ಡಾ. ಮಹೇಶ್ ದಳಪತಿ, ಟಿ.ಆರ್. ವಿದ್ಯಾ, ಸ್ಥಳ: ಕಾಲೇಜು ಗ್ರಂಥಾಲಯ ಆವರಣ, ಬೆಳಗ್ಗೆ 11ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಸೀರೆಯ ಸೊಬಗು–ವೈವಿಧ್ಯಮಯ ಸೀರೆಗಳ ಪರಿಚಯ, ಪ್ರಸ್ತುತಿ: ಜಯಶ್ರೀ ಹೆಗಡೆ, 6.40 ಸಕ್ಕರೆ ನಾಡಿನ ಅಕ್ಕರೆಯ ಲೇಖಕರು, ಲೇಖನ ಹಾಗೂ ಪ್ರಸ್ತುತಿ: ಶಭಾನ ಮತ್ತು ಕೀರ್ತಿ. ಎಸ್.ಬೈಂದೂರು, ಪರಿಕಲ್ಪನೆ: ಅಬ್ದುಲ್ ರಶೀದ್, 6.50 ರೈತರಿಗೆ ಸಲಹೆ, 7.15 ಹಸಿರು ಹೊನ್ನು–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು: ಅರಣ್ಯ ಇಲಾಖೆ, 8.30 ಕನ್ನಡ ಚಿತ್ರಗೀತೆಗಳು, 10.05 ಮಕ್ಕಳ ದಿನಾಚರಣೆ–ವಿಶೇಷ ಕಾರ್ಯಕ್ರಮ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ–ಕಾಡಿನಲ್ಲಿನ ಕಥೆಗಳು. ಭಾಗವಹಿಸುವವರು: ನಾಗರಹೊಳೆ ವಲಯದ ಉಪವಲಯ ಅರಣ್ಯಾಧಿಕಾರಿ ನವೀನ್ ರಾವತ್, ಪ್ರಸ್ತುತಿ: ಜಿ.ಶಾಂತಕುಮಾರ್ **ಮಧ್ಯಾಹ್ನ :** 12.35 ದೇವರನಾಮ–ಬಿ.ಎನ್.ಮಂಜುಳಾ, 12.45 ಚಿತ್ರಗೀತೆಗಳು, 1.20 –ಭಾವಗೀತೆಗಳು, 2.40 ಚಿತ್ರಗೀತೆಗಳು, 4.00 ಜನಪದ ಸಂಗೀತ, 4.30 ರಸ ಮಂಜರಿ, ವೇದಾಂಗಗಳು, ಮಾತನಾಡುವವರು–ಡಾ.ಅನಂತ ನಾಗೇಂದ್ರಭಟ್, ಸಂಸ್ಕೃತ ಸುಭಾಷಿತಗಳು, ಹೇಳಿದ್ದಾರೆ–ಬಿ.ಕೆ.ಸುಮ, 6.10 ಸೀರೆಯ ಸೊಬಗು–ವೈವಿಧ್ಯಮಯ ಸೀರೆಗಳ ಪರಿಚಯ, ಪ್ರಸ್ತುತಿ: ಜಯಶ್ರೀ ಹೆಗಡೆ, 6.50 ಕೃಷಿರಂಗ–ಕಿಸಾನ್‌ವಾಣಿ, ಪ್ರಾಯೋಜಕರು : ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ 'ನಂ ಕಂಪನಿ' ರೈತ ಉತ್ಪಾದಕ ಸಂಸ್ಥೆಗಳ ಸಬಲೀಕರಣ ಕುರಿತ ಬಾನುಲಿ ಸರಣಿ ರೈತ ಉತ್ಪಾದಕ ಸಂಸ್ಥೆಗಳು ನಿಯಂತ್ರಿತ ಮಾರುಕಟ್ಟೆಗಳ ಮೂಲಕ ಕೃಷಿ ಉತ್ಪನ್ನಗಳನ್ನು ಮಾರಾಟ ಮಾಡುವುದು ಹೇಗೆ–ಈ ಕುರಿತು ಮೈಸೂರಿನ ಎಪಿಎಂಸಿಯ ಹೆಚ್ಚುವರಿ ಕಾರ್ಯದರ್ಶಿ ಸಿದ್ಧರಾಜು ಅವರೊಂದಿಗೆ ಸಂದರ್ಶನ. ಪ್ರಸ್ತುತಿ: ಎನ್.ಕೇಶವಮೂರ್ತಿ, 7.45 ಕನ್ನಡ ಚಿತ್ರಗೀತೆಗಳು, 8.00 ಯುವವಾಣಿ–ಯುವ ಸಂಗೀತ ಪ್ರತಿಭೆ ಮಂಡ್ಯ ಜಿಲ್ಲಾ ಬೆಳವಾಡಿಯ ಮಹಾರಾಜ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯ ವಿದ್ಯಾರ್ಥಿನಿ ಸಿರಿ ಪರಮಾತ್ಮ ಅವರೊಂದಿಗೆ ಮಾತುಕತೆ, 9.30 ಕನ್ನಡ ಭಾರತಿ, 10.00 ನಾಟಕ–'ಸರಿಯುತ್ತಿರುವ ರಾತ್ರಿ' ಮೂಲ ಹಿಂದಿ–ಗಂಗಾಧರ್ ಕೊಠಾರಿ, ಕನ್ನಡಾನುವಾದ–ಡಾ.ಹೆಚ್.ಎಂ.ಕುಮಾರಸ್ವಾಮಿ, ನಿರ್ಮಾಣ–ಪ್ರಭುಸ್ವಾಮಿ ಮಳಿಮಠ್, 10.30 ಸವಿನೆನಪು

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | ನವೆಂಬರ್ 14 ಗುರುವಾರ 2024

45

ಸಂಪುಟ: 45 | ಸಂಚಿಕೆ: 207 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ನನ್ನನ್ನ ಮುಟ್ಟಿದರೆ ಕರ್ನಾಟಕದ ಜನ ಸುಮ್ಮನೆ ಬಿಡಲ್ಲ...

ಕೇಂದ್ರ ಸರ್ಕಾರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಎಚ್ಚರಿಕೆ ಸಂದೇಶ

ಅಭಿವೃದ್ಧಿ ಪರ ಇರುವ ನನ್ನ ಪರ ನೀವು ನಿಲ್ಲಬೇಕು; ತಿ.ನರಸೀಪುರದಲ್ಲಿ ಜನತೆಗೆ ಕರೆ



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಫಲಾನುಭವಿಗಳಿಗೆ ಸವಲತ್ತು ವಿತರಿಸಿದರು.

50 ಮಂದಿ ಶಾಸಕರಿಗೆ ತಲಾ 50 ಕೋಟಿ

“ಲೂಟಿ ಮಾಡೋದು, ಕಾಂಗ್ರೆಸ್ ಶಾಸಕರನ್ನು ಖರೀದಿಸೋದು, ಜಾತಿ–ಧರ್ಮದ ಹೆಸರಲ್ಲಿ ಭಾರತೀಯರನ್ನು ವಿಭಜಿಸಿ ಆಳೋದಷ್ಟೆ ಬಿಜೆಪಿ ರಾಜಕಾರಣವಾಗಿದೆ. ಬಿಜೆಪಿ ಇವತ್ತಿನವರೆಗೂ ರಾಜ್ಯದಲ್ಲಿ ಸ್ವಂತ ಶಕ್ತಿಯಿಂದ ಒಂದು ಬಾರಿಯೂ ಅಧಿಕಾರಕ್ಕೆ ಬಂದಿಲ್ಲ. ಆಪರೇಷನ್ ಕಮಲದ ಮೂಲಕ ಮಾತ್ರ ಅಧಿಕಾರಕ್ಕೆ ಬಂದಿದೆ. ಈ ಬಾರಿ ಕಾಂಗ್ರೆಸ್ಸಿನ 50 ಮಂದಿ ಶಾಸಕರಿಗೆ ತಲಾ 50 ಕೋಟಿ ಆಫರ್ ನೀಡಿ ಖರೀದಿಸಲು ಯತ್ನಿಸಿದ್ದಾರೆ. ಎಲ್ಲಿಂದ ಬರುತ್ತೆ ಈ ಹಣ? ಯಡಿಯೂರಪ್ಪ ಬೊಮ್ಮಾಯಿ, ಆರ್.ಅಶೋಕ್ ಪ್ರಿಂಟ್ ಹಾಕಿದ್ದಾರಾ ಈ ಹಣವನ್ನು? ರಾಜ್ಯವನ್ನು ಲೂಟಿ ಹೊಡೆದ ಹಣ ತಾನೇ ಇದು. ನಮ್ಮ ಶಾಸಕರು ಬಿಜೆಪಿಯವರ ಆಮಿಷಕ್ಕೆ ಒಳಗಾಗಲಿಲ್ಲ. –ಸಿದ್ದರಾಮಯ್ಯ

ತಿ.ನರಸೀಪುರ, ನ.13– ನನ್ನನ್ನ ಮುಟ್ಟಿದರೆ ಕರ್ನಾಟಕದ ಜನ ನಿಮ್ಮನ್ನು ಸುಮ್ಮನೆ ಬಿಡುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಕೇಂದ್ರ ಸರ್ಕಾರಕ್ಕೆ ಎಚ್ಚರಿಕೆ ಸಂದೇಶ ನೀಡಿದ್ದಾರೆ.

ಮೈಸೂರು ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯಿತಿ ವತಿಯಿಂದ ತಾಲೂಕಿನ ಹೊರಳಹಳ್ಳಿ ಗ್ರಾಮದಲ್ಲಿ ಆಯೋಜಿಸಿದ್ದ ತಿ.ನರಸೀಪುರ ವಿಧಾನಸಭಾ ಕ್ಷೇತ್ರದ 470 ಕೋಟಿ ರೂ. ಮೌಲ್ಯದ 211 ಕಾಮಗಾರಿಗಳ ಉದ್ಘಾಟನೆ, ಕಟ್ಟಡಗಳ ಲೋಕಾರ್ಪಣೆ ಮತ್ತು ಶಂಕುಸ್ಥಾಪನೆ ನೆರವೇರಿಸಿ, ಫಲಾನುಭವಿಗಳಿಗೆ ವಿವಿಧ ಸವಲತ್ತು ವಿತರಿಸಿ ಅವರು ಮಾತನಾಡಿದರು.

40 ವರ್ಷಗಳ ಕಾಲ ಪರಿಶುದ್ಧವಾದ ರಾಜಕಾರಣ ಮಾಡಿರುವ ನಾನು ಈಗ 14 ಸೈಟಿಗಾಗಿ ರಾಜಕಾರಣ ಮಾಡುತ್ತೀನಾ ಎಂದು ತಮ್ಮ ಮೇಲಿನ ಮುಡಾ ಹಗರಣ ಪ್ರಸ್ತಾಪಿಸಿದ ಅವರು, ಬಡವರ ಪರ ಕೆಲಸ ಮಾಡುವುದನ್ನು ಸಹಿಸದೆ ನನ್ನ ವಿರುದ್ಧ ಸುಳ್ಳು ಕೇಸು ಹಾಕಿಸಲಾಗಿದೆ. ಜನರು ಮೂರ್ಖರು ಎಂದು ಬಿಜೆಪಿಯವರು ತಿಳಿದುಕೊಂಡಿದ್ದಾರೆ ಎಂದು ವಾಗ್ದಾಳಿ ನಡೆಸಿದರು. ಯಾವುದೇ ಜಾತಿ, ಧರ್ಮ ನೋಡದೆ ರಾಜ್ಯದ ಅಭಿವೃದ್ಧಿ ಕೆಲಸ ಮಾಡುತ್ತಿರುವ ನನ್ನ ಪರ ನೀವು ನಿಲ್ಲಬೇಕು ಎಂದು ● 6ನೇ ಪುಟಕ್ಕೆ

ರಾಜ್ಯ ಉಪ ಚುನಾವಣೆಯಲ್ಲಿ ದಾಖಲೆಯ ಮತದಾನ

ಚನ್ನಪಟ್ಟಣ	ಶಿಗ್ಗಾವಿ	ಸಂಡೂರು
ಶೇ.88.80	ಶೇ.80.48	ಶೇ.76.24



ಸಂಡೂರಿನಲ್ಲಿ ವೃದ್ಧೆಯೊಬ್ಬರು ವ್ಹೀಲ್ ಚೇರ್‌ನಲ್ಲಿ ಬಂದು ಮತ ಚಲಾಯಿಸಿದರು.



ನಿಖಿಲ್



ಯೋಗೇಶ್ವರ್



ಭರತ್



ಯಾಸೀರ್ ಪಠಾಣ್



ಅನ್ನಪೂರ್ಣ



ಹನುಮಂತ



ಚನ್ನಪಟ್ಟಣದ ಮತಗಟ್ಟೆಯೊಂದರಲ್ಲಿ ಮತ ಚಲಾಯಿಸಲು ಸರತಿ ಸಾಲಿನಲ್ಲಿ ನಿಂತಿರುವ ಮಹಿಳೆಯರು.

ಬೆಂಗಳೂರು, ನ.13(ಕೆಎಂಶಿ)– ರಾಜ್ಯದ ಮೂರು ವಿಧಾನಸಭಾ ಕ್ಷೇತ್ರಗಳಿಗೆ ನಡೆದ ಉಪಚುನಾವಣೆಯಲ್ಲಿ ಯಾವುದೇ ಅಹಿತಕರ ಘಟನೆ ನಡೆಯದೆ ಬಿರುಸಿನ ಶಾಂತಿಯುತ ಮತದಾನವಾಗಿದೆ. ಚನ್ನಪಟ್ಟಣ (ಶೇ.88.80), ಶಿಗ್ಗಾಂವಿ (ಶೇ.80.48) ಹಾಗೂ ಸಂಡೂರು (ಶೇ.76.24) ವಿಧಾನ ಸಭಾ ಕ್ಷೇತ್ರಗಳಲ್ಲಿ ಮತದಾನವಾಗಿದೆ.

ಚನ್ನಪಟ್ಟಣದಲ್ಲಿ ಶೇ.88.80: ಇಡೀ ದೇಶದ ಗಮನಸೆಳೆದಿದ್ದ ಚನ್ನಪಟ್ಟಣ ಕ್ಷೇತ್ರದಲ್ಲಿ ಒಟ್ಟು ಶೇ.88.80 ರಷ್ಟು ಮತದಾನವಾಗಿದೆ. ಕ್ಷೇತ್ರದ ಒಟ್ಟು 2,06,866 ಮತದಾರರು ಹಕ್ಕು ಚಲಾಯಿಸಿದ್ದಾರೆ. ಇದರಲ್ಲಿ 1,00,501 ಪುರುಷರು ಹಾಗೂ 1,06,362 ಮಹಿಳೆಯರು. ಇವರ ಜೊತೆಗೆ ಮೂವರು ಇತರೆ ಮತದಾರರು ಹಕ್ಕು ಚಲಾಯಿಸಿದ್ದಾರೆ. ಒಟ್ಟಾರೆಯಾಗಿ ಚನ್ನಪಟ್ಟಣ ಕ್ಷೇತ್ರದಲ್ಲಿ ಈ ಬಾರಿ ಅತೀ ಹೆಚ್ಚಿನ ಸಂಖ್ಯೆಯಲ್ಲಿ ಮತದಾನವಾಗಿರುವುದಾಗಿ ರಾಮನಗರ ಜಿಲ್ಲಾಧಿಕಾರಿ ಯಶವಂತ್ ವಿ ಗುರುಕರ್ ಮಾಹಿತಿ ನೀಡಿದ್ದಾರೆ. ಈ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿ ಮಾಜಿ ಸಚಿವ ಸಿ.ಪಿ. ಯೋಗೇಶ್ವರ್, ಎನ್‌ಡಿಎ ಅಭ್ಯರ್ಥಿಯಾಗಿ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಪುತ್ರ ನಿಖಿಲ್ ಕುಮಾರಸ್ವಾಮಿ ಸ್ಪರ್ಧಿಸಿದ್ದಾರೆ.

ಶಿಗ್ಗಾವಿಯಲ್ಲಿ ಶೇ.80.48: ಹಾವೇರಿ ಜಿಲ್ಲೆಯ ಶಿಗ್ಗಾವಿಯಲ್ಲಿಯೂ ಉಪ ಚುನಾವಣೆ ನಡೆದಿದ್ದು, ಇಲ್ಲಿ ಕೂಡ ದಾಖಲೆಯ ಶೇ.80.48 ರಷ್ಟು ಮತದಾನವಾಗಿದೆ. ಬೆಳಿಗ್ಗೆ 7ರಿಂದ ಆರಂಭವಾದ ಮತದಾನ ಸಂಜೆ 6 ಗಂಟೆವರೆಗೆ ಶಾಂತಿಯುತವಾಗಿ ನಡೆದಿದೆ. ಶಿಗ್ಗಾವಿ ಕ್ಷೇತ್ರದಲ್ಲಿ ಒಟ್ಟು 2,37,525 ಮತದಾರರ ಪೈಕಿ, 1,91,166 ಮತದಾರರು ತಮ್ಮ ಹಕ್ಕು ಚಲಾಯಿಸಿದ್ದಾರೆ. ಇದರಲ್ಲಿ 98,642 ಪುರುಷರು ಹಾಗೂ ● 6ನೇ ಪುಟಕ್ಕೆ

ಭ್ರಷ್ಟಾಚಾರ ಸಾಬೀತು ಮಾಡಿದರೆ ರಾಜಕೀಯ ನಿವೃತ್ತಿ ತಪ್ಪಿದರೆ ಮೋದಿ ಪ್ರಧಾನಿ ಸ್ಥಾನ ತ್ಯಜಿಸುವರೇ...

ಮೈಸೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸವಾಲು ■ ಪುಟ–7

ಮುಡಾ ನಿವೇಶನ ಹಂಚಿಕೆ ಹಗರಣ

ಸಿಎಂ ಸಿದ್ದರಾಮಯ್ಯ ಆಪ್ತ ಸಿ.ಟಿ.ಕುಮಾರ್, ಮೈಸೂರು ಮಾಜಿ ಡಿಸಿ ಕುಮಾರ ನಾಯಕ್

ಇಡಿ ವಿಚಾರಣೆ



ಕುಮಾರ್‌ನಾಯಕ್


ಬೆಂಗಳೂರು, ನ.13 (ಕೆಎಂಶಿ)– ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ 14 ಬಿಡಿ ನಿವೇಶನಗಳ ಹಂಚಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆಪ್ತ ಸಹಾಯಕ ದಿನೇಶ್ ಕುಮಾರ್ (ಸಿ.ಟಿ.ಕುಮಾರ್) ಹಾಗೂ ರಾಯಚೂರು ಕಾಂಗ್ರೆಸ್ ಸಂಸದ ಕುಮಾರನಾಯಕ್ ಅವರನ್ನು ಜಾರಿ ನಿರ್ದೇಶನಾಲಯ (ಇ.ಡಿ.) ಇಂದು ತೀವ್ರ ವಿಚಾರಣೆಗೆ ಒಳಪಡಿಸಿದೆ.

ನಿವೃತ್ತ ಐಎಎಸ್ ಅಧಿಕಾರಿ ಹಾಗೂ ಹಾಲಿ ಸಂಸದ ಕುಮಾರನಾಯಕ್, ಮೈಸೂರು ಜಿಲ್ಲಾಧಿಕಾರಿಯಾಗಿದ್ದ ವೇಳೆ ವಿವಾದಕ್ಕೆ ಒಳಪಟ್ಟಿರುವ 14 ನಿವೇಶನ ಒಳಗೊಂಡ ಜಮೀನಿನ ಭೂ ಪರಿವರ್ತನೆ ಮಾಡಿಕೊಟ್ಟಿದ್ದರು.

ಮುಡಾ ನೋಟಿಫೈ ಮಾಡಿದ ಜಮೀನನ್ನು, ಅಂದು ಜಿಲ್ಲಾಧಿಕಾರಿಯಾಗಿದ್ದ ಕುಮಾರನಾಯಕ್ ಭೂ ಸ್ವಾಧೀನದಿಂದ ಕೈಬಿಟ್ಟು, ಕೃಷಿ ಭೂಮಿಯನ್ನಾಗಿ ಪರಿವರ್ತನೆ ಮಾಡಿಕೊಟ್ಟಿದ್ದರು. ಇದಕ್ಕೂ ಮುನ್ನ ಅವರು, ಸ್ಥಳ ಪರಿಶೀಲನೆ ನಡೆಸಿರಲಿಲ್ಲ. ಸಂಬಂಧಪಟ್ಟ ತಹಸೀಲ್ದಾರ್ ನೀಡಿದ ವರದಿ ಆಧರಿಸಿ ಪರಿವರ್ತನೆ ಮಾಡಿದ್ದರು ಎಂಬ ಆರೋಪ ಇವರ ಮೇಲಿದೆ. ಮೈಸೂರಿನಲ್ಲಿ ಸಿದ್ದರಾಮಯ್ಯ ಅವರ ಆಪ್ತ ಸಹಾಯಕರಾಗಿ ಸೇವೆಯಲ್ಲಿರುವ ದಿನೇಶ್‌ಕುಮಾರ್ (ಸಿ.ಟಿ. ಕುಮಾರ್) ಕಳೆದ 2014ರಿಂದಲೂ ಮುಡಾದಲ್ಲಿ 14 ನಿವೇಶನ ಹಂಚಿಕೆ ಪ್ರಕ್ರಿಯೆಯಲ್ಲಿ ಪಾಲ್ಗೊಂಡು, ಅವರ ವ್ಯವಹಾರ ನೋಡಿಕೊಂಡಿದ್ದರು. ● 6ನೇ ಪುಟಕ್ಕೆ

ಕೋರ್ಟ್‌ಗಳು ಕೇಂದ್ರ ಸರ್ಕಾರದ ಮಾತು ಕೇಳುವ ಸ್ಥಿತಿ ನಿರ್ಮಾಣವಾಗಿದೆ

ಡಾ.ಯತೀಂದ್ರ ಸಿದ್ದರಾಮಯ್ಯ ವಿವಾದಾತ್ಮಕ ಹೇಳಿಕೆ



ಯತೀಂದ್ರ

ಹೆಚ್.ಡಿ.ಕೋಟೆ, ನ.13– ಕೇಂದ್ರ ಸರ್ಕಾರ ತನಿಖಾ ಸಂಸ್ಥೆಗಳನ್ನು ದುರುಪಯೋಗ ಮಾಡಿಕೊಳ್ಳುತ್ತಿದೆ. ಇ.ಡಿ, ಸಿಬಿಐ, ಐಟಿ ಎಲ್ಲವೂ ಕೇಂದ್ರ ಸರ್ಕಾರದ ಕೈಗೊಂಬೆಯಾಗಿದೆ. ಕೋರ್ಟ್‌ಗಳು ಕೂಡ ಕೇಂದ್ರ ಸರ್ಕಾರದ ಮಾತನ್ನು ಕೇಳುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ವಿಧಾನಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ.

ಹೆಚ್.ಡಿ.ಕೋಟೆಯ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮೇಲೆ ಸುಳ್ಳು ಆರೋಪ ಮಾಡಿ ಸಿಲುಕಿಸಬೇಕು ಎಂದು ಪ್ರಯತ್ನ ನಡೆಸುತ್ತಿದ್ದಾರೆ. ನಮಗೆ ತನಿಖೆ ಭಯ ಇಲ್ಲ. ಪ್ರಶ್ನೆ ಮಾಡುವವರು ಇಲ್ಲದಿದ್ದರೆ ಅವರದ್ದೇ ಆಟ ಆಗುತ್ತದೆ. ಇದರಿಂದ ಪ್ರಜಾಪ್ರಭುತ್ವದ ಕೊಲೆ ಮಾಡಿದಂತಾಗುತ್ತಿದೆ. ಇದೇ ರೀತಿ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರವು ಮುಂದುವರಿದರೆ ಪ್ರಜಾಪ್ರಭುತ್ವವನ್ನು ಕಾಣದ ಸ್ಥಿತಿ ಎದುರಾಗುತ್ತದೆ ಎಂದು ಬೇಸರ ವ್ಯಕ್ತಪಡಿಸಿದರು. ಬಿಜೆಪಿ ನಾಯಕರ ವಿರುದ್ಧ ಸಾಕಷ್ಟು ಆರೋಪಗಳಿವೆ. ಆದರೆ ಕೇಂದ್ರದ ತನಿಖಾ ಸಂಸ್ಥೆಗಳು ಆ ಕುರಿತು ಕ್ರಮ ಕೈಗೊಂಡಿಲ್ಲ. ಈ ತನಿಖಾ ಸಂಸ್ಥೆಗಳು ಕೇಂದ್ರದ ಆಣತಿಯಂತೆ ಕೆಲಸ ಮಾಡುತ್ತಿವೆ. ನಾವು ಕಾನೂನಿನ ಮೂಲಕ ಎಲ್ಲವನ್ನೂ ಎದುರಿಸುತ್ತೇವೆ. ಕೇಂದ್ರದ ಇಂತಹ ಧೋರಣೆಗೆ ಜನ ಮನ್ನಣೆ ನೀಡಬಾರದು. ಬಡವರ ಕಾಂಗ್ರೆಸ್ ಸರ್ಕಾರಕ್ಕೆ ಜನರ ಬೆಂಬಲ ಬೇಕು ಎಂದರು.

ವಾಲ್ಮೀಕಿ ನಿಗಮದ ಹಣ ವರ್ಗಾವಣೆ ಹಗರಣ

ಸಿಬಿಐ ತನಿಖೆಗೆ ಕೋರಿದ್ದ ಯೂನಿಯನ್ ಬ್ಯಾಂಕ್ ಅರ್ಜಿ ವಜಾ ಮಾಡಿದ ಹೈಕೋರ್ಟ್

ಬೆಂಗಳೂರು, ನ.13– ವಾಲ್ಮೀಕಿ ಹಗರಣಕ್ಕೆ ಸಂಬಂಧಿಸಿದಂತೆ ಸಿಬಿಐ ತನಿಖೆಗೆ ಒಪ್ಪಿಸಬೇಕೆಂದು ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ ಸಲ್ಲಿಸಿದ್ದ ಅರ್ಜಿಯನ್ನು ಕರ್ನಾಟಕ ಹೈಕೋರ್ಟ್ ವಜಾ ಮಾಡಿದೆ.

ಈ ಅರ್ಜಿಯನ್ನು ಬುಧವಾರ ವಿಚಾರಣೆ ನಡೆಸಿದ ಹೈಕೋರ್ಟ್ ನ್ಯಾಯಪೀಠ ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ ಅರ್ಜಿ ವಜಾ ಮಾಡಿ ಆದೇಶ ಹೊರಡಿಸಿದೆ. ರಾಷ್ಟ್ರೀಯ ಮಟ್ಟದಲ್ಲಿ ಸದ್ದು ಮಾಡಿರುವ ಕರ್ನಾಟಕ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ದುರ್ಬಳಕೆ ಪ್ರಕರಣವನ್ನು ಕೇಂದ್ರೀಯ ತನಿಖಾ ದಳದ (ಸಿಬಿಐ) ತನಿಖೆಗೆ ನೀಡುವಂತೆ ಕೋರಿ ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ ಅರ್ಜಿ ಸಲ್ಲಿಸಿತ್ತು ಈ ಅರ್ಜಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರದ ಪರವಾಗಿ ವಾದ ಮಾಡಿದ್ದ ವಿಶೇಷ ಸರ್ಕಾರಿ ಅಭಿಯೋಜಕ ಬಿ.ವಿ.ಆಚಾರ್ಯ, ಸಿಬಿಐ ತನಿಖಾ ಸಂಸ್ಥೆಯು ಕೇಂದ್ರ ಸರ್ಕಾರದ ಅಧೀನಕ್ಕೆ ಒಳಪಟ್ಟಿದೆ. ಸಿಬಿಐ ತನಿಖೆ ನಡೆಸುವುದು ಎಂದರೆ ಒಕ್ಕೂಟ ವ್ಯವಸ್ಥೆಯಲ್ಲಿ ರಾಜ್ಯ ಸರ್ಕಾರದ ಅಧಿಕಾರವನ್ನು ಕೇಂದ್ರ ಸರ್ಕಾರ ಕಸಿಯುವುದಾಗಿದೆ. ಯಾವುದೇ ಪ್ರಕರಣದ ತನಿಖೆ ನಡೆಸುವ ಅಧಿಕಾರ ಸಿಬಿಐ ಸಂಸ್ಥೆಗೆ ಇಲ್ಲ. ಕೇಂದ್ರ ಸರ್ಕಾರವು ರಾಜ್ಯ ಸರ್ಕಾರದ ಅಧಿಕಾರದಲ್ಲಿ ಹಸ್ತಕ್ಷೇಪ ಮಾಡಲು ಅವಕಾಶ ಇಲ್ಲ ಎಂದು ವಾದ ಮಂಡಿಸಿದ್ದರು. ಆದರೆ ಬಿ.ವಿ.ಆಚಾರ್ಯ ವಾದಕ್ಕೆ ಯೂನಿಯನ್ ಬ್ಯಾಂಕ್ ಪ್ರತಿನಿಧಿಸಿದ್ದ ಅಟಾರ್ನಿ ಜನರಲ್ ಆರ್ ವೆಂಕಟರಮಣಿ ಅವರು ಆಕ್ಷೇಪಿಸಿದರು. ವಾಲ್ಮೀಕಿ ಅಭಿವೃದ್ಧಿ ನಿಗಮದ ಪರ ಹಿರಿಯ ವಕೀಲ ಪ್ರೊ. ರವಿವರ್ಮ ಕುಮಾರ್ ಆಕ್ಷೇಪ ವ್ಯಕ್ತಪಡಿಸಿದ್ದರು. ಸುದೀರ್ಘ ವಾದ ಪ್ರತಿವಾದಗಳನ್ನು ಆಲಿಸಿದ್ದ ಹೈಕೋರ್ಟ್ ನ್ಯಾಯಮೂರ್ತಿ ಎಂ ನಾಗಪ್ರಸನ್ನ ಅವರು ಇದೀಗ ಯೂನಿಯನ್ ಬ್ಯಾಂಕ್ ಸಲ್ಲಿಸಿದ್ದ ಅರ್ಜಿಯನ್ನು ತಿರಸ್ಕರಿಸಿದ್ದಾರೆ.

ಮುಡಾ ಅನುಮೋದಿತ ವಸತಿ ಬಡಾವಣೆಗಳ ನಕ್ಷೆಯಲ್ಲಿ ಸರ್ವೆ ನಂಬರ್‌ಗಳೇ ಇಲ್ಲ!!

24 ಗಂಟೆಯೊಳಗೆ ಮಾಹಿತಿ ಸಲ್ಲಿಸುವಂತೆ ನ್ಯಾ.ಪಿ.ಎನ್.ದೇಸಾಯಿ ತಾಕೀತು

ಎಸ್.ಟಿ.ರವಿಕುಮಾರ್

ಮೈಸೂರು, ನ.13–ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ (ಮುಡಾ) ವಸತಿ ಬಡಾವಣೆಗಳಿಗೆ ಅನುಮೋದನೆ ನೀಡಿರುವ ನಕ್ಷೆಗಳಲ್ಲಿ ಸದರಿ ಭೂಮಿಯ ಸರ್ವೆ ನಂಬರ್‌ಗಳನ್ನೇ ನಮೂದಿಸದಿರುವುದು ಬೆಳಕಿಗೆ ಬಂದಿದೆ. ಈ ಸಂಬಂಧ ನಿವೇಶನಗಳ ಅಕ್ರಮ ಹಂಚಿಕೆ ಕುರಿತು ತನಿಖೆ ನಡೆಸುತ್ತಿರುವ ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಪಿ.ಎನ್.ದೇಸಾಯಿ ಅವರು ಮುಡಾ ಅಧಿಕಾರಿಗಳನ್ನು ತೀವ್ರ ತರಾಟೆಗೆ ತೆಗೆದುಕೊಂಡಿದ್ದಾರೆ ಎಂದು ವಿಶ್ವಸನೀಯ ಮೂಲಗಳಿಂದ ತಿಳಿದು ಬಂದಿದೆ.

ಮುಡಾದಿಂದ ಶೇ.50:50ರ ಅನುಪಾತ, ಪ್ರೋತ್ಸಾಹದಾಯಕ ಯೋಜನೆ ಹಾಗೂ ಬದಲಿ ನಿವೇಶನಗಳ ಹಂಚಿಕೆಯಲ್ಲಿ ಭಾರೀ ಅವ್ಯವಹಾರ ನಡೆದಿರುವ ಕುರಿತು ತನಿಖೆಗೆ ಕಳೆದ ನಾಲ್ಕು ತಿಂಗಳ ಹಿಂದೆ ರಾಜ್ಯ ಸರ್ಕಾರ ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಪಿ.ಎನ್. ದೇಸಾಯಿ ಅವರ ನೇತೃತ್ವದಲ್ಲಿ ತನಿಖಾ ಆಯೋಗ ರಚಿಸಿತ್ತು. ಈ ಹಿನ್ನೆಲೆಯಲ್ಲಿ ಮಂಗಳವಾರ ಮುಡಾಗೆ ಭೇಟಿ ನೀಡಿದ್ದ ನಿವೃತ್ತ ನ್ಯಾಯಮೂರ್ತಿ ಪಿ.ಎನ್.ದೇಸಾಯಿ ಅವರು ಪ್ರಾಧಿಕಾರದ ಕಚೇರಿಯಲ್ಲಿ ಬೆಳಗ್ಗೆಯಿಂದ ರಾತ್ರಿವರೆಗೆ ಇಡೀ ದಿನ



ಮುಡಾ ಕಚೇರಿ

ಅಧಿಕಾರಿಗಳ ಸಮ್ಮುಖದಲ್ಲಿ ದಾಖಲಾತಿಗಳನ್ನು ಪರಿಶೀಲಿಸಿದ ವೇಳೆ ಅನುಮೋದಿತ ವಸತಿ ಬಡಾವಣೆಗಳ ನಕ್ಷೆಯಲ್ಲಿ (Approved Layout Plan) ಸಂಬಂಧಿಸಿದ ಭೂಮಿಯ ಸರ್ವೆ ನಂಬರ್‌ಗಳನ್ನೇ ನಮೂದಿಸದಿರುವುದು ಕಂಡು ಬಂದಿದೆ. ಹೀಗಾಗಿ ಮುಡಾದ ನಗರ ಯೋಜನಾ, ಇಂಜಿನಿಯರಿಂಗ್, ನಿವೇಶನ ಶಾಖೆ ಹಾಗೂ ವಿಶೇಷ ಭೂಸ್ವಾಧೀನಾಧಿಕಾರಿ ಕಚೇರಿ ಅಧಿಕಾರಿಗಳಿಗೆ ತೀವ್ರ ತರಾಟೆಗೆ ತೆಗೆದುಕೊಂಡಿದ್ದಾರೆ.

ಈ ವೇಳೆ ಒಟ್ಟಾರೆ ಹಗರಣದ ಕುರಿತಂತೆ ನಿವೇಶನಗಳ ಪಟ್ಟಿ ಸಮೇತ ಅಗತ್ಯ ಲಿಖಿತ ಮಾಹಿತಿಯನ್ನು ತಂದಿದ್ದ ಆಯೋಗವು ಗಮನಿಸಿದ್ದ ಅಂಶಗಳ ಬಗ್ಗೆ ಸ್ಪಷ್ಟೀಕರಣ ನೀಡುವಂತೆ ನಿವೃತ್ತ ನ್ಯಾಯಮೂರ್ತಿ ದೇಸಾಯಿ ಅಧಿಕಾರಿಗಳಿಗೆ ತಾಕೀತು ಮಾಡಿದ್ದಾರೆ ಎನ್ನಲಾಗಿದೆ.

ಮುಡಾದಿಂದ ರಚಿತ ಹಾಗೂ



ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಪಿ.ಎನ್.ದೇಸಾಯಿ ಮುಡಾ ಕಚೇರಿಗೆ ಭೇಟಿ ನೀಡಿದರು.

ಅದರಿಂದ ಅನುಮೋದಿತ ಖಾಸಗಿ ಡೆವಲಪರ್‌ಗಳು, ರಿಯಲ್ ಎಸ್ಟೇಟ್ ಉದ್ಯಮಿಗಳು, ಬಿಲ್ಡರ್‌ಗಳು ಹಾಗೂ ವಿವಿಧ ಗೃಹ ನಿರ್ಮಾಣ ಸಹಕಾರ ಸಂಘಗಳು ರಚಿಸಿರುವ ವಸತಿ ಬಡಾವಣೆಗಳಿಗೆ ನಕ್ಷೆ ಅನುಮೋದಿಸುವಾಗ ಅದರಲ್ಲಿ ಸದರಿ ಭೂಮಿಯ ಸರ್ವೆ ನಂಬರ್‌ಗಳೇ ನಮೂದಾಗದೆ ಇರುವ ಬಗ್ಗೆ ನಗರ ಯೋಜನಾ ಶಾಖೆಯ ಹಾಗೂ ಇಂಜಿನಿಯರಿಂಗ್ ವಿಭಾಗದ ಅಧಿಕಾರಿಗಳ ಪ್ರಶ್ನಿಸಿದ ಅವರು, ಮುಡಾದಲ್ಲಿ ನಡೆದಿದೆ ಎನ್ನಲಾದ ನಿವೇಶನ ಮಂಜೂರು ಹಗರಣಕ್ಕೆ ಇದು ಪುಷ್ಟಿ ನೀಡುತ್ತದೆ ಅಲ್ಲವೆ?, ಮೈಸೂರು ಮಹಾರಾಜರಾದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಮೈಸೂರು ನಗರವನ್ನು ಯೋಜನಾಬದ್ಧವಾಗಿ ಅಭಿವೃದ್ಧಿಪಡಿಸಿ, ನಿವೇಶನರಹಿತರಿಗೆ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆಯಡಿ ನಿಯಮಾನುಸಾರ ನಿವೇಶನಗಳನ್ನು ಒದಗಿಸಬೇಕೆಂಬ ಸದುದ್ದೇಶದಿಂದ ನಗರ ಅಭಿವೃದ್ಧಿ ವಿಶ್ವಸ್ಥ ಮಂಡಳಿ (ಸಿಐಟಿಬಿ)ಯನ್ನು ಆರಂಭಿಸಿದ್ದರು. ಆದರೆ ಇಂತಹ ಪ್ರತಿಷ್ಠಿತ ಸಂಸ್ಥೆಯಲ್ಲಿ ಜವಾಬ್ದಾರಿಯುತ ಅಧಿಕಾರಿಗಳಾದ ನೀವು ಮಾಡಿರುವುದೇನು? ನಿಯಮ ಬಾಹಿರವಾಗಿ ಕಂಡಕಂಡವರಿಗೆ ಅಭಿವೃದ್ಧಿಪಡಿಸಿದ ಬಡಾವಣೆಗಳಲ್ಲಿ ಕೋಟ್ಯಾಂತರ ರೂ. ಬೆಲೆ ಬಾಳುವ ನಿವೇಶನಗಳನ್ನು ಬೇಕಾಬಿಟ್ಟಿ ಮಂಜೂರು ಮಾಡುವ ಮೂಲಕ ಈ ಸಂಸ್ಥೆಯ ಘನತೆ ಹಾಳುಮಾಡಿ, ಸರ್ಕಾರವನ್ನು ಮುಜುಗರಕ್ಕೀಡಾಗುವಂತೆ ಮಾಡಿರುವುದು ವಿಪರ್ಯಾಸ ಎಂದು ಆಯೋಗದ ಮುಖ್ಯಸ್ಥರು ಮುಡಾ ಅಧಿಕಾರಿಗಳನ್ನು ಛೇಡಿಸಿದರು ಎಂದು ಪ್ರಾಧಿಕಾರದ ಮೂಲಗಳು ತಿಳಿಸಿವೆ.

ವಸತಿ ಬಡಾವಣೆಗಳ ನಕ್ಷೆ ಅನುಮೋದನೆಗೆ ಸಲ್ಲಿಸಿದ ವ್ಯಕ್ತಿ ಅಥವಾ ಸಂಸ್ಥೆಗಳ ಮಾಹಿತಿ, ಕಡತವನ್ನು ಅನುಮೋದನೆ ಮಾಡಿದ ಅಧಿಕಾರಿಗಳು ಯಾವ ಉದ್ದೇಶಕ್ಕೆ ಭೂಮಿಯ ಸರ್ವೆ ನಂಬರ್ ನಮೂದಿಸದೆ ಇದ್ದರೂ ಬಡಾವಣೆ ರಚಿಸಲು ಅನುಮತಿ ನೀಡಿರುವ ಉದ್ದೇಶವೇನು? ಇನ್ನಿತರ ಮಾಹಿತಿಗಳನ್ನು 24 ಗಂಟೆಯೊಳಗೆ ಅಂದರೆ, (ನವೆಂಬರ್ 13) ತಮ್ಮ ಬೆಂಗಳೂರು ಕಚೇರಿಗೆ ತಲುಪಿಸಬೇಕೆಂದು ತಾಕೀತು ಮಾಡಿದ್ದಾರೆನ್ನಲಾಗಿದೆ. ಈ ಹಿನ್ನೆಲೆಯಲ್ಲಿ ಇಂದು ಬೆಳಗ್ಗೆಯಿಂದ ಮೈಸೂರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಇದ್ದರೂ ಮುಡಾ ಕಚೇರಿ ಬಿಟ್ಟು ಕದಲದ ವಿವಿಧ ಶಾಖೆಗಳ ಅಧಿಕಾರಿಗಳು ದಾಖಲೆಗಳನ್ನು ಸಂಗ್ರಹಿಸುವ ಪ್ರಕ್ರಿಯೆಯಲ್ಲಿ ತೊಡಗಿದ್ದು, ಸಂಜೆಯಾದರೂ ಅವರು ಅದೇ ಕೆಲಸದಲ್ಲಿ ನಿರತರಾಗಿದ್ದರು. ಬೆಂಗಳೂರಿನ ಕುಮಾರ ಕೃಪಾ ಅತಿಥಿಗೃಹದ ಕಚೇರಿಯಲ್ಲಿ ತನಿಖೆ ಮುಂದುವರೆಸಿರುವ ಆಯೋಗವು ಸರ್ಕಾರ ನಿಗದಿಪಡಿಸಿದ 6 ತಿಂಗಳೊಳಗಾಗಿ ಹಗರಣ ಕುರಿತಂತೆ ಸರ್ಕಾರಕ್ಕೆ ವರದಿ ಸಲ್ಲಿಸಬೇಕಾಗಿರುವುದರಿಂದ ತೀವ್ರಗತಿಯಲ್ಲಿ ತನಿಖಾ ಪ್ರಕ್ರಿಯೆ ನಡೆದಿದೆ. ಈ ನಡುವೆ ಜಾರಿ ನಿರ್ದೇಶನಾಲಯ ಹಾಗೂ ಕರ್ನಾಟಕ ಲೋಕಾಯುಕ್ತ ಮೈಸೂರು ಎಸ್‌ಪಿಯವರ ನೇತೃತ್ವದಲ್ಲಿ ಹೈಕೋರ್ಟ್ ನಿರ್ದೇಶನದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯರ ಪತ್ನಿ ಬಿ.ಎಂ.ಪಾರ್ವತಿ ಸೇರಿದಂತೆ ಹಲವರಿಗೆ ಶೇ. 50:50ರ ಅನುಪಾತದಡಿ ಹಾಗೂ ಪ್ರೋತ್ಸಾಹದಾಯಕ ಯೋಜನೆಯಂತೆ ನಿವೇಶನಗಳನ್ನು ಮಂಜೂರು ಮಾಡಿರುವ ಬಗ್ಗೆ ಈಗಾಗಲೇ ತನಿಖೆ ನಡೆಸುತ್ತಿದ್ದು ಅತೀ ಶೀಘ್ರದಲ್ಲಿ ತನಿಖೆ ಪೂರ್ಣಗೊಳ್ಳಲಿದ್ದು, ಮುಡಾ ಅಧಿಕಾರಿಗಳು, ಸದಸ್ಯರು, ಪ್ರಭಾವಿ ಜನಪ್ರತಿನಿಧಿಗಳು ಹಾಗೂ ಮಧ್ಯವರ್ತಿಗಳ ಕೊರಳಿಗೆ ಈ ಹಗರಣ ಸುತ್ತಿಕೊಳ್ಳುವುದರಲ್ಲಿ ಸಂಶಯವಿಲ್ಲ ಎಂದು ನಂಬಲರ್ಹ ಮೂಲಗಳು ‘ಮೈಸೂರು ಮಿತ್ರ’ನಿಗೆ ತಿಳಿಸಿವೆ.

ನಕ್ಕರೆ ಅದೇ ಸ್ವರ್ಗ

ಶ್ಯಾಮ್ : ನನ್ನ ಮಗಳ ಮದುವೆಗೆ 1000 ರೂ. ಖರ್ಚು ಮಾಡಿದೆ ಗೊತ್ತಾ.
ರಾಮ್ : ಅದು ಹೇಗೆ?
ಶ್ಯಾಮ್ : ನಾನು ಅವಳಿಗೆ 1000 ರೂ. ಕೊಟ್ಟು ಮೊಬೈಲ್ ಕೊಡಿಸಿದೆ. ಅವಳು ಲವ್ ಮ್ಯಾರೇಜ್ ಮಾಡಿಕೊಂಡಳು.

ಮೈಸೂರು ಮಿತ್ರ

ಗುರುವಾರ, 14 ನವೆಂಬರ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ.........

ನಿಮ್ಮ ವಿಚಾರಗಳನ್ನು ಎತ್ತರಿಸಬೇಕೇ ಹೊರತು, ದನಿಯನ್ನಲ್ಲ. ಮಳೆ ನೀರಿನಿಂದ ಮರಗಳು ಬೆಳೆಯುತ್ತವೆಯೇ ಹೊರತು ಗುಡುಗು, ಸಿಡಿಲಿನಿಂದಲ್ಲ.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ತತ್ವದಲ್ಲಿ ಸತ್ವ ಹುಡುಕು, ವ್ಯಥೆಯಲ್ಲಿ ಕಥೆ ಹುಡುಕು.

ನಿಮ್ಮ ಪತ್ರಗಳು

ಕಪೋಲಕಲ್ಪಿತ ಸುದ್ದಿವಾಹಿನಿಗಳೂ... ವಾರ್ತಾ ವಾಚಸ್ಪತಿಗಳೂ....!

ಮಾನ್ಯರೆ,

ಮುಡಾ ಸೈಟ್ ಹಂಚಿಕೆ ವಿಚಾರವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮೈಸೂರಿನ ಲೋಕಾಯುಕ್ತ ಪೊಲೀಸರ ಕಚೇರಿಗೆ ತೆರಳಿ ವಿಚಾರಣೆ ಎದುರಿಸಿದ್ದಾರೆ. ಈ ಸಂದರ್ಭದಲ್ಲಿ ಲೋಕಾಯುಕ್ತ ಕಚೇರಿಯ ಸುತ್ತಮುತ್ತ ನೂರಾರು ಅಡಿ ದೂರದಿಂದಲೇ ಪೊಲೀಸರು ಬ್ಯಾರಿಕೇಡ್ ಇಟ್ಟು ಯಾರೂ ಹತ್ತಿರಕ್ಕೆ ಸಮೀಪಿಸದಂತೆ ಬಂದೋಬಸ್ತ್ ವ್ಯವಸ್ಥೆ ಮಾಡಿದ್ದರು. ಮಾಧ್ಯಮದವರಿಗೂ ಒಳಗೆ ಪ್ರವೇಶ ಇರಲಿಲ್ಲ.

ಸಿದ್ದರಾಮಯ್ಯನವರು ವಿಚಾರಣೆ ಮುಗಿಸಿ ಹೊರಬರುತ್ತಿದ್ದಂತೆಯೇ ಲೋಕಾಯುಕ್ತರು ಸಿದ್ದರಾಮಯ್ಯನವರಿಗೆ ಕೇಳಿದ 25 ಪ್ರಶ್ನೆಗಳು ಹಾಗೂ ಸಿದ್ದರಾಮಯ್ಯನವರ ಉತ್ತರಗಳು ಟಿವಿ ಪರದೆಯಲ್ಲಿ 'ಡಿಜೆ ಮ್ಯೂಸಿಕ್' ಸಹಿತ ವರದಿಯಾದವು.

ನಾಲ್ಕು ಗೋಡೆಗಳ ಮಧ್ಯೆ ತನಿಖಾಧಿಕಾರಿಗಳು ಹಾಗೂ ಸಿದ್ದರಾಮಯ್ಯನವರ ನಡುವೆ ನಡೆದ ಪ್ರಶ್ನೋತ್ತರಗಳು ಟಿವಿ ಬೃಹಸ್ಪತಿಗಳಿಗೆ ಹೇಗೆ ತಿಳಿಯಿತು?

ಪ್ರಶ್ನೆ ಪತ್ರಿಕೆ ಬಹಿರಂಗವಾಗುವುದು ಸಹಜ.

ಉತ್ತರ ಪತ್ರಿಕೆಯೂ ಬಹಿರಂಗ ಆದುದು ಹೇಗೆ?

ಇದೆಲ್ಲಾ ವರದಿಗಾರರ ಕಪೋಲಕಲ್ಪಿತ ಪ್ರಶ್ನೋತ್ತರಗಳು ಎಂದು ಪ್ರತಿಯೊಬ್ಬ ವೀಕ್ಷಕನಿಗೂ ತಿಳಿದಿದೆ. ಇದನ್ನು ಲೋಕಾಯುಕ್ತ ಎಸ್‌ಪಿ ಅವರೇ ಸ್ಪಷ್ಟಪಡಿಸಿದ್ದಾರೆ.

ಆದರೆ ಇಂತಹ ಕಪೋಲಕಲ್ಪಿತ ಸುದ್ದಿಗಳನ್ನು ಪ್ರಸಾರ ಮಾಡುವಾಗ "ಕ್ಷಮಿಸಿ ನಾವು ಹೇಳೋದೆಲ್ಲ ತಮಾಷೆಗಾಗಿ" ಎಂಬ ಬರಹವಾದರೂ ಟಿವಿಯಲ್ಲಿ ಮೂಡಿಬರಬಾರದೇ? ಕಪೋಲ ಕಲ್ಪಿತ ಬೃಹಸ್ಪತಿಗಳ ಮಾತನ್ನು ನಂಬಿ ವಾರ್ತಾ ವಾಚಸ್ಪತಿಗಳೂ ಹಾದಿ ತಪ್ಪಿದರೇ? ಸುಳ್ಳು ಜಾಹೀರಾತು, ಪೊಳ್ಳು ಧಾರಾವಾಹಿಗಳ ಜೊತೆಗೆ ಇಂತಹ ಕಪೋಲಕಲ್ಪಿತ ವರದಿಗಳೂ ಪ್ರಸಾರವಾದರೆ ಈ ತಾಪತ್ರಯಗಳಿಂದ ವೀಕ್ಷಕರನ್ನು ರಕ್ಷಿಸುವವರಾರು?

–ಪಿ.ಜೆ.ರಾಘವೇಂದ್ರ, ನ್ಯಾಯವಾದಿ, ಮೈಸೂರು

ಜೋಡಿ ತೆಂಗಿನಮರ ಸ್ಮಶಾನದಲ್ಲಿ ನೀರಿನ ಸಂಪರ್ಕ ಸಂಪೂರ್ಣ ಬಂದ್

ಮಾನ್ಯರೆ,

ಮೈಸೂರು ನಗರದ ಹೈವೇ ವೃತ್ತದ ಸಮೀಪದಲ್ಲಿ ಜೋಡಿ ತೆಂಗಿನಮರ ಸ್ಮಶಾನವು ತಿಲಕ್‌ನಗರ, ಬಂಬೂಬಜಾರ್, ಬನ್ನಿಮಂಟಪ, ಸೊಪ್ಪಿನಕೇರಿ, ಉಪ್ಪಿನಕೇರಿ, ಕೈಲಾಸಪುರಂ, ಬಿ.ಬಿ.ಕೇರಿ, ಯಾದವಗಿರಿ ಹಾಗೂ ಕೆಲವು ಸಮೀಪವಿರುವ ಪ್ರದೇಶಗಳಲ್ಲಿ ಯಾವುದೇ ವ್ಯಕ್ತಿಗಳು ಮರಣ ಹೊಂದಿದರೆ ಈ ಸ್ಮಶಾನದಲ್ಲಿ ಅವರವರ ಸಂಪ್ರದಾಯದಂತೆ ಅಂತ್ಯಕ್ರಿಯೆ ನಡೆಸುತ್ತಾರೆ. ಜೋಡಿ ತೆಂಗಿನ ಮರ ಸ್ಮಶಾನ ಬಹಳ ವಿಸ್ತಾರವಾಗಿದೆ. ಈ ಮೇಲ್ಕಂಡ ಪ್ರದೇಶಗಳು ಮೈಸೂರು ನಗರದಲ್ಲಿ ಬಹಳ ಹಳೇಯದಾಗಿದ್ದು, ಇಲ್ಲಿ ವಾಸಿಸುವ ನಿವಾಸಿಗಳಿಗೆ ತಮ್ಮ ಏರಿಯಾಗಳಲ್ಲಿ ಮರಣ ಹೊಂದುವ ವ್ಯಕ್ತಿಗಳು ಸಾಮಾನ್ಯವಾಗಿ ಬಹಳಷ್ಟು ಜನರಿಗೆ ಪರಿಚಿತರಾಗಿರುತ್ತಾರೆ. ಆದ್ದರಿಂದ ಸಹಜವಾಗಿ ಅಂತ್ಯಕ್ರಿಯೆಯಲ್ಲಿ ಹೆಚ್ಚು ಜನಗಳು ಸೇರುತ್ತಾರೆ. ಅಂತ್ಯಕ್ರಿಯೆ ಮುಗಿದ ಬಳಿಕ ಜನರು ಹಿಂದಿನಿಂದ ನಡೆದು ಬಂದಿರುವ ವಾಡಿಕೆಯಂತೆ ಕೈ–ಕಾಲುಗಳನ್ನು ತೊಳೆದುಕೊಂಡು ಹೊರ ಬರುವುದು ಸಹಜ. ಆದರೆ ಈ ಸ್ಮಶಾನದಲ್ಲಿ ಹಿಂದೆ 5–6 ನಲ್ಲಿಗಳನ್ನು ಹೊಂದಿರುವ ನೀರಿನ ಸಂಪರ್ಕದ ವ್ಯವಸ್ಥೆ ಇತ್ತು. ಆದರೆ ಇತ್ತೀಚೆಗೆ ಸಂಪೂರ್ಣವಾಗಿ ನೀರಿನ ಸಂಪರ್ಕವನ್ನು ಕಡಿತಗೊಳಿಸಲಾಗಿದೆ. ಇಡೀ ಸ್ಮಶಾನದಲ್ಲಿ ಕೇವಲ ಒಂದು ಹಳೇಯ ಹ್ಯಾಂಡ್ ಪಂಪ್ ಬೋರ್‌ವೆಲ್ ಮಾತ್ರ ಇರುತ್ತದೆ. ಅದರೆ ಈ ಬೋರ್‌ವೆಲ್ ಕೂಡ ಅಗಾಗ್ಗೆ ಕೆಟ್ಟು ನಿಂತಿರುತ್ತದೆ. 200–300 ಜನರು ಸೇರುವ ಜಾಗದಲ್ಲಿ ಒಂದು ಬೋರ್‌ವೆಲ್‌ನಿಂದ ಉಪಯೋಗ ಸಾಧ್ಯವೇ ಹಾಗೂ ಇಡೀ ಸ್ಮಶಾನದಲ್ಲಿ ಗಿಡ–ಗಂಟಿಗಳು ಬೆಳೆದು ಸಮತಟ್ಟು ಮಾಡದೇ ಅವ್ಯವಸ್ಥೆಯಿಂದ ಕೂಡಿರುತ್ತದೆ. ಸಾರ್ವಜನಿಕರು ತೆರಿಗೆ ಪಾವತಿಸುವ ಸಂದರ್ಭದಲ್ಲಿ ಆಸ್ತಿ ವಿವರ ತೆರಿಗೆ ಪಟ್ಟಿಯ ಕ್ರಮ ಸಂಖ್ಯೆ 43 ರ ಕಲಂ ಪ್ರಕಾರ ಮಹಾನಗರ ಪಾಲಿಕೆಯವರು ನಿಗದಿಪಡಿಸಿರುವಂತೆ ಸ್ಮಶಾನ ಅಭಿವೃದ್ಧಿ ಶುಲ್ಕ ಪಾವತಿಸಿರುತ್ತಾರೆ. ಸಾರ್ವಜನಿಕರಿಂದ ಅಭಿವೃದ್ಧಿ ಶುಲ್ಕ ವಸೂಲಿ ಮಾಡಿದ ಮೇಲೆ ಸ್ಮಶಾನದ ನಿರ್ವಹಣೆ ಜವಾಬ್ದಾರಿ ಕೂಡಾ ಮಹಾನಗರ ಪಾಲಿಕೆಯವರದ್ದೆ ಆಗಿರುತ್ತದೆ. ಜನರಿಗೆ ಸರಿಯಾದ ವ್ಯವಸ್ಥೆ ಇಲ್ಲದ ಮೇಲೆ ಸ್ಮಶಾನ ಅಭಿವೃದ್ಧಿ ಶುಲ್ಕ ಯಾಕೆ ಪಾವತಿಸಬೇಕು. ಅಭಿವೃದ್ಧಿ ಇಲ್ಲವಾದಲ್ಲಿ ಸಾರ್ವಜನಿಕರು ಪಾವತಿಸಿರುವ ಸ್ಮಶಾನ ಅಭಿವೃದ್ಧಿ ಶುಲ್ಕ ಎಲ್ಲಿ ಎಂಬುದೇ ಯಕ್ಷ ಪ್ರಶ್ನೆ?

–ಎಂ.ಎನ್. ಧರಣಿ ವೆಂಕಟೇಶ,
ಸ್ಥಿರಾಸ್ತಿಗಳ ಜಿಲ್ಲಾ ಪತ್ರ ಬರಹಗಾರರು, ಮೈಸೂರು.

ಸವಿನೆನಪು

ಮಾನ್ಯರೆ,

"ಮೈಸೂರು ವಿವಿ ಪ್ರಾಚ್ಯ ಸಂಶೋಧನಾಲಯದ 133ನೇ ಸಂಸ್ಥಾಪನಾ ದಿನಾಚರಣೆ ('ಮೈಸೂರು ಮಿತ್ರ, ಅ. 23). ನಾನು ಎಂ.ಎ. ಮುಗಿಸಿದ ಮೇಲೆ ಮೂರು ವರ್ಷ (1961–64) ಪ್ರಾಚ್ಯ ಸಂಶೋಧನಾಲಯದಲ್ಲಿ ಸಂಶೋಧನಾ ಸಹಾಯಕನಾಗಿ ಸೇವೆ ಸಲ್ಲಿಸಿದ್ದನ್ನು ಜ್ಞಾಪಿಸಿಕೊಳ್ಳಬಯಸುತ್ತೇನೆ. (ಬಹುಮಂದಿಗೆ ತಿಳಿಯದು).

ಮಲೆಯೂರು ಗುರುಸ್ವಾಮಿ

'ಮಗು'ವೇನು? ಒಂದರ್ಥದಲ್ಲಿ ಹೌದು, ಮತ್ತೊಂದು
ಅರ್ಥದಲಿ ಅಲ್ಲ! ಶಿಷ್ಯ, ಶ್ರೇಷ್ಠನೀವಹುದು.
ಸಾಮಾನ್ಯರೇನಲ್ಲ: ಮಲೆಯ ಮುಡಿ, ಗಿರಿಶಿಖರ!
'ಲೋಕ ಪೂಜ್ಯ ವಿಭೂತಿ' ಎಂದು ನನ್ನನು ಕರೆದು,
ಸೋಲುಗಾಣಿಸಿದವರ ಮಹನೀಯರ್ರೈ ನೀವು!
ಮಾತು ಮುತ್ತಿನ ಹಾರ, ಮಾಣಿಕ್ಯ ಸಂದೀಪ್ತಿ,
ಸ್ಫಟಿಕದ ಶಲಾಕೆಯೇ: ಲಿಂಗಸಂಮಿತ, ಮಿತ್ರ.
ಸಂಸ್ಕೃತಿಯ ಸಭ್ಯತೆಯ ಸೀಮಾಪುರುಷ ನೀವು;
ಕಿಂಪುರುಷ, ಶರಣಶ್ರೀ ಪುರುಷ, ನಿಸ್ಸಂದೇಹ!
'ಆಹಾ!' ಎನಿಸುವ ವಿಶೇಷತೆ, ಶರಣು ಶರಣಾರ್ಥಿ.
ಕಪಿಲೆಯಿಂದಲೇ ಗೆಳೆಯ, ನೀವು ಕಡಲಿಗೆ ಹರಿದು
ಧನ್ಯಾತಿಧನ್ಯ, ಮೌಲಿಕವಾಗಿ ಬರೆಬರೆದು!!


–ಸಿಪಿಕೆ, ಹಿರಿಯ ಸಾಹಿತಿಗಳು, ಮೈಸೂರು.



ನಿವೇದಿತ ಹೆಚ್.
ಇಂಗ್ಲಿಷ್ ಉಪನ್ಯಾಸಕಿ
ಯುವರಾಜ ಕಾಲೇಜು
ಮೈಸೂರು.

ಮಂಥನ

ಮಕ್ಕಳು ಮಕ್ಕಳಾಗಿ ಬೆಳೆದರೆ ಚೆನ್ನ...!



ಮಕ್ಕಳೊಂದಿಗೆ ಜವಾಹರಲಾಲ್ ನೆಹರು



ವಿಕ್ರಮಾದಿತ್ಯ ಬೇತಾಳನ ಕತೆ



ಚಂದಮಾಮನ ಕತೆ



ಸೂಪರ್ ಮ್ಯಾನ್

ಮತ್ತೆ ಮಕ್ಕಳ ದಿನಾಚರಣೆ ಬಂದಿದೆ. ನಮ್ಮ ದೇಶದ ಮೊದಲ ಪ್ರಧಾನಿ ಜವಾಹರಲಾಲ್ ನೆಹರು ಅವರ ಹುಟ್ಟಿದ ದಿನವನ್ನು ನಮ್ಮ ದೇಶದಲ್ಲಿ 'ಮಕ್ಕಳ ದಿನಾಚರಣೆ'ಯನ್ನಾಗಿ ಆಚರಿಸುತ್ತೇವೆ. 1954ರಲ್ಲಿ ಮೊದಲ ಬಾರಿಗೆ ನವೆಂಬರ್ 14 ಅನ್ನು ಮಕ್ಕಳ ದಿನಾಚರಣೆಯನ್ನಾಗಿ ಆಚರಿಸಲಾಯಿತು. ನಂತರ 1957ರಲ್ಲಿ ಅಧಿಕೃತವಾಗಿ ನವೆಂಬರ್ 14 ಅನ್ನು ಮಕ್ಕಳ ದಿನಾಚರಣೆಯನ್ನಾಗಿ ಘೋಷಿಸಲಾಯಿತು. ಅಂದಿನ ದಿನದ ಸವಿನೆನಪಿಗಾಗಿ ಭಾರತದ ಅಂಚೆ ಇಲಾಖೆ 3 ಸ್ಟ್ಯಾಂಪ್‌ಗಳನ್ನು ಬಿಡುಗಡೆ ಮಾಡಿತು.

ಈ ದಿನದಂದು ಸಂಭ್ರಮಾಚರಣೆ ಮಾತ್ರವಲ್ಲದೆ ಮಕ್ಕಳ ಹಕ್ಕುಗಳ ರಕ್ಷಣೆ ಮತ್ತು ಅವರ ಕಲ್ಯಾಣಕ್ಕಾಗಿ ಹಲವು ಯೋಜನೆಗಳನ್ನು ಹಮ್ಮಿಕೊಂಡು ಅವುಗಳ ಯಶಸ್ಸಿಗಾಗಿ ದುಡಿವ ಸಂಕಲ್ಪ ಮಾಡಲಾಗುತ್ತದೆ. ಇಂದಿನ ಮಕ್ಕಳೇ ನಾಳಿನ ಪ್ರಜೆಗಳು. ಹಾಗಾಗಿ ಅವರ ಸುಂದರ ಭವಿಷ್ಯವನ್ನು ರೂಪಿಸುವುದು ಇಡೀ ಸಮಾಜದ ಜವಾಬ್ದಾರಿಯಾಗಿರು ತ್ತದೆ. ಹಾಗಾಗಿಯೇ ವಿಶ್ವಸಂಸ್ಥೆ ಕೂಡ ಮಕ್ಕಳ ದಿನಾಚರಣೆಯನ್ನು ನವೆಂಬರ್ 20ರಂದು ವಿಶ್ವಾದ್ಯಂತ ಆಚರಿಸುತ್ತದೆ. 1959ರಲ್ಲಿ ಮಕ್ಕಳ ಹಕ್ಕುಗಳ ಘೋಷಣೆಯಾದ ದಿನದ ನೆನಪಿಗಾಗಿ ವಿಶ್ವಸಂಸ್ಥೆ ಮಕ್ಕಳ ದಿನಾಚರಣೆಯನ್ನು ಆಚರಿಸಲು ಕರೆ ನೀಡಿದೆ. ಪ್ರತಿ ವರ್ಷ ಒಂದು ಘೋಷವಾಕ್ಯ ಇಟ್ಟು ಕೊಂಡು ಅದರ ಜಾರಿ ಮತ್ತು ಅನುಷ್ಠಾನಕ್ಕಾಗಿ ಶ್ರಮಿಸುತ್ತದೆ. ಅಂದಹಾಗೆ ಈ ವರ್ಷದ ಘೋಷ ವಾಕ್ಯ, Children of today, leaderstomorrow ಎಂಬುದಾಗಿದೆ. ನಾವೂ ಅದನ್ನೇ ನಂಬಿದ್ದೇವೆ ಅಲ್ಲವೇ? ಇಂದಿನ ಮಕ್ಕಳೇ ನಾಳಿನ ಪ್ರಜೆಗಳು... ಪ್ರಜಾಪ್ರಭುತ್ವದಲ್ಲಿ ಪ್ರಜೆಗಳೇ ದೊರೆಗಳು ಅಲ್ಲವೆ !

ಭವಿಷ್ಯದಲ್ಲಿ ಪ್ರಪಂಚವನ್ನು ಮುನ್ನಡೆಸುವ ಜವಾಬ್ದಾರಿ ಹೊರುವ ಮಕ್ಕಳನ್ನು ಬೆಳೆಸುವ ಗುರುತರ ಹೊಣೆ ಹೆತ್ತವರ ಮೇಲಿದೆ. ಕಾಲ ಬದಲಾಗಿದೆ. ಹಿಂದೆ ಅಜ್ಜ–ಅಪ್ಪ–ಮಗನ ಕಾಲಗಳಿಗೆ ತಲೆಮಾರಿನ ಅಂತರ ಎನ್ನುತ್ತಿದ್ದವು. ಆದರೆ ಈಗ 3–3 ವರ್ಷಗಳಿಗೊಮ್ಮೆ Generation Gap ಎನ್ನುವ ಹಾಗಾಗಿದೆ. ಕೇವಲ ಈಗ್ಗೆ 5 ವರುಷಗಳ ಹಿಂದೆ ಮಕ್ಕಳಲ್ಲಿ ಇದ್ದ ಮುಗ್ಧತೆ ಇಂದು ಇಲ್ಲ. ಕರೋನಾ ಕಾಲದಲ್ಲಿ ಮಕ್ಕಳ ಕೈಗೆ ಅನಿವಾರ್ಯವಾಗಿ ಮೊಬೈಲ್ ಕೊಡಬೇಕಾಗಿ ಬಂದಾಗಿನಿಂದ ಮಕ್ಕಳು ಇದ್ದಕ್ಕಿದ್ದ ಹಾಗೆ ಬೇಗ ದೊಡ್ಡವರಾಗಿ ಬಿಡುತ್ತಿದ್ದಾರೇನೋ ಎನಿಸತೊಡಗಿದೆ. ಈಗ ಬಹುತೇಕ ಎಲ್ಲ ಮಕ್ಕಳಿಗೆ ಅವರದೇ ಆದ ಫೋನ್ ನಂಬರ್ ಇದೆ, ಇನ್ಸ್ಟಾಗ್ರಾಮ್ ಪೇಜ್ ಇದೆ, ವಾಟ್ಸ್ ಆಪ್ ಗುಂಪುಗಳಿದ್ದಾವೆ.

ಇಂದಿನ ಮಕ್ಕಳ ವೇಗಕ್ಕೆ ಹೊಂದಿಕೊಳ್ಳಲು ಪೋಷಕರು ಪಡುತ್ತಿರುವ ಕಷ್ಟ ಅಷ್ಟಿಷ್ಟಲ್ಲ. ಸ್ವಲ್ಪವೇ ವರ್ಷಗಳ ಹಿಂದೆ ಎಲ್ಲವೂ ಸರಳವಾಗಿತ್ತು. ಮನೆಯಲ್ಲಿ ಮಕ್ಕಳು ಅಪ್ಪ ಅಮ್ಮ ಮಾತ್ರವಲ್ಲದೆ ಅಜ್ಜಿ ತಾತಾ, ಚಿಕ್ಕಪ್ಪ ದೊಡ್ಡಪ್ಪ, ಅತ್ತೆ ಮಾವಂದಿರ ಜೊತೆ ಬೆಳೆಯುತ್ತಿದ್ದರು. ಈಗ ನಾನಾ ಕಾರಣಗಳಿಂದ ವಿಭಕ್ತ ಕುಟುಂಬಗಳು ಹೆಚ್ಚಾಗುತ್ತಾ ಸಂಬಂಧಗಳು ಜಾಳಾಗಿ ಮಕ್ಕಳು ತಮ್ಮದೇ ಪ್ರಪಂಚವನ್ನು ಸೃಷ್ಟಿಸಿಕೊಳ್ಳುವಂತಾಗಿದೆ. ಹಿಂದೆ ಶಾಲಾ ಸಮಯದ ನಂತರ ಗೆಳೆಯರೊಂದಿಗೆ ಆಟ ಸುತ್ತಾಟಗಳಲ್ಲಿ ಸಮಯ ಕಳೆಯುತ್ತಿದ್ದ ಮಕ್ಕಳು, ಇಂದು ಹೋಮ್ ವರ್ಕ್, ಪ್ರಾಜೆಕ್ಟ್‌ಗಳೆಂದು ಕಳೆದು ಹೋಗುತ್ತಿದ್ದಾರೆ. ಅಳಿದುಳಿದ ಸ್ವಲ್ಪ ಸಮಯವನ್ನು ಫೋನ್‌ನೊಂದಿಗೆ ಕಳೆಯುತ್ತಿದ್ದಾರೆ. ಅಪ್ಪ ಅಮ್ಮನ ಜೊತೆ ಮಾತಾಡಲೂ ಅವರಿಗೆ ವ್ಯವಧಾನವಿಲ್ಲ. ಮೊದಲಾಗಿ ಅಪ್ಪ ಅಮ್ಮಂದಿರಿಗೇ ವ್ಯವಧಾನವಿಲ್ಲದಿರುವುದರಿಂದ ಮಕ್ಕಳು ಫೋನ್‌ಗೆ ದಾಸರಾದರೇನೋ ಅಂತಲೂ ಅನ್ನಿಸದಿರದು. ಈ ಸಾಧ್ಯತೆಯೂ ಇದೆಯಲ್ಲವೇ?

ಸ್ವಲ್ಪವೇ ವರ್ಷಗಳ ಹಿಂದೆ ಮಕ್ಕಳಲ್ಲಿ ಪುಸ್ತಕಗಳನ್ನು ಓದುವ ಹವ್ಯಾಸವಿತ್ತು. ಮಕ್ಕಳಿಗಾಗಿ ವಿಧವಿಧವಾದ ವಾರ, ಪಾಕ್ಷಿಕ, ಮಾಸಿಕ ಪತ್ರಿಕೆಗಳು ಬರುತ್ತಿದ್ದವು! ಕನ್ನಡದಲ್ಲಿಯಂತೂ, ಬಾಲಮಂಗಳ, ಬಾಲಮಿತ್ರ, ಚಂದಮಾಮ, ಚಂಪಕ, ಗೋಕುಲ, ತುಂತುರುಗಳಲ್ಲದೆ, ಸುಧಾ ಮಯೂರ, ತರಂಗ, ತುಷಾರ ಕರ್ಮವೀರಗಳಲ್ಲಿ ಮತ್ತು ದಿನಪತ್ರಿಕೆಗಳಲ್ಲಿ ಪ್ರಕಟವಾಗುತ್ತಿದ್ದ ಮಕ್ಕಳ ವಿಭಾಗದ ಕಥೆ, ಲೇಖನ, ಒಗಟು ಇತ್ಯಾದಿಗಳನ್ನು ಅದೆಷ್ಟು ಮಕ್ಕಳು ಕಾದು ಓದುತ್ತಿರಲಿಲ್ಲ (ಈಗಲೂ ಮಕ್ಕಳಿಗಾಗಿಯೇ ಪುಟಗಳು ಮೀಸಲಿದ್ದಾವೆ, ಆದರೆ ಓದುವವರೆಷ್ಟು) ಮಕ್ಕಳಿಗಾಗಿಯೇ ಇರುತ್ತಿದ್ದ ಪದಬಂಧ, ಲೆಕ್ಕಗಳನ್ನು ಒಳಗೊಂಡ ಗಮ್ಮತ್ತಿನ ಪ್ರಶ್ನೆಗಳು, ಸಚಿತ್ರ ಕಥೆಗಳು... ಒಂದೇ ಎರಡೇ ಪ್ರಜಾವಾಣಿಯಲ್ಲಿ ಪ್ರಕಟವಾಗುತ್ತಿದ್ದ ವಿಜ್ಞಾನ ವಿಸ್ಮಯ ಪುಟ ನಮ್ಮೆಲ್ಲರಲ್ಲಿ ವೈಜ್ಞಾನಿಕ ಮನೋಭಾವನೆಯನ್ನು ಅದೆಷ್ಟು ಉತ್ತೇಜಿಸಿತ್ತು ತರಂಗದಲ್ಲಿ ಬಾಲವನದಲ್ಲಿ ಕಾರಂತಜ್ಜ ಅದೆಷ್ಟು ಮಕ್ಕಳ ಕುತೂಹಲಗಳನ್ನು ತಣಿಸಿತ್ತು! ಚಂದಮಾಮದಲ್ಲಿ ಕತೆಗಳೊಂದಿಗೆ ಪ್ರಕಟವಾಗುತ್ತಿದ್ದ ಚಿತ್ರಗಳನ್ನು ನೋಡಿ ಅದೆಷ್ಟು ಮೋಡಿಗೆ ಕಲ್ಪನೆಗೆ ಒಳಗಾಗುತ್ತಿದ್ದರು ಮಕ್ಕಳು! ಅದರಲ್ಲೂ ವಿಕ್ರಮಾದಿತ್ಯ ಬೇತಾಳನ ಕತೆಯ ಚಿತ್ರವಂತೂ ನಿತ್ಯ ನೂತನ! ಚಂದಮಾಮಾಕ್ಕೆ ಅದ್ಭುತ ಚಿತ್ರಗಳನ್ನು ರಚಿಸಿದ ಶಿವಶಂಕರ್ ಅವರು ಇತ್ತೀಚೆಗೆ ನಿಧನರಾದಾಗ ಇಡೀ ಭಾರತವೇ ಶೋಕಿಸಿತ್ತು. ಸೂಪರ್ ಮ್ಯಾನ್, ಬ್ಯಾಟ್ ಮ್ಯಾನ್‌ಗಳಿಗಿಂತಾ ಡಿಂಗ, ಶಕ್ತಿ ಮದ್ದು ಲಂಬೋದರ ನಮ್ಮ ಹೀರೋಗಳಾಗಿದ್ದರು. ಮಕ್ಕಳ ಕುತೂಹಲಗಳನ್ನು ತಣಿಸುತ್ತಾ, ಅವರನ್ನು ರಮ್ಯ ಲೋಕಕ್ಕೆ ಕರೆದೊಯ್ಯುತ್ತಿದ್ದ ಈ ಸಾಧನಗಳು ಮಕ್ಕಳಲ್ಲಿನ ಮುಗ್ಧತೆಯನ್ನು ಕಾಪಿಡುತ್ತಲೇ ಅವರನ್ನು ಪ್ರಪಂಚಕ್ಕೆ ಪರಿಚಯಿಸುತ್ತಿದ್ದವು. ಅವರಲ್ಲಿ ಮೌಲ್ಯಗಳನ್ನು ತುಂಬುತ್ತಿದ್ದವು. ಅಲ್ಲಿಗೆ ಅಪ್ಪ ಅಮ್ಮನ ಅರ್ಧ ಕೆಲಸ ಕಡಿಮೆಯಾಗುತ್ತಿತ್ತು!

ಗ್ರಂಥಾಲಯಗಳು ಮಕ್ಕಳ ಓದಿನ ಕತೆಗಳ ಮೇಲಿನ ಪ್ರೀತಿಯನ್ನು ಪೊರೆಯುತ್ತಿದ್ದವು. ರಾಮಾಯಣ, ಮಹಾಭಾರತ, ಅವುಗಳ ಉಪಕಥೆಗಳು, ಭಾಗವತ, ಈಸೋಪನ ನೀತಿಕಥೆಗಳು, ಪಂಚತಂತ್ರದ ಕಥೆಗಳು, ವಿಕ್ರಮ ಬೇತಾಳನ ಕಥೆಗಳು, ಅರೇಬಿಯನ್ ನೈಟ್ಸ್,

ಇಂದು ಮಕ್ಕಳ ದಿನಾಚರಣೆ

ಜಾನಪದ ಕಥಾಗುಚ್ಛಗಳು... ಈ ಪುಸ್ತಕಗಳನ್ನು ಎರವಲು ಪಡೆಯಲು ಅಲಿಖಿತ ಸರದಿ ಇರುತ್ತಿತ್ತು! ಶಾಲಾ ಗ್ರಂಥಾಲಯಗಳಲ್ಲಿಯೂ ಇದೇ ಸಡಗರ. ಕೇವಲ ಕತೆಗಳಲ್ಲದೆ, ಭಾರತ–ಭಾರತಿ ಸರಣಿಯ ಪುಟ್ಟ ಪುಸ್ತಕಗಳು ಮಕ್ಕಳಿಗೆ ಭಾರತದ ಮಹಾನ್ ವ್ಯಕ್ತಿಗಳ ಪರಿಚಯ ಮಾಡಿಸುತ್ತಿದ್ದವು.

ಈಗ ಮಕ್ಕಳೆಲ್ಲಿ ಓದುತ್ತಾರೆ? ಮೇಲೆ ಹೆಸರಿಸಿರುವ ಮಕ್ಕಳ ಪತ್ರಿಕೆಗಳಲ್ಲಿ ಎಷ್ಟೋ ಕೊನೆಯುಸಿರೆಳೆ ದಾಗಿವೆ. ಇದು ಸಂಸ್ಕೃತಿಯ ನಾಶವೆನಿಸುವುದಿಲ್ಲವೇ, ದುರಂತವೆನಿಸುವುದಿಲ್ಲವೇ. ಕನ್ನಡ ಮಾತ್ರವಲ್ಲ ಬೇರೆ ಭಾಷೆಗಳಲ್ಲೂ ಮಕ್ಕಳ ಪತ್ರಿಕೆಗಳದ್ದು ಇದೇ ಸ್ಥಿತಿ. ಇದು ಮಾಹಿತಿ ಯುಗ. ಮಕ್ಕಳಿಗೆ ಮಾಹಿತಿ ಸಾಹಿತ್ಯ 'ಫ್ಯಾಕ್ಷನ್'ನ ಪರಿಚಯ ಮಾಡಿಸಬೇಕಾಗಿದೆ. ಈಗಾಗಲೇ ಹಲವು ಲೇಖಕರು ಮಕ್ಕಳಿಗಾಗಿ ಅಂತಹ ಸಾಹಿತ್ಯದ ರಚನೆ ಮಾಡುತ್ತಿದ್ದಾರೆ. ಶಿಕ್ಷಕರು ಮತ್ತು ಪೋಷಕರು ಆ ನಿಟ್ಟಿನಲ್ಲಿ ಗಮನ ಹರಿಸಬೇಕು.

ಇನ್ನು ಆಟಗಳು! ಶಾಲೆಯ ಅವಧಿ ಮುಗಿದ ಮೇಲೆ, ಕತ್ತಲಾಗುವ ತನಕ, ಕೆಲವೊಮ್ಮೆ ಕತ್ತಲಾದ ಮೇಲೂ ಮಕ್ಕಳು ಆಡುತ್ತಿದ್ದ ಆಟಗಳು ಎಷ್ಟು ವೈವಿಧ್ಯಮಯ! ಕುಂಟಾಬಿಲ್ಲೆ, ಚಿನ್ನಿದಾಂಡು, ಜೂಟಾಟ, ಲಗೋರಿ, ಗೋಲಿ, ಮರಕೋತಿ, ಚೌಕಾ ಬಾರಾ, ಅಳುಗುಳಿ ಮಣೆ, ಹುಲಿ ಕುರಿ, ಕೆರೆ ದಡ, ಬುಗುರಿ, ಕಣ್ಣಾಮುಚ್ಚಾಲೆ... ಅಬ್ಬಾ! ಈಗಿನ ಮಕ್ಕಳಿಗೆ ಬಹುತೇಕ ಹೊರಾಂಗಣ ಕ್ರೀಡೆಗಳು ವರ್ಜ್ಯವಾಗಿವೆ. ಹೆಚ್ಚೆಂದರೆ ಕ್ರಿಕೆಟ್ ಅವರನ್ನು ಆಕರ್ಷಿಸ ಬಲ್ಲದು. ಬೇರೆ ಆಟಗಳ ಬಗ್ಗೆ ಅವರಿಗೆ ಆಸಕ್ತಿಯೇ ಇಲ್ಲ. ಇನ್ನು ಫೋನ್‌ನಲ್ಲಿ ದೊರಕುವ ಗೇಮ್‌ಗಳು ಅವರನ್ನು ಮನೆಯೊಳಗಿನ ಒಂದು ಮೂಲೆಗೆ ಕಟ್ಟಿಹಾಕಿ ಬಿಟ್ಟಿವೆ. ಮಾತ್ರವಲ್ಲದೆ ಮಕ್ಕಳಲ್ಲಿ ಹಿಂಸಾ ಪ್ರವೃತ್ತಿಯನ್ನು ಅಪಾಯಕಾರಿ ಮಟ್ಟದಲ್ಲಿ ಬೆಳೆಸುತ್ತಿವೆ.

ಇನ್ನು ಟಿವಿಯಲ್ಲಿ ಆಗ ಮಕ್ಕಳಿಗಾಗಿಯೇ ವಿಶೇಷ ಪ್ರತ್ಯೇಕ ಕಾರ್ಯಕ್ರಮಗಳಿರುತ್ತಿದ್ದವು. ಚಂದದ ಕಾರ್ಟೂನ್‌ಗಳು (ಆದರೆ ಟಾಮ್ ಅಂಡ್ ಜೆರ್ರಿಯಂತಹ ಕಾರ್ಟೂನ್ ಮಕ್ಕಳಲ್ಲಿ ಹಿಂಸಾ ವಿನೋದವನ್ನು ಪ್ರೇರೇಪಿಸಿದವು ಎಂಬ ವಾದವನ್ನು ತಳ್ಳಿ ಹಾಕಲಾಗುವುದಿಲ್ಲ), ಅದ್ಭುತ ರಮ್ಯ ಲೋಕದ ಕತೆಗಳು ಮಕ್ಕಳನ್ನು ರಂಜಿಸುತ್ತಿದ್ದವು. ಆದರೆ ಇಂದು ಕಾರ್ಟೂನ್ ಚಾನೆಲ್‌ಗಳು ಬಂಡಿಯಾಗಿ ಇವೆಯಾದರೂ, ಮಕ್ಕಳಿಗೆ ತಕ್ಕುದಾದ ವಿಚಾರ ಗಳು ಹೆಚ್ಚಿಲ್ಲ. ಇನ್ನು ವಿವಿಧ ವಾಹಿನಿಗಳಲ್ಲಿ ದ್ವಂದ್ವಾರ್ಥ ಸಂಭಾಷಣೆಯುಳ್ಳ ಕಾಮಿಡಿ ಶೋಗಳು, ದೊಂಬ ರಾಟವೆನಿಸುವಂತಹ ನೃತ್ಯ ಶೋಗಳು... ಇನ್ನು ಧಾರಾವಾಹಿಗಳಲ್ಲಿ ಕುತಂತ್ರಗಳು ಮತ್ತು ಅನೈತಿಕ ಸಂಬಂಧಗಳ ವಿಜೃಂಭಣೆ!

ಹಿಂದೆ ಮನೆಮಂದಿಯೆಲ್ಲಾ ಕುಳಿತು ನೋಡುವಂತಹ ಚಲನಚಿತ್ರಗಳು ಬರುತ್ತಿದ್ದವು. ಆ ಕ್ಷೇತ್ರದಲ್ಲೂ ಪಾಪದ ಮಕ್ಕಳಿಗೆ ಮೋಸವೇ. ಹೊಡಿ ಬಡಿ ಕೊಚ್ಚು ಕೊಲ್ಲು ಎಂಬಂತಹ ಚಿತ್ರಗಳು ಒಂದೆಡೆ ಯಾದರೆ ಇನ್ನೊಂದೆಡೆ ಅತಿಯಾದ ಅಶ್ಲೀಲತೆ ಇರುವ ರೊಮ್ಯಾಂಟಿಕ್ ಚಿತ್ರಗಳು. ಎಲ್ಲೋ ಒಂದಷ್ಟು ಕಳಕಳಿಯಿರುವ ನಿರ್ದೇಶಕರು ನಿರ್ಮಾಪಕರು ಒಳ್ಳೆಯ ಚಿತ್ರಗಳನ್ನು ತಯಾರಿಸಿದರೂ ಅವು ಚಿತ್ರಮಂದಿರಗಳ ವರೆಗೂ ಬರುವುದೇ ಇಲ್ಲ.

ಮತ್ತೊಂದು ಅಪಾಯಕಾರಿ ಪ್ರವೃತ್ತಿ ಈಗ ಹೆಚ್ಚಾಗಿರುವುದು, ಮಕ್ಕಳ ರಿಯಾಲಿಟಿ ಶೋ ಎಂಬ ಹೆಸರಲ್ಲಿ ಮಕ್ಕಳ ವಯಸ್ಸಿಗೆ ಹೊಂದದ ಕಂಟೆಂಟ್‌ಗಳನ್ನು ಹೊಂದಿರುವ ಕಾರ್ಯಕ್ರಮಗಳು. ಇಂದು ವಿವಿಧ ವಾಹಿನಿಗಳಲ್ಲಿ ಪ್ರಸಾರವಾಗುವ ಶೋ ಗಳಲ್ಲಿ ಮಕ್ಕಳು ಭಾಗವಹಿಸಲು ಅತಿಹೆಚ್ಚು ಉತ್ಸುಕರಾಗಿದ್ದಾರೆ. ಆದರೆ ಖಂಡಿತವಾಗಿ 90% ಕ್ಕೂ ಹೆಚ್ಚು ಶೋಗಳು ಮಕ್ಕಳ ಮುಗ್ಧತೆಯನ್ನು ಕೊಲ್ಲುತ್ತಿವೆ. ಬಹಳಷ್ಟು ಬಾರಿ ಅಶ್ಲೀಲ ಅಸಭ್ಯ ಎನಿಸುವ ಸಂಭಾಷಣೆಗಳು, ಹಾವಭಾವಗಳು, ದಿರಿಸುಗಳೇ ವಿಜೃಂಭಿಸುತ್ತವೆ. ಅವುಗಳನ್ನು ನೋಡುತ್ತಿದ್ದರೆ ನಿಜಕ್ಕೂ ದುಃಖವಾಗುತ್ತದೆ. ಟಿವಿ ವಾಹಿನಿಗಳ ಕಾರ್ಯಗಳನ್ನು ಸೆನ್ಸಾರ್‌ಗೆ ಒಳಪಡಿಸಲೇಬೇಕೆಂಬ ಆಗ್ರಹ ಸರ್ಕಾರದ ಮುಂದಿಡಬೇಕಾದ ಸಂದರ್ಭ ಬಂದಿದೆ.

ಮಕ್ಕಳಿಗೆ ಉತ್ತಮ ಆಯ್ಕೆಗಳಿವೆ. ಇಲ್ಲವೆಂದಲ್ಲ. ಆದರೆ ಕಣ್ಣಿಗೆ ರಾಚುವಂತೆ ಈ ಅನಾರೋಗ್ಯಕರ ಆಯ್ಕೆಗಳು ಹೆಚ್ಚಾಗಿರುವುದರಿಂದ ಸಹಜವಾಗಿ ಅದರೆಡೆಗೆ ಆಕರ್ಷಿತರಾಗುವ ಅಪಾಯ ಹೆಚ್ಚಿದೆ.

ಇಂದು ಮಕ್ಕಳ ಪ್ರಪಂಚವನ್ನು ನಾವು ಕಸಿದಿದ್ದೇವೆ. ಮಕ್ಕಳ ದಿನಾಚರಣೆಯ ಈ ಸಂದರ್ಭದಲ್ಲಿ ನಾವು ಏನು ಮಾಡಬಹುದು ಎಂದು ಆತ್ಮಾವಲೋಕನ ಮಾಡಿಕೊಳ್ಳಬೇಕಾಗಿದೆ. ಯಾಂತ್ರೀಕೃತ ಸಮಾಜವೊಂದಕ್ಕೆ ನಾವು ಮಕ್ಕಳ ಕೈಲಿ ಮುನ್ನುಡಿ ಬರೆಸುತ್ತಿದ್ದೇವೆ. ಇದು ಮಕ್ಕಳಿಗೆ ನಾವು ಮಾಡುತ್ತಿರುವ ಅನ್ಯಾಯ. ಎಲ್ಲಿ ಹೇಗೆ ತಿದ್ದಿಕೊಳ್ಳಬೇಕು ಎನ್ನುವುದರ ಬಗ್ಗೆ ಸಮಾಲೋಚನೆ ಆಗಬೇಕು. ಬಹಳ ಮುಂದೆ ಸಾಗಿ ಬಂದಿರುವ ನಾವು ಹಿಂದಕ್ಕೆ ಹೋಗಲಾಗುವುದಿಲ್ಲ. ಹಾಗಾದರೆ ಏನು ಮಾಡಬೇಕು ಎಂಬುದು ಯಕ್ಷ ಪ್ರಶ್ನೆಯಾಗಿ ನಮ್ಮನ್ನು ಕಾಡುತ್ತಿದೆ. ಉತ್ತರ ಕಂಡುಕೊಳ್ಳುವ ಬಗೆಯನ್ನು ನಾವು ಹುಡುಕಬೇಕಷ್ಟೇ. ಮಕ್ಕಳ ದಿನಾಚರಣೆಯ ಶುಭಾಶಯಗಳು ಹೇಳಿಕೆಗೆ ಸೀಮಿತವಾಗದೆ ನಿಜಕ್ಕೂ ಆಶಯಗಳು ನನಸಾದರೆ ಮಕ್ಕಳು ಅರಳಿ ಹಾಡುತ್ತಾರೆ...

ಎಚ್ಚರವೇ ಮಧುಮೇಹಕ್ಕೆ ಮದ್ದು

ಇಂದು ಮಧುಮೇಹ ದಿನ



–ಡಾ.ವಿ.ಲಕ್ಷ್ಮೀನಾರಾಯಣ್
ಶ್ರೀ ಹರಿ ಡಯಾಬಿಟೀಸ್ ಫೌಂಡೇಷನ್,
ಕುವೆಂಪುನಗರ, ಮೈಸೂರು

ಪ್ರತಿ ವರ್ಷ ನವೆಂಬರ್ 14 ವಿಶ್ವ ಮಧುಮೇಹ ದಿನ. ಇದು ಇನ್ಸುಲಿನ್ ಅನ್ನು ಕಂಡುಹಿಡಿದ ಪ್ರಾತಃಸ್ಮರಣೀಯ ಡಾ.ಫ್ರೆಡರಿಕ್ ಬ್ಯಾಂಟಿಂಗ್ ಅವರ ಜನ್ಮದಿನವೂ ಹೌದು. ಈ ಮಹಾನ್ ವೈದ್ಯವಿಜ್ಞಾನಿ ಚಾರಲ್ಸ್ ಬೆಸ್ಟ್ ಎಂಬ ವೈದ್ಯ ವಿದ್ಯಾರ್ಥಿ ಜೊತೆಗೂಡಿ ಜನವರಿ 11, 1922 ರಲ್ಲಿ ಮಹತ್ವಕಾರಿ ಇನ್ಸುಲಿನ್ ಕಂಡುಹಿಡಿದರು.

ಇತ್ತೀಚಿನ ದಿನಗಳಲ್ಲಿ 2ನೇ ನಮೂನೆ (ಟೈಪ್ 2) ಮಧುಮೇಹವನ್ನು ಸಂಪೂರ್ಣವಾಗಿ ವಾಸಿ ಮಾಡಬಹುದು ಎಂಬುದು ಅವೈಜ್ಞಾನಿಕ ಮತ್ತು ಹುಸಿ ತಂತ್ರಗಳ ಪ್ರಚಾರವಷ್ಟೆ, ಮಾತ್ರವಲ್ಲ, 1ನೇ ನಮೂನೆ (ಟೈಪ್ 1) ಮಧುಮೇಹವನ್ನೂ ಗುಣಪಡಿಸಬಹುದು ಎಂದು ಪ್ರಚಾರ ಮಾಡುತ್ತಿರುವುದು ಹಾಸ್ಯಾಸ್ಪದ.

ಇಂಥ ಹುಸಿ ಪ್ರಚಾರಕರು ತಮ್ಮ ಸ್ವಂತ ಲಾಭಕ್ಕಾಗಿ ಜನರು ಮರಳು ಮಾಡುತ್ತಿರುವುದು ಆತಂಕದ ಸಂಗತಿ. ಮಧುಮೇಹ ಹಿಮ್ಮೆಟ್ಟಿಸುವ ಇಲ್ಲವೇ ಉಪಶಮನ ಮಾಡುವ ವಾಸ್ತವ ಸಂಗತಿಯನ್ನು ಅರಿಯಬೇಕಿದೆ.

ಪ್ರತಿಶತ ಸುಮಾರು 50%ರಷ್ಟು ಮಧುಮೇಹವಿರುವವರು ವ್ಯಾಧಿ ಬಂದ ಹತ್ತು ವರ್ಷಗಳ ಅವಧಿಯಲ್ಲಿ ಅದರ ನಿಯಂತ್ರಣಕ್ಕಾಗಿ ಇನ್ಸುಲಿನ್ ತೆಗೆದುಕೊಳ್ಳುವ ಅವಶ್ಯಕತೆ ಒದಗಿ ಬರಬಹುದು. ಭಾರತದಲ್ಲಿ ಪ್ರತಿಶತ 51.7% ರಷ್ಟು ಗುರುತಿಸಲಾಗದೇ ಇರುವ ಮಧುಮೇಹಿಗಳಿದ್ದಾರೆ. ಭಾರತದಲ್ಲಿ ಮಧುಮೇಹವು ಅಧಿಕವಾಗಿ ಹರಡುತ್ತಿರುವುದಕ್ಕೆ ಹೆಚ್ಚಿನ ಪ್ರಮಾಣದಲ್ಲಿ ಕಾರ್ಬೋಹೈಡ್ರೇಟ್ಸ್ ಅಂದರೆ ಪಿಷ್ಠ ಪದಾರ್ಥಗಳ ಸೇವನೆಯೇ ಕಾರಣ. ಅದರಲ್ಲೂ ವಿಶೇಷವಾಗಿ ನಾರಿಲ್ಲದ, ಬೇಗನೆ ಜೀರ್ಣವಾಗುವ ಪಾಲಿಷ್ಡ್ ಅಕ್ಕಿ, ಗೋಧಿ ಪದಾರ್ಥಗಳು ಇತ್ಯಾದಿ.

ಮಧುಮೇಹ ಹಿಮ್ಮೆಟ್ಟಿವುದು ಎಂದರೆ ಈ



ವ್ಯಾಧಿಯು ಸಂಪೂರ್ಣವಾಗಿ ವಾಸಿಯಾಗಿದೆ, ಇನ್ನು ಮುಂದೆ ಮರುಕಳಿಸುವುದಿಲ್ಲ ಎಂಬ ಖಾತರಿ. ಉಪಶಮನ ಎಂದರೆ ಮಧುಮೇಹಗ್ರಸ್ಥ ವ್ಯಕ್ತಿಯು ಎಲ್ಲಿಯವರೆಗೂ ಎಚ್ಚರಿಕೆಯ ನಿಬಂಧನೆ ಗಳನ್ನು ಅನುಸರಿಸುತ್ತಿರುತ್ತಾನೋ ಅಲ್ಲಿಯವರೆಗೆ ದೇಹದಲ್ಲಿ ಮಧುಮೇಹ ಇರುವುದಿಲ್ಲ.

ಅಮೆರಿಕನ್ ಡಯಾಬಿಟಿಸ್ ಅಸೋಸಿಯೇಷನ್‌ನವರು ಅಂತಾರಾಷ್ಟ್ರೀಯ ಮಧುಮೇಹ ಪರಿಣಿತರ ಸಮಾವೇಶದಲ್ಲಿ ಮಧುಮೇಹ ಉಪಶಮನವನ್ನು ಮೂರು ವಿಧದಲ್ಲಿ ಅರ್ಥೈಸಿದ್ದಾರೆ.

ಭಾಗಶಃ ಉಪಶಮನ: ಔಷಧಿ ಇಲ್ಲದೆ ರಕ್ತದಲ್ಲಿನ ಗ್ಲೂಕೋಸ್ ಮಟ್ಟ ಮೂರು ತಿಂಗಳಿನ ಸರಾಸರಿ ಅಂಶದಲ್ಲಿ (HbA1c) ಪ್ರತಿಶತ 6.5ಕ್ಕಿಂತಲೂ ಕಡಿಮೆ ಇರುವುದು.

ಸಂಪೂರ್ಣ ಉಪಶಮನ: ಮಧುಮೇಹ ಔಷಧಿಗಳಿಲ್ಲದೆ ಒಂದು ವರ್ಷದ ಕಾಲಾವಧಿಯಲ್ಲಿ ರಕ್ತದಲ್ಲಿ ಉಪವಾಸ ಕಾಲದಲ್ಲಿ ಸಕ್ಕರೆ ಅಂಶ ಪ್ರತಿ ಡೆಸಿ ಲೀಟರ್‌ನಲ್ಲಿ 100 ಮಿಲಿ ಗ್ರಾಂ ಪ್ರಮಾಣದಲ್ಲಿರುವುದು.

ಸುದೀರ್ಘ ಉಪಶಮನ: ಔಷಧಿ ಇಲ್ಲದೆ ಐದು ವರ್ಷವಾದರೂ HbA1c ಅಂಶವು ಪ್ರತಿಶತ 5.6ಕ್ಕಿಂತಲೂ ಕಡಿಮೆ ಇರುವುದು ಹಾಗೂ ಉಪವಾಸ ವೇಳೆಯಲ್ಲಿ ಸಕ್ಕರೆ ಅಂಶ 100ಕ್ಕಿಂತಲೂ ಕಡಿಮೆ ಪ್ರಮಾಣದಲ್ಲಿರುವುದು.

ಮಧುಮೇಹ ಚಿಕಿತ್ಸೆಯ ವಿಚಾರದಲ್ಲಿ ಎಷ್ಟೇ ಆವಿಷ್ಕಾರಗಳು ನಡೆದಿದ್ದರೂ ಮಧುಮೇಹವನ್ನು ಹತೋಟಿಯಲ್ಲಿಡುವುದರಲ್ಲಿ ನಿರ್ಧಿಷ್ಟ ಹಾಗೂ ಸಮಾಧಾನಕರ ಮಾರ್ಗ ಇದುವರೆಗೂ ಸ್ಪಷ್ಟವಾಗಿ ಕಂಡುಬಂದಿಲ್ಲ.

ಮೊದ ಮೊದಲಿಗೆ ಔಷಧಿಗಳನ್ನು ಉಪಯೋಗಿಸುವುದರಿಂದ ಮಧುಮೇಹ ಹತೋಟಿಯಲ್ಲಿದೆ ಎಂಬುದು ಕಂಡುಬಂದರೂ ಕಾಲ ಕ್ರಮೇಣ ಹೆಚ್ಚು ಹೆಚ್ಚು ಗುಳಿಗೆಗಳನ್ನು ಉಪಯೋಗಿಸುವ ಅನಿವಾರ್ಯತೆ ಎದುರಾಗಿ, ಕೊನೆಗೆ ಇನ್ಸುಲಿನ್ ತೆಗೆದುಕೊಳ್ಳುವ ಪರಿಸ್ಥಿತಿ ಬಂದೊದಗುವುದು ನಿಶ್ಚಿತ ಎಂಬುದು ನನ್ನ 25 ವರ್ಷಗಳ ಅನುಭವದ ಮಾತು.

ಮಧುಮೇಹವನ್ನು ಚಿಕಿತ್ಸೆ ಮೂಲಕ ನಿಯಂತ್ರಣದಲ್ಲಿಟ್ಟುಕೊಳ್ಳಬಹುದೇ ಹೊರತು, ಸಂಪೂರ್ಣ ವಾಸಿಮಾಡಲಿಕ್ಕಾಗದು ಇಲ್ಲವೇ ಹಿಮ್ಮೆಟ್ಟಿಸಲಾಗದು. ಮಧುಮೇಹ ಔಷಧಿಗಳನ್ನು ಜೀವಮಾನದುದಕ್ಕು ನಿರಂತರವಾಗಿ ಉಪಯೋಗಿಸುವುದರಿಂದ ಅದರ ಅಡ್ಡಪರಿಣಾಮಗಳು, ಖರ್ಚುವೆಚ್ಚಗಳಿಂದಾಗಿ ಮಧುಮೇಹ ರಹಿತರಾಗಿರಲು ಪ್ರತಿಯೊಬ್ಬರು ಬಯಸುವುದು ಸಹಜವೆ.

ಇತ್ತೀಚಿಗೆ ಮಧುಮೇಹ ಚಿಕಿತ್ಸೆ ವಿಚಾರದಲ್ಲಿ ಮಹತ್ತರ ಬದಲಾವಣೆಗಳಾಗುತ್ತಿವೆ. ಮಧುಮೇಹವನ್ನು ಸಂಪೂರ್ಣವಾಗಿ ಹಿಮ್ಮೆಟ್ಟಿಸುವ (Reversal of Diabetes) ಪ್ರಯತ್ನಗಳು ನಡೆಯುತ್ತಿವೆಯಾದರೂ, ಆದರೆ, ಉಪಶಮನ ಮಾಡಬಹುದೇ ಹೊರತು ಅದು ದೀರ್ಘಕಾಲ ಫಲ ನೀಡುವ ಗ್ಯಾರಂಟಿ ಇಲ್ಲ.

ಕಡಿಮೆ ಕ್ಯಾಲೊರಿಸ್ ಆಹಾರ ಮತ್ತು ಕಡಿಮೆ ಕಾರ್ಬೋಹೈಡ್ರೇಟ್ಸ್ ಆಹಾರ ಸೇವನೆಯ ಜೀವನ ಶೈಲಿಯನ್ನು ಅಳವಡಿಸಿಕೊಳ್ಳುವುದರಿಂದ ಮಧುಮೇಹ ಉಪಶಮನ ಸಾಧಿಸಿಕೊಳ್ಳಬಹುದು.

ಭಾರತದಲ್ಲಿ ಚರಕ, ಸಂಹಿತಾ ಮತ್ತು ಸುಶ್ರುತ ಸಂಹಿತಾ ಆಯುರ್ವೇದ ಗ್ರಂಥಗಳು, ಪ್ರಾಚೀನ ವೈದ್ಯಕೀಯ ಕೃತಿಗಳು. ಪ್ರಾಚೀನ ಭಾರತದ ವೈದ್ಯರು ವ್ಯಾಧಿಗಳು ಬಾರದಂತೆ ರೋಗನಿರೋಧಕ ಮದ್ದುಗಳ ಬಗ್ಗೆ ಅತೀ ಉಪಯುಕ್ತವಾದ 4 ತತ್ತ್ವಗಳನ್ನು ಪ್ರತಿಪಾದಿಸಿದ್ದಾರೆ;

ಆಚಾರ – ನಾವು ದಿನ ನಿತ್ಯ ಅನುಸರಿಸುವ ರೀತಿನೀತಿಗಳು.

ಆಹಾರ – 'ಊಟ ಬಲ್ಲವನಿಗೆ ರೋಗವಿಲ್ಲ' ಎಂಬ ಗಾದೆಮಾತೇ ಇದೆ.

ವ್ಯಾಯಾಮ – ದೇಹಕ್ಕೆ ಅಗತ್ಯವಾದ ದೈನಂದಿನ ವ್ಯಾಯಾಮ.

ಯೋಗ – ಮನಸ್ಸನ್ನು ಸಮತೋಲನೆಯಲ್ಲಿಟ್ಟುಕೊಳ್ಳುವುದು.

ಒಂದು ಎಚ್ಚರಿಕೆಯ ಮಾತು ಏನೆಂದರೆ, 2ನೇ ನಮೂನೆ ಮಧುಮೇಹವನ್ನು ಹಿಮ್ಮೆಟ್ಟಿಸಬಹುದಾದರೂ, 1ನೇ ನಮೂನೆ ಮಧುಮೇಹದವರಿಗೆ ಇದು ಅನ್ವಯಿಸುವುದಿಲ್ಲ. ಏಕೆಂದರೆ ಇನ್ಸುಲಿನ್ ಅನ್ನು ನಿಲ್ಲಿಸಿದರೆ ಪ್ರಾಣಾಪಾಯ ಸಾಧ್ಯತೆ ಹೆಚ್ಚು.

ಮಿತಿಮೀರುತ್ತಿರುವ ಮಧುಮೇಹ ಮತ್ತು ಅದರ ಭೀತಿಯ ಒತ್ತಡವು ಆರೋಗ್ಯ ರಕ್ಷಣಾ ವ್ಯವಸ್ಥೆಯ ಮೇಲೆ ಬೀಳುತ್ತಿರುವ ಹೊರೆಯ ಹಿನ್ನೆಲೆಯಲ್ಲಿ, ಪ್ರಪಂಚದ ವೈಜ್ಞಾನಿಕ ಕ್ಷೇತ್ರವು ಮಧುಮೇಹವನ್ನು ವಾಸಿಮಾಡುವ ದಿಕ್ಕಿನಲ್ಲಿ ಸಂಭವನೀಯ ಅಥವಾ ಸಾಧ್ಯವಾಗಬಲ್ಲ ವಿಧಿ–ವಿಧಾನಗಳನ್ನು ವಿಶ್ಲೇಷಿಸಿದ ನಂತರ ನಾವು ಮಧುಮೇಹ ಉಪಶಮನದ ಹತ್ತಿರದಲ್ಲಿದ್ದೇವೆ ಎಂಬುದು ಸಮಾಧಾನಕರ ಸಂಗತಿ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ಹೆಣ್ಣು ಮಕ್ಕಳ ಶಿಕ್ಷಣಕ್ಕೆ ನಮ್ಮ ಸರ್ಕಾರ ವಿಶೇಷ ಆದ್ಯತೆ ನೀಡಿದೆ

● ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಣೆ ● ಮಹಾರಾಣಿ ಕಾಲೇಜು, ಹಾಸ್ಟೆಲ್ ಕಟ್ಟಡಕ್ಕೆ ಶಂಕುಸ್ಥಾಪನೆ ● ಹೆಣ್ಣು ಮಕ್ಕಳು ವೈಚಾರಿಕ, ವೈಜ್ಞಾನಿಕ ಶಿಕ್ಷಣ ಪಡೆಯುವುದು ಅವಶ್ಯ



ಮಹಾರಾಣಿ ವಿಜ್ಞಾನ ಕಾಲೇಜಿನ ಆವರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕಾಲೇಜಿನ ನೂತನ ಕಟ್ಟಡ ಹಾಗೂ ಹಾಸ್ಟೆಲ್ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಿದರು. ಈ ವೇಳೆ ಸಚಿವರಾದ ಡಾ.ಎಂ.ಸಿ.ಸುಧಾಕರ್, ಎಚ್.ಸಿ.ಮಹದೇವಪ್ಪ, ಕೆ.ವೆಂಕಟೇಶ್, ಶಾಸಕರಾದ ಕೆ.ಹರೀಶ್‌ಗೌಡ, ಡಾ.ಯತೀಂದ್ರ ಇನ್ನಿತರರಿದ್ದಾರೆ.

ಮೈಸೂರು,ನ.13(ಎಂಟಿವೈ)– ಪಟ್ಟಭದ್ರ ಹಿತಾಸಕ್ತಿಗಳು ಶತ ಶತಮಾನಗಳಿಂದಲೂ ಶೂದ್ರ ಸಮುದಾಯದಂತೆ ಮಹಿಳೆಯರನ್ನು ಶಿಕ್ಷಣದಿಂದ ವಂಚಿತರಾಗಿಸಿದ್ದವು. ಆದರೆ ಸಮಾಜದಲ್ಲಿ ತಾರತಮ್ಯ ಹೋಗಲಾಡಿಸುವ ನಿಟ್ಟಿನಲ್ಲಿ ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಸರ್ಕಾರ ಹೆಚ್ಚಿನ ಆದ್ಯತೆ ನೀಡುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜು ಕಟ್ಟಡ, ಸುಸಜ್ಜಿತ ವಿದ್ಯಾರ್ಥಿನಿಲಯ ಕಟ್ಟಡಕ್ಕೆ ಶಂಕುಸ್ಥಾಪನೆ ನೆರವೇರಿಸಿದ ಬಳಿಕ, ಮಹಾರಾಜ ಪದವಿ ಪೂರ್ವ ಕಾಲೇಜು ಮೈದಾನದಲ್ಲಿ ನಡೆದ ಸಭಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಅಕ್ಷರ ಸಂಸ್ಕೃತಿಯಿಂದ ವಂಚಿತರಾಗಿದ್ದ ಮಹಿಳೆಯರಿಗೆ 12ನೇ ಶತಮಾನದಲ್ಲಿ ಬಸವಣ್ಣನವರು ಶಿಕ್ಷಣ ಪಡೆಯುವ ಅವಕಾಶ ಒದಗಿಸಿದರು. ಡಾ.ಬಿ.ಆರ್.ಅಂಬೇಡ್ಕರ್ ಸಂವಿಧಾನದಲ್ಲಿ ಶಿಕ್ಷಣದ ಹಕ್ಕನ್ನು ಕಲ್ಪಿಸಿಕೊಟ್ಟರು. ಮಹಿಳೆಯರನ್ನು ಸ್ವಾವಲಂಬಿಗಳಾಗಿ ರೂಪಿಸುವ ನಿಟ್ಟಿನಲ್ಲಿ ಸರ್ಕಾರ ಹಲವು ಕಾರ್ಯಕ್ರಮ ರೂಪಿಸಿದೆ. 'ಹೆಣ್ಣೊಂದು ಕಲಿತರೆ–ಶಾಲೆಯೊಂದು ತೆರೆದಂತೆ' ಎಂಬ ನಾಣ್ನುಡಿಯಂತೆ ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಹೆಚ್ಚು ಆದ್ಯತೆ ನೀಡಲಾಗುತ್ತಿದೆ. ಇದನ್ನು ಸದುಪಯೋಗ ಮಾಡಿಕೊಂಡು ಶೇ.100ರಷ್ಟು ಮಹಿಳೆಯರು ಶಿಕ್ಷಣ ಪಡೆಯುವಂತಾಗಬೇಕು. ಅದರಲ್ಲೂ ವೈಚಾರಿಕ ಮತ್ತು ವೈಜ್ಞಾನಿಕ ಶಿಕ್ಷಣ ಪಡೆಯಬೇಕು. ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಂಡು, ಮಾನವರಾಗಿ ಬಾಳಬೇಕು. ಪಠ್ಯಕ್ರಮದೊಂದಿಗೆ ಜೀವನ ಕ್ರಮಗಳು, ತತ್ವಗಳನ್ನು ಶಿಕ್ಷಕರು ಮಕ್ಕಳಿಗೆ ಹೇಳಬೇಕು. ಶಿಕ್ಷಣ ಪಡೆದು ಜಾತೀಯತೆ, ಮೌಢ್ಯ ಆಚರಿಸಬಾರದು ಎಂದು ಸಲಹೆ ನೀಡಿದರು.

ಹೆಣ್ಣು ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಲು ಸರ್ಕಾರ ಬದ್ಧ. ಎಲ್ಲರೂ ಉನ್ನತ ಶಿಕ್ಷಣ ಪಡೆದು, ಸಮಾಜಕ್ಕೆ ಕೊಡುಗೆ ನೀಡಲು ಪ್ರಯತ್ನಿಸಬೇಕು. ವಿದ್ಯಾರ್ಥಿಗಳು ಅಂಬೇಡ್ಕರ್ ಬರೆದ ಸಂವಿಧಾನವನ್ನು ಅರ್ಥ ಮಾಡಿಕೊಳ್ಳಬೇಕು. ಸಂವಿಧಾನದ ಪೀಠಿಕೆಯನ್ನು ಓದಿದರೆ ನಮ್ಮ ಹಕ್ಕು, ಜವಾಬ್ದಾರಿ ತಿಳಿಯಬಹುದಾಗಿದೆ. ಮನುಷ್ಯರಾಗಿ ಎಲ್ಲರೊಂದಿಗೆ ಸಮನ್ವಯದೊಂದಿಗೆ ಬಾಳುವುದನ್ನು ಕಲಿಯಬೇಕು ಎಂದರು.

ಇತ್ತೀಚಿನ ದಿನಗಳಲ್ಲಿ ಎಲ್ಲಾ ಕ್ಷೇತ್ರಗಳಲ್ಲೂ ಹೆಣ್ಣು ಮಕ್ಕಳು ಸಾಧನೆ ಮಾಡುತ್ತಿರುವುದು ಶ್ಲಾಘನೀಯ. ಶಿಕ್ಷಣ, ಔದ್ಯೋಗಿಕ ಕ್ಷೇತ್ರದಲ್ಲೂ ಮಹಿಳೆಯರ ಸಾಧನೆ ಪ್ರಶಂಸನೀಯ. ರಾಜ್ಯ ಸರ್ಕಾರದ ವತಿಯಿಂದ ನಡೆಸುತ್ತಿರುವ ವಸತಿ ಶಿಕ್ಷಣ ಸಂಸ್ಥೆಯ ವಿದ್ಯಾರ್ಥಿನಿಯರು ಉತ್ತಮ ರ್‍ಯಾಂಕ್ ಪಡೆಯುತ್ತಿದ್ದಾರೆ. ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ವಸತಿ ಶಾಲೆಯ ವಿದ್ಯಾರ್ಥಿನಿಯೊಬ್ಬರು ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದಿದ್ದಾರೆ. ಈ ಹಿನ್ನೆಲೆಯಲ್ಲಿ ಹೆಣ್ಣು ಮಕ್ಕಳು ಶಿಕ್ಷಣ ಪಡೆದರೆ ಬದುಕು ರೂಪಿಸಿಕೊಳ್ಳಲು ಸಾಧ್ಯ. ಸ್ವಾವಲಂಬಿ ಬದುಕು ಸಾಗಿಸಲು ಸಾಧ್ಯ ಎಂದು ಪ್ರತಿಪಾದಿಸಿದರು.

1917ರಲ್ಲಿ ಮಹಾರಾಣಿ ಕೆಂಪನಂಜಮ್ಮಣ್ಣಿ ಅವರು ಮಹಾರಾಣಿ ಕಾಲೇಜು ಆರಂಭಿಸಿದರು. ಮಹಾರಾಣಿ ವಿಜ್ಞಾನ ಕಾಲೇಜು ಮೈಸೂರಿನ ಪ್ರತಿಷ್ಠಿತ ಕಾಲೇಜಾಗಿದೆ. ಹನ್ನೊಂದು ಸಾವಿರ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ಈ ಕಾಲೇಜಿಗೆ ಸಾಮಾನ್ಯ ಹಾಗೂ ಬಡ ಕುಟುಂಬ, ಗ್ರಾಮೀಣ ಪ್ರದೇಶದ ಹೆಣ್ಣು ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಶಿಕ್ಷಣ ಪಡೆಯಲು ಆಗಮಿಸುತ್ತಿದ್ದಾರೆ. ಮಹಾರಾಣಿ ಕಾಲೇಜು ಕಿಷ್ಕಿಂಧೆಯಾಗಿದ್ದ ಹಿನ್ನೆಲೆಯಲ್ಲಿ ಕಳೆದ ಬಾರಿ ನಾನು ಮುಖ್ಯಮಂತ್ರಿಯಾಗಿದ್ದಾಗ ಪಡುವಾರಹಳ್ಳಿಯಲ್ಲಿ ನೂತನ ಸುಸಜ್ಜಿತ ಕಟ್ಟಡ ನಿರ್ಮಿಸಿ, ಮಹಾರಾಣಿ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜನ್ನು ಬೇರ್ಪಡಿಸಲಾಯಿತು. ಕೆಲ ವರ್ಷದ ಹಿಂದೆ ವಿಜ್ಞಾನ ಕಾಲೇಜಿನ ಪ್ರಯೋಗಾಯಲವಿದ್ದ ಕಟ್ಟಡವೂ ಕುಸಿದಿತ್ತು. ಈ ಹಿನ್ನೆಲೆಯಲ್ಲಿ ನಾನು ಖುದ್ದಾಗಿ ಪರಿಶೀಲನೆ ಮಾಡಲು ಹೋದಾಗ ಕಾಲೇಜಿನ ಕಟ್ಟಡ ಶಿಥಿಲಾವಸ್ಥೆಯಿಂದ ಕೂಡಿದ್ದನ್ನು ಗಮನಿಸಿದೆ. ಅಲ್ಲದೆ, ಮಹಾರಾಣಿ ಕಾಲೇಜಿನ ವಿದ್ಯಾರ್ಥಿನಿಲಯದ ಕಟ್ಟಡವೂ ಶಿಥಿಲಾವಸ್ಥೆಯಿಂದ ಕೂಡಿರುವುದನ್ನು ಪರಿಶೀಲಿಸಿ, ಸುಸಜ್ಜಿತ ಕಟ್ಟಡ ನಿರ್ಮಿಸಲು ನಿರ್ಧರಿಸಿ, ಇಂದು 219 ಕೋಟಿ ರೂ. ವೆಚ್ಚದ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಲಾಗಿದೆ ಎಂದರು.

ಗಂಜೀಫಾ ರಘುಪತಿ ಭಟ್ ಅವರಿಗೆ ರಾಷ್ಟ್ರೀಯ ಕಾಳಿದಾಸ್ ಪ್ರಶಸ್ತಿ



ಮಧ್ಯಪ್ರದೇಶದ ಉಜ್ಜಯಿನಿಯ ಕಾಳಿದಾಸ ಸಂಸ್ಕೃತ ಅಕಾಡೆಮಿಯಲ್ಲಿ ನಡೆದ ಪ್ರತಿಷ್ಠಿತ ಕಾಳಿದಾಸ್ ಸಮ್ಮಾನ್ ಸಮಾರಂಭದಲ್ಲಿ ಖ್ಯಾತ ಗಂಜೀಫಾ ಕಲಾವಿದರಾದ ರಘುಪತಿ ಭಟ್ ಅವರಿಗೆ ಕಲೆ ವಿಭಾಗದಲ್ಲಿ ರಾಷ್ಟ್ರೀಯ ಕಾಳಿದಾಸ್ ಪ್ರಶಸ್ತಿಯನ್ನು ಉಪರಾಷ್ಟ್ರಪತಿ ಜಗದೀಶ್ ಧನಕರ್ ಪ್ರದಾನ ಮಾಡಿದರು. ಮಧ್ಯಪ್ರದೇಶ ರಾಜ್ಯಪಾಲ ಮಂಗುಭಾಯಿ ಪಟೇಲ್, ಮುಖ್ಯಮಂತ್ರಿ ಡಾ.ಮೋಹನ್ ಯಾದವ್, ಕೇಂದ್ರದ ಸಂಸ್ಕೃತಿ, ಪ್ರವಾಸೋದ್ಯಮ, ಧಾರ್ಮಿಕ ಟ್ರಸ್ಟ್‌ಗಳು ಮತ್ತು ದತ್ತಿ ಇಲಾಖೆಯ ರಾಜ್ಯ ಸಚಿವ ಧರ್ಮೇಂದ್ರ ಸಿಂಗ್ ಲೋಧಿ, ಉದ್ಯೋಗ ಇಲಾಖೆ ರಾಜ್ಯ ಸಚಿವ ಗೌತಮ್ ಟೆಟ್ವಾಲ್ ಈ ವೇಳೆ ಉಪಸ್ಥಿತರಿದ್ದರು.

ಕೊಡುಗೆ ನೀಡುವುದರಲ್ಲಿ ಮೈಸೂರು ಮಹಾರಾಜರಂತೆ ಈ ಭಾಗದಲ್ಲಿ ಸಿಎಂ ಸಿದ್ದರಾಮಯ್ಯ ಹೆಸರು ಚಿರಸ್ಥಾಯಿ

ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಗುಣಗಾನ

ಮೈಸೂರು,ನ.13(ಎಂಟಿವೈ)–ಸ್ವಾತಂತ್ರ್ಯ ಪೂರ್ವದಲ್ಲಿ ರಾಜ್ಯಕ್ಕೆ ಅನೇಕ ಕೊಡುಗೆ ನೀಡುವ ಮೂಲಕ ಮೈಸೂರು ಮಹಾರಾಜರ ಹೆಸರು ಅಚ್ಚಳಿಯದೇ ಉಳಿದಿರುವಂತೆ ಮೈಸೂರು ಭಾಗದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹೆಸರು ಸಹ ಚಿರಸ್ಥಾಯಿಯಾಗಿ ಉಳಿಯುತ್ತದೆ ಎಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಗುಣಗಾನ ಮಾಡಿದ್ದಾರೆ.

ಮೈಸೂರಿನ ಮಹಾರಾಣಿ ವಿಜ್ಞಾನ ಕಾಲೇಜಿನ ಹಾಗೂ ವಿದ್ಯಾರ್ಥಿನಿಲಯದ ನೂತನ ಕಟ್ಟಡ ಶಂಕುಸ್ಥಾಪನಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಶತಮಾನಕ್ಕೂ ಹೆಚ್ಚು ಹಳೆಯದಾದ ಮಹಾರಾಣಿ ವಿಜ್ಞಾನ ಕಾಲೇಜು ಹಾಗೂ ಅದರ ಮುಂಭಾಗವಿರುವ ಮಹಾರಾಣಿ ವಿದ್ಯಾರ್ಥಿನಿಲಯದ ಕಟ್ಟಡ ಶಿಥಿಲಾವಸ್ಥೆಯಿಂದ ಕೂಡಿದೆ. ಕಾಲೇಜಿನ ಒಂದು ಭಾಗ ಈಗಾಗಲೇ ಕುಸಿದಿದ್ದು, ದುರಸ್ತಿ ಮಾಡಲು ಸಾಧ್ಯವಾಗದಂತಹ ಸ್ಥಿತಿಯಲ್ಲಿದೆ. ಈ ಹಿನ್ನೆಲೆಯಲ್ಲಿ ಖುದ್ದಾಗಿ ಪರಿಶೀಲನೆ ಮಾಡಿದಾಗ ಮಹಾರಾಣಿ ವಿಜ್ಞಾನ ಕಾಲೇಜಿನ ಕುಸಿದ ಭಾಗವನ್ನು ಪುನರ್ ನಿರ್ಮಾಣ ಮಾಡಬೇಕಾದ ವಾಸ್ತವ ಅರಿವಾಯಿತು. ಆದರೆ, ಪಾರಂಪರಿಕ ಕಟ್ಟಡವಾಗಿದ್ದರಿಂದ ತುರ್ತಾಗಿ ಕ್ರಮ ಕೈಗೊಳ್ಳಲು ಸಾಧ್ಯವಾಗಿರಲಿಲ್ಲ ಎಂದರು.

ಕಾಲೇಜು ಕಟ್ಟಡ ನಿರ್ಮಾಣ ಸಂಬಂಧ ಐದಾರು ಸಭೆ ಮಾಡಿ, ವಿಸ್ತೃತವಾಗಿ ಚರ್ಚಿಸಿದ ಬಳಿಕ ಜಿಲ್ಲಾ ಪಾರಂಪರಿಕ ಸಂರಕ್ಷಣಾ ಸಮಿತಿಯ ಸದಸ್ಯರ ಮನವೊಲಿಸಿ ಕಟ್ಟಡದ ಪುನರ್ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗಿದೆ. ನೂತನ ಕಟ್ಟಡ ನಿರ್ಮಾಣ ಸಂಬಂಧ ಹಲವು ವಿನ್ಯಾಸಗಳನ್ನು ಮಾಡಿಸಿ, ಪಾರಂಪರಿಕ ಸಂರಕ್ಷಣಾ ಸಮಿತಿ ಮುಂದೆ ಪ್ರಸ್ತುತಪಡಿಸಿದ ಬಳಿಕ, ಆ ಸಮಿತಿ ಸಮ್ಮತಿಸಿದ ವಿನ್ಯಾಸದಲ್ಲಿಯೇ ಕಟ್ಟಡ ನಿರ್ಮಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.



ಪಡುವಾರಹಳ್ಳಿಯಲ್ಲಿರುವ ಮಹಾರಾಣಿ ವಾಣಿಜ್ಯ ಕಾಲೇಜಿನ 600 ವಿದ್ಯಾರ್ಥಿನಿಯರಿಗಾಗಿ ವಿದ್ಯಾರ್ಥಿನಿಲಯದ ವಿಸ್ತೃತ ಕಟ್ಟಡದ ನಿರ್ಮಾಣ, ಮಹಾರಾಣಿ ಕಲಾ ಮತ್ತು ವಿಜ್ಞಾನ ಕಾಲೇಜಿನ 1400 ಮಂದಿ ವಿದ್ಯಾರ್ಥಿನಿಯರು ವಾಸ್ತವ್ಯ ಹೂಡಲು ಹೊಸದಾಗಿ ವಿದ್ಯಾರ್ಥಿನಿಲಯ ಹಾಗೂ ವಿಜ್ಞಾನ ಕಾಲೇಜಿನ ಕಟ್ಟಡ ನಿರ್ಮಾಣಕ್ಕಾಗಿ ಇಂದು 216 ಕೋಟಿ ರೂ.ಗಳ ಕಾಮಗಾರಿಗೆ ಸಿಎಂ ಸಿದ್ದರಾಮಯ್ಯ ಶಂಕುಸ್ಥಾಪನೆ ನೆರವೇರಿಸಿ, ಮೈಸೂರಲ್ಲಿ ಶಿಕ್ಷಣ ಕ್ಷೇತ್ರಕ್ಕೆ ಮಹತ್ತರ ಕೊಡುಗೆ ನೀಡಿದ್ದಾರೆ. 2013ರಿಂದ 2018ರವರೆಗೆ ಸಿಎಂ ಆಗಿದ್ದಾಗಲೂ ಅನೇಕ ಕೊಡುಗೆ ನೀಡಿದ್ದ ಸಿದ್ದರಾಮಯ್ಯ ಅವರು, ಇದೀಗ ಮತ್ತಷ್ಟು ಕೊಡುಗೆ ನೀಡಿ ತಮ್ಮ ಹೆಸರು ಅಚ್ಚಳಿಯದೇ ಉಳಿಯುವಂತೆ ಮಾಡಿದ್ದಾರೆ ಎಂದು ಸುಧಾಕರ್ ಹೇಳಿದರು.

ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಶಿಕ್ಷಣಕ್ಕೆ ಒತ್ತು ನೀಡುತ್ತಿದೆ. ರಾಜ್ಯದ 45 ವಿಶ್ವವಿದ್ಯಾನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ಪೂರಕವಾದ ಹೊಸ ಪದವಿ ಕೋರ್ಸ್ ಆರಂಭಿಸಿದೆ. 6 ವಿಶ್ವವಿದ್ಯಾನಿಲಯಗಳ 30 ವಿದ್ಯಾರ್ಥಿಗಳನ್ನು 15ದಿನದ ಶೈಕ್ಷಣಿಕ ಪ್ರವಾಸಕ್ಕಾಗಿ ಲಂಡನ್‌ಗೆ ಕಳುಹಿಸಿಕೊಡಲಾಗಿದೆ. ಮುಂದಿನ ವರ್ಷದಿಂದ ಸರ್ಕಾರಿ ಕಾಲೇಜುಗಳಲ್ಲಿ ಶಿಕ್ಷಣ ಪಡೆದು ಉನ್ನತ ಶಿಕ್ಷಣಕ್ಕಾಗಿ ಇಂಗ್ಲೆಂಡ್‌ಗೆ ಹೋಗುವ ಐವರು ವಿದ್ಯಾರ್ಥಿಗಳಿಗೆ ತಲಾ 20 ಲಕ್ಷ ರೂ. ಆರ್ಥಿಕ ನೆರವು ನೀಡುವ ಕಾರ್ಯಕ್ರಮವನ್ನು ಜಾರಿಗೊಳಿಸಲಾಗುತ್ತಿದೆ ಎಂದು ತಿಳಿಸಿದರು.

ಅರಸು ಮಾದರಿ ಸಿದ್ದರಾಮಯ್ಯ: ಶಾಸಕ ಶಿವಲಿಂಗೇಗೌಡ ಮಾತನಾಡಿ, ಅಭಿವೃದ್ಧಿ ಕುಂಠಿತ ಆಗಿದೆ ಎಂಬ ವಿಪಕ್ಷ ನಾಯಕರ ಮಾತಿನಲ್ಲಿ ಹುರುಳಿಲ್ಲ. ಸಿದ್ದರಾಮಯ್ಯ ಅವರು ಬಂದ ಮೇಲೆ ಅಭಿವೃದ್ಧಿ ಕೆಲಸಗಳು ನಡೆಯುತ್ತಿವೆ. ಹಿಂದಿನ ಸರ್ಕಾರದ 1.5 ಲಕ್ಷ ಕೋಟಿ ಸಾಲ ತೀರಿಸುವುದರ ಜತೆಗೆ ಅಭಿವೃದ್ಧಿ ಕಾರ್ಯಗಳನ್ನು ಮುಂದುವರಿಸಿದ್ದಾರೆ. ಬಜೆಟ್ ಬಗ್ಗೆ ಗೊತ್ತಿಲ್ಲದವರು ಸುಳ್ಳು ಹೇಳಿ ಜನರ ದಾರಿ ತಪ್ಪಿಸುತ್ತಿದ್ದಾರೆ ಎಂದು ಹೇಳಿದರು.

70ರ ದಶಕದಲ್ಲಿ ದೇವರಾಜ ಅರಸು ಅವರು ಹಿಂದುಳಿದ ವರ್ಗಗಳ ಮಕ್ಕಳಿಗೆ ಹಾಸ್ಟೆಲ್ ತೆರೆದು ಶಿಕ್ಷಣ ಕೊಟ್ಟರು. ಅರಸು ಅವರ ಮಾದರಿಯಲ್ಲಿಯೇ ಸಿದ್ದರಾಮಯ್ಯ ಅವರು ವಿದ್ಯಾಭ್ಯಾಸಕ್ಕೆ ಹೆಚ್ಚಿನ ಪ್ರೋತ್ಸಾಹ ನೀಡುತ್ತಿದ್ದಾರೆ. ಎಲ್ಲ ಕ್ಷೇತ್ರಗಳಲ್ಲೂ ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿದ್ದಾರೆ. ಕಾಮಾಲೆ ಕಣ್ಣಿಗೆ ಕಾಣುವುದೆಲ್ಲ ಹಳದಿಯೇ. ಬರೀ ಸುಳ್ಳು ಹಬ್ಬಿಸಲಾಗುತ್ತಿದೆ. ನಮ್ಮ ಬಾಯಿ ಕಟ್ಟಿ ಹಾಕಲಾಗಿದೆ ಎಂದು ಶಿವಲಿಂಗೇಗೌಡ ಹೇಳಿದರು.

'ಸಿದ್ದರಾಮಯ್ಯ ಹೆಲ್ತ್ ಹಬ್' ಘೋಷಣೆಗೆ ಶಾಸಕ ಹರೀಶ್‌ಗೌಡರ ಒತ್ತಾಯ

ಮೈಸೂರು,ನ.13(ಎಂಟಿವೈ)– ಮೈಸೂರಿನ ಜಯದೇವ ಹೃದ್ರೋಗ ಆಸ್ಪತ್ರೆ, ಜಿಲ್ಲಾಸ್ಪತ್ರೆ ಸೇರಿದಂತೆ ವಿವಿಧ ಆಸ್ಪತ್ರೆಗಳಿರುವ ಕೆಆರ್‌ಎಸ್ ರಸ್ತೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಹೆಸರನ್ನು ನಾಮಕರಣ ಮಾಡಬೇಕಿದೆ ಎಂದು ಶಾಸಕ ಕೆ.ಹರೀಶ್‌ಗೌಡ ಒತ್ತಾಯಿಸಿದ್ದಾರೆ.

ಮೈಸೂರಿನ ಮಹಾರಾಣಿ ವಿಜ್ಞಾನ ಕಾಲೇಜಿನ ನೂತನ ಕಟ್ಟಡದ ಶಂಕುಸ್ಥಾಪನಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ದೇಶದಲ್ಲಿಯೇ ಆರೋಗ್ಯ ಮತ್ತು ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚು ಅನುದಾನ ನೀಡಿದ ಏಕೈಕ ಮುಖ್ಯಮಂತ್ರಿ ಹೆಗ್ಗಳಿಕೆಗೆ ಪಾತ್ರವಾಗಿರುವ ಸಿಎಂ ಸಿದ್ದರಾಮಯ್ಯ ಅವರ ಹೆಸರನ್ನು ಸೂರ್ಯ–ಚಂದ್ರ ಇರುವವರೆಗೂ ಶಾಶ್ವತವಾಗಿರಿಸುವ ನಿಟ್ಟಿನಲ್ಲಿ ಕೆಆರ್‌ಎಸ್ ರಸ್ತೆಗೆ ಸಿದ್ದರಾಮಯ್ಯ ಹೆಸರು ನಾಮಕರಣ ಮಾಡಬೇಕು. ಇಲ್ಲದಿದ್ದರೆ, ಜಯದೇವ, ಜಿಲ್ಲಾಸ್ಪತ್ರೆ, ಟ್ರಾಮಾ ಕೇರ್ ಸೆಂಟರ್, ಕಿದ್ವಾಯಿ ಆಸ್ಪತ್ರೆ ಸೇರಿದಂತೆ ವಿವಿಧ ಆಸ್ಪತ್ರೆಗಳ ವ್ಯಾಪ್ತಿ ಪ್ರದೇಶಕ್ಕೆ 'ಸಿದ್ದರಾಮಯ್ಯ ಹೆಲ್ತ್ ಹಬ್' ಎಂದು ಹೆಸರಿಸಲು ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.



2013–18ರವರೆಗೆ ಸಿದ್ದರಾಮಯ್ಯ ಅವರು ಮೊದಲ ಬಾರಿಗೆ ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಮಹಾರಾಣಿ ವಾಣಿಜ್ಯ ವಿಭಾಗದ ನೂತನ ಕಾಲೇಜು ಸ್ಥಾಪಿಸಿದರು. ಅಲ್ಲದೆ, 600 ವಿದ್ಯಾರ್ಥಿನಿಯರಿಗೆ ವಿದ್ಯಾರ್ಥಿನಿಲಯ ನಿರ್ಮಾಣಕ್ಕೆ ಕಾರಣರಾದರು. ಆರೋಗ್ಯ ಕ್ಷೇತ್ರದಲ್ಲಿ ಜಯದೇವ ಹೃದ್ರೋಗ ಆಸ್ಪತ್ರೆ, ಜಿಲ್ಲಾಸ್ಪತ್ರೆ, ಟ್ರಾಮಾ ಕೇರ್ ಸೆಂಟರ್ ಸೇರಿದಂತೆ 1700 ಕೋಟಿ ರೂ.ಗಳ ಅನುದಾನದಲ್ಲಿ ವಿವಿಧ ಆಸ್ಪತ್ರೆಗಳು ನಿರ್ಮಾಣವಾದವು. ಆದರೆ, 2018ರಿಂದ 23ರವರೆಗೆ ಆಡಳಿತ ನಡೆಸಿದ ಸರ್ಕಾರಗಳು ಮೈಸೂರಿನ ಅಭಿವೃದ್ಧಿಗೆ ಒಂದೇ ಒಂದು ಕಾರ್ಯಕ್ರಮ ಕೊಟ್ಟಿರಲಿಲ್ಲ. 2021ರಲ್ಲಿ ಮಹಾರಾಣಿ ವಿಜ್ಞಾನ ಕಾಲೇಜು ಕೊಠಡಿ ಕುಸಿಯಿತು. ಅದನ್ನು ರಿಪೇರಿ ಮಾಡಿಕೊಡಲಿಲ್ಲ. ಆದರೆ, ಇದೀಗ ಎರಡನೇ ಬಾರಿಗೆ ಮುಖ್ಯಮಂತ್ರಿಯಾಗಿರುವ ಸಿದ್ದರಾಮಯ್ಯ ಅವರು 219 ಕೋಟಿ ರೂ. ಮೈಸೂರು ಶಿಕ್ಷಣ ಕ್ಷೇತ್ರಕ್ಕೆ ನೀಡಿದ್ದಾರೆ ಎಂದರು.

ಮಹಾರಾಣಿ ಕಲಾ ಮತ್ತು ವಿಜ್ಞಾನ ಕಾಲೇಜಿನ ಹಾಸ್ಟೆಲ್‌ಗೆ ದಸರಾ ಸಂದರ್ಭದಲ್ಲಿ ಸಿದ್ದರಾಮಯ್ಯ ಅವರು ಭೇಟಿ ನೀಡಿ ಪರಿಶೀಲಿಸಿದರು. 350 ಜನರಿಗೆ ಮಾತ್ರ ಹಾಸ್ಟೆಲ್ ವ್ಯವಸ್ಥೆ ಇರುವುದನ್ನು ಗಮನಿಸಿದರು. ಇದರಿಂದ ಅನೇಕರು ಶಿಕ್ಷಣ ಮೊಟಕುಗೊಳಿಸುತ್ತಿರುವುದನ್ನು ಅರಿತು, ಈಗ 170 ಕೋಟಿ ರೂ ವೆಚ್ಚದಲ್ಲಿ 1600 ವಿದ್ಯಾರ್ಥಿನಿಯರಿಗೆ ನೂತನವಾಗಿ ವಿದ್ಯಾರ್ಥಿನಿಲಯ ನಿರ್ಮಿಸಲು ಕ್ರಮ ಕೈಗೊಂಡಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು ಬೇಟಿ ಬಚಾವೋ, ಬೇಟಿ ಪಡಾವೋ ಎನ್ನುತ್ತಾರೆ. ಆದರೆ, ಮೈಸೂರು ನಗರದ ಶಿಕ್ಷಣ ಕ್ಷೇತ್ರಕ್ಕೆ ಒಂದು ಪೈಸೆಯನ್ನೂ ಕೊಟ್ಟಿಲ್ಲ ಎಂದು ಹರೀಶ್‌ಗೌಡ ಅಸಮಾಧಾನ ವ್ಯಕ್ತಪಡಿಸಿದರು.

ಮಹಾರಾಣಿ ಕಾಲೇಜು ಆವರಣದಲ್ಲಿ ಇಂದಿರಾ ಕ್ಯಾಂಟೀನ್ ನಿರ್ಮಿಸಲು ಮನವಿ



ಕಾಲೇಜು ಕ್ಯಾಂಪಸ್‌ನಲ್ಲಿ ಇಂದಿರಾ ಕ್ಯಾಂಟೀನ್ ನಿರ್ಮಿಸುವಂತೆ ಒತ್ತಾಯಿಸಿ ಸಿಎಂ ಸಿದ್ದರಾಮಯ್ಯ ಅವರ ಬಳಿ ವಿದ್ಯಾರ್ಥಿನಿಯರು ಮನವಿ ಮಾಡಿದರು.

ಮೈಸೂರು,ನ.13(ಎಂಟಿವೈ)– ಮಹಾರಾಣಿ ವಿಜ್ಞಾನ ಕಾಲೇಜಿನ ಕಟ್ಟಡದ ಶಂಕುಸ್ಥಾಪನಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ವಾಪಸ್ಸಾಗುವ ವೇಳೆ ಮಹಾರಾಣಿ ಕಲಾ ಕಾಲೇಜಿನ ವಿದ್ಯಾರ್ಥಿನಿಯರ ತಂಡ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬಳಿ ಕಾಲೇಜು ಆವರಣದಲ್ಲಿ ಇಂದಿರಾ ಕ್ಯಾಂಟೀನ್ ನಿರ್ಮಿಸುವಂತೆ ಮನವಿ ಮಾಡಿದರು.

ಮಹಾರಾಣಿ ಕಲಾ ಮತ್ತು ವಿಜ್ಞಾನ ಕಾಲೇಜಿನಲ್ಲಿ 8 ಸಾವಿರ ವಿದ್ಯಾರ್ಥಿನಿಯರಿದ್ದಾರೆ. ಬಹುತೇಕರು ಗ್ರಾಮೀಣ ಪ್ರದೇಶದಿಂದ ಬರುತ್ತಾರೆ. ಉಚಿತ ಬಸ್ ಪ್ರಯಾಣದ ಶಕ್ತಿ ಯೋಜನೆ ನಮಗೆ ನೆರವಾಗಿದೆ. ಆದರೆ, ಮಧ್ಯಾಹ್ನದ ಊಟದ ಸಮಸ್ಯೆಯಿಂದ ಅನೇಕರು ತೊಂದರೆಗೀಡಾಗಿದ್ದಾರೆ. ಕಳೆದ ಅವಧಿಯಲ್ಲಿ ಜಾರಿಗೊಳಿಸಿದ ಜನಪ್ರಿಯ ಯೋಜನೆ ಇಂದಿರಾ ಕ್ಯಾಂಟೀನ್ ಅನ್ನು ಈ ಬಾರಿ ಮಹಾರಾಣಿ ಕಲಾ ಅಥವಾ ವಿಜ್ಞಾನ ಕಾಲೇಜು ಆವರಣದಲ್ಲಿ ಸ್ಥಾಪಿಸಿದರೆ ಸಾವಿರಾರು ವಿದ್ಯಾರ್ಥಿನಿಯರಿಗೆ ನೆರವಾಗುತ್ತದೆ ಎಂದು ಮನವಿ ಮಾಡಿದರು. ಅಲ್ಲದೆ, ಕಾಲೇಜಿನಲ್ಲಿ ವಿದ್ಯಾರ್ಥಿನಿಯರ ಸಂಖ್ಯೆಗೆ ಅನುಗುಣವಾಗಿ ಮೂಲ ಸೌಲಭ್ಯ ಕಲ್ಪಿಸಬೇಕು. ಹೆಚ್ಚುವರಿ ಶೌಚಾಲಯ, ಕುಡಿಯುವ ನೀರಿನ ವ್ಯವಸ್ಥೆ, ವಿದ್ಯಾರ್ಥಿನಿಯರಿಗೆ ಸಕಾಲಕ್ಕೆ ವಿದ್ಯಾರ್ಥಿವೇತನ ಮಂಜೂರು ಮಾಡಿಸಲು ಕ್ರಮ ಕೈಗೊಳ್ಳುವಂತೆ ಕೋರಿದರು. ವಿದ್ಯಾರ್ಥಿನಿಯರ ಬೇಡಿಕೆಯನ್ನು ಸಹನೆಯಿಂದಲೇ ಆಲಿಸಿದ ಸಿಎಂ ಸಿದ್ದರಾಮಯ್ಯ ಪರಿಶೀಲನೆ ಮಾಡಿ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಮೈಸೂರು ಮಿತ್ರ ಗುರುವಾರ 14 ನವೆಂಬರ್ 2024

ವಿದ್ಯಾರ್ಥಿಗಳಿಗೆ ಸಮ್ಮೇಳನದ ಮಹತ್ವ ತಿಳಿಸಿ



ವಾರದ ಸಾಹಿತ್ಯ ಅತಿಥಿ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡುತ್ತಿರುವ ಹಿರಿಯ ಸಾಹಿತಿ ಡಾ.ಪ್ರದೀಪ್‌ಕುಮಾರ್ ಹೆಬ್ರಿ

ಮಂಡ್ಯ,ನ.13– ಅಖಿಲ ಭಾರತ ಸಾಹಿತ್ಯ ಸಮ್ಮೇಳನಕ್ಕೆ ರಾಷ್ಟ್ರ, ರಾಜ್ಯದಿಂದ ಬರುವ ಪ್ರತಿನಿಧಿಗಳಿಗೆ ಮಾತ್ರ ಸೀಮಿತಗೊಳಿಸದೇ ಜಿಲ್ಲೆಯ 12ರಿಂದ 22ರ ವಯೋಮಾನದ ವಿದ್ಯಾರ್ಥಿ, ಯುವಕರಿಗೆ ಸಾಹಿತ್ಯ ಸಮ್ಮೇಳನದ ಮಹತ್ವವನ್ನು, ಸಾಹಿತ್ಯದ ಪ್ರೀತಿಯನ್ನು ಬೆಳೆಸಲು, ಪ್ರಾಧಾನ್ಯತೆ ಕೊಡಬೇಕು. ಆ ಮೂಲಕ ವಿದ್ಯಾರ್ಥಿ ದೆಸೆಯಲ್ಲೇ ಮಕ್ಕಳಿಗೆ ಕನ್ನಡ ಸಾಹಿತ್ಯದ ಬಗ್ಗೆ ಅರಿವು ಮೂಡಿಸಬೇಕೆಂದು ಹಿರಿಯ ಸಾಹಿತಿ ಡಾ.ಪ್ರದೀಪ್ ಕುಮಾರ್ ಹೆಬ್ರಿ ಸಲಹೆ ನೀಡಿದರು.

ನಗರದ ಕಾರ್ಯನಿರತ ಪತ್ರಕರ್ತರ ಸಂಘದಲ್ಲಿ ಬುಧವಾರ ಆಯೋಜಿಸಿದ್ದ ವಾರದ ಸಾಹಿತ್ಯ ಅತಿಥಿ ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳಿಗೆ ಸಾಹಿತ್ಯಾಸಕ್ತಿ ಮೂಡುವಂತೆ ಮಾಡದೇ ಹೋದರೆ, ಸಾಹಿತ್ಯ ಸಮ್ಮೇಳನ ಮಾಡಿ ಯಾವ ಸಾರ್ಥಕತೆಯೂ ಇರುವುದಿಲ್ಲ. ನಮ್ಮ ಮಕ್ಕಳಲ್ಲಿ ಸಾಹಿತ್ಯ ಪ್ರೀತಿಯನ್ನು ಹುಟ್ಟಿಸದೇ ಹೋದರೆ, ಕನ್ನಡ ಬರೆಯುವವರ ಸಂಖ್ಯೆ ಹೆಚ್ಚಾಗಿ ಓದುವವರ ಸಂಖ್ಯೆ ಕ್ಷೀಣಿಸುತ್ತದೆ ಎಂದು ಆತಂಕ ವ್ಯಕ್ತಪಡಿಸಿದರು.

ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಮಂಡ್ಯ ಜಿಲ್ಲೆಗೆ ತರುವಲ್ಲಿ ರವಿಕುಮಾರ್ ಚಾಮಲಾಪುರ ಅವರ ಕೊಡುಗೆ ಹೆಚ್ಚಿದೆ. ಅಂತೆಯೇ ಕಳೆದ ಬಾರಿ ಜಿಲ್ಲೆಯಲ್ಲಿ ಸಮ್ಮೇಳನ ಯಶಸ್ವಿಯಾಗಿ ನಡೆಯಲು ಜಿ.ಮಾದೇಗೌಡರು ದುಡಿದಿದ್ದು, ಇಬ್ಬರೂ ನಮ್ಮೊಡನೆ ಇದ್ದಾರೆ ಎಂಬ ಭಾವನೆಯೊಂದಿಗೆ ಸಮ್ಮೇಳನದಲ್ಲಿ ಪಾಲ್ಗೊಳ್ಳೋಣ ಎಂದ ಅವರು, ಸಮ್ಮೇಳನದ ವಿಷಯವಾಗಿ ನಮ್ಮಲ್ಲಿನ ಅಂಕುಡೊಂಕುಗ ಳನ್ನು, ಓರೆಕೋರೆಗಳು, ತಪ್ಪು–ಒಪ್ಪಗಳನ್ನು ನಮ್ಮ ಸೀಮಿತ ಚೌಕಟ್ಟಿನಲ್ಲಿರಿಸಿಕೊಂಡು ಮಂಡ್ಯದ ಕೀರ್ತಿ ನಾಡಿನಾದ್ಯಂತ ಹರಡುವಂತೆ ಸಮ್ಮೇಳನ ಯಶಸ್ವಿಗೊಳಿಸುವ ಜವಾಬ್ದಾರಿ ನಮ್ಮ ಮೇಲಿದೆ ಎಂದರು.

ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ಮಂಡ್ಯದಲ್ಲಿ ನಡೆಯುತ್ತಿರುವುದು ಸಾಕಷ್ಟು ಸದ್ದು ಮಾಡಲು ನಾವೆಲ್ಲ ಕಾರಣವಾಗುತ್ತೇವೆ. ನಮ್ಮ ಉದ್ದೇಶ, ನಿರ್ಧಾರ, ಆಶಯಗಳ ಒತ್ತಾಯವನ್ನು ಮಾಡದಿರುವುದರಿಂದ ಈ ರೀತಿಯ ಚರ್ಚೆಗಳಿಗೆ ಕಾರಣವಾಗುತ್ತಿದೆ. ಏನೂ ಆಗಿಲ್ಲ ಎಂಬುದನ್ನು ಬಿಟ್ಟು ಏನು ಮಾಡ ಬೇಕಿದೆ ಎಂಬುದನ್ನು ರಾಜ್ಯಾಧ್ಯಕ್ಷರಿಗೆ ಸಲಹೆ ನೀಡೋಣ ಎಂದರು.

ನನ್ನ ಅಭಿಪ್ರಾಯದಲ್ಲಿ ಮಂಡ್ಯ ನಗರದಲ್ಲೇ ಸಾಹಿತ್ಯ ಸಮ್ಮೇಳನ ಆಗಬೇಕು. ನಗರದ ಹೊರಗಾಗುವುದು ಅಪ್ರಸ್ತುತ, ಮಂಡ್ಯ ವಿಶ್ವವಿದ್ಯಾಲಯದ ಆವರಣದ ಉತ್ತಮವಾಗಿದ್ದು, ಪಕ್ಕದ ಶಂಕರಗೌಡ ರಸ್ತೆಯು ಪುಸ್ತಕ ಮಾರಾಟ ಮಳಿಗೆಗಳನ್ನು ಇಡಲು ಸೂಕ್ತ ಸ್ಥಳವಾಗಿದೆ ಎಂದರು.

ಸಮ್ಮೇಳನಾಧ್ಯಕ್ಷರಾಗುವವರು, ಮುಂದಿನ ಸಮ್ಮೇಳನ ನಡೆಯುವವರೆಗೂ ಸಾಹಿತ್ಯ ಪರಿಷತ್ತಿನ ಎಲ್ಲಾ ಚಟುವಟಿಕೆಗಳಲ್ಲಿ ಅಧಿಕೃತ ವ್ಯಕ್ತಿಯಾಗಿ ಇರಬೇಕು. ಸಮ್ಮೇಳನಾಧ್ಯಕ್ಷರಾಗಿ ಸಮ್ಮೇಳನದ ನಿರ್ಣಯಗಳನ್ನು ಜಾರಿ ಮಾಡುವವರೆಗೂ ಮುಂದಿನ ಸಮ್ಮೇಳನ ನಡೆಯದಂತೆ ಎಚ್ಚರವಹಿಸಬೇಕು. ಸಮ್ಮೇಳನ ನಿರ್ಣಯಗಳ ಜಾರಿಗೆ 7 ಕೋಟಿ ಜನತೆಯೂ ಒಕ್ಕೊರಲಾಗಿ ನಿಲ್ಲಬೇಕು ಎಂದು ಸಲಹೆ ನೀಡಿದರು.

ಈ ವೇಳೆ ಸಂಘದ ಅಧ್ಯಕ್ಷ ಬಿ.ಪಿ.ಪ್ರಕಾಶ್, ಕೆಎನ್.ನವೀನ್‌ಕುಮಾರ್, ಆನಂದ್ ಇದ್ದರು.

ಕಸಾಪ ಸಮ್ಮೇಳನಕ್ಕೆ ಸರ್ಕಾರಿ ನೌಕರರ ಒಂದು ದಿನದ ವೇತನ ನೀಡಲು ಡಿಸಿ ಮನವಿ



ಜಿಲ್ಲಾ ಸರ್ಕಾರಿ ನೌಕರರ ಸಂಘದ ಸಭೆ ನಡೆಸಿ ಡಿಸಿ ಡಾ.ಕುಮಾರ್ ಮಾತನಾಡಿದರು.

ಮಂಡ್ಯ, ನ.13– 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಅದ್ಧೂರಿ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ಸರ್ಕಾರಿ ನೌಕರರು ಒಂದು ದಿನದ ಸಂಬಳವನ್ನು ನೀಡುವಂತೆ ಜಿಲ್ಲಾಧಿಕಾರಿ ಡಾ.ಕುಮಾರ ಮನವಿ ಮಾಡಿದರು.

ಬುಧವಾರ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಸಂಬಂಧಿಸಿದಂತೆ ಜಿಲ್ಲಾ ಸರ್ಕಾರಿ ನೌಕರರ ಸಂಘದ ಸಭೆ ನಡೆಸಿ ಮಾತನಾಡಿದರು. ಒಂದು ದಿನದ ಸಂಬಳ ನೀಡುವ ಬಗ್ಗೆ ಜಿಲ್ಲಾಡಳಿತದಿಂದ ಯಾವುದೇ ಒತ್ತಾಯವಿಲ್ಲ. ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಪ್ರೀತಿಪೂರ್ವಕವಾಗಿ ನೀಡುವಂತೆ ಮನವಿ ಮಾಡಿದ ಅವರು, 87ನೇ ಅಖಿಲ ಭಾರತ ಕನ್ನಡ ಸಾಹಿತ್ಯವು ಡಿಸೆಂಬರ್ 20, 21, 22ರಂದು ಜಿಲ್ಲೆಯಲ್ಲಿ ನಡೆಯಲಿದೆ. ಸರ್ಕಾರಿ ನೌಕರರುಗಳಲ್ಲದೆ ವಿವಿಧ ಸಂಘ ಸಂಸ್ಥೆಗಳು, ಕನ್ನಡ ಪರ ಹೋರಾಟ ಸಂಘಗಳು ಹಾಗೂ ಸಾರ್ವಜನಿಕರು ಮನಪೂರ್ವಕವಾಗಿ ತಮ್ಮ ಇಚ್ಛೆಯಿಂದ ಸಮ್ಮೇಳನಕ್ಕೆ ಸಹಾಯ ಮಾಡಬಹುದು. ಜಿಲ್ಲೆಯ ಕನ್ನಡಿಗರು ಸಮ್ಮೇಳನದಲ್ಲಿ ಒಬ್ಬ ಕನ್ನಡಿಗನಾಗಿ ಸೇವೆ ಮಾಡಬಹುದಾಗಿದ್ದು, ಈ ಬಗ್ಗೆ ಯಾವುದೇ ಒತ್ತಾಯವಿರುವುದಿಲ್ಲ ಎಂದರು.

ಸಭೆಯಲ್ಲಿ ಪ್ರತಿಯೊಬ್ಬರು ಸಕಾರಾತ್ಮಕವಾಗಿ ಸ್ಪಂದಿಸಿರುವುದು ಸಂತೋಷದ ವಿಷಯವಾಗಿದೆ. ಸಮ್ಮೇಳನವು ಕೇವಲ ವೈಯಕ್ತಿಕ ಹಬ್ಬವಾಗಿರದೆ, ಕನ್ನಡದ ಐಕ್ಯತೆಯನ್ನು ಸಾರುವ, ಪ್ರತಿಬಿಂಬಿಸುವ ಪ್ರತಿಯೊಬ್ಬ ಕನ್ನಡಿಗರ ಮನೆಯ ಹಬ್ಬವಾಗಿದೆ. ಸಾರ್ವಜನಿಕರು, ಎಲ್ಲಾ ಸರ್ಕಾರಿ ನೌಕರರು ಕೂಡ ತಮ್ಮ ಮನೆಯ ಹಬ್ಬವೆಂದು ಭಾವಿಸಿ ಸಂಭ್ರಮ, ಸಡಗರದಿಂದ ಆಚರಿಸೋಣ. ಜಿಲ್ಲೆಯ ಎಲ್ಲಾ ಸರ್ಕಾರಿ ನೌಕರರುಗಳಲ್ಲಿ ವಿವಿಧ ಕ್ಷೇತ್ರಕ್ಕೆ ಕೊಡುಗೆ ನೀಡುತ್ತಿರುವ 10 ಮಂದಿ ಕನ್ನಡಿಗರಿಗೆ ಸನ್ಮಾನ ಮಾಡುವ ಬಗ್ಗೆ ಹಾಗೂ ಸಮ್ಮೇಳನ ನಡೆಯುವ ದಿನಗಳಂದು ರಜೆ ನೀಡುವ ಬಗ್ಗೆ ಚಿಂತಿಸಿ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದು ತಿಳಿಸಿದರು.

ಜಿಪಂ ಸಿಇಓ ಶೇಖ್ ತನ್ವಿರ್ ಆಸಿಫ್, ಅಪರ ಜಿಲ್ಲಾಧಿಕಾರಿ ಡಾ.ಹೆಚ್.ಎಲ್.ನಾಗರಾಜು ಮಾತನಾಡಿದರು. ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ರಾಜ್ಯಾಧ್ಯಕ್ಷ ನಾಗೇಶ್ ಗೌಡ ಮಾತನಾಡಿ, ಸಮ್ಮೇಳನಕ್ಕೆ ಎಲ್ಲಾ ಸಂಘಟನೆಗಳು, ಪದಾಧಿಕಾರಿಗಳು ಸಂಪೂರ್ಣ ಬೆಂಬಲ ನೀಡಲಾಗುವುದು. ನಮ್ಮ ಜಿಲ್ಲೆಯ ಹಿರಿಮೆಯನ್ನು ಹೆಚ್ಚಿಸುವ ಜವಾಬ್ದಾರಿ ಎಲ್ಲಾ ನೌಕರರುಗಳ ಮೇಲಿದ್ದು ಒಂದು ದಿನದ ವೇತನವನ್ನು ಸಂತೋಷದಿಂದ ಕಿರು ಕಾಣಿಕೆಯಾಗಿ ನೀಡಲು ಸಿದ್ಧರಿದ್ದೇವೆ ಎಂದರು. ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಶಂಭುಗೌಡ ಮಾತನಾಡಿದರು.

ಸಭೆಯಲ್ಲಿ ಕಸಾಪ ಸಮ್ಮೇಳನದ ಸಂಚಾಲಕಿ ಡಾ.ಮೀರಾಶಿವಲಿಂಗಯ್ಯ ಸೇರಿದಂತೆ ವಿವಿಧ ನೌಕರ ಸಂಘದ ಅಧ್ಯಕ್ಷರು, ಪದಾಧಿಕಾರಿಗಳು ಉಪಸ್ಥಿತರಿದ್ದರು.

ಟೆಂಡರ್ ಆಹ್ವಾನ

ಮಂಡ್ಯ, ನ.13– ಜಿಲ್ಲಾ ನ್ಯಾಯಾಲಯವು OPEX ಮಾದರಿಯಲ್ಲಿ ಹೊರಗುತ್ತಿಗೆ ವಿಧಾನದ ಮೂಲಕ ಹೊಸ ಹನ್ನೊಂದು (11) ಕಾಪಿಯರ್ ಯಂತ್ರಗಳನ್ನು (ಮೆಷಿನ್ ಸೇವೆ ಮಾತ್ರ) ಸ್ಥಾಪಿಸಲು ಅರ್ಹ ಸಂಸ್ಥೆಗಳು/ಏಜೆನ್ಸಿಗಳು/ ನಿರ್ವಾಹಕರಿಂದ (ಆದ್ಯತೆ ಸ್ಥಳೀಯ) ಮೊಹರು ಮಾಡಿದ ಸಂಸ್ಥೆಯಿಂದ ಟೆಂಡರ್ ಆಹ್ವಾನಿಸಿದೆ.

2024–2025 ರಿಂದ ಒಂದು ವರ್ಷ, ಮಂಡ್ಯ ಘಟಕದ ನ್ಯಾಯಾಲಯಗಳ ಆದೇಶಗಳು, ತೀರ್ಪುಗಳು, ಐಎಗಳು, ಸಾಕ್ಷ್ಯಗಳು ಮತ್ತು ಪ್ರದರ್ಶನಗಳು ಇತ್ಯಾದಿ ಸೇರಿದಂತೆ ನ್ಯಾಯಾಂಗ ದಾಖಲೆಗಳ ಫೋಟೋಕಾಪಿಯನ್ನು ತಯಾರಿಸಲು, ನಿಗದಿಪಡಿಸಿದ ನಿಯಮಗಳು ಮತ್ತು ಷರತ್ತುಗಳಿಗೆ ಒಳಪಟ್ಟಿ ಟೆಂಡರ್‌ಗೆ ಅರ್ಜಿ ಸಲ್ಲಿಸಬಹುದಾಗಿದೆ.

ಡಿಸೆಂಬರ್ 9 ರಂದು ಸಂಜೆ 5 ಗಂಟೆಯೊಳಗೆ ಜಿಲ್ಲಾ ನ್ಯಾಯಾಲಯ ಕಚೇರಿಗೆ ಟೆಂಡರ್ ಅರ್ಜಿಯನ್ನು ತಲುಪಿಸುವುದು. ಬಳಿಕ ಮೊಹರು ಮಾಡಿದ ಟೆಂಡರ್ ಅನ್ನು ಡಿಸೆಂಬರ್ 11 ರಂದು ತೆರೆಯಲಾಗುವುದು.

ಟೆಂಡರ್ ದಾಖಲೆಗಳನ್ನು ಮಂಡ್ಯ https://mandya.dcourts.gov.in ನಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು ಎಂದು ಪ್ರಕಟಣೆ ತಿಳಿಸಿದೆ.

ನಾಳೆ ಮುಖವಾಡಗಳು ಬಿಡುಗಡೆ

ಮಂಡ, ನ.13– ಸಿರಿ ಪ್ರಕಾಶನ ಹಾಗೂ ಕರ್ನಾಟಕ ಸಂಘದ ಸಂಯುಕ್ತಾಶ್ರಯದಲ್ಲಿ ತಾರಾ ಸಮೂಹ ಸಂಸ್ಥೆಗಳ ಮಾಲೀಕ ಡಾ.ಕೆ.ಚಂದ್ರಶೇಖರ್ ಅವರ ಮುಖವಾಡಗಳು ಕವನ ಸಂಕಲನ ಬಿಡುಗಡೆ ಹಾಗೂ ಅಭಿನಂದನಾ ಸಮಾರಂಭ ಕಾರ್ಯಕ್ರಮವನ್ನು ನ.15ರ ಸಂಜೆ 5 ಗಂಟೆಗೆ ನಗರದ ಕೆ.ವಿ.ಶಂಕರಗೌಡ ಶತಮಾನೋತ್ಸವ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಹಿರಿಯ ಪತ್ರಕರ್ತ ಕೊಳಲು ಶ್ರೀಪಾದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕರ್ನಾಟಕ ಸಂಘದ ಅಧ್ಯಕ್ಷ ಪ್ರೊ.ಜಯಪ್ರಕಾಶ್‌ಗೌಡ ವಹಿಸಿ, ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸದಸ್ಯ ಡಾ.ಸಿ.ಎನ್.ಮಂಜುನಾಥ್ ಅವರನ್ನು ಅಭಿನಂದಿಸುವರು. ಅಭಿನಂದಿತ ಡಾ.ಸಿ.ಎನ್.ಮಂಜುನಾಥ್ ಪುಸ್ತಕ ಬಿಡುಗಡೆ ಮಾಡುವರು ಎಂದರು.

ಅಧ್ಯಕ್ಷರಾಗಿ ಸಂಜೀವಪ್ಪ ಅವಿರೋಧ ಆಯ್ಕೆ



ಕೆ.ಆರ್.ಪೇಟೆ ತಾಲೂಕಿನ ಅಕ್ಕಿಹೆಬ್ಬಾಳು ಹೋಬಳಿಯ ಆಲಂಬಾಡಿಕಾವಲು ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಬ್ಯಾಂಕ್‌ನ ನೂತನ ಅಧ್ಯಕ್ಷರಾಗಿ ಎ.ಎಂ.ಸಂಜೀವಪ್ಪ ಅವಿರೋಧವಾಗಿ ಆಯ್ಕೆಯಾದರು. ನೂತನ ಅಧ್ಯಕ್ಷರನ್ನು ತಾ.ಪಂ. ಮಾಜಿ ಅಧ್ಯಕ್ಷ ಪಿನುಬಂಡೇಗೌಡ ಅಭಿನಂದಿಸಿದರು. ಸಂಘದ ಉಪಾಧ್ಯಕ್ಷ ನಾಗೇಗೌಡ, ನಿರ್ದೇಶಕರಾದ ಎ.ಟಿ.ಕರಿಶೆಟ್ಟಿ ಜಿ.ಎಸ್.ಕುಮಾರ್, ಡಿ.ಸುರೇಶ್, ಎ.ಎಂ.ಪುಟ್ಟಶೆಟ್ಟಿ ರಾಜಾನಾಯಕ್, ಜಿ.ಎಸ್.ಕುಮಾರ್, ಶಾಂತಮ್ಮ ಕೃಷ್ಣೇಗೌಡ, ಎ.ಎನ್.ಆಶಾ ದೇವರಾಜು, ರಾಜೇಗೌಡ ಉಪಸ್ಥಿತರಿದ್ದರು.

ಇಂದು ನಾಗಮಂಗಲ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ



ನಾಗಮಂಗಲ: ನಾಗಮಂಗಲ ವಿದ್ಯುತ್ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣೆ ಹಮ್ಮಿಕೊಂಡಿರುವುದರಿಂದ ನ.14ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 6ಗಂಟೆವರೆಗೆ ನಾಗಮಂಗಲ ಪಟ್ಟಣದ ಟಿ.ಬಿ ಬಡಾವಣೆ ಎನ್‌ಜೆವೈ, ಎ.ಸಿ.ಹಳ್ಳಿ ಎನ್‌ಜೆವೈ, ಮೈಲಾರ ಪಟ್ಟಣ ಎನ್‌ಜೆವೈ, ಹಾಗೂ ಪಂಪ್ಸೆಟ್ ವ್ಯಾಪ್ತಿಯ ಕೋಟೆಬೆಟ್ಟ, ಬಸರಾಳು, ಬೆಳ್ಳೂರು, ಬಿಂಡಿಗನವಿಲೆ, ಮೇಲುಕೋಟೆ, ಜೋಡಿ ನೇರಲಕೆರೆ, ಹಾಗೂ ಮುಳ್ಳಕಟ್ಟೆ ವ್ಯಾಪ್ತಿಯ ಅಂಚೆ ಚಿಟ್ಟೆನಹಳ್ಳಿ ಗ್ರಾಪಂ, ಹುಲಿಕೆರೆ ಗ್ರಾಪಂ, ಪಾಲ ಅಗ್ರಹಾರ ಗ್ರಾಪಂ ವ್ಯಾಪ್ತಿಯ ಗ್ರಾಮಗಳಲ್ಲಿ ವಿದ್ಯುತ್ ಸರಬರಾಜು ಇರುವುದಿಲ್ಲ ಎಂದು ಚೆಸ್ಕಾಂ ಅಧಿಕಾರಿ ಸಹಾಯಕ ಕಾರ್ಯ ಕಾರ್ಯಪಾಲಕ ಇಂಜಿನಿಯರ್ ತಿಳಿಸಿದ್ದಾರೆ.

ನ.18 ರಂದು ಕನಕದಾಸ ಜಯಂತಿ

ಮಂಡ್ಯ, ನ.13– ಮಂಡ್ಯ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಸಂಯುಕ್ತಾಶ್ರಯದಲ್ಲಿ ಕನಕದಾಸ ಜಯಂತಿ ನ.18ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಆವರಣದಿಂದ ಅಂಬೇಡ್ಕರ್ ಭವನದವರೆಗೆ ಮೆರವಣಿಗೆ ನಂತರ 11 ಗಂಟೆಗೆ ನಗರದ ಡಾ.ಬಿ.ಆರ್ ಅಂಬೇಡ್ಕರ್ ಭವನದಲ್ಲಿ ವೇದಿಕೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಕೇಂದ್ರ ಸರ್ಕಾರದ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ ಕಾರ್ಯಕ್ರಮದ ಘನ ಉಪಸ್ಥಿತಿಯನ್ನು ವಹಿಸಲಿದ್ದಾರೆ. ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎನ್.ಚಲುವರಾಯಸ್ವಾಮಿ ಉದ್ಘಾಟನಾ ಕಾರ್ಯಕ್ರಮವನ್ನು ನೆರವೇರಿಸಲಿದ್ದಾರೆ.

ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ ಅಧ್ಯಕ್ಷರು ಹಾಗೂ ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರ ಶಾಸಕ ಎ.ಬಿ.ರಮೇಶ್ ಬಂಡಿಸಿದ್ದೇಗೌಡ ಅವರ ಗೌರವ ಉಪಸ್ಥಿತಿಯಲ್ಲಿ ಮಂಡ್ಯ ವಿಧಾನಸಭಾ ಕ್ಷೇತ್ರ ಶಾಸಕ ಪಿ. ರವಿಕುಮಾರ್ ಅವರು ಅಧ್ಯಕ್ಷತೆ ವಹಿಸುವರು.

ರಾಷ್ಟ್ರೀಯ ಫೆಲೋಶಿಪ್, ವಿದ್ಯಾರ್ಥಿವೇತನ ಯೋಜನೆ ಜಾರಿ

ಮಂಡ್ಯ, ನ.13– ಭಾರತ ಸರ್ಕಾರವು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ಉನ್ನತ ಶಿಕ್ಷಣವನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ರಾಷ್ಟ್ರೀಯ ಫೆಲೋಶಿಪ್ ಮತ್ತು ವಿದ್ಯಾರ್ಥಿವೇತನ ಯೋಜನೆಯನ್ನು ಜಾರಿಗೊಳಿಸುತ್ತಿದ್ದು, ಸದರಿ ಯೋಜನೆಯಡಿ ವಿದ್ಯಾರ್ಥಿಗಳಿಗೆ ನೀಡಲಾಗುವ ಶುಲ್ಕ, ಸ್ಟೈಫಂಡ್ ಮತ್ತು ಲ್ಯಾಪ್ಟಾಪ್ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ಮಂಡ್ಯ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಹಾಗೂ ತಾಲೂಕುಗಳ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸತಕ್ಕದ್ದು ಎಂದು ಮಂಡ್ಯ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರ್ಜಿ ಆಹ್ವಾನ

ಮಂಡ್ಯ, ನ.13– ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು 2024–25ನೇ ಸಾಲಿನಲ್ಲಿ ವಿದೇಶಿ ವಿಶ್ವ ವಿದ್ಯಾನಿಲಯಗಳಲ್ಲಿ ಸ್ನಾತಕೋತ್ತರ ಪದವಿ ಹಾಗೂ ಪಿಹೆಚ್‌ಡಿ ಮಾಡುವ ಹಿಂದುಳಿದ ವರ್ಗಗಳ ಪ್ರವರ್ಗ –1, 2ಎ, 3ಎ, ಹಾಗೂ 3ಬಿಗಳಿಗೆ ಸೇರಿದ ಅರ್ಹ ವಿದ್ಯಾರ್ಥಿಗಳಿಂದ ಡಿ.ದೇವರಾಜ ಅರಸು ವಿದೇಶಿ ವ್ಯಾಸಂಗ ವೇತನಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಯನ್ನು ಡಿ.15 ರೊಳಗೆ http://bcwd.karnataka.gov.in ವೆಬ್‌ಸೈಟ್ ಮೂಲಕ ಸಲ್ಲಿಸತಕ್ಕದ್ದು.

ಮಾಕವಳ್ಳಿ ಪುಟ್ಟರಾಜಯ್ಯ ನಿಧನ



ಕೆ.ಆರ್.ಪೇಟೆ: ತಾಲೂಕಿನ ಕಸಬಾ ಹೋಬಳಿಯ ಮಾಕವಳ್ಳಿ ಗ್ರಾಮದ ಹಿರಿಯ ಮುಖಂಡರಾದ ಪುಟ್ಟರಾಜಯ್ಯ ಬುಧವಾರ ನಿಧನರಾಗಿದ್ದಾರೆ. ಮೃತರು ಪತ್ನಿ, ಮೂವರು ಪುತ್ರರು, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿ ದ್ದಾರೆ. ಮೃತರ ಅಂತ್ಯಕ್ರಿಯೆಯು ಸ್ವಗ್ರಾಮ ಮಾಕವಳ್ಳಿ ಗ್ರಾಮದಲ್ಲಿ ನಡೆಯಿತು.

ಮೂರನೇ ಪುಟದಿಂದ

ಜನ ಸುಮ್ಮನೆ ಬಿಡಲ್ಲ...

ನೆರೆದ ಜನರಲ್ಲಿ ಮನವಿ ಮಾಡಿದ ಸಿದ್ದರಾಮಯ್ಯ, ಜನರ ಬೆಂಬಲ ಇರುವವರೆಗೂ ಇಂತಹ ಸುಳ್ಳು ಕೇಸುಗಳಿಗೆ ನಾನು ಜಗ್ಗುವುದಿಲ್ಲ, ಬಗ್ಗುವುದಿಲ್ಲ, ಕುಗ್ಗುವುದಿಲ್ಲ ಎಂದರು.

ಜಗ್ಗಲ್ಲ: ನಾನು ನಿನ್ನೆ ಮೊನ್ನೆ ಮಂತ್ರಿಯಾದವನಲ್ಲ. 40 ವರ್ಷದಿಂದ ಮಂತ್ರಿಯಾಗಿದ್ದೀನಿ,ಸುಳ್ಳು ಕೇಸಲ್ಲಿ ನನ್ನನ್ನು, ನನ್ನ ಧರ್ಮಪತ್ನಿಯನ್ನು ಎಳೀತೀರಾ? ರಾಜ್ಯದ ಜನರೇನು ಮೂರ್ಖರು ಎಂದು ತಿಳಿದುಕೊಂಡಿದ್ದೀರಾ, ರಾಜ್ಯದ ಜನರ ಆಶೀರ್ವಾದ ನನ್ನ ಮೇಲೆ ಇರುವವರೆಗೂ ನಾನು ಬಿಜೆಪಿ ಮತ್ತು ಕೇಂದ್ರ ಸರ್ಕಾರದ ಷಡ್ಯಂತ್ರಗಳಿಗೆ ಜಗ್ಗಲ್ಲ, ಬಗ್ಗಲ್ಲ. ಮತದಾರರಾದ ನೀವೂ ಸುಖಾ ಸುಮ್ಮನೆ ತಂಟೆಗೆ ಬಂದರೆ ಸುಮ್ಮನಿರಲ್ಲ ಎನ್ನುವ ಎಚ್ಚರಿಕೆ ಕೊಡಬೇಕಿದೆ ಎಂದು ಕರೆ ನೀಡಿದರು.

ರಾಜ್ಯ ಸರ್ಕಾರದ ಬಳಿ ಅಭಿವೃದ್ಧಿಗೆ ಹಣ ಇಲ್ಲ ಎನ್ನುವ ಹಸಿ ಹಸಿ ಸುಳ್ಳಿನ ಅಪಪ್ರಚಾರ ಮಾಡುತ್ತಿದ್ದಾರೆ. ರಾಜ್ಯ ಸರ್ಕಾರ ಗ್ಯಾರಂಟಿಗಳಿಗಾಗಿ 56 ಸಾವಿರ ಕೋಟಿ ರೂಪಾಯಿ ಕೊಟ್ಟರೆ, ಅಭಿವೃದ್ಧಿ ಕಾರ್ಯಗಳಿಗೆ 1.20 ಲಕ್ಷ ಕೋಟಿ ರೂ. ನೀಡಿದೆ. ಇಂದು ನರಸೀಪುರದಲ್ಲಿ 470 ಕೋಟಿ ರೂಪಾಯಿ ಮೌಲ್ಯದ ಅಭಿವೃದ್ಧಿ ಕೆಲಸಗಳಿಗೆ ಚಾಲನೆ ದೊರೆತಿದೆ. ಬಿಜೆಪಿಯ ಸುಳ್ಳುಗಳಿಗೆ ಇವತ್ತಿನ ಅಭಿವೃದ್ಧಿ ಕಾರ್ಯಕ್ರಮ ಕನ್ನಡಿ ಹಿಡಿದಿದೆ ಎಂದರು.

ಬಿಜೆಪಿಯವರಿಗೆ ನಾನು ನೇರವಾಗಿ ಒಂದು ಪ್ರಶ್ನೆ ಕೇಳ್ತೀನಿ. ರಾಜ್ಯದಲ್ಲಿ ಬಿಜೆಪಿಯವರಾಗಿ ನಮ್ಮ ಗ್ಯಾರಂಟಿಗಳ ಫಲಾನುಭವಿಗಳಲ್ಲವಾ? ಬಿಜೆಪಿಯವರು ಉಚಿತವಾಗಿ ಬಸ್ಸಲ್ಲಿ ಓಡಾಡುತ್ತಿಲ್ಲವಾ? ಬಿಜೆಪಿಯವರು ಉಚಿತ ವಿದ್ಯುತ್ ಪಡೆಯುತ್ತಿಲ್ಲವಾ? ಬಿಜೆಪಿಯವರು ಗೃಹಲಕ್ಷ್ಮಿ ಹಣ ಪಡೆಯುತ್ತಿಲ್ಲವಾ? ಇಲ್ಲಾ, ನಾವು ತಗೊತಾ ಇಲ್ಲ ಅಂತ ಬಿಜೆಪಿಯವರು ಎದೆ ಮುಟ್ಟಿಕೊಂಡು ಹೇಳಲಿ ನೋಡೋಣ ಎಂದು ಸವಾಲೆಸೆದ ಸಿಎಂ, ರಾಜ್ಯ ಸರ್ಕಾರದ ಗ್ಯಾರಂಟಿ ಫಲಾನುಭವಿಗಳನ್ನು ಅವಮಾನಿಸಿ, ಅಪಪ್ರಚಾರ ಮಾಡುವುದನ್ನು ನಿಲ್ಲಿಸದಿದ್ದರೆ ಕೋಟಿ ಕೋಟಿ ಫಲಾನುಭವಿಗಳು ನಿಮಗೆ ಸರಿಯಾದ ಪಾಠ ಕಲಿಸ್ತಾರೆ ಎಂದು ಎಚ್ಚರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ಮಾತನಾಡಿ, 1985ರಿಂದ ನನ್ನ ರಾಜಕೀಯ ಜೀವನ ಯಾತ್ರೆ ತಿ.ನರಸೀಪುರ ವಿಧಾನಸಭಾ ಕ್ಷೇತ್ರದಲ್ಲಿ ಪ್ರಾರಂಭವಾಯಿತು. ಸಿದ್ದರಾಮಯ್ಯರಂತಹ ಮಹಾ ನಾಯಕರ ಜೊತೆ ಕೆಲಸ ಮಾಡುವ ಸೌಭಾಗ್ಯವನ್ನು ಕ್ಷೇತ್ರದ ಜನ ನನಗೆ ಕಲ್ಪಿಸಿಕೊಟ್ಟಿದ್ದೀರಿ. ಇದಕ್ಕೆ ನಾನು ಋಣಿಯಾಗಿದ್ದು, ಇದನ್ನು ಅಭಿವೃದ್ಧಿ ಕಾರ್ಯಗಳನ್ನು ಮಾಡುವ ಮೂಲಕ ತೀರಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತಿದ್ದೇನೆ ಎಂದರು.

ಕಳೆದ 40 ವರ್ಷಗಳಿಂದ ತಿ.ನರಸೀಪುರ ಕ್ಷೇತ್ರಕ್ಕೆ ಸಾವಿರಾರು ಕೋಟಿಯ ಅಭಿವೃದ್ಧಿ ಕಾರ್ಯಗಳ ಮಾಡಿಕೊಂಡು ಬಂದಿದ್ದೇವೆ. ವಸತಿ ಯೋಜನೆಯಡಿ 13 ಸಾವಿರ ಮನೆಗಳನ್ನು ನೀಡಲಾಗಿದೆ. ಸಿದ್ದರಾಮಯ್ಯ ಅವರು ಎಲ್ಲಾ ವರ್ಗದ ಜನರಿಗೆ ಸಾಮಾಜಿಕ ನ್ಯಾಯವನ್ನು ಒದಗಿಸುವ ಕೆಲಸ ಮಾಡುತ್ತಾ ಬಂದಿದ್ದಾರೆ. ರಾಜ್ಯದಲ್ಲಿ 14 ಬಜೆಟ್ ಅನ್ನು ಮಂಡಿಸಿ ಸಾಮಾಜಿಕ ನ್ಯಾಯವನ್ನು ಒದಗಿಸಿದ್ದಾರೆ ಎಂದು ತಿಳಿಸಿದರು.

ಚಾಮರಾಜನಗರ ಲೋಕಸಭಾ ಕ್ಷೇತ್ರದ ಸಂಸದ ಸುನೀಲ್ ಬೋಸ್ ಮಾತನಾಡಿ ಟಿ ನರಸೀಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ 211 ವಿವಿಧ ಕಾಮಗಾರಿಗಳಿಗೆ ಯೋಜನೆಗಳಿಗೆ ಚಾಲನೆ ನೀಡಲಾಗಿದೆ. ಚುನಾವಣೆಗೂ ಮುಂಚೆ ಪಂಚ ಗ್ಯಾರಂಟಿ ಯೋಜನೆಗಳ ಭರವಸೆ ನೀಡಲಾಗಿತ್ತು. ಅದನ್ನು ನಮ್ಮ ಕಾಂಗ್ರೆಸ್ ಸರ್ಕಾರ ಅನುಷ್ಠಾನ ಮಾಡಿದೆ. ಟಿ ನರಸೀಪುರ ಕ್ಷೇತ್ರದ ವ್ಯಾಪ್ತಿಯಲ್ಲಿ ಸುಮಾರು 78 ಸಾವಿರ ಮಹಿಳೆಯರು ಗೃಹಲಕ್ಷ್ಮಿ ಯೋಜನೆಯಡಿ ಮಾಸಿಕ 2 ಸಾವಿರ ಪಡೆದುಕೊಳ್ಳುತ್ತಿದ್ದಾರೆ. ಮುಖ್ಯಮಂತ್ರಿಗಳು ಜಾರಿಗೆ ತಂದ ಅನ್ನಭಾಗ್ಯ ಯೋಜನೆಯಿಂದ ಬಡವರು 3 ಹೊತ್ತು ಹೊಟ್ಟೆ ತುಂಬಾ ಊಟ ಮಾಡಲು ಸಾಧ್ಯವಾಗಿದೆ ಎಂದರು. ರೇಷ್ಮೆ ಹಾಗೂ ಪಶು ಸಂಗೋಪನಾ ಸಚಿವ ಕೆ. ವೆಂಕಟೇಶ್, ವಿಧಾನ ಪರಿಷತ್ ಸದಸ್ಯರಾದ ಡಾ.ಯತೀಂದ್ರ ಮಾತನಾಡಿದರು.

ಕಾರ್ಯಕ್ರಮದಲ್ಲಿ ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್, ಗ್ಯಾರಂಟಿ ಅನುಷ್ಠಾನ ಸಮಿತಿ ಉಪಾಧ್ಯಕ್ಷೆ ಪುಷ್ಪಾ ಅಮರನಾಥ್, ವಿಧಾನ ಪರಿಷತ್ ಸದಸ್ಯರಾದ ಯತೀಂದ್ರ, ಡಾ.ತಿಮ್ಮಯ್ಯ, ಜಿಲ್ಲಾಧಿಕಾರಿ ಜಿ.ಲಕ್ಷ್ಮಿ ಕಾಂತರೆಡ್ಡಿ, ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕೆ.ಎಂ.ಗಾಯತ್ರಿ, ಜಿಪಂ ಮಾಜಿ ಸದಸ್ಯೆ ಸುಧಾ ಮಹದೇವಯ್ಯ, ಪಿಕಾರ್ಡ್ ಬ್ಯಾಂಕ್ ಮಾಜಿ ಅಧ್ಯಕ್ಷ ಕೆ.ವಜ್ರೇಗೌಡ, ಕಾಂಗ್ರೆಸ್ ಯುವ ಮುಖಂಡ ಲಕ್ಷ್ಮಿ ನಾರಾಯಣ, ಉಪನ್ಯಾಸಕ ಬಿ.ಕೆ.ಜ್ಞಾನ ಪ್ರಕಾಶ್, ಮೈಸೂರು ಗ್ರಾಮಾಂತರ ಜಿಲ್ಲಾ ಕಾಂಗ್ರೆಸ್ ಸಮಿತಿಯ ಕಾರ್ಮಿಕ ವಿಭಾಗದ ಕಾರ್ಯದರ್ಶಿ ಎನ್.ರಾಜೇಶ್, ಮೈಮುಲ್ ಅಧ್ಯಕ್ಷ ಚೆಲುವರಾಜು, ಪುರಸಭಾ ಸದಸ್ಯ ಬಾದಾಮಿ ಮಂಜು, ವೈ.ಎನ್.ಶಂಕರೇಗೌಡ, ಪ್ರಥಮ ದರ್ಜೆ ಗುತ್ತಿಗೆದಾರ ಕಗ್ಗಲಿಪುರ ಕೆ.ಎಂ. ಮಧು ಕುಮಾರ್, ಎನ್.ಸ್ವಾಮಿ, ಟಿ.ಎಚ್.ಮಂಜುನಾಥ್, ನರಸಿಂಹ, ಮಾದನಾಯಕ, ಕುಕ್ಕೂರು ಗಣೇಶ್, ದೊಡ್ಡೇಬಾಗಿಲು ಮಲ್ಲಿಕಾರ್ಜುನ, ಚೌಪಳ್ಳಿ ಮಲ್ಲೇಶ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ಹಲವು ಪ್ರಮುಖರು ಉಪಸ್ಥಿತರಿದ್ದರು.

ಮತದಾನ

92,522 ಮಹಿಳೆಯರು ಮತ್ತು ಇಬ್ಬರು ಇತರೆ ಮತದಾರರು ಹಕ್ಕು ಚಲಾಯಿಸಿದ್ದಾರೆ. ಇಲ್ಲಿ ಬಿಜೆಪಿಯಿಂದ ಭರತ್ ಬೊಮ್ಮಾಯಿ ಹಾಗೂ ಕಾಂಗ್ರೆಸ್‌ನಿಂದ ಯಾಸಿರ್ ಖಾನ್ ಪಠಾಣ್ ಪ್ರಮುಖ ಅಭ್ಯರ್ಥಿಗಳಾಗಿ ಕಣದಲ್ಲಿದ್ದಾರೆ.

ಸಂಡೂರಲ್ಲಿ ಶೇ,76.24: ಬಳ್ಳಾರಿಯ ಸಂಡೂರು ಕ್ಷೇತ್ರದಲ್ಲೂ ಇಂದು ಶಾಂತಿಯುತ ಮತದಾನ ನಡೆದಿದೆ. ಇಲ್ಲಿ ಕಾಂಗ್ರೆಸ್‌ನಿಂದ ಈ ತುಕಾರಾಂ ಪತ್ನಿ ಅನ್ನಪೂರ್ಣ ಹಾಗೂ ಬಿಜೆಪಿಯಿಂದ ಜನಾರ್ಧನ ರೆಡ್ಡಿ ಆಪ್ತ ಬಂಗಾರು ಹನುಮಂತು ಕಣದಲ್ಲಿದ್ದಾರೆ. ಇಂದು ನಡೆದ ಮತದಾನ ಪ್ರಕ್ರಿಯೆಯಲ್ಲಿ ಒಟ್ಟು 1,80,189 ಮಂದಿ ತಮ್ಮ ಹಕ್ಕು ಚಲಾಯಿಸಿದ್ದು, ಅದರಲ್ಲಿ 90,922 ಪುರುಷರು ಹಾಗೂ 89,252 ಮಹಿಳೆಯರು ಮತ್ತು 12 ಮಂದಿ ಇತರೆ ಮತದಾರರು ತಮ್ಮ ಹಕ್ಕು ಚಲಾಯಿಸಿದ್ದಾರೆ. ಅಂತಿಮವಾಗಿ ಸಂಡೂರಿನಲ್ಲಿ ಒಟ್ಟು ಶೇ.76.24 ರಷ್ಟು ಮತದಾನವಾಗಿದೆ.

ಮೂರೂ ಕ್ಷೇತ್ರಗಳಲ್ಲಿ ಕಾಂಗ್ರೆಸ್ ತನ್ನ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದ್ದರೆ, ಎನ್‌ಡಿಎ ಮೈತ್ರಿಕೂಟದ ಬಿಜೆಪಿ ಎರಡು ಕ್ಷೇತ್ರಗಳಲ್ಲಿ, ಜೆಡಿಎಸ್ ಒಂದರಲ್ಲಿ ತನ್ನ ಅಭ್ಯರ್ಥಿಗಳನ್ನು ಕಣಕ್ಕಿಳಿಸಿತ್ತು. ಒಟ್ಟಾರೆ ಮೂರೂ ಕ್ಷೇತ್ರಗಳಿಂದ 45 ಅಭ್ಯರ್ಥಿಗಳು ಕಣದಲ್ಲಿದ್ದು, ಫಲಿತಾಂಶಕ್ಕಾಗಿ 10 ದಿನ ಕಾಯಬೇಕಾಗಿದೆ. ಮಹಾರಾಷ್ಟ್ರ ಮತ್ತು ಜಾರ್ಖಂಡ್ ವಿಧಾನಸಭೆಗಳಿಗೆ ನವೆಂಬರ್ 20ಕ್ಕೆ ಮತದಾನ ಪೂರ್ಣಗೊಳ್ಳಲಿದ್ದು, 23ರಂದು ಮತ ಎಣಿಕೆ ನಡೆಯಲಿದ್ದು, ಅಂದೇ ಕರ್ನಾಟಕದ ಮೂರು ವಿಧಾನಸಭಾ ಕ್ಷೇತ್ರಗಳ ಉಪಚುನಾವಣಾ ಮತ ಎಣಿಕೆಯೂ ನಿಗದಿಯಾಗಿದೆ. ಕೇಂದ್ರ ಚುನಾವಣಾ ಆಯೋಗ ಅತ್ಯಂತ ಬಿಗಿ ಬಂದೋಬಸ್ತ್‌ನಲ್ಲಿ ಚುನಾವಣೆ ನಡೆಸಿದ್ದರಿಂದ ಯಾವುದೇ ಅಹಿತಕರ ಘಟನೆಗಳು ನಡೆಯಲಿಲ್ಲ, ಅದರಲ್ಲೂ ಚನ್ನಪಟ್ಟಣ ತುಂಬಾ ಸೂಕ್ಷ್ಮ ಕ್ಷೇತ್ರವಾಗಿದ್ದರಿಂದ ರಾಜ್ಯ ಪೋಲಿಸ್ ಸಿಬ್ಬಂದಿ ಜೊತೆ ಕೇಂದ್ರ ಮೀಸಲು ಪಡೆಯನ್ನೂ ನಿಯೋಜಿಸಲಾಗಿತ್ತು. ಬೆಳಗ್ಗೆಯಿಂದಲೇ ಮತದಾರರು ಮತಗಟ್ಟೆಗಳ ಮುಂದೆ ಸಾಲು ಸಾಲಾಗಿ ನಿಂತು ತಮ್ಮ ಹಕ್ಕು ಚಲಾಯಿಸಿದರು. ಮೂರೂ ಕ್ಷೇತ್ರಗಳಲ್ಲೂ ರಾಜಕೀಯ ಮುಖಂಡರುಗಳ ಕುಟುಂಬ ವರ್ಗದವರೇ ಕಣದಲ್ಲಿ ಇದ್ದಿದ್ದರಿಂದ ಭಾರೀ ಜಿದ್ದಾಜಿದ್ದಿ ಏರ್ಪಟ್ಟಿತ್ತು. ಚನ್ನಪಟ್ಟಣದಲ್ಲಿ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರ ಮೊಮ್ಮಗ ಹಾಗೂ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಪುತ್ರ ನಿಖಿಲ್ ಕುಮಾರಸ್ವಾಮಿ ಕಣಕ್ಕಿಳಿದಿದ್ದರೆ, ಶಿಗ್ಗಾಂವಿಯಲ್ಲಿ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಪುತ್ರ ಭರತ್ ಬೊಮ್ಮಾಯಿ, ಸಂಡೂರಿನಲ್ಲಿ ಸಂಸದ ಇ.ತುಕಾರಾಂ ಪತ್ನಿ ಅನ್ನಪೂರ್ಣ ಕಣದಲ್ಲಿದ್ದರು.

93 ವರ್ಷದ ವಯೋವೃದ್ಧರೂ ಸೇರಿದಂತೆ ಅನೇಕ ವಿಶೇಷ ಚೇತನರು ಮತಗಟ್ಟೆಗಳಿಗೆ ಬಂದು ತಮ್ಮ ಹಕ್ಕು ಚಲಾಯಿಸಿದರು. ಆಡಳಿತ ಮತ್ತು ಪ್ರತಿಪಕ್ಷಗಳಿಗೆ ಪ್ರತಿಷ್ಠೆಯ ಕಣವಾಗಿರುವ ಮೂರೂ ಕ್ಷೇತ್ರಗಳಲ್ಲಿ ಉತ್ಸಾಹದ ಮತದಾನ ಕಂಡುಬಂದಿತು.

ಶಿಗ್ಗಾವಿ ಕ್ಷೇತ್ರದ ಸವಣೂರಿನ ದಂಡಿನಪೇಟೆಯಲ್ಲಿ ಮತದಾನ ಬಹಿಷ್ಕಾರದ ಒಂದೆರಡು ಸಣ್ಣಪುಟ್ಟ ಘಟನೆಗಳನ್ನು ಹೊರತುಪಡಿಸಿ, ಕ್ಷೇತ್ರದ ಮತದಾನ ಬಹುತೇಕ ಶಾಂತಿಯುತವಾಗಿತ್ತು, ಬಿಗಿ ಪೊಲೀಸ್ ಬಂದೋಬಸ್ತ್ ಒದಗಿಸಲಾಗಿತ್ತು.

ರಾಜ್ಯದ ಮಿನಿ ಮಹಾಸಮರ ಎಂದೇ ಪರಿಗಣಿಸಲಾಗಿರುವ ಈ ಉಪಚುನಾವಣೆ ಆಡಳಿತಾರೂಢ ಕಾಂಗ್ರೆಸ್, ಪ್ರತಿಪಕ್ಷಗಳಾದ ಬಿಜೆಪಿ ಮತ್ತು ಜೆಡಿಎಸ್‌ಗೆ ಪ್ರತಿಷ್ಠೆಯ ಕಣಗಳಾಗಿವೆ. ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ಮಹಿಳೆಯರೇ ನಿರ್ವಹಿಸುವ 5 ಸಖಿ ಮತಗಟ್ಟೆ, ಒಂದು ಯುವ ಮತಗಟ್ಟೆ, 1 ದಿವ್ಯಾಂಗರು ನಿರ್ವಹಿಸುವ ಮತದಾನ ಕೇಂದ್ರ, ಒಂದು ವಿಷಯಾಧರಿತ ಮತದಾನ ಕೇಂದ್ರ ಸ್ಥಾಪಿಸಲಾಗಿತ್ತು.

ನವೆಂಬರ್ 23ರಂದು ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಮತ ಎಣಿಕೆ ರಾಮನಗರದ ಸರ್ಕಾರಿ ಎಂಜಿನಿಯರಿಂಗ್ ಕಾಲೇಜಿನಲ್ಲಿ, ಶಿಗ್ಗಾವಿ ಕ್ಷೇತ್ರದ ಮತ ಎಣಿಕೆ ಹಾವೇರಿ ಜಿಲ್ಲೆ ದೇವಗಿರಿಯ ಸರ್ಕಾರಿ ಎಂಜಿನಿಯರಿಂಗ್ ಕಾಲೇಜಿನಲ್ಲಿ, ಸಂಡೂರು ಕ್ಷೇತ್ರದ ಮತ ಎಣಿಕೆ ಬಳ್ಳಾರಿ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ನಡೆದು, ಅಂದೇ ಫಲಿತಾಂಶ ಪ್ರಕಟವಾಗಲಿದೆ.

ಇಡಿ ವಿಚಾರಣೆ

ಮುಖ್ಯಮಂತ್ರಿ ಅವರ ಪತ್ನಿ ಪಾರ್ವತಿ ಪರವಾಗಿ ಮುಡಾಗೆ ಅರ್ಜಿ ಸಲ್ಲಿಸಿದ ದಿನದಿಂದಲೂ 2022ರಲ್ಲಿ ನಿವೇಶನಗಳ ಖಾತೆ ಆಗುವವರೆಗೂ ಕಡತಗಳ ವಿಲೇ ಉಸ್ತುವಾರಿ ನೋಡಿಕೊಂಡಿದ್ದಲ್ಲದೆ, ಅವರೇ ಪಾರ್ವತಿ ಅವರ ಪರವಾಗಿ ಸಹಿ ಮಾಡಿದ್ದರೆಂಬ ಆರೋಪವಿದೆ.

ಈ ಅಧಿಕಾರಿಯನ್ನು ಮುಂದಿಟ್ಟುಕೊಂಡು ಸಿದ್ದರಾಮಯ್ಯ ಅಧಿಕಾರ ದುರ್ಬಳಕೆ ಮಾಡಿಕೊಂಡಿದ್ದಾರೆಂದು ಆರ್‌ಟಿಐ ಕಾರ್ಯಕರ್ತರು ಇ.ಡಿ.ಗೆ ದೂರು ನೀಡಿದ್ದರು.

ಬಿಡಿ ನಿವೇಶನ ಹಂಚಿಕೆ ಹಾಗೂ ಹಣ ವರ್ಗಾವಣೆಗೆ ಸಂಬಂಧಿಸಿದಂತೆ ಇ.ಡಿ. ಈಗಾಗಲೇ ಮುಡಾ ಕಚೇರಿ ಸೇರಿದಂತೆ ಕಂದಾಯ ಇಲಾಖೆಗೆ ಸೇರಿದ ಕೆಲವು ಕಚೇರಿಗಳ ಮೇಲೂ ದಾಳಿ ನಡೆಸಿ ಮಹತ್ತರ ಕಡತಗಳನ್ನು ವಶಕ್ಕೆ ಪಡೆದಿದೆ.

ತದನಂತರ ಮೈಸೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ಆಯುಕ್ತರಾಗಿ ಸೇವೆ ಸಲ್ಲಿಸಿದ್ದ ಇಬ್ಬರು ಅಧಿಕಾರಿಗಳ ಮನೆ ಮತ್ತು ಕಚೇರಿಗಳ ಮೇಲೂ ದಾಳಿ ಮಾಡಿತ್ತು. ಅವರನ್ನಲ್ಲದೆ, ಮುಡಾದ ಕೆಲವು ಕಿರಿಯ ಅಧಿಕಾರಿಗಳನ್ನು ನಗರದ ಕೇಂದ್ರ ಕಚೇರಿಗೆ ಕರೆಸಿ ವಿಚಾರಣೆಗೆ ಒಳಪಡಿಸಿತ್ತು. ಇದೀಗ ನಿವೃತ್ತ ಐಎಎಸ್ ಅಧಿಕಾರಿ ಮತ್ತು ಮುಖ್ಯಮಂತ್ರಿ ಅವರ ಆಪ್ತ ಸಹಾಯಕನ ವಿಚಾರಣೆ ನಡೆಸಿ ಕೆಲವು ಮಾಹಿತಿಗಳನ್ನು ಸಂಗ್ರಹಿಸಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಇದುವರೆಗೆ ಯಾರನ್ನೂ ವಶಕ್ಕೆ ಪಡೆದಿಲ್ಲ, ಬಂಧಿಸಿಯೂ ಇಲ್ಲ.

ಮುಖ್ಯಮಂತ್ರಿಗಳಿಗೆ ಅಭಿನಂದನೆ



ಕೆ.ಆರ್.ಬ್ಯಾಂಕ್ ಅಧ್ಯಕ್ಷರಾಗಿ ಆಯ್ಕೆಯಾದ ಬಸವರಾಜು ಬಸಪ್ಪ ಅವರು ಬುಧವಾರ ಮೈಸೂರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಅಭಿನಂದಿಸಿದರು.

ಮುಲಕನಾಡು ಸಭಾದಲ್ಲಿ ನ.17, ಧಾತ್ರಿ ಹವನ

ಮೈಸೂರು, ನ.13–ನಗರದ ಹುಣಸೂರು ರಸ್ತೆ ವಿಜಯನಗರ 3ನೇ ಹಂತದಲ್ಲಿರುವ ಮುಲಕನಾಡು ಸಭಾದಲ್ಲಿ (ಐಶ್ವರ್ಯ ಪೆಟ್ರೋಲ್ ಬಂಕ್ ಸಮೀಪ) ನ.17ರ ಭಾನುವಾರದಂದು ಸುಹಾಸಿನಿಯರ ಪೂಜೆ ಬೆಳಿಗ್ಗೆ 8.30ಕ್ಕೆ, ಶ್ರೀ ದಾತ್ರಿ ಹವನ ಬೆಳಿಗ್ಗೆ 9 ಗಂಟೆಗೆ, ಸಹಸ್ರ ನಾಮಾರ್ಚನೆ 10.30ಕ್ಕೆ ಏರ್ಪಡಿಸಲಾಗಿದೆ. ಮಾಹಿತಿಗಾಗಿ ಮೊಬೈಲ್ 9845341511, 9916138371 ಸಂಪರ್ಕಿಸಬಹುದು.

ಇಂದಿನಿಂದ 10 ವಾರ ಕಾಲ ಮಕ್ಕಳ ಸ್ನೇಹಿ ಗ್ರಾಪಂ ಅಭಿಯಾನ

ಮೈಸೂರು, ನ.13(ಎಸ್‌ಪಿಎನ್)–ಮಕ್ಕಳ ಹಕ್ಕುಗಳ ರಕ್ಷಣೆಗಾಗಿ 2024ರ ನ.14ರಿಂದ 2025ರ ಜ.24ರವರೆಗೆ ಅಂದರೆ 10 ವಾರಗಳ 'ಮಕ್ಕಳ ಸ್ನೇಹಿ ಗ್ರಾಮ ಪಂಚಾಯ್ತಿ ಅಭಿಯಾನ' ಹಾಗೂ ಗ್ರಾಪಂಗಳಲ್ಲಿ ಒಂದು ದಿನದ ಮಟ್ಟಿಗೆ 'ಮಕ್ಕಳ ವಿಶೇಷ ಗ್ರಾಮ ಸಭೆ' ನಡೆಸುವಂತೆ ಪಂಚಾಯತ್ ರಾಜ್ ಆಯುಕ್ತಾಲಯ ಸುತ್ತೋಲೆ ಹೊರಡಿಸಿದೆ.

ಮಕ್ಕಳ ರಕ್ಷಣೆಗೆ ಸರ್ವಾಗೀಣ ಅಭಿವೃದ್ಧಿಗಾಗಿ ರಾಜ್ಯ ಹಾಗೂ ಕೇಂದ್ರ ಸರ್ಕಾರಗಳು ರೂಪಿಸಿರುವ ಹಲವು ಯೋಜನೆಗಳ ಹಿನ್ನೆಲೆಯಲ್ಲಿ ಮಕ್ಕಳ ಹಕ್ಕುಗಳನ್ನು ರಕ್ಷಿಸುವುದು ಎಲ್ಲರ ಕರ್ತವ್ಯವಾಗಿರುತ್ತದೆ. ವಿಶ್ವ ಸಂಸ್ಥೆಯ ಸುಸ್ಥಿರ ಅಭಿವೃದ್ಧಿ ಗುರಿಗಳು ಹಾಗೂ ಮಕ್ಕಳಿಗೆ ಸಂಬಂಧಿಸಿದ ಸಮಗ್ರ ಅಭಿವೃದ್ಧಿಯ ಅಂಶಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ 'ಮಕ್ಕಳ ಸ್ನೇಹಿ ಮತ್ತು ಮಕ್ಕಳ ಸುರಕ್ಷಿತ' ಪಂಚಾಯತಿಗಳನ್ನಾಗಿಸಲು 2020ರಿಂದ ಪ್ರತಿ ವರ್ಷವೂ 'ಮಕ್ಕಳ ಸ್ನೇಹಿ ಗ್ರಾಮ ಪಂಚಾಯತಿ ಅಭಿಯಾನ'ವನ್ನು ಆಯೋಜಿಸಿ, ಈ ಅವಧಿಯಲ್ಲಿ ಒಂದು ದಿನ ಮಕ್ಕಳ ಗ್ರಾಮ ಸಭೆಯನ್ನು ನಡೆಸಿಕೊಂಡು ಬಂದಿದೆ.

ಹಲವು ಕಾರ್ಯಕ್ರಮಗಳ ಆಯೋಜನೆ: ಮಕ್ಕಳ ಸ್ನೇಹಿ ಗ್ರಾಮ ಪಂಚಾಯ್ತಿಯಾಗಿಸಲು ಮಕ್ಕಳ ಜನನ ನೊಂದಣಿ ಮತ್ತು ಜನನ ಪ್ರಮಾಣ ಪತ್ರಗಳ ವಿತರಣೆ, ಪೌಷ್ಠಿಕ ಆಹಾರ ಕುರಿತು ಮಾರ್ಗದರ್ಶನ ಹಾಗೂ ಜಾಗೃತಿ, ಮಕ್ಕಳಿಗೆ ಚುಚ್ಚು ಮದ್ದು ಪ್ರಾಮುಖ್ಯತೆ, ಮಾನಸಿಕ ಆರೋಗ್ಯ ಪ್ರಾಮುಖ್ಯತೆ. ಮಾನಸಿಕ ಆರೋಗ್ಯ ಸಂಬಂಧಿತ ಕಾರ್ಯಕ್ರಮಗಳು. ಬೇಟಿ ಬಚಾವೋ ಬೇಟಿ ಪಡಾವೋ ಯೋಜನೆಯಡಿ ಕನ್ಯಾ ಶಿಕ್ಷಾ ಪ್ರವೇಶ್ ಉತ್ಸವ್ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು.

ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಮರಳಿ ಶಾಲೆಗೆ ಕರೆ ತರುವುದು. ಶಾಲೆಯಿಂದ ಹೊರಗುಳಿದ ಮಕ್ಕಳಿಗೆ ವಯಸ್ಸಿಗೆ ಅನುಗುಣವಾಗಿ ಕೌಶಲ್ಯ ತರಬೇತಿ ನೀಡುವುದು. ಗ್ರಾಪಂಗಳಲ್ಲಿ ಸ್ಥಳೀಯ ಸಂಸ್ಥೆಗಳು, ಸ್ವಯಂ ಸೇವಾ ಸಂಸ್ಥೆಗಳು, ಗ್ರಾಪಂ ಶಿಕ್ಷಣ ಕಾರ್ಯಪಡೆ ಪುನಂ ಶಾಲೆಗೆ ಸೇರಿಸಲು ಕ್ರಮ ಕೈಗೊಳ್ಳುವಂತೆ ಸೂಚಿಸಿದೆ.

10 ವಾರಗಳ ಕಾಲ ಮಕ್ಕಳ ಕ್ರೀಡಾಕೂಟ. ಮಕ್ಕಳ ಸಾಂಸ್ಕೃತಿಕ ಚಟುವಟಿಕೆಗಳು, ಮಕ್ಕಳಗಿಎ ಕಥೆ ಹೇಳುವ ಕಾರ್ಯಕ್ರಮಗಳು. ಸ್ಥಳೀಯ ಸಾಂಪ್ರದಾಯಿಕ ಆಟೋಟಗಳು ಇತರೆ ಕಾರ್ಯಕ್ರಮಗಳು. ಜಾನಪದ ಗೀತೆಗಳು ಮತ್ತು ರಂಗಭೂಮಿ ಕಾರ್ಯಕ್ರಮಗಳು. ಶೈಕ್ಷಣಿಕ ಮತ್ತು ವೃತ್ತಿಪರ ಮಾರ್ಗದರ್ಶನ. ಚಿತ್ರಕಲೆ ಕಾರ್ಯಕ್ರಮಗಳು ಆಯೋಜಿಸುವಂತೆ ಸೂಚಿಸಿದೆ.


ಫೇಸ್‌ಬುಕ್ ಪೇಜ್: ಮಕ್ಕಳ ವಿಶೇಷ ಗ್ರಾಮ ಪಂಚಾಯ್ತಿಯ ಮಕ್ಕಳ ರಕ್ಷಣೆಯ ಕುರಿತು ಫೇಸ್‌ಬುಕ್ ಪೇಜ್ ರಚಿಸಿ, ಮೂಲಸೌಕರ್ಯ ಹಾಗೂ ಸರ್ಕಾರಿ ಸೇವೆಗಳ ಬಗ್ಗೆ ಜಾಗೃತಿ ಮೂಡಿಸುವುದು. ಗ್ರಾಪಂ ವ್ಯಾಪ್ತಿಯಲ್ಲಿ ಮಕ್ಕಳ ಸಹಾಯವಾಣಿ ಸಂಖ್ಯೆ 1098/112 ಬರೆಯುವುದು.

ಈ ಸಭೆಯಲ್ಲಿ ಮಕ್ಕಳ ಭಾಗವಹಿಸುವಿಕೆಗೆ ಅವಕಾಶ ನೀಡಿ ನ.14ರಿಂದ ರಿಂದ ಜ.24ರವರೆಗೆ ರಾಜ್ಯದ ಎಲ್ಲಾ ಗ್ರಾಪಂಗಳಿಂದ ಗ್ರಾಮ ಮಕ್ಕಳ ಸ್ನೇಹಿ ಗ್ರಾಮ ಪಂಚಾಯತಿ ಅಭಿಯಾನ ಆಯೋಜಿಸುವ ಕುರಿತು ಚರ್ಚಿಸಿ 10 ವಾರಗಳಲ್ಲಿ ಹಮ್ಮಿಕೊಳ್ಳಬೇಕಾದ ಕಾರ್ಯಕ್ರಮಗಳು, ಮಕ್ಕಳ ಸಮಗ್ರ ಅಭಿವೃದ್ಧಿಗೆ ಸಂಬಂಧಿಸಿದಂತೆ ಸಾಧಿಸಬೇಕಾದ ಗುರಿಗಳ ಕುರಿತು ತಾತ್ಕಾಲಿಕ ದಿನಾಂಕಗಳೊಂದಿಗೆ ವಿವರವಾದ ವೇಳಾಪಟ್ಟಿಯನ್ನು ಸಿದ್ದ ಪಡಿಸಿಕೊಳ್ಳುವಂತೆ ಸೂಚಿಸಿದೆ.

ಬಾಲ ಮಿತ್ರ: ಗ್ರಾಮಪಂಚಾಯ್ತಿ ಪೂರ್ವ ಸಿದ್ಧತಾ ಸಭೆಯಲ್ಲಿ ಗ್ರಾಮ ಪಂಚಾಯತಿ ಶಿಕ್ಷಣ ಕಾರ್ಯಪಡೆಯಲ್ಲಿನ ಓರ್ವ ಸದಸ್ಯರನ್ನು 'ಪಂಚಾಯತಿ ಬಾಲಮಿತ್ರ' ಎಂದು ಘೋಷಿಸುವ ಅಂಶವೂ ಸೇರಿದಂತೆ ಒಟ್ಟು 33 ಅಂಶಗಳನ್ನು ಪಟ್ಟಿ ಮಾಡಿ ಪಂಚಾಯತ್ ರಾಜ್ ಆಯುಕ್ತಾಲಯ ನ.12ರಂದು ಸುತ್ತೋಲೆ ಹೊರಡಿಸಿದೆ.


ನಿಧನ

ಚಲುವರಾಜ್



ಮೈಸೂರು: ಸಿದ್ದಲಿಂಗಪುರ ಗ್ರಾಮದ ನಿವಾಸಿ ಚಲುವರಾಜ್ (55) ತೀವ್ರ ಹೃದಯಾಘಾತದಿಂದ ಬುಧವಾರ ಸಂಜೆ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಗುರುವಾರ ಅಂತ್ಯಕ್ರಿಯೆ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ರಾಜುಗೌಡ



ನಂಜನಗೂಡು, ನ.13– ಉಪ್ಪನಹಳ್ಳಿ ನಿವಾಸಿ ರಾಜುಗೌಡ (74) ಬುಧವಾರ ನಿಧನರಾಗಿದ್ದಾರೆ.

ಇವರು ಭಾರತೀಯ ಭೂ ಸೇನೆಯಲ್ಲಿ ಕಾರ್ಯನಿರ್ವಹಿಸಿ ನಿವೃತ್ತರಾಗಿ, ಆನಂತರ ಕರ್ನಾಟಕ ಪೊಲೀಸ್ ಇಲಾಖೆಯಲ್ಲಿ ಸೇವೆ ಸಲ್ಲಿಸಿದ್ದರು. ಮೃತರು ಪತ್ನಿ ಹಾಗೂ ಓರ್ವ ಪುತ್ರಿ, ಇಬ್ಬರು ಪುತ್ರರು, ಮೊಮ್ಮಕ್ಕಳು, ಸೊಸೆಯಂದಿರು ಸೇರಿದಂತೆ ಅಪಾರ ಬಂಧು–ಬಳಗ ಅಗಲಿದ್ದಾರೆ. ಅಂತ್ಯಕ್ರಿಯೆ ಸ್ವಗ್ರಾಮ ಉಪ್ಪನಳ್ಳಿ ಗ್ರಾಮದ ರುದ್ರಭೂಮಿಯಲ್ಲಿ ನೆರವೇರಲಿದೆ.

ಸ್ನೇಹಮಯಿ ಕೃಷ್ಣ ವಿರುದ್ಧ ಎಫ್‌ಐಆರ್ ದಾಖಲು

ಮೈಸೂರು, ನ.13(ಬಿಎಲ್‌ಯು)– ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ನೀಡಿದ ದೂರಿನ ಮೇರೆಗೆ ಮೈಸೂರಿನ ದೇವರಾಜ ಪೊಲೀಸ್ ಠಾಣೆಯಲ್ಲಿ ಆರ್‌ಟಿಐ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ವಿರುದ್ಧ ಎಫ್‌ಐಆರ್ ದಾಖಲಾಗಿದೆ.



ಸ್ನೇಹಮಯಿ ಕೃಷ್ಣ

ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕುಟುಂಬಸ್ಥರನ್ನು ಸ್ನೇಹಮಯಿ ಕೃಷ್ಣ ತೇಜೋವಧೆ ಮಾಡುತ್ತಿದ್ದಾರೆ. ಅಲ್ಲದೆ ಸುಳ್ಳು ಆರೋಪ ಮಾಡುತ್ತಾ ಅಪಪ್ರಚಾರ ಮಾಡುತ್ತಿದ್ದಾರೆ ಎಂದು ನಿನ್ನೆ ದೇವರಾಜ ಪೊಲೀಸ್ ಠಾಣೆಗೆ ಲಕ್ಷ್ಮಣ್ ದೂರು ನೀಡಿದ್ದರು.

ಈ ಪ್ರಕರಣ ಸಂಬಂಧ ದೇವರಾಜ ಪೊಲೀಸರು ಲಕ್ಷ್ಮಣ್‌ಗೆ ಎನ್‌ಸಿಆರ್ ನೀಡಿದ್ದರು. ನಂತರ ಲಕ್ಷ್ಮಣ್ ಮೈಸೂರಿನ 4ನೇ ಜೆಎಂಎಫ್‌ಸಿ ನ್ಯಾಯಾಲಯದಲ್ಲಿ ತನಿಖೆಗೆ ಕೋರಿದ್ದರು. ಈ ಹಿನ್ನೆಲೆಯಲ್ಲಿ ನ್ಯಾಯಾಲಯ ಸ್ನೇಹಮಯಿ ಕೃಷ್ಣ ವಿರುದ್ಧದ ಎಫ್‌ಐಆರ್ ದಾಖಲಿಸಲು ದೇವರಾಜ ಠಾಣೆ ಪೊಲೀಸರಿಗೆ ಸೂಚನೆ ನೀಡಿದೆ.

ನನ್ನ ವಿರುದ್ಧ ಪ್ರಕರಣ ದಾಖಲಿಸಿರುವುದು ನನಗೆ ಅನುಕೂಲವೇ ಆಗಿದೆ

ಸ್ನೇಹಮಯಿ ಕೃಷ್ಣ ಪ್ರತಿಕ್ರಿಯೆ

ಮೈಸೂರು, ನ.13(ಬಿಎಲ್‌ಯು)– ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ನನ್ನ ವಿರುದ್ಧ ಪ್ರಕರಣ ದಾಖಲಿಸಿರುವುದು ನನಗೆ ಅನುಕೂಲವೇ ಆಗಿದೆ ಎಂದು ಆರ್‌ಟಿಐ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ತಿಳಿಸಿದ್ದಾರೆ.

ಮುಡಾ ಹಗರಣದ ಬಗ್ಗೆ ಹೋರಾಟ ಮಾಡುತ್ತಿರುವ ನನ್ನ ವಿರುದ್ಧ ಇಂತಹ ಕ್ರಮ ಕೈಗೊಂಡಿರುವುದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಭಾವವನ್ನು ಮತ್ತೊಮ್ಮೆ ಸ್ಪಷ್ಟಪಡಿಸುತ್ತದೆ. ಇವರ ಪ್ರಭಾವದ ಮತ್ತೊಂದು ಸಾಕ್ಷಿ ಸಿಕ್ಕಿದೆ ಎಂದು ಹೇಳಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ನಿ ಪಾರ್ವತಿ ಅವರ ಕ್ರಯಪತ್ರದ ಮುದ್ರಾಂಕ ಶುಲ್ಕವನ್ನು ತಹಶೀಲ್ದಾರ್ ಪಾವತಿ ಮಾಡಿದ್ದಾರೆ ಎಂದು ಸ್ವತಃ ಲಕ್ಷ್ಮಣ್ ಒಪ್ಪಿಕೊಂಡಿದ್ದಾರೆ. ಈ ಮೂಲಕ ಸಿದ್ದರಾಮಯ್ಯ ಪ್ರಭಾವಕ್ಕೆ ಒಳಗಾದ ತಹಶೀಲ್ದಾರ್ ಹಣ ಪಾವತಿ ಮಾಡಿದ್ದಾರೆ ಎಂಬ ನನ್ನ ಆರೋಪ ನಿಜವೆಂದು ಅವರೇ ಒಪ್ಪಿಕೊಂಡಂತಾಯಿತು. ಆದರೂ ನಾನು ಸುಳ್ಳು ಆರೋಪ ಮಾಡಿದ್ದೇನೆ ಎಂದು ಮೊಕದ್ದಮೆ ದಾಖಲಿಸಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಎಕ್ಸ್ ಖಾತೆಯಲ್ಲಿ ಬಿಡುಗಡೆ ಮಾಡಿರುವ ವಿಡಿಯೋದಲ್ಲಿ ಕೇಳಿ ಬಂದಿರುವ ಧ್ವನಿ ನನ್ನದು ಎಂದು ವಿಧಿ ವಿಜ್ಞಾನ ಪ್ರಯೋಗಾಲಯದಿಂದ ಸಾಬೀತಾದರೆ ನಾನು ನನ್ನ ಹೋರಾಟ ನಿಲ್ಲಿಸುವೆ. ಆ ಧ್ವನಿ ನಿಮ್ಮದಾದರೆ ನೀವು ರಾಜಕೀಯ ನಿವೃತ್ತಿ ಪಡೆಯುವಿರಾ ಎಂದು ಸ್ನೇಹಮಯಿ ಕೃಷ್ಣ ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್‌ಗೆ ಸವಾಲು ಹಾಕಿದರು.

ಈ ಸವಾಲು ಒಪ್ಪಿಕೊಳ್ಳದಿದ್ದರೆ ಆ ಧ್ವನಿ ನನ್ನದು ಎಂಬ ಸತ್ಯ ಒಪ್ಪಿಕೊಳ್ಳಲಾಗದ ಹೇಡಿ ಎಂದು ರಾಜ್ಯದ ಜನತೆ ನಿಮ್ಮ ಬಗ್ಗೆ ತೀರ್ಮಾನಕ್ಕೆ ಬರುತ್ತಾರೆ ಎಂದು ಹೇಳಿದ್ದಾರೆ.

ನಾನು ನೂರು ಕೋಟಿ ರೂಪಾಯಿಗೆ ಬೇಡಿಕೆ ಇಟ್ಟಿದ್ದೇನೆ ಎಂದು ಆರೋಪ ಮಾಡಿದ್ದೀರಾ. ಹಾಗಾದರೆ ನನ್ನ ಪರವಾಗಿ ನೂರು ಕೋಟಿ ಕೇಳಿದ ವ್ಯಕ್ತಿ ಯಾರೆಂದು ತಿಳಿಸಿ ಎಂದು ಸವಾಲು ಹಾಕಿರುವ ಸ್ನೇಹಮಯಿ ಕೃಷ್ಣ, ನನ್ನ ವಿರುದ್ಧ 44 ಪ್ರಕರಣ ದಾಖಲಾಗಿವೆ ಎಂದು ಸಹ ಹೇಳಿದ್ದೀರಿ. ಈ ಪ್ರಕರಣಗಳ ಎಫ್‌ಐಆರ್‌ಗಳನ್ನು ಬಿಡುಗಡೆ ಮಾಡಿ ಎಂದು ಲಕ್ಷ್ಮಣ್‌ಗೆ ಸವಾಲು ಹಾಕಿದರು.

ನನ್ನ ವಿರುದ್ಧ ಮಾಡಿರುವ ಆರೋಪಗಳಿಗೆ ನೀವು ಸಾಕ್ಷಿ ತೋರಿಸಿದರೆ, ನನ್ನ ಹೋರಾಟ ನಿಲ್ಲಿಸುತ್ತೇನೆ. ಇಲ್ಲದಿದ್ದರೆ ನೀವು ರಾಜಕೀಯ ನಿವೃತ್ತಿ ಪಡೆಯುತ್ತೀರಾ ಎಂದು ಮತ್ತೊಮ್ಮೆ ಸವಾಲು ಹಾಕಿದರು. ನನ್ನ ವಿರುದ್ಧ ಸುಳ್ಳು ಆರೋಪ ಮಾಡಿದ ತಕ್ಷಣ ನಾನು ಬ್ಲ್ಯಾಕ್‌ಮೇಲರ್ ಆಗುವುದಿಲ್ಲ. ನನ್ನ ಹೋರಾಟ ಹತ್ತಿಕ್ಕುವ ಸಲುವಾಗಿ ನಿಮ್ಮಂತಹ ರಣಹೇಡಿಗಳು ಸುಳ್ಳು ಆರೋಪ ಮಾಡಿದರೆ ರಾಜ್ಯದ ಜನರು ನಂಬುವುದಿಲ್ಲ. ಜೊತೆಗೆ ನನ್ನ ಹೋರಾಟ ನಿಲ್ಲಿಸುವುದಿಲ್ಲ ಎಂದು ಸ್ನೇಹಮಯಿ ಕೃಷ್ಣ ವಾಗ್ದಾಳಿ ನಡೆಸಿದ್ದಾರೆ.

ಪಕ್ಷೇತರ ಅಭ್ಯರ್ಥಿಯಿಂದ ಚುನಾವಣಾ ಅಧಿಕಾರಿಗೆ ಕಪಾಲಮೋಕ್ಷ!

ಜೈಪುರ: ರಾಜಸ್ಥಾನದ ಡಿಯೋಲಿ–ಉನಿಯಾರಾ ವಿಧಾನಸಭಾ ಉಪ ಚುನಾವಣೆಗೆ ಸ್ಪರ್ಧಿಸಿರುವ ಪಕ್ಷೇತರ ಅಭ್ಯರ್ಥಿಯೊಬ್ಬರು ಏರಿಯಾ ಮ್ಯಾಜಿಸ್ಟ್ರೇಟ್ ಆಗಿ ಚುನಾವಣಾ ಕರ್ತವ್ಯದಲ್ಲಿದ್ದ ಉಪವಿಭಾಗಾಧಿಕಾರಿಗೆ ಕಪಾಲಮೋಕ್ಷ ಮಾಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.



ರಾಜಸ್ಥಾನದ ಏಳು ಕ್ಷೇತ್ರಗಳಿಗೆ ಉಪ ಚುನಾವಣೆ ನಡೆಯಿತು. ಕಾಂಗ್ರೆಸ್ ಬಂಡಾಯ ನಾಯಕ ನರೇಶ್ ಮೀನಾ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿ ಸಿದ್ದು, ಮಾಲ್ಪುರ ಉಪವಿಭಾಗಾಧಿಕಾರಿ ಅಮಿತ್ ಚೌಧರಿ ಅವರ ಕಾಲರ್ ಹಿಡಿದು ಅವರಿಗೆ ಕಪಾಲಮೋಕ್ಷ ಮಾಡಿದ್ದಾರೆ. ಸಾವತ್ರಾವತಾ ಗ್ರಾಮದ ನಿವಾಸಿಗಳು ಉಪಚುನಾವಣೆ ಬಹಿಷ್ಕಾರಿಸುವುದಾಗಿ ಘೋಷಿಸಿದ್ದರು. ಗ್ರಾಮಸ್ಥರಿಗೆ ಪಕ್ಷೇತರ ಅಭ್ಯರ್ಥಿ ನರೇಶ್ ಮೀನಾ ಬೆಂಬಲ ವ್ಯಕ್ತಪಡಿಸಿದರು. ಆದರೆ ಉಪಚುನಾವಣೆಯ ಏರಿಯಾ ಮ್ಯಾಜಿಸ್ಟ್ರೇಟ್ ಚೌಧರಿ ಅವರು ಮತ ಚಲಾಯಿಸುವಂತೆ ಜನರನ್ನು ಮನವೊಲಿಸಲು ಗ್ರಾಮಕ್ಕೆ ಹೋದಾಗ, ಪಕ್ಷೇತರ ಅಭ್ಯರ್ಥಿ ಅವರಿಗೆ ಕಪಾಲಮೋಕ್ಷ ಮಾಡಿದ್ದಾರೆ.

ಸಿಎಂ ಸಿದ್ದರಾಮಯ್ಯಗೆ ಮನವಿ ಸಲ್ಲಿಕೆ...



ನಂಜನಗೂಡಿನಲ್ಲಿ ನಿರ್ಮಿಸಿರುವ ರೈಲ್ವೆ ಮೇಲ್ಸೇತುವೆಗೆ ದಿವಂಗತ ವಿ.ಶ್ರೀನಿವಾಸಪ್ರಸಾದ್ ಅವರ ಹೆಸರನ್ನು ನಾಮಕರಣ ಮಾಡುವಂತೆ ವಿ.ಶ್ರೀನಿವಾಸ ಪ್ರಸಾದ್ ಅಭಿಮಾನಿ ಬಳಗದ ವತಿಯಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಲಾಯಿತು. ಈ ವೇಳೆ ಡಾ.ಯತೀಂದ್ರ ಸಿದ್ದರಾಮಯ್ಯ ಅಭಿಮಾನಿ ಬಳಗದ ಸಂಚಾಲಕ ಭರತ್ ರಾಮಸ್ವಾಮಿ, ಅಧ್ಯಕ್ಷ ಪಿ.ನಂದಕುಮಾರ್, ಕಾರ್ಯದರ್ಶಿ ಡಿ.ವೆಂಕಟರಾಜು, ಉಪಾಧ್ಯಕ್ಷರಾದ ಹೆಚ್.ಜಿ.ರಮೇಶ್, ಸಿ.ಜಿ.ಶಿವಕುಮಾರ್, ಶಾಂತಾರಾಮ್ ಶೆಟ್ಟಿ ಹಾಜರಿದ್ದರು

ಭ್ರಷ್ಟಾಚಾರ ಸಾಬೀತು ಮಾಡಿದರೆ ರಾಜಕೀಯ ನಿವೃತ್ತಿ ತಪ್ಪಿದರೆ ಮೋದಿ ಪ್ರಧಾನಿ ಸ್ಥಾನ ತ್ಯಜಿಸುವರೇ...

ಮೈಸೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸವಾಲು

- 330 ರೂಪಾಯಿ ಪಿಪಿಇ ಕಿಟ್ 2140ಕ್ಕೆ ಖರೀದಿ
- ಬಿಜೆಪಿ ಭ್ರಷ್ಟಾಚಾರದ ಬಗ್ಗೆ ಮೋದಿ ಚಕಾರ ಎತ್ತುತ್ತಿಲ್ಲವೇಕೆ?
- ಗುತ್ತಿಗೆಯಲ್ಲಿ ಮುಸ್ಲಿಂರಿಗೆ ಮೀಸಲಾತಿ ಬಗ್ಗೆ ಚಿಂತನೆ ಇಲ್ಲ
- ನನ್ನ ಪತ್ನಿಗೆ ನೋಟಿಸ್ ನೀಡುವುದು ನಿಮ್ಮ ಬಯಕೆಯೇ



ಪತ್ರಕರ್ತರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ

ಮೈಸೂರು, ನ.13(ಬಿಎಲ್‌ಯು)– ರಾಜ್ಯ ಸರ್ಕಾರದ ಅಬಕಾರಿ ಇಲಾಖೆಯಲ್ಲಿ ಒಂದೇ ಒಂದು ನಯಾ ಪೈಸೆ ಭ್ರಷ್ಟಾಚಾರ ಮಾಡಿರುವುದನ್ನು ಸಾಬೀತು ಮಾಡಿದರೆ ನಾನು ರಾಜಕೀಯದಿಂದ ನಿವೃತ್ತಿಯಾಗುತ್ತೇನೆ; ಸಾಬೀತುಪಡಿಸಲಿಲ್ಲವೆಂದರೆ ನರೇಂದ್ರ ಮೋದಿ ಪ್ರಧಾನಿ ಸ್ಥಾನ ತ್ಯಜಿಸುತ್ತಾರೆಯೇ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸವಾಲು ಹಾಕಿದರು.

ಮೈಸೂರಿನ ಟಿ.ಕೆ.ಬಡಾವಣೆಯ ತಮ್ಮ ನಿವಾಸದಲ್ಲಿ ಇಂದು ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಕರ್ನಾಟಕದಲ್ಲಿ ಭ್ರಷ್ಟಾಚಾರ ನಡೆಯುತ್ತಿದೆ ಎಂದು ಬಿಜೆಪಿ ನಾಯಕರು ಆರೋಪ ಮಾಡುತ್ತಾರೆ. ನರೇಂದ್ರ ಮೋದಿ ಅವರು ಕೂಡ ಇದನ್ನೆ ಪುನರುಚ್ಚಾರ ಮಾಡುತ್ತಾರೆ ಎಂದು ಕಿಡಿಕಾರಿದರು. ಅಬಕಾರಿ ಇಲಾಖೆ ಯಲ್ಲಿ 700 ಕೋಟಿ ರೂಪಾಯಿ ವಸೂಲಿ ಮಾಡಿದ್ದಾರೆ ಎಂದು ಸುಳ್ಳು ಆರೋಪ ಮಾಡುತ್ತಿದ್ದಾರೆ. ಆದರೆ ನಮ್ಮ ಸರ್ಕಾರದಲ್ಲಿ ಒಂದೇ ಒಂದು ಭ್ರಷ್ಟಾಚಾರ ನಡೆದಿಲ್ಲ, ನಡೆಯುವುದಕ್ಕೂ ಬಿಡುವುದಿಲ್ಲ ಎಂದು ಖಂಡತುಂಡಾಗಿ ನುಡಿದರು.

ಕರ್ನಾಟಕ ದೊಡ್ಡ ರಾಜ್ಯವಾದ ಕಾರಣ ನರೇಂದ್ರ ಮೋದಿ ರಾಜ್ಯ ಕಾಂಗ್ರೆಸ್ ಸರ್ಕಾರ ಹಾಗೂ ನನ್ನನ್ನು ಟಾರ್ಗೆಟ್ ಮಾಡಿದ್ದಾರೆ. ಅಲ್ಲದೆ ನಾವು 136 ಸ್ಥಾನ ಗೆದ್ದಿರುವ ಕಾರಣ ಅವರ ಗುರಿ ನಾವೇ ಆಗಿದ್ದೇವೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಬಿಜೆಪಿ ಅವಧಿಯಲ್ಲಿ ನಡೆದ ಕೋವಿಡ್ ಹಗರಣದ ಬಗ್ಗೆ ನರೇಂದ್ರ ಮೋದಿ ಏಕೆ ಚಕಾರ ಎತ್ತುತ್ತಿಲ್ಲ ಎಂದು ಪ್ರಶ್ನಿಸಿದ ಸಿದ್ದರಾಮಯ್ಯ, ಆ ಸಂದರ್ಭದಲ್ಲಿ 330 ರೂಪಾಯಿಗೆ ದೊರೆಯುವ ಪಿಪಿಇ ಕಿಟ್ ಅನ್ನು 2140 ರೂಪಾಯಿಗೆ ಖರೀದಿ ಮಾಡಿದ್ದಾರೆ. ಬಿಜೆಪಿ ಸರ್ಕಾರದ ಅವಧಿಯಲ್ಲಿ ನಡೆದ ವ್ಯಾಪಕ ಭ್ರಷ್ಟಾಚಾರಕ್ಕೆ ಸಂಬಂಧಿಸಿದಂತೆ ರಾಶಿ ರಾಶಿ ದಾಖಲೆಗಳಿವೆ ಎಂದು ದೂರಿದರು.

ನಾಗೇಂದ್ರಗೆ ಸಚಿವ ಸ್ಥಾನ: ವಾಲ್ಮೀಕಿ ಹಗರಣದಲ್ಲಿ ಜೈಲಿಗೆ ಹೋಗಿ, ಜಾಮೀನಿನ ಮೇಲೆ ಬಿಡುಗಡೆಯಾಗಿರುವ ನಾಗೇಂದ್ರ ನನ್ನು ಸಂಪುಟಕ್ಕೆ ಸೇರಿಸಿಕೊಳ್ಳಬೇಕೆಂದು ಒತ್ತಾಯಿಸಿದ್ದಾರೆ. ಆದರೆ ಈ ಬಗ್ಗೆ ಉಪ ಚುನಾವಣೆ ನಂತರ ನೋಡೋಣ ಎಂದು ಹೇಳಿದ್ದೇನೆ. ಆದರೆ ಇದನ್ನು ಸಚಿವ ಸಂಪುಟ ಪುನಾರಚನೆ ಎಂದು ಕರೆಯಬೇಡಿ. ಪುನಾರಚನೆ ಪ್ರಸ್ತಾಪವಿಲ್ಲ ಎಂದು ಸ್ಪಷ್ಟಪಡಿಸಿದರು.

ಮುಸ್ಲಿಂರಿಗೆ ಗುತ್ತಿಗೆ ಕಾಮಗಾರಿಯಲ್ಲಿ ಮೀಸಲಾತಿ: ಸರ್ಕಾರಿ ಗುತ್ತಿಗೆ ಕಾಮಗಾರಿಯಲ್ಲಿ ಮುಸ್ಲಿಂರಿಗೆ ಮೀಸಲಾತಿ ನೀಡುವ ಬಗ್ಗೆ ಪ್ರತಿಕ್ರಿಯೆ ನೀಡಿದ ಸಿದ್ದರಾಮಯ್ಯ, ಈ ಬಗ್ಗೆ ಕೆಲವರು ಬೇಡಿಕೆ ಸಲ್ಲಿಸಿದ್ದಾರೆ. ಆದರೆ ಇನ್ನು ಚಿಂತನೆ ನಡೆದಿಲ್ಲ ಎಂದರು.

ಆದರೆ ಈ ವಿಚಾರವಾಗಿ ಬಿಜೆಪಿಯವರು ಸುಮ್ಮನೆ ಕೋಮುವಾದ ಸೃಷ್ಟಿ ಮಾಡುತ್ತಿದ್ದಾರೆ. ಇದೇ ವಿಷಯವನ್ನು ವಿವಾದವಾಗಿ ಮಾಡುತ್ತಿದ್ದಾರೆ. ಸಮಾಜದಲ್ಲಿ ಶಾಂತಿ–ಸೌಹಾರ್ದತೆ ಕದಡುವುದೇ ಬಿಜೆಪಿಯವರ ಕೆಲಸವಾಗಿದೆ. ಆದ ಕಾರಣ ಈ ವಿಚಾರ ವಿವಾದವಾಗುತ್ತಿದೆಯಷ್ಟೆ ಎಂದು ಸಿದ್ದರಾಮಯ್ಯ ಕಿಡಿಕಾರಿದರು.

ಮುಡಾ ಹಗರಣದ ಬಗ್ಗೆ ಇಡಿ ತನಿಖೆ ನಡೆಸುತ್ತಿರುವ ಬಗ್ಗೆ ನಾನು ಪ್ರತಿಕ್ರಿಯೆ ನೀಡುವುದಿಲ್ಲ. ಅವರು ಯಾರನ್ನೆ ಕರೆಸಲಿ, ಯಾರನ್ನೆ ವಿಚಾರಣೆ ಮಾಡಲಿ, ಅದು ಅವರ ತನಿಖಾ ಕ್ರಮ ಎಂದರು.

ಇಡಿ ಮತ್ತು ಲೋಕಾಯುಕ್ತ ತನಿಖೆಗಳು ಸುಳ್ಳು ಕೇಸಿನ ಮೇಲೆ ನಡೆಯುತ್ತಿರುವ ತನಿಖೆಯಾದ ಕಾರಣ ನಾನೇಕೆ ಪ್ರತಿಕ್ರಿಯೆ ನೀಡಲಿ ಎಂದು ಹೇಳಿದರು.

ನಿಮ್ಮ ಪತ್ನಿ ಪಾರ್ವತಿ ಅವರಿಗೆ ಇಡಿ ನೋಟಿಸ್ ನೀಡಿದೆಯೇ ಎಂಬ ಪ್ರಶ್ನೆಗೆ ಕೋಪೋದ್ರಿಕ್ತರಾದ ಸಿದ್ದರಾಮಯ್ಯ, ನಿಮಗೇನಾದರೂ ಇಡಿಯವರು ಹೇಳಿದ್ದಾರೆಯೇ, ನೋಟಿಸ್ ನೀಡಲಿ ಎಂಬುದು ನಿಮ್ಮ ಬಯಕೆಯೇ ಎಂದು ಪ್ರಶ್ನಿಸಿದರು.

ಪೊಲೀಸರ ಮೇಲೆ ಹರಿಹಾಯ್ದ ಸಿಎಂ...!

ಪತ್ರಕರ್ತರ ಜೊತೆ ಮಾತನಾಡುವಾಗ ತಮ್ಮ ಹಿಂದೆ ನಿಂತಿದ್ದ ಕಾಂಗ್ರೆಸ್ ಕಾರ್ಯಕರ್ತನನ್ನು ಹಿಡಿದು ಎಳೆದ ಪೊಲೀಸರ ಮೇಲೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹರಿಹಾಯ್ದ ಘಟನೆ ಇಂದು ನಡೆಯಿತು.

ಸಿದ್ದರಾಮಯ್ಯ ಹಿಂದೆ ಕಾಂಗ್ರೆಸ್ ಕಾರ್ಯಕರ್ತರೊಬ್ಬರು ನಿಂತಿದ್ದರು. ಅವರನ್ನು ಕರೆದೊಯ್ಯುವಂತೆ ಮುಖ್ಯಮಂತ್ರಿಗಳ ಭದ್ರತಾ ಅಧಿಕಾರಿ ಸ್ಥಳೀಯ ಪೊಲೀಸರಿಗೆ ಸೂಚಿಸಿದರು. ಈ ಸಂದರ್ಭದಲ್ಲಿ ಆ ಕಾಂಗ್ರೆಸ್ ಕಾರ್ಯಕರ್ತರ ಕೈ ಹಿಡಿದು ಎಳೆದಾಗ ಅವರು ಪೊಲೀಸರ ಜೊತೆ ವಾಗ್ವಾದಕ್ಕಿಳಿದರು. ಈ ವೇಳೆ ತಮ್ಮ ಹಿಂದೆಯೇ ನಡೆಯುತ್ತಿದ್ದ ಗದ್ದಲ ನೋಡಿ ಕೋಪೋದ್ರಿಕ್ತರಾದ ಸಿದ್ದರಾಮಯ್ಯ ನಾಲಿಗೆ ಕಚ್ಚಿ, ಏರು ಧ್ವನಿಯಲ್ಲಿ ಪೊಲೀಸರ ಮೇಲೆ ಹರಿಹಾಯ್ದರು.

ತಮ್ಮ ಕೋಪ ನೋಡಿ ಎಲ್ಲರೂ ಸ್ತಬ್ಧರಾದ ನಂತರ ಸಿದ್ದರಾಮಯ್ಯ ಮಾತು ಮುಂದುವರೆಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಅಹವಾಲು ಸಲ್ಲಿಸಲು ಬೆಳಿಗ್ಗೆ 8 ಗಂಟೆಯಿಂದ ಜನರು ಕಾಯುತ್ತಿದ್ದರು. 11.30 ಗಂಟೆಗೆ ಮನೆಯಿಂದ ಹೊರಗೆ ಬಂದ ಅವರು ಪ್ರತಿಯೊಬ್ಬರಿಂದಲೂ ಅಹವಾಲು ಸ್ವೀಕರಿಸಿದರು. ವಿಧಾನಪರಿಷತ್ ಸದಸ್ಯ ಡಾ.ಯತೀಂದ್ರ ಕೂಡ ಅವರಿಗೆ ಸಾಥ್ ನೀಡಿದರು.

ಬಂಡೀಪುರದಲ್ಲಿ ರಾತ್ರಿ ಸಂಚಾರ ನಿಷೇಧ ತೆರವು ಇಲ್ಲ



ಬಂಡೀಪುರದಲ್ಲಿ ರಾತ್ರಿ ಸಂಚಾರ ನಿಷೇಧ ತೆರವು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದರು. ಬಂಡೀಪುರದಲ್ಲಿ ರಾತ್ರಿ ಸಂಚಾರ ನಿಷೇಧ ತೆರವು ಮಾಡುವುದಾಗಿ ಡಿ.ಕೆ.ಶಿವಕುಮಾರ್ ಹೇಳಿಕೆಗೆ ಪ್ರತಿಕ್ರಿಯೆ ನೀಡಿದ ಸಿದ್ದರಾಮಯ್ಯ, ಇಂತಹ ಯಾವುದೇ ಪ್ರಸ್ತಾವನೆ ಹಾಗೂ ಮಾತುಕತೆ ಸರ್ಕಾರದ ಮುಂದಿಲ್ಲ ಎಂದು ತಿಳಿಸಿದರು. ಆದರೆ ಈ ವಿಚಾರವಾಗಿ ಡಿ.ಕೆ.ಶಿವಕುಮಾರ್ ಯಾವ ಅರ್ಥದಲ್ಲಿ ಹೇಳಿದ್ದಾರೋ ಎಂಬುವುದನ್ನು ಅವರ ಬಳಿಯೇ ಕೇಳಿ ಎಂದರು.

ಬಂಡೀಪುರದಲ್ಲಿ ರಾತ್ರಿ ಸಂಚಾರ ನಿಷೇಧ ತೆರವು ಮಾಡುವುದಾಗಿ ಕೇರಳ ರಾಜ್ಯದವರಿಗೆ ಭರವಸೆ ನೀಡಿದ್ದ ಡಿ.ಕೆ.ಶಿವಕುಮಾರ್ ಹೇಳಿಕೆ ರಾಜ್ಯಾದ್ಯಂತ ತೀವ್ರ ಚರ್ಚೆಗೆ ಗ್ರಾಸವಾಗಿತ್ತು. ಪರಿಸರವಾದಿಗಳಿಂದ ಇದಕ್ಕೆ ತೀವ್ರ ವಿರೋಧವೂ ವ್ಯಕ್ತವಾಗಿತ್ತು. ಆದರೆ ಈಗ ರಾತ್ರಿ ಸಂಚಾರ ನಿಷೇಧ ತೆರವು ಮಾಡುವುದಿಲ್ಲ ಎಂದು ಸಿದ್ದರಾಮಯ್ಯ ಹೇಳುವ ಮೂಲಕ ವಿವಾದಕ್ಕೆ ತೆರೆ ಎಳೆದಿದ್ದಾರೆ.

ಕುಮಾರಸ್ವಾಮಿ, ಜಮೀರ್ ಥಿಕ್ ಅಂಡ್ ಥಿನ್ ಫ್ರೆಂಡ್ಸ್

ಹೆಚ್.ಡಿ.ಕುಮಾರಸ್ವಾಮಿ ಮತ್ತು ಜಮೀರ್ ಅಹಮ್ಮದ್ ಥಿಕ್ ಅಂಡ್ ಥಿನ್ ಫ್ರೆಂಡ್ಸ್ ಆಗಿದ್ದರು. ಅವರವರ ನಡುವೆ ಏನೇನೊ ನಡೆಯುತ್ತಿರುತ್ತದೆ ಬಿಡಿ ಎಂದು ಸಿದ್ದರಾಮಯ್ಯ ಹೇಳಿದರು. ಕುಮಾರಸ್ವಾಮಿ ಅವರನ್ನು ಕರಿಯ ಎಂದು ಕರೆದ ಜಮೀರ್ ಅಹಮ್ಮದ್ ಹೇಳಿಕೆಗೆ ಪ್ರತಿಕ್ರಿಯೆ ನೀಡಿದ ಸಿದ್ದರಾಮಯ್ಯ, ಹೆಚ್.ಡಿ.ದೇವೇಗೌಡರು ನನ್ನ ಸೊಕ್ಕು ಮುರಿಯುತ್ತೇನೆ, ಗರ್ವಭಂಗ ಮಾಡುತ್ತೇನೆ ಎಂದು ಹೇಳಿದ್ದರು. ಇದು ಸರಿಯೇ, ಇದನ್ನೆಲ್ಲಾ ನೀವು ಬರೆದಿದ್ದೀರಾ.

ಕುಮಾರಸ್ವಾಮಿಯನ್ನು ಆ ರೀತಿ ಕರೆದಿರುವ ಬಗ್ಗೆ ಈಗಾಗಲೇ ಜಮೀರ್ ಅಹಮ್ಮದ್ ಸ್ಪಷ್ಟನೆ ನೀಡಿದ್ದಾರೆ. ಆದರೆ ಇಂತಹ ಯಾವುದೇ ಹೇಳಿಕೆ ಉಪ ಚುನಾವಣೆ ಮೇಲೆ ಯಾವುದೇ ರೀತಿಯಲ್ಲೂ ಪರಿಣಾಮ ಬೀರುವುದಿಲ್ಲ ಎಂದು ತಿಳಿಸಿದರು. ರಾಜ್ಯದ ಮೂರು ಕ್ಷೇತ್ರದ ಉಪ ಚುನಾವಣೆಯಲ್ಲಿ ನಾನು ನೋಡಿದ ಹಾಗೆ ಕಾಂಗ್ರೆಸ್‌ಗೆ ಮೂರು ಕ್ಷೇತ್ರದಲ್ಲೂ ಉತ್ತಮ ವಾತಾವರಣವಿದೆ. ನಮ್ಮ ಗೆಲವು ಖಚಿತ ಎಂದು ಸಿದ್ದರಾಮಯ್ಯ ವಿಶ್ವಾಸ ವ್ಯಕ್ತಪಡಿಸಿದರು.

ಟ್ರಕ್ ಡಿಕ್ಕಿ; ಬೈಕ್ ಹಿಂಬದಿ ಕುಳಿತಿದ್ದ ಮಹಿಳೆ ಸಾವು

ಮೈಸೂರು,ನ.13(ಪಿಎಂ)– ಟ್ರಕ್ ಡಿಕ್ಕಿ ಹೊಡೆದ ಪರಿಣಾಮ ದ್ವಿಚಕ್ರ ವಾಹನದ ಹಿಂಬದಿ ಕುಳಿತಿದ್ದ ಮಹಿಳೆ ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ಬುಧವಾರ ಮಧ್ಯಾಹ್ನ ಮೈಸೂರು ರಿಂಗ್ ರಸ್ತೆಯ ಸಾತಗಳ್ಳಿ ಜಂಕ್ಷನ್‌ನಲ್ಲಿ ಸಂಭವಿಸಿದೆ.

ಮಂಡ್ಯ ಜಿಲ್ಲೆ ಮಳವಳ್ಳಿ ತಾಲೂಕಿನ ಕಿರುಗಾವಲು ಹೋಬಳಿಯ ಹಣಕೊಳ ಗ್ರಾಮದ ರಾಜೇಶ್ವರಿ (42) ಅಪಘಾತದಲ್ಲಿ ಸಾವನ್ನಪ್ಪಿದವರು. ಇವರು ಹೀರೋ ಹೋಂಡಾ ಸ್ಪ್ಲೆಂಡರ್ ಬೈಕ್‌ನಲ್ಲಿ (ಕೆಎ–11, ಇಎಫ್–9506) ತಮ್ಮ ಅಣ್ಣ ಸುಂದರಪ್ಪ (45) ಅವರೊಂದಿಗೆ ತೆರಳುತ್ತಿದ್ದ ವೇಳೆ ಅಪಘಾತ ಸಂಭವಿಸಿದೆ. ಮೈಸೂರು ರಿಂಗ್ ರಸ್ತೆಯಲ್ಲಿ ಎನ್‌ಹೆಚ್ ಆಸ್ಪತ್ರೆ ಕಡೆಯಿಂದ ವಿಟಿಯು ಕಾಲೇಜು ಮಾರ್ಗದತ್ತ ಸಾಗುತ್ತಿದ್ದ ಟ್ರಕ್ (ಆರ್‌ಜೆ–27, ಜಿಡಿ 1435), ರಾಜೇಶ್ವರಿ ಮತ್ತು ಸುಂದರಪ್ಪ ಅವರ ಬೈಕಿಗೆ ಸಾತಗಳ್ಳಿ ಜಂಕ್ಷನ್‌ನಲ್ಲಿ ಡಿಕ್ಕಿ ಹೊಡೆದಿದೆ. ಪರಿಣಾಮ ತಲೆಗೆ ತೀವ್ರತರ ಪೆಟ್ಟು ಬಿದ್ದ ಹಿನ್ನೆಲೆಯಲ್ಲಿ ರಾಜೇಶ್ವರಿ ಸ್ಥಳದಲ್ಲೇ ಸಾವನ್ನಪ್ಪಿದರೆ, ಸ್ವಲ್ಪ ದೂರದವರೆಗೆ ಬೈಕ್ ಸಮೇತ ಸುಂದರಪ್ಪ ಅವರನ್ನು ಟ್ರಕ್ ಎಳೆದೊಯ್ದಿದೆ. ಪ್ರಾಣಾಪಾಯದಿಂದ ಪಾರಾದ ಸುಂದರಪ್ಪ, ಗಾಯಗೊಂಡು ಮೈಸೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಮೈಸೂರಿನ ತಿ.ನರಸೀಪುರ ರಸ್ತೆಯಲ್ಲಿ ಏರ್ಪಾಡಾಗಿದ್ದ ಗೃಹ ಪ್ರವೇಶಕ್ಕೆ ಸುಂದರಪ್ಪ ಮತ್ತು ರಾಜೇಶ್ವರಿ ಹೋಗುತ್ತಿದ್ದಾಗ ಈ ದುರಂತ ಸಂಭವಿಸಿದೆ. ರಾಜೇಶ್ವರಿಯವರ ಮೃತದೇಹ ವನ್ನು ಮೈಸೂರು ವೈದ್ಯಕೀಯ ಕಾಲೇಜಿನ ಶವಾಗಾರದಲ್ಲಿ ಇರಿಸಲಾಗಿದ್ದು, ಪ್ರಕರಣ ದಾಖಲಿಸಿಕೊಂಡಿರುವ ಸಿದ್ಧಾರ್ಥನಗರ ಸಂಚಾರ ಪೊಲೀಸ್ ಠಾಣೆ ಪೊಲೀಸರು, ನಾಳೆ ಮರಣೋತ್ತರ ಪರೀಕ್ಷೆ ಬಳಿಕ ಮೃತದೇಹ ವನ್ನು ವಾರಸುದಾರರಿಗೆ ಒಪ್ಪಿಸುವುದಾಗಿ ಎಂದು ತಿಳಿಸಿದರು.

ಬಯೋ ಸಿಂಥೆಟಿಕ್ ಆಯಿಲ್ ಟ್ಯಾಂಕ್‌ನಲ್ಲಿ ಅಗ್ನಿ ಅವಘಡ

- ಕೆಆರ್‌ಎಸ್ ರಸ್ತೆಯ ಮೈಸೂರು–ಬೆಳಗೊಳ ಕೈಗಾರಿಕಾ ಪ್ರದೇಶದಲ್ಲಿ ದುರಂತ
- ಅಂದಾಜು 10 ಲಕ್ಷ ರೂ. ನಷ್ಟ
- ಯಾವುದೇ ಪ್ರಾಣಾಪಾಯವಿಲ್ಲ

ಮೈಸೂರು, ನ.13(ಪಿಎಂ)– ಕೆಆರ್‌ಎಸ್ ರಸ್ತೆಯ ಮೈಸೂರು–ಬೆಳಗೊಳ ಕೈಗಾರಿಕಾ ಪ್ರದೇಶದ ಬಯೋ ಸಿಂಥೆಟಿಕ್ ಆಯಿಲ್‌ನ ಅಂಡರ್‌ಗ್ರೌಂಡ್ ಟ್ಯಾಂಕ್‌ನಲ್ಲಿ ಬೆಂಕಿ ಕಾಣಿಸಿಕೊಂಡು ಆತಂಕ ಸೃಷ್ಟಿಯಾಗಿದ್ದ ಘಟನೆ ಬುಧವಾರ ನಡೆದಿದೆ.

ಇಲ್ಲಿನ ಎಂಜಿಎಂ ಫೋರ್ಜಿಂಗ್ಸ್ ಭಾರತ್ ಪ್ರೈವೇಟ್ ಲಿಮಿಟೆಡ್ ಕಂಪನಿಗೆ ಸೇರಿದ ಎಂಎಸ್ ಟ್ಯಾಂಕ್‌ನಲ್ಲಿ ಈ ಬೆಂಕಿ ಅವಘಡ ಸಂಭವಿಸಿದೆ. 45 ಕೆಎಲ್ ಸಾಮರ್ಥ್ಯದ ಆಯಿಲ್ ಅಂಡರ್‌ಗ್ರೌಂಡ್ ಟ್ಯಾಂಕ್ ಇದಾಗಿದ್ದು, ಬೆಂಕಿ ಅನಾಹುತದಿಂದ ಇದರಲ್ಲಿ ಶೇಖರಣೆ ಮಾಡಿದ್ದ 25 ಕೆಎಲ್ ಬಯೋ ಸಿಂಥೆಟಿಕ್ ಆಯಿಲ್ ಸಂಪೂರ್ಣವಾಗಿ ಆವಿಯಾಗಿದೆ.

ಇದರಿಂದ ಸುಮಾರು 10 ಲಕ್ಷ ರೂ.ವರೆಗೆ ನಷ್ಟ ಉಂಟಾಗಿದೆ ಎಂದು ಕಂಪನಿ ಪ್ರತಿನಿಧಿಗಳು ನೀಡಿದ ಮಾಹಿತಿ ಆಧಾರದಲ್ಲಿ ಅಗ್ನಿಶಾಮಕ ಅಧಿಕಾರಿಗಳಿಂದ ಅಂದಾಜಿಸಲಾಗಿದೆ. ಸದರಿ ಟ್ಯಾಂಕ್ ಹತ್ತಿರ ಸಾರ್ವಜನಿಕರ ಪ್ರವೇಶವನ್ನು ನಿರ್ಬಂಧಿಸಿರುವ ಕಾರಣ ಬೆಂಕಿ ಅನಾಹುತದ ಸಂದರ್ಭದಲ್ಲಿ ಯಾವುದೇ ಪ್ರಾಣಾಪಾಯ ಉಂಟಾಗಿಲ್ಲ.



ಬೆಂಕಿ ನಂದಿಸುವ ಕಾರ್ಯಾಚರಣೆ ನಡೆಸುತ್ತಿರುವ ಅಗ್ನಿಶಾಮಕ ಅಧಿಕಾರಿ, ಸಿಬ್ಬಂದಿ.

ಬಯೋ ಸಿಂಥೆಟಿಕ್ ಆಯಿಲ್ ಲೀಕ್ ಆಗಿದ್ದು, ಈ ವೇಳೆ ಆಯಿಲ್ ಟ್ಯಾಂಕ್ ಬಳಿಯಲ್ಲಿದ್ದ ವಿದ್ಯುತ್ ಕೇಬಲ್‌ಗಳಿಂದ ಶಾರ್ಟ್‌ಸರ್ಕ್ಯೂಟ್ ಉಂಟಾಗಿ ಈ ಅಗ್ನಿ ಅವಘಡ ಸಂಭವಿಸಿರುವ ಶಂಕೆ ವ್ಯಕ್ತವಾಗಿದೆ. ಹೆಬ್ಬಾಳ, ಆರ್‌ಬಿಐ ಹಾಗೂ ಸರಸ್ವತಿಪುರಂ ಅಗ್ನಿಶಾಮಕ ಠಾಣೆ ವಾಹನಗಳೊಂದಿಗೆ ಸ್ಥಳಕ್ಕೆ ಧಾವಿಸಿದ ಅಗ್ನಿಶಾಮಕ ಅಧಿಕಾರಿ ಮತ್ತು ಸಿಬ್ಬಂದಿ ಸಂಪೂರ್ಣವಾಗಿ ಬೆಂಕಿ ನಂದಿಸುವಲ್ಲಿ ಯಶಸ್ವಿಯಾದರು.

ಮೈಸೂರು ಪ್ರಾಂತ್ಯ ಮುಖ್ಯ ಅಗ್ನಿಶಾಮಕ ಅಧಿಕಾರಿ ಪಿ.ಎಸ್.ಜಯರಾಮಯ್ಯ ಅವರ ಮಾರ್ಗದರ್ಶನದಲ್ಲಿ ಪ್ರಾದೇಶಿಕ ಅಗ್ನಿಶಾಮಕ ಅಧಿಕಾರಿ ಸಿ.ಚಂದನ್, ಜಿಲ್ಲಾ ಅಗ್ನಿಶಾಮಕ ಅಧಿಕಾರಿ ಗಳಾದ ಗಂಗಾನಾಯಕ್, ಕೆ.ಎಸ್.ರಮೇಶ್, ಹೆಬ್ಬಾಳು ಅಗ್ನಿಶಾಮಕ ಠಾಣಾಧಿಕಾರಿ ಹೆಚ್.ಎಸ್.ಸಂತೋಷ್ ಹಾಗೂ ಸಿಬ್ಬಂದಿ ಬೆಂಕಿ ನಂದಿಸುವ ಕಾರ್ಯಾಚರಣೆ ನಡೆಸಿದರು.

ನಾಳೆ ಶನಿ ಮಹಾಶಾಂತಿ

ಮೈಸೂರು,ನ.13–ಮೈಸೂರಿನ ದೇವರಾಜ ಮೊಹಲ್ಲಾದಲ್ಲಿರುವ ಶ್ರೀ ಅಮೃತೇಶ್ವರ ದೇವಸ್ಥಾನದಲ್ಲಿ ನ.15ರಂದು ಶುಕ್ರವಾರ ಹುಣ್ಣಿಮೆ ಪ್ರಯುಕ್ತ ಕರ್ಕಾಟಕ, ತುಲಾ, ಮಕರ, ಕುಂಭ, ಮೀನ ರಾಶಿಯವರಿಗೆ ಶನಿ ಮಹಾಶಾಂತಿ ಮತ್ತು ಬಾಧಾ ನಿವಾರಕ ಸುದರ್ಶನ ಹೋಮ, ಮಹಾ ಮೃತ್ಯುಂಜಯ ಹೋಮ, ಕುಜ ದೋಷ ನಿವೃತ್ತಿ ಶಾಂತಿ, ರಾಹು ಕೇತು ಶಾಂತಿ, ಅಲ್ಲದೆ ಶ್ರೀ ದತ್ತಾತ್ರೇಯ ಮತ್ತು ರುಕುಮಾಬಾಯಿ, ವಿಠೋಬಾ ಪುರ್ನಪ್ರತಿಷ್ಠಾಪನೆ ನೆರವೇರುತ್ತದೆ. ಬೆಳಗ್ಗೆ 9.30ಗೆ ಪ್ರಾರಂಭವಾಗಿ 12.30ಕ್ಕೆ ಪೂರ್ಣಾಹುತಿ, ಮಹಾಮಂಗಳಾರತಿ ಏರ್ಪಡಿಸಲಾಗಿದೆ.



'ಮಾರನಾಯಕ' ನಾಟಕ ಪ್ರದರ್ಶನ....

ರಂಗಭೀಷ್ಮ ಬಿ.ವಿ.ಕಾರಂತ ಕಾಲೇಜು ರಂಗೋತ್ಸವದ ಪ್ರಯುಕ್ತ ಮೈಸೂರು ರಂಗಾಯಣದ ಭೂಮಿಗೀತದಲ್ಲಿ ಬುಧವಾರ ಮೈಸೂರಿನ ಎಂಎಂಕೆ ಮತ್ತು ಎಸ್‌ಡಿಎಂ ಮಹಿಳಾ ಕಾಲೇಜು ವಿದ್ಯಾರ್ಥಿನಿಯರು 'ಮಾರನಾಯಕ' ನಾಟಕ ಪ್ರದರ್ಶಿಸಿದರು.

ದೇಶ - ವಿದೇಶ

ಸಿಂಧೂ ನದಿಗೆ ಉರುಳಿ ಬಿದ್ದ ಬಸ್: 16 ಮಂದಿ ಸಾವು

ಪೇಶಾವರ: ಪಾಕಿಸ್ತಾನದ ಗಿಲ್ಗಿಟ್–ಬಾಲ್ಟಿಸ್ತಾನ್ ಪರ್ವತ ಪ್ರದೇಶದಲ್ಲಿ ಮದುವೆಗೆ ಅತಿಥಿಗಳನ್ನು ಕರೆದೊಯ್ಯುತ್ತಿದ್ದ ಬಸ್ ಸಿಂಧೂ ನದಿಗೆ ಬಿದ್ದ ಪರಿಣಾಮ ಕನಿಷ್ಠ 16 ಮಂದಿ ಸಾವನ್ನಪ್ಪಿದ್ದು, ಓರ್ವ ಮಹಿಳೆ ಗಾಯಗೊಂಡಿದ್ದಾರೆ.



ಡೈಮರ್ ಜಿಲ್ಲೆಯಲ್ಲಿ ಈ ಘಟನೆ ನಡೆದಿದೆ. ಬಸ್ ಅಸ್ಟೋರ್‌ನಿಂದ ಪಂಜಾಬ್‌ನ ಚಕ್ವಾಲ್ ಜಿಲ್ಲೆಗೆ ತೆರಳುತ್ತಿದ್ದಾಗ ಟೆಲ್ಚಿ ಸೇತುವೆಯಿಂದ ನದಿಗೆ ಬಿದ್ದಿದೆ. 16 ಮೃತದೇಹಗಳನ್ನು ವಶಕ್ಕೆ ಪಡೆಯಲಾಗಿದೆ ಎಂದು ಡೈಮರ್ ಹಿರಿಯ ಪೊಲೀಸ್ ಅಧೀಕ್ಷಕ ಶೇರ್ ಖಾನ್ ಖಚಿತಪಡಿಸಿದ್ದಾರೆ. ಉಳಿದ ವ್ಯಕ್ತಿಗಳಿಗಾಗಿ ಹುಡುಕಾಟ ಮುಂದುವರೆದಿದೆ ಎಂದು ಖಾನ್ ಹೇಳಿರುವುದಾಗಿ ವಧುವಿನ ಕಡೆಯ ಮಹಿಳೆಯೊಬ್ಬರು ಗಾಯಗೊಂಡಿದ್ದು, ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಆದರೆ, 22 ಮಂದಿ ನೀರಿನಲ್ಲಿ ಮುಳುಗಿದ್ದು, ಒಬ್ಬರನ್ನು ರಕ್ಷಿಸಲಾಗಿದೆ. ಪಂಜಾಬ್‌ನ ಚಕ್ವಾಲ್ ಜಿಲ್ಲೆಯಿಂದ ಆಸ್ಟೋರ್‌ಗೆ ಮದುವೆಗೆ ಅತಿಥಿಗಳನ್ನು ಕರೆದೊಯ್ಯುತ್ತಿದ್ದ ಬಸ್ ಡೈಮರ್ ಜಿಲ್ಲೆಯ ಮಿತಿಯಲ್ಲಿರುವ ಟೆಲ್ಚಿ ಸೇತುವೆಯಿಂದ ಸಿಂಧೂ ನದಿಗೆ ಬಿದ್ದಿದೆ ಎಂದು 1122 ರಕ್ಷಣಾ ತಂಡದ ವಕ್ತಾರ ಶೌಕತ್ ರಿಯಾಜ್ ತಿಳಿಸಿದ್ದಾರೆ.

ವೈದ್ಯರಿಗೆ ಚಾಕುವಿನಿಂದ 7 ಬಾರಿ ಇರಿದ ರೋಗಿಯ ಮಗ

ಚೆನ್ನೈ: ಚೆನ್ನೈನ ಸರ್ಕಾರಿ ಆಸ್ಪತ್ರೆಯಲ್ಲಿ ರೋಗಿಯ ಮಗ ವೈದ್ಯರ ಮೇಲೆ ಚಾಕುವಿನಿಂದ ಹಲವಾರು ಬಾರಿ ಇರಿದು ಹಲ್ಲೆ ನಡೆಸಿದ್ದಾನೆ. ಗಂಭೀರ ಗಾಯಗೊಂಡಿರುವ ವೈದ್ಯರ ಸ್ಥಿತಿ ಚಿಂತಾಜನಕವಾಗಿದ್ದು, ಅವರನ್ನು ತುರ್ತು ಚಿಕಿತ್ಸಾ ಘಟಕದಲ್ಲಿ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ತಿಳಿದು ಬಂದಿದೆ.



ಚೆನ್ನೈ ಪೊಲೀಸರ ಹೇಳಿಕೆ ಪ್ರಕಾರ ವೈದ್ಯರ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿದ ವ್ಯಕ್ತಿಯ ಹೆಸರು ವಿಘ್ನೇಶ್ ಎಂದು. ಆರೋಪಿ ವಿಘ್ನೇಶ್ ಚೆನ್ನೈ ನಿವಾಸಿಯಾಗಿದ್ದು, ಆತನ ತಾಯಿ ಕಲೈಂಜರ್ ಸೆಂಟಿನರಿ ಆಸ್ಪತ್ರೆಯ ಕ್ಯಾನ್ಸರ್ ವಾರ್ಡ್‌ನಲ್ಲಿ ಚಿಕಿತ್ಸೆಗಾಗಿ ದಾಖಲಾಗಿದ್ದರು. ಡಾ.ಬಾಲಾಜಿ ಅವರನ್ನೂ ಕಲೈಂಜರ್ ಸೆಂಟಿನರಿ ಆಸ್ಪತ್ರೆಯ ಇದೇ ವಾರ್ಡ್‌ನಲ್ಲಿ ಕರ್ತವ್ಯಕ್ಕೆ ನಿಯೋಜಿಸಲಾಗಿತ್ತು. ಆದರೆ ಬುಧವಾರ ವೈದ್ಯರು ಕೆಲಸ ಮಾಡುತ್ತಿದ್ದ ವೇಳೆ ವಿಘ್ನೇಶ್ ಬಂದು ಏಕಾಏಕಿ ಚಾಕುವಿನಿಂದ ಹಲ್ಲೆ ನಡೆಸಿದ್ದಾನೆ. ಹಲ್ಲೆ ನಡೆಸಿದ ಬಳಿಕ ಆರೋಪಿ ಯುವಕ ಓಡಿಹೋಗಲು ಯತ್ನಿಸಿದ್ದು, ಆಗ ಆಸ್ಪತ್ರೆ ಸಿಬ್ಬಂದಿ ಆತನನ್ನು ಹಿಡಿದು ಪೊಲೀಸರಿಗೆ ಒಪ್ಪಿಸಿದ್ದಾರೆ. ಮೂಲಗಳ ಪ್ರಕಾರ, ಕ್ಯಾನ್ಸರ್‌ಪೀಡಿತ ತಾಯಿಗೆ ವೈದ್ಯರು ತಪ್ಪು ಔಷಧ ಬರೆದಿದ್ದಾರೆ ಎಂದು ಯುವಕ ಪೊಲೀಸರಿಗೆ ಹೇಳಿಕೆ ನೀಡಿದ್ದಾನೆ.

ಫೇಮಸ್ ಆಗಲು ಖಾಸಗಿ ವಿಡಿಯೋ ಲೀಕ್ ಮಾಡಿದ ಖ್ಯಾತ ರೀಲ್ಸ್ ತಾರೆ

ಇಸ್ಲಾಮಾಬಾದ್: ಇತ್ತೀಚೆಗೆ ಪಾಕಿಸ್ತಾನದ ಜನಪ್ರಿಯ ಟಿಕ್‌ಟಾಕ್ ತಾರೆ ಮಿನಾಹಿಲ್ ಮಲಿಕ್ ಅವರ ಖಾಸಗಿ ವೀಡಿಯೊ ಸಾಮಾಜಿಕ ಮಾಧ್ಯಮದಲ್ಲಿ ಸಿಕ್ಕಾಪಟ್ಟೆ ವೈರಲ್ ಆಗಿದೆ. ಮಿನಾಹಿಲ್ ಮಲಿಕ್ ತನ್ನ ಗೆಳೆಯನೊಂದಿಗೆ ಖಾಸಗಿ ಕ್ಷಣಗಳನ್ನು ಕಳೆಯುತ್ತಿರುವ ವಿಡಿಯೋ ಇದಾಗಿದೆ. ಇದೇ ವಿಚಾರವಾಗಿ ಪ್ರತಿಕ್ರಿಯೆ ನೀಡಿರುವ ಪಾಕಿಸ್ತಾನಿ ನಟಿ ಮಿಶಿ ಖಾನ್, ಖ್ಯಾತಿ ಗಳಿಸಲು ಮಿನಾಹಿಲ್ ಮಲಿಕ್ ಉದ್ದೇಶಪೂರ್ವಕವಾಗಿ ವೀಡಿಯೊವನ್ನು ಲೀಕ್ ಮಾಡಿದ್ದಾಳೆ ಎಂದು ಆರೋಪಿಸಿದ್ದಾರೆ. ಮಿನಾಹಿಲ್ ಮಲಿಕ್ ಈ ರೀತಿ ಮಾಡಲು ಅವರು ಬಾಲಿವುಡ್ ಚಿತ್ರ 'ಹೀರೋಯಿನ್'ನಿಂದ ಸ್ಫೂರ್ತಿ ಪಡೆದಿದ್ದಾರೆ ಎಂದು ಪಾಕಿಸ್ತಾನಿ ನಟಿ ಮಿಶಿ ಖಾನ್ ಹೇಳಿಕೊಂಡಿದ್ದಾರೆ. ಕರೀನಾ ಕಪೂರ್ ಅದರ ಪ್ರಚಾರಕ್ಕಾಗಿ ತನ್ನದೇ ಆದ ವೀಡಿಯೊವನ್ನು ಸೋರಿಕೆ ಮಾಡಿದ್ದಾರೆ ಎಂದೂ ಮಿಶಿ ಖಾನ್ ಹೇಳಿದ್ದಾರೆ.



ನಟಿ ಮಿಶಿ ಖಾನ್ ತನ್ನ ಇನ್ಸ್ಟಾಗ್ರಾಮ್ ಖಾತೆಯಲ್ಲಿ ವೀಡಿಯೋ ರೆಕಾರ್ಡ್ ಮಾಡಿ ಹಾಕಿದ್ದು, ಅದರಲ್ಲಿ ಮಿನಾಹಿಲ್ ಮಲಿಕ್ ಪ್ರಸಿದ್ಧರಾಗಲು ತಪ್ಪು ಹೆಜ್ಜೆಗಳನ್ನು ತೆಗೆದುಕೊಂಡಿದ್ದಾರೆ ಎಂದು ಆರೋಪಿಸಿದ್ದಾರೆ.

ಶರತ್ ಪವಾರ್ ಫೋಟೋ ಬಳಸಿದ ಅಜಿತ್ ಪವಾರ್‌ಗೆ ಸುಪ್ರೀಂ ತರಾಟೆ

ನವದೆಹಲಿ: ನ್ಯಾಷನಲಿಸ್ಟ್ ಕಾಂಗ್ರೆಸ್ ಪಕ್ಷ (ಎನ್‌ಸಿಪಿ) ಇಬ್ಭಾಗವಾಗಿದ್ದು, ಉಭಯ ಬಣಗಳ ಮಧ್ಯೆ ಕಾನೂನು ಹೋರಾಟ ಮುಂದುವರೆದಿದೆ. ಇದೀಗ ಶರದ್ ಪವಾರ್ ಫೋಟೋವನ್ನು ಚುನಾವಣೆ ಪ್ರಚಾರಕ್ಕೆ ಬಳಸಿದ ಅಜಿತ್ ಪವಾರ್ ಬಣಕ್ಕೆ ಸುಪ್ರೀಂಕೋರ್ಟ್ ವಾರ್ನಿಂಗ್ ಕೊಟ್ಟಿದೆ. ಸ್ವಂತ ಕಾಲಿನ ಮೇಲೆ ನಿಲ್ಲುವುದನ್ನು ಕಲಿಯಿರಿ ಎಂದು ತಾಕೀತು ಮಾಡಿದೆ. ನ.20ರಂದು ನಡೆಯುವ ಮಹಾರಾಷ್ಟ್ರ ವಿಧಾನಸಭಾ ಚುನಾವಣೆಗೆ ಶರದ್‌ಪವಾರ್ ಅವರ ಹೆಸರನ್ನು ಅವಲಂಬಿಸಬೇಡಿ ಎಂದು ಸುಪ್ರೀಂಕೋರ್ಟ್ ಅಜಿತ್ ಪವಾರ್ ಅವರ ಎನ್‌ಸಿಪಿಗೆ ಕೇಳಿದೆ. ಚುನಾವಣಾ ಪ್ರಚಾರಗಳಲ್ಲಿ ಪಕ್ಷದ ಸಂಸ್ಥಾಪಕರ ಚಿತ್ರಗಳು ಅಥವಾ ವಿಡಿಯೋಗಳನ್ನು ಬಳಸದಂತೆ ತಡೆಯಲು ಸೂಚನೆ ನೀಡಿದೆ ಎಂದು ಬಾರ್ ಮತ್ತು ಬೆಂಚ್ ವರದಿ ಮಾಡಿದೆ. ನ್ಯಾಯಮೂರ್ತಿ ಸೂರ್ಯಕಾಂತ್ ಮತ್ತು ನ್ಯಾಯಮೂರ್ತಿ ಉಜ್ಜಲ್ ಭುಯಾನ್ ಅವರ ಪೀಠವು, ನೀವು ನಿಮ್ಮ ಸ್ವಂತ ಕಾಲಿನ ಮೇಲೆ ನಿಲ್ಲಲು ಪ್ರಯತ್ನಿಸುತ್ತೀರಿ, ಈಗ ನಿಮಗೆ ಶರದ್ ಪವಾರ್ ಅವರೊಂದಿಗೆ ಸೈದ್ಧಾಂತಿಕ ಭಿನ್ನಾಭಿಪ್ರಾಯವಿದೆ. ಅಜಿತ್ ಪವಾರ್ ನೇತೃತ್ವದ ಎನ್‌ಸಿಪಿ ಹಾಕಿರುವ ಆನ್‌ಲೈನ್ ಕಂಟೆಂಟ್‌ನಲ್ಲಿ ಎನ್‌ಸಿಪಿ –ಎಸ್‌ಪಿ ಮುಖ್ಯಸ್ಥ ಶರದ್ ಪವಾರ್ ಹೆಸರನ್ನು ಏಕೆ ಪದೇ ಪದೇ ಬಳಸಲಾಗುತ್ತಿದೆ ಎಂದು ಸುಪ್ರೀಂಕೋರ್ಟ್ ಪ್ರಶ್ನಿಸಿದೆ.

ಕಪ್ಪು ಮಗು ಹುಟ್ಟಿದ್ದಕ್ಕೆ ಡೈವೋರ್ಸ್ ಕೇಳಿದ ಗಂಡ!

ಬೀಜಿಂಗ್: ಚೀನಾದಲ್ಲಿ ತಮಗೆ ಕಪ್ಪು ಬಣ್ಣದ ಮಗು ಹುಟ್ಟಿದ್ದಕ್ಕೆ ಅನುಮಾನಗೊಂಡ ವ್ಯಕ್ತಿ ಹೆಂಡತಿಯಿಂದ ವಿಚ್ಛೇದನ ಕೋರಿದ್ದಾನೆ. ತಾನು, ತನ್ನ ಹೆಂಡತಿ ಇಬ್ಬರೂ ಬಿಳಿ ಬಣ್ಣದವರಾಗಿದ್ದರೂ ಕಪ್ಪು ಬಣ್ಣದ ಮಗು ಹುಟ್ಟಿದ್ದಕ್ಕೆ ಆ ಗಂಡ ಡಿಎನ್‌ಎ ಪರೀಕ್ಷೆಗೆ ಒತ್ತಾಯಿಸಿದ್ದಾನೆ. ಹೆಂಡತಿ ಚಾರಿತ್ರ್ಯ ಸರಿಯಿಲ್ಲವೆಂದು ಆತ ವಿಚ್ಛೇದನಕ್ಕೆ ಅರ್ಜಿ ಕೂಡ ಸಲ್ಲಿಸಿದ್ದಾನೆ. ತಿಂಗಳ ಹಿಂದೆ 30 ವರ್ಷದ ಮಹಿಳೆ ಸಿ–ಸೆಕ್ಷನ್ ಮೂಲಕ ಮಗುವಿಗೆ ಜನ್ಮ ನೀಡಿದ್ದಳು. ಆದರೆ ಅವರಿಗೆ ಕಪ್ಪು ಬಣ್ಣದ ಮಗು ಹುಟ್ಟಿತ್ತು ಆಕೆ ಮತ್ತು ಆಕೆಯ ಗಂಡ ಬಿಳಿ ಬಣ್ಣದವರಾಗಿದ್ದು, ಕಪ್ಪು ಮಗು ಹೇಗೆ ಹುಟ್ಟಿತು ಎಂದು ಆಕೆಯ ಪತಿ ಆಘಾತಕ್ಕೊಳಗಾದ. ಇದೇ ಕಾರಣವನ್ನಿಟ್ಟುಕೊಂಡು ಆತ ವಿಚ್ಛೇದನ ಕೋರಿದ್ದಾನೆ.

ಈ ಘಟನೆಯನ್ನು ಮಹಿಳೆ ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಂಡಿದ್ದು, ಪರಿಸ್ಥಿತಿಯನ್ನು ಹೇಗೆ ಎದುರಿಸಬೇಕೆಂದು ಸಲಹೆ ಕೇಳಿದ್ದಾರೆ. ತನ್ನ ಪತಿ ಮೊದಲು ಮಗುವನ್ನು ನೋಡಲು ಬಂದಾಗ ಅವನು ಆಶ್ಚರ್ಯಚಕಿತನಾದ. ಕಪ್ಪು ಬಣ್ಣದ್ದೆಂಬ ಕಾರಣಕ್ಕೆ ಮಗುವನ್ನು ಹಿಡಿಯಲು ನಿರಾಕರಿಸಿದ ಎಂದು ಆಕೆ ವಿವರಿಸಿದ್ದಾಳೆ. ನಂತರ ಡಿಎನ್‌ಎ ಪರೀಕ್ಷೆ ನಡೆಸಿ ಮಗು ಆತನಿಗೇ ಹುಟ್ಟಿದ್ದು ಎಂದು ದೃಢಪಡಿಸುವಂತೆ ಒತ್ತಾಯಿಸಿದ. ಅದು ನಮ್ಮಿಬ್ಬರದೇ ಮಗು ಎಂದು ಎಷ್ಟೇ ಹೇಳಿದರೂ ಆತ ಕೇಳಲಿಲ್ಲ ಎಂದು ಆಕೆ ಹೇಳಿದ್ದಾಳೆ.

ಮಾವುತರು, ಕಾವಾಡಿಗರ ತರಬೇತಿಗೆ ಚಾಲನೆ



ದುಬಾರೆ ಸಾಕಾನೆ ಶಿಬಿರದಲ್ಲಿ ಏರ್ಪಡಿಸಿರುವ ಕಾರ್ಯಾಗಾರದಲ್ಲಿ ಕರ್ನಾಟಕ ಮತ್ತು ಆಂಧ್ರಪ್ರದೇಶ ಅರಣ್ಯಾಧಿಕಾರಿಗಳು ಭಾಗವಹಿಸಿದ್ದರು.

ಕುಶಾಲನಗರ, ನ.13–ಕರ್ನಾಟಕ ಮತ್ತು ಆಂಧ್ರಪ್ರದೇಶದ ಅರಣ್ಯ ಹಾಗೂ ವನ್ಯಜೀವಿ ನಿರ್ವಹಣೆಗೆ ಎರಡು ರಾಜ್ಯಗಳ ಮಾವುತರು ಹಾಗೂ ಕಾವಾಡಿಗಳಿಗೆ ಸಾಮರ್ಥ್ಯ ವೃದ್ಧಿ ಹಾಗೂ ತರಬೇತಿ ನೀಡುವ ಹಿನ್ನೆಲೆಯಲ್ಲಿ ಸಮೀಪ ದುಬಾರೆ ಸಾಕಾನೆ ಶಿಬಿರದಲ್ಲಿ ಒಂದು ತಿಂಗಳು ಏರ್ಪಡಿಸಿರುವ ಕಾರ್ಯಾಗಾರಕ್ಕೆ ಬುಧವಾರ ಚಾಲನೆ ನೀಡಲಾಯಿತು.

ಎರಡು ರಾಜ್ಯಗಳ ಅರಣ್ಯ ಇಲಾಖೆಗಳ ಪರಸ್ಪರ ಸಹಕಾರದಿಂದ ಕಾರ್ಯ ನಿರ್ವಹಿಸುವ ಸಲುವಾಗಿ ಒಪ್ಪಂದ ಮಾಡಲಾಗಿದ್ದು, ಈ ಸಂಬಂಧ ದುಬಾರೆ ಸಾಕಾನೆ ಶಿಬಿರದಲ್ಲಿ ಆಂಧ್ರಪ್ರದೇಶದ 17 ಮಾವುತ, ಕಾವಾಡಿಗರು ಮತ್ತು ಅರಣ್ಯ ಇಲಾಖೆ 4 ಸಿಬ್ಬಂದಿ ಸೇರಿದಂತೆ 21 ಶಿಬಿರಾರ್ಥಿಗಳಿಗೆ ಹಮ್ಮಿಕೊಂಡಿರುವ ಕಾರ್ಯಾಗಾರಕ್ಕೆ ಆಂಧ್ರ ಮತ್ತು ಕರ್ನಾಟಕದ ಹಿರಿಯ ಅರಣ್ಯಾಧಿಕಾರಿಗಳು ಚಾಲನೆ ನೀಡಿದರು.

ರಾಜ್ಯದ ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಆನೆ ಯೋಜನೆಯ ಆರ್.ಮನೋಜ್, ಕೊಡಗು ವೃತ್ತ ಮುಖ್ಯ ಅರಣ್ಯ ಸಂರಕ್ಷಣಾ ಅಧಿಕಾರಿ ಮನೋಜ್ ಕುಮಾರ್ ತ್ರಿಪಾಠಿ, ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದ ನಿರ್ದೇಶಕಿ ಪಿ.ಎ.ಸೀಮಾ, ವನ್ಯಜೀವಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಕೆ.ಎ.ನೆಹರು, ಆಂಧ್ರಪ್ರದೇಶದ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಅಜಯ್ ಕುಮಾರ್ ನಾಯಕ್, ಅನಂತಪುರ ಅರಣ್ಯ ಸಂರಕ್ಷಣಾಧಿಕಾರಿ ಯಶೋಧಾ, ಅನ್ನಮಯ್ಯ ಉಪ ಅರಣ್ಯ ಸಂರಕ್ಷಣಾಧಿಕಾರಿಗಳಾದ ಜಗನ್ನಾಥ್ ಸಿಂಗ್, ಭರಣಿ ಮತ್ತಿತರ ಅಧಿಕಾರಿಗಳು ಪಾಲ್ಗೊಂಡಿದ್ದರು.

ಕರ್ನಾಟಕ ಅರಣ್ಯ ಸಚಿವ ಈಶ್ವರ ಖಂಡ್ರೆ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಆಂಧ್ರಪ್ರದೇಶದ ಅರಣ್ಯ ಸಚಿವ ಕೊನೆದಲ ಪವನ್ ಕಲ್ಯಾಣ್ ಅವರು ಅರಣ್ಯ ಮತ್ತು ವನ್ಯಜೀವಿ ನಿರ್ವಹಣೆಗೆ ಸಂಬಂಧಿಸಿದಂತೆ ಎರಡು ರಾಜ್ಯದ ಅರಣ್ಯ ಇಲಾಖೆಗಳು ಪರಸ್ಪರ ಸಹಕಾರದಿಂದ ಕಾರ್ಯನಿರ್ವಹಿಸಲು ಒಪ್ಪಂದ ಮಾಡಿಕೊಂಡಿರುವುದಾಗಿ ಮಡಿಕೇರಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಬಿ.ಭಾಸ್ಕರ್ ಮಾಹಿತಿ ನೀಡಿದರು.

ಶಿಬಿರಾರ್ಥಿಗಳಿಗೆ ದುಬಾರೆ ಸಹಕಾರ ಶಿಬಿರದಲ್ಲಿ 30 ದಿನ ನುರಿತ ಸಿಬ್ಬಂದಿ ಹಾಗೂ ವಿಷಯ ತಜ್ಞರಿಂದ ತರಬೇತಿ ನೀಡಲಾಗುವುದು ಎಂದು ತಿಳಿದಿದ್ದಾರೆ.

ವಿವಿಧೆಡೆ ಕಳ್ಳತನ: ಓರ್ವ ಬಂಧನ

ಸುಂಟಿಕೊಪ್ಪ, ನ.13–ಹೋಬಳಿ ವ್ಯಾಪ್ತಿಯ ವಿವಿಧೆಡೆ ಕಳ್ಳತನ ಸಂಬಂಧ ಓರ್ವನನ್ನು ಸುಂಟಿಕೊಪ್ಪ ಠಾಣೆ ಪೊಲೀಸರು ಬಂಧಿಸಿದ್ದಾರೆ. ಶ್ರೀಮಂಗಲ–ಕುಟ್ಟ ನಿವಾಸಿ ಪಣಿ ಎರವರ ಸುಬ್ರಮಣಿ ಬಂಧಿತ. 7ನೇ ಹೊಸಕೋಟೆಯ ಹೋಟೆಲ್, ಕಂಬಿಬಾಣೆಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಉಪ್ಪುತೋಡು ಕಾರ್ಮಿಕರ ಲೈನ್ ಮನೆಗಳು ಸೇರಿದಂತೆ ವಿವಿಧೆಡೆ ನಡೆಯುತ್ತಿದ್ದ ಕಳ್ಳತನದಿಂದ ಸಾರ್ವಜನಿಕರು ಮತ್ತು ಪೊಲೀಸರಿಗೆ ತಲೆನೋವಾಗಿತ್ತು.

ಸುಂಟಿಕೊಪ್ಪ ಪೊಲೀಸರು ಮಾಹಿತಿ ಆಧರಿಸಿ ಸಂಶಯಾಸ್ಪದ ಪಣಿ ಎರವರ ಸುಬ್ರಮಣಿ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಫೋಟೋ ಹಾಕಿ ಮಾಹಿತಿ ನೀಡುವಂತೆ ಸಾರ್ವಜನಿಕರಲ್ಲಿ ಮನವಿ ಮಾಡಿದ್ದರು. ಈತ ವಿರಾಜಪೇಟೆಯಲ್ಲಿ ಕಾಣಿಸಿಕೊಂಡಿದ್ದು, ಸಾರ್ವಜನಿಕರು ಹಿಡಿದು ಪೊಲೀಸರಿಗೆ ಒಪ್ಪಿಸಿದ್ದಾರೆ. ವಿರಾಜಪೇಟೆಯಲ್ಲಿ ಸೆರೆ ಸಿಕ್ಕ ಸುಬ್ರಮಣಿ ಹಿಂದೆ ಪೊನ್ನಂಪೇಟೆಯ ಸುಳುಗೋಡುವಿನಲ್ಲಿ ಕಳ್ಳತನದ ಆರೋಪ ಎದುರಿಸುತ್ತಿದ್ದಾನೆ ಎಂದು ಸುಂಟಿಕೊಪ್ಪ ಠಾಣಾಧಿಕಾರಿ ಚಂದ್ರಶೇಖರ್ ಮಾಹಿತಿ ನೀಡಿದ್ದಾರೆ.

ಅಪಘಾತದಲ್ಲಿ ತಲೆಗೆ ಪೆಟ್ಟು ಬಿದ್ದಿದ್ದ ಲಾರಿ ಚಾಲಕ ಸಾವು

ಮಡಿಕೇರಿ, ನ.13– ಕಳೆದ ಎರಡು ದಿನಗಳ ಹಿಂದೆ ವಿರಾಜಪೇಟೆಯಲ್ಲಿ ಸಂಭವಿಸಿದ ರಸ್ತೆ ಅಪಘಾತದಲ್ಲಿ ತಲೆಗೆ ತೀವ್ರ ಪೆಟ್ಟು ಬಿದ್ದು ಆಸ್ಪತ್ರೆಗೆ ದಾಖಲಾಗಿದ್ದ ಲಾರಿ ಚಾಲಕ ಬುಧವಾರ ಬೆಳಗ್ಗೆ ಮೃತಪಟ್ಟಿದ್ದಾರೆ.

ಕೇರಳದ ವಳ್ಳಿತೋಡು ಸಮೀಪ ಕೆಳಂಪಿಡಿಯ ನಿವಾಸಿ ಶಂಕರ ಹಾಗೂ ನಳಿನಿ ದಂಪತಿ ಪುತ್ರ ಪ್ರವೀಣ್(45) ಮೃತಪಟ್ಟಿದ್ದು, ಈತ ನ.11ರ ರಾತ್ರಿ 7 ಗಂಟೆಯಲ್ಲಿ ಭದ್ರಾವತಿಯಿಂದ ಭತ್ತದ ಮೊಟೆ ತುಂಬಿಕೊಂಡು ವಿರಾಜಪೇಟೆ ಪಟ್ಟಣದ ಸಿದ್ದಾಪುರ ಮುಖ್ಯ ರಸ್ತೆಯಲ್ಲಿ ಬರುತ್ತಿದ್ದಾಗ ತೆಲುಗರ ಬೀದಿಯ ಮಾರಿಯಮ್ಮ ದೇವಾಲಯ ರಸ್ತೆಯಿಂದ ಸುಮಾರು 100 ಅಡಿಗಳ ಪ್ರಪಾತಕ್ಕೆ ಲಾರಿ ಉರುಳಿ ಬಿದ್ದಿತ್ತು.

ಪರಿಣಾಮ ಚಾಲಕ ಪ್ರವೀಣ್ ತಲೆಗೆ ತೀವ್ರ ಪೆಟ್ಟು ಬಿದ್ದಿತ್ತು. ವಿರಾಜಪೇಟೆ ಸರ್ಕಾರಿ ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ನೀಡಿ, ಕೇರಳದ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ, ಬುಧವಾರ ಬೆಳಗ್ಗೆ 10 ಗಂಟೆಯಲ್ಲಿ ಮೃತಪಟ್ಟಿದ್ದಾರೆ. ಚಾಲಕ ಮೃತ ಪ್ರವೀಣ್ ಪತ್ನಿ ಹಾಗೂ ಇಬ್ಬರು ಮಕ್ಕಳನ್ನು ಅಗಲಿದ್ದಾರೆ.

ಹೊರಗಿನವರಿಂದ ಪಂಚಾಯಿತಿ ಜಾಗ ಒತ್ತುವರಿ

● ತೆರವುಗೊಳಿಸುವಂತೆ ಗ್ರಾಪಂ ಸದಸ್ಯರ ಒತ್ತಾಯ ● ಕುಂದಚೇರಿ ಗ್ರಾಪಂ ಗ್ರಾಮಸಭೆ



ಚೆಟ್ಟಿಮಾನಿ ಸಮುದಾಯ ಭವನದಲ್ಲಿ ನಡೆದ ಕುಂದಚೇರಿ ಗ್ರಾಪಂ ಗ್ರಾಮಸಭೆಯಲ್ಲಿ ಮೂಲಸೌಲಭ್ಯ ಕುರಿತು ಚರ್ಚಿಸಲಾಯಿತು.

ಮಡಿಕೇರಿ, ನ.13– ಚೆಟ್ಟಿಮಾನಿ ಸಮುದಾಯ ಭವನದಲ್ಲಿ ನಡೆದ ಕುಂದಚೇರಿ ಗ್ರಾಮ ಪಂಚಾಯಿತಿಯ ಗ್ರಾಮಸಭೆಯಲ್ಲಿ ವಿದ್ಯುತ್ ಉಪಕೇಂದ್ರದ ಅಗತ್ಯ ಮತ್ತು ಮೂಲಸೌಲಭ್ಯಗಳ ಕುರಿತು ಚರ್ಚಿಸಲಾಯಿತು.

ಗ್ರಾಪಂ ಅಧ್ಯಕ್ಷ ಪಿ.ಬಿ.ದಿನೇಶ್ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಸದಸ್ಯ ಹ್ಯಾರೀಸ್ ಮಾತನಾಡಿ, ಪದಕಲ್ಲು ಗ್ರಾಮ ವ್ಯಾಪ್ತಿಯಲ್ಲಿ ವಿವಿಧ ಇಲಾಖೆಗಳಿಗೆ ಪಂಚಾಯಿತಿ ಜಾಗ ಮಂಜೂರಾಗಿದೆ. ಸೋಲಾರ್ ಪ್ಲಾಂಟ್‌ಗೆ ಜಾಗದ ಅವಶ್ಯಕತೆ ಇದೆ. ಆದರೆ, ಪಂಚಾಯಿತಿಗೆ ಸೇರಿದ ಜಾಗವನ್ನು ಇತ್ತೀಚೆಗೆ ಹೊರಗಿನ ವ್ಯಕ್ತಿಗಳು ಒತ್ತುವರಿ ಮಾಡಿಕೊಂಡಿದ್ದಾರೆ. ಒತ್ತುವರಿ ತೆರವುಗೊಳಿಸುವಂತೆ ತಹಸೀಲ್ದಾರ್ ಹಾಗೂ ಕಂದಾಯ ಇಲಾಖೆಗೆ ಮನವಿ ಸಲ್ಲಿಸಲಾಗಿದೆ. ಶಾಸಕರು ಕೂಡ ಸೂಚನೆ ನೀಡಿದ್ದಾರೆ. ಆದರೆ, ಯಾವುದೇ ಪ್ರಯೋಜನವಾಗಿಲ್ಲವೆಂದು ಅಸಮಾಧಾನ ವ್ಯಕ್ತಪಡಿಸಿದರು.

ಗ್ರಾಮಸ್ಥ ದಬ್ಬಡ್ಕ ಶ್ರೀಧರ್ ಮಾತನಾಡಿ, ಪಂಚಾಯಿತಿ ವ್ಯಾಪ್ತಿಯ ಜಾಗವನ್ನು ಈ ಭಾಗದ ಜನರು ಮತ್ತು ಇಲಾಖೆಗೆ ಮೀಸಲಿಡಬೇಕೆ ಹೊರತು ಹೊರಗಿನವರಿಗೆ ನೀಡಬಾರದು. ತಕ್ಷಣ ಸರ್ವೆ ಮಾಡಬೇಕು ಎಂದು ಒತ್ತಾಯಿಸಿದರು. ಇದಕ್ಕೆ ಕಂದಾಯ ನಿರೀಕ್ಷಕ ಶಿವಕುಮಾರ್ ಒಪ್ಪಿಗೆ ಸೂಚಿಸಿದರು.

ಗ್ರಾಮಸ್ಥ ಹೆಚ್.ಮಧು ಮಾತನಾಡಿ, ಪದಕಲ್ಲು ಗ್ರಾಮದಲ್ಲಿ 33/11 ಕೆವಿ ವಿದ್ಯುತ್ ಉಪ ಕೇಂದ್ರಕ್ಕೆ 3 ಎಕರೆ ಜಾಗ ಮಂಜೂರಾಗಿದೆ. ಈ ಸಾಮರ್ಥ್ಯದ ವಿದ್ಯುತ್ ಉಪಕೇಂದ್ರದಿಂದ ಮುಂದಿನ ದಿನ ಗ್ರಾಮದ ಜನರಿಗೆ ಯಾವುದೇ ಪ್ರಯೋಜನವಾಗುವುದಿಲ್ಲ, ಸಾಮರ್ಥ್ಯವನ್ನು ಹೆಚ್ಚಿಸಬೇಕು ಎಂದರು. ಇದಕ್ಕೆ ಉತ್ತರಿಸಿದ ಸದಸ್ಯ ಹ್ಯಾರೀಸ್, ಈಗಾಗಲೇ ಈ ಬಗ್ಗೆ ಕೆಪಿಟಿಸಿಎಲ್‌ನ ಎಲ್ಲಾ ಹಿರಿಯ ಅಧಿಕಾರಿಗಳಿಗೆ ಪತ್ರ ಬರೆಯಲಾಗಿದೆ. ಶಾಸಕರ ಗಮನಕ್ಕೂ ತರಲಾಗಿದೆ. ಹೋಬಳಿ ಮಟ್ಟದ 6 ಗ್ರಾಪಂ, ಪಕ್ಕದ ಹೋಬಳಿಯ 4 ಗ್ರಾಪಂ ಸೇರಿ ಒಟ್ಟು 10 ಪಂಚಾಯಿತಿಯ 40 ಸಾವಿರ ಜನಸಂಖ್ಯೆಗೆ ಅನುಕೂಲವಾಗಬೇಕಾದರೆ 66/11 ಕೆವಿ ಉಪಕೇಂದ್ರದ ಅಗತ್ಯವಿದೆ ಎಂದರು.

ಜಲಜೀವನ್ ಮಿಷನ್ ಯೋಜನೆ ಕುರಿತು ಚರ್ಚಿಸಿ ತಕ್ಷಣ ಗ್ರಾಪಂ ವ್ಯಾಪ್ತಿಯ ಎಲ್ಲಾ ಹೊಸ ಕುಡಿಯುವ ನೀರಿನ ಘಟಕಗಳಿಗೆ ವಿದ್ಯುಚ್ಛಕ್ತಿ ಒದಗಿಸಬೇಕೆಂದು ಗ್ರಾಮಸ್ಥರಾದ ಕೀರ್ತಿಕುಮಾರ್, ದಬ್ಬಡ್ಕ ಶ್ರೀಧರ್, ಮಂಗೇರಿರ ಜಗದೀಶ್, ಶರತ್, ರಘು ಒತ್ತಾಯಿಸಿದರು. ಇದಕ್ಕೆ ಗ್ರಾಪಂ ಅಧ್ಯಕ್ಷ ಪಿ.ಬಿ.ದಿನೇಶ್, ನೋಡಲ್ ಅಧಿಕಾರಿ ದೊಡ್ಡೇಗೌಡ, ಕಿರಿಯ ಅಭಿಯಂತರರು ಹಾಗೂ ಸೆಸ್ಕ್ ಶಾಖಾಧಿಕಾರಿ ಒಪ್ಪಿಗೆ ಸೂಚಿಸಿದರು.

ನೂತನ ಮನೆ ನಿರ್ಮಾಣಕ್ಕೆ ಇರುವ ಮಾನದಂಡಗಳ ಬಗ್ಗೆ ಪಿಡಿಓ ಯಾದವ್ ಸಭೆಗೆ ಮಾಹಿತಿ ನೀಡಿದರು. ಕೃಷಿ, ವಿದ್ಯುತ್ ಇಲಾಖೆ, ಜಿಪಂ ಇಂಜಿನಿಯರಿಂಗ್ ವಿಭಾಗ, ಶಿಕ್ಷಣ, ಸಮಾಜ ಕಲ್ಯಾಣ, ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಅಂಗನವಾಡಿ, ಆರೋಗ್ಯ ಮತ್ತಿತರ ಇಲಾಖೆ ಅಧಿಕಾರಿಗಳು ತಮ್ಮ ವ್ಯಾಪ್ತಿಯ ಮಾಹಿತಿಯನ್ನು ಸಭೆಗೆ ನೀಡಿದರು. ಉಪಾಧ್ಯಕ್ಷೆ ಹೆಚ್.ಬೇಬಿ ಹಾಗೂ ಸದಸ್ಯರು, ಗ್ರಾಮಸ್ಥರಿಗೆ ಅಗತ್ಯ ಮಾಹಿತಿ ನೀಡಿದರು.

ಇದೇ ಸಂದರ್ಭ ಗ್ರಾಮಸ್ಥರಿಂದ ವಿವಿಧ ಯೋಜನೆಗಳಿಗೆ ಅರ್ಜಿ ಸ್ವೀಕರಿಸಲಾಯಿತು.

ಕನ್ನಡ ಭಾಷೆ ನಮ್ಮ ಉಸಿರಾಗಬೇಕು: ಡಾ.ಕೆ.ಬಸವರಾಜು



ವಿರಾಜಪೇಟೆ ಕಾವೇರಿ ಕಾಲೇಜಿನಲ್ಲಿ ನಡೆದ ರಾಜ್ಯೋತ್ಸವದಲ್ಲಿ ಸರ್ಕಾರಿ ಪದವಿ ಕಾಲೇಜಿನ ಕನ್ನಡ ವಿಭಾಗದ ಮುಖ್ಯಸ್ಥ ಡಾ.ಕೆ.ಬಸವರಾಜು ಅವರನ್ನು ಅಭಿನಂದಿಸಲಾಯಿತು.

ವಿರಾಜಪೇಟೆ: ಜಗತ್ತಿನ ಶ್ರೇಷ್ಠ ಭಾಷೆ ಕನ್ನಡ ಉಳಿಸಿ, ಬೆಳೆಸುವ ಜವಾಬ್ದಾರಿ ಪ್ರತಿಯೊಬ್ಬ ಕನ್ನಡಿಗರ ಮೇಲಿದೆ ಎಂದು ವಿರಾಜಪೇಟೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕನ್ನಡ ವಿಭಾಗದ ಮುಖ್ಯಸ್ಥ ಡಾ.ಕೆ.ಬಸವರಾಜು ಹೇಳಿದರು.

ಪಟ್ಟಣದ ಕಾವೇರಿ ಕಾಲೇಜಿನಲ್ಲಿ ನಡೆದ ಕನ್ನಡ ರಾಜ್ಯೋತ್ಸವ ಮತ್ತು ಎನ್‌ಎಸ್‌ಎಸ್ ಘಟಕ ಉದ್ಘಾಟಿಸಿ ಮಾತನಾಡಿದ ಅವರು, ನಾಡು–ನುಡಿ ಅಭಿಮಾನ ಒಂದು ದಿನಕ್ಕೆ ಮಾತ್ರ ಸೀಮಿತವಲ್ಲ. ಕನ್ನಡ ನಮ್ಮ ಉಸಿರಾಗಬೇಕು. ಕನ್ನಡ ಹಲವು ಭಾಷೆಗಳೊಂದಿಗೆ ಒಡಮೂಡಿ ಬಂದಂತಹ ಸುಂದರವಾಗಿದೆ. ಜಗತ್ತಿನಲ್ಲಿ ಮಾತನಾಡಿದಂತೆ ಬರೆಯುವ, ಬರೆದಂತೆ ಓದುವ, ಓದಿದಂತೆ ಮಾತನಾಡುವ ಭಾಷೆ ಕನ್ನಡ ಮಾತ್ರ. ಪ್ರಸ್ತುತ ಇತರೆ ಪ್ರಾದೇಶಿಕ ಭಾಷೆಗಳು ಹಾಗೂ ಹೊರ ರಾಜ್ಯದ ಭಾಷೆಗಳಿಂದಾಗಿ ಕನ್ನಡ ತುಳಿತಕ್ಕೆ ಒಳಗಾಗುತ್ತಿದೆ ಎಂದರು.

ಎಂಟು ಜ್ಞಾನಪೀಠ ಪ್ರಶಸ್ತಿ, ಒಂದು ಸರಸ್ವತಿ ಸಮ್ಮಾನ್, ಮೂವರು ರಾಷ್ಟ್ರಕವಿಗಳನ್ನು ಪಡೆದಿರುವ ಶ್ರೀಮಂತ ಭಾಷೆ ಕನ್ನಡ ಎಂಬ ಹೆಗ್ಗಳಿಕೆ ನಮ್ಮದು. ಕನ್ನಡಿಗರ ಇತಿಹಾಸವನ್ನು ನೋಡಿದಾಗ ಚಾಲುಕ್ಯರ ಕರ್ನಾಟ ಸೇನೆ, ಇಮ್ಮಡಿ ಪುಲಕೇಶಿಯಂತಹ ಶ್ರೇಷ್ಠ ಅರಸರು ಇದಕ್ಕೆ ಉದಾಹರಣೆಯಾಗಿದ್ದಾರೆ ಎಂದು ತಿಳಿಸಿದರು.

ಪ್ರಾಂಶುಪಾಲ ಬೆನೆಡಿಕ್ಟ್ ಆರ್.ಸಲ್ಡಾನ ಮಾತನಾಡಿ, ನಾವೆಲ್ಲ ಕನ್ನಡಿಗರು ಎಂಬ ಹೆಮ್ಮೆ ನಮ್ಮಲ್ಲಿರಬೇಕು. ನಾವಾಡುವ ಭಾಷೆ ಜಗತ್ತಿನ ಶ್ರೇಷ್ಠ ಭಾಷೆ. ಕನ್ನಡ ಸಾಹಿತ್ಯ ಪ್ರಕಾರಗಳನ್ನು ಒಳಗೊಂಡ ಭಾಷೆ. ರಕ್ಷಣ ವೇದಿಕೆಗಳ ಮೂಲಕ ಕನ್ನಡವನ್ನು ಉಳಿಸುವಂತಹ ಕಾರ್ಯ ನಡೆಯುತ್ತಿದೆ. ಕನ್ನಡವನ್ನು ವಿಶ್ವ ಲಿಪಿಗಳ ರಾಣಿ ಎಂದು ಕರೆಯುತ್ತಾರೆ. ಅಕ್ಷರಗಳ ಸೌಂದರ್ಯ ರಚನೆಯಾದ ರೀತಿ ನಿಜಕ್ಕೂ ಅದ್ಭುತವಾದದ್ದು. ಹಲವು ಶತಮಾನಗಳಿಂದ ಸಮೃದ್ಧವಾಗಿ ಬೆಳೆದು ಬಂದಿದೆ. ಸದಾ ಕನ್ನಡವನ್ನು ಬಳಸಿ ಬೆಳೆಸುವ ಕಾರ್ಯವನ್ನು ಮಾಡಬೇಕು ಎಂದರು.

ಇದೇ ವೇಳೆ ಸ್ಪರ್ಧೆ ವಿಜೇತ ವಿದ್ಯಾರ್ಥಿಗಳಿಗೆ ಗಣ್ಯರು ಬಹುಮಾನ ವಿತರಿಸಿದರು. ನಂತರ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಿತು. ಉಪ ಪ್ರಾಂಶುಪಾಲೆ ಡಾ.ವೀಣಾ, ಐಕ್ಯೂಎಸಿ ಸಂಚಾಲಕಿ ಪ್ರಿಯಾ, ವಿದ್ಯಾರ್ಥಿ ಕ್ಷೇಮ ಪಾಲನ ಸಮಿತಿ ಸಂಚಾಲಕ ನಾಗರಾಜು, ಕನ್ನಡ ವಿಭಾಗದ ಮುಖ್ಯಸ್ಥ ಸುನಿಲ್ ಕುಮಾರ್ ಉಪಸ್ಥಿತರಿದ್ದರು.

ನಾಳೆ ಕೊಡಗಿನ ವಿವಿಧೆಡೆಗೆ ಯದುವೀರ್ ಭೇಟಿ



ಯದುವೀರ್

ಮಡಿಕೇರಿ, ನ.13–ಮೈಸೂರು–ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ನ.15ರಂದು ಕೊಡಗು ಜಿಲ್ಲೆಯ ವಿವಿಧ ಭಾಗಗಳಿಗೆ ಭೇಟಿ ನೀಡಲಿದ್ದಾರೆ.

ಅಂದು ಬೆಳಗ್ಗೆ 9.30ಕ್ಕೆ ಕುಶಾಲನಗರದ ದುಬಾರೆ ಸಾಕಾನೆ ಶಿಬಿರಕ್ಕೆ ಭೇಟಿ, 10.30ಕ್ಕೆ ಮಕ್ಕಂದೂರು ಗ್ರಾಮದಲ್ಲಿ ಮಡಿಕೇರಿ ಗ್ರಾಮಾಂತರ ಸಂಘಟನಾ ಪರ್ವ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. 11.30ಕ್ಕೆ ಕೆ.ನಿಡುಗಣೆ, ಮಧ್ಯಾಹ್ನ 12.30ಕ್ಕೆ ಗಾಳಿಬೀಡು, 2.30ಕ್ಕೆ ಹಾಕತ್ತೂರು, ಮೇಕೇರಿ, ಸಂಜೆ 4 ಗಂಟೆಗೆ ಮರಗೋಡು, ಹೊಸ್ಕೇರಿ, 5ಕ್ಕೆ ಕಡಗದಾಳು, 6 ಗಂಟೆಗೆ ಮಡಿಕೇರಿ ನಗರಕ್ಕೆ ಭೇಟಿ ನೀಡಿ, ಪಕ್ಷದ ಕಾರ್ಯಕರ್ತರು ಹಾಗೂ ಸಾರ್ವಜನಿಕರೊಂದಿಗೆ ಚರ್ಚಿಸಲಿದ್ದಾರೆ ಎಂದು ಜಿಲ್ಲಾ ಬಿಜೆಪಿ ವಕ್ತಾರರಾದ ಬಿ.ಕೆ.ಅರುಣ್ ಕುಮಾರ್ ಹಾಗೂ ತಳೂರು ಕಿಶೋರ್ ಕುಮಾರ್ ತಿಳಿಸಿದ್ದಾರೆ.

ಮಕ್ಕಳ ಅಪೌಷ್ಟಿಕತೆ ನಿವಾರಣೆಗೆ ಅಗತ್ಯ ಕ್ರಮ ವಹಿಸಿ

ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧಿಕಾರಿಗಳಿಗೆ ಡಿಸಿ ಶಿಲ್ಪನಾಗ್ ಸೂಚನೆ



ಚಾ.ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಡಿಸಿ ಶಿಲ್ಪನಾಗ್ ಮಾತನಾಡಿದರು.

> ಅಧಿಕಾರಿಗಳು ನಗರ ಪ್ರದೇಶಗಳಲ್ಲಿರುವ ಅಂಗನವಾಡಿಗಳನ್ನು ಮಾತ್ರ ನೋಡಿಕೊಳ್ಳುವುದಲ್ಲ. ಗ್ರಾಮೀಣ ಭಾಗ ಹಾಗೂ ಆದಿವಾಸಿ ಪ್ರದೇಶಗಳಲ್ಲಿರುವ ಅಂಗನವಾಡಿಗಳಿಗೆ ಭೇಟಿ ನೀಡಿ, ಅಲ್ಲಿ ಮೂಲಸೌಲಭ್ಯಗಳನ್ನು ಪರಿಶೀಲಿಸಬೇಕು.
>
> –ಈಶ್ವರ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ

ಚಾಮರಾಜನಗರ, ನ.13–ಅಂಗನವಾಡಿ ಮಕ್ಕಳಿಗೆ ಹಾಲು, ಮೊಟ್ಟೆ, ಸಿರಿಧಾನ್ಯಯುಕ್ತ ಚಿಕ್ಕಿ, ಕಡ್ಲೆಕಾಳು (ನ್ಯೂಟ್ರೀಷಿಯನ್ ಫುಡ್) ಆಹಾರಗಳನ್ನು ಸಮರ್ಪಕವಾಗಿ ಪೂರೈಸಿ, ಮಕ್ಕಳ ಅಪೌಷ್ಟಿಕತೆ ನಿವಾರಣೆಗೆ ಎಲ್ಲಾ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಶಿಲ್ಪನಾಗ್ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬುಧವಾರ ನಡೆದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅನುಷ್ಠಾನಗೊಳಿಸುತ್ತಿರುವ ಅಪೌಷ್ಟಿಕತೆ ನಿವಾರಣೆ, ಬಾಲ್ಯವಿವಾಹ ನಿಷೇಧ ಕಾಯ್ದೆ, ಒನ್‌ಸ್ಟಾಪ್ ಸೆಂಟರ್ ಸಖಿ ಕೇಂದ್ರ, ಸ್ತ್ರೀ ಶಕ್ತಿ ಯೋಜನೆ, ಸಾಂತ್ವನ ಹಾಗೂ ಸ್ವಾಧಾರ ಗೃಹ ಯೋಜನೆ ಸಮಿತಿಗಳ ಏಕೀಕೃತ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ತೀವ್ರ ಅಪೌಷ್ಟಿಕತೆಯಿಂದ ಕೂಡಿರುವ 63 ಹಾಗೂ ಕಡಿಮೆ ತೂಕದ 948 ಮಕ್ಕಳು ಸೇರಿದಂತೆ ಒಟ್ಟು 1011 ಮಕ್ಕಳು ಅಪೌಷ್ಟಿಕತೆಯಿಂದ ಕೂಡಿದ್ದಾರೆ. ಅಪೌಷ್ಟಿಕತೆ ನಿವಾರಣೆಗೆ ಜಿಲ್ಲೆಯಲ್ಲಿ 5 ಶಿಶು ಅಭಿವೃದ್ಧಿ ಯೋಜನೆಗಳು ಕಾರ್ಯ ನಿರ್ವಹಿಸುತ್ತಿದ್ದು, ವಿಶ್ವ ಆರೋಗ್ಯ ಸಂಸ್ಥೆ ನೀಡಿರುವ ಗ್ರೋಥ್ ಚಾರ್ಟ್ ಮೆನು ಪ್ರಕಾರವೇ ಮಕ್ಕಳಿಗೆ ಪೌಷ್ಟಿಕ ಆಹಾರವನ್ನು ಸಮರ್ಪಕವಾಗಿ ವಿತರಿಸಬೇಕು. ಪ್ರತಿ ತಿಂಗಳು ಮಕ್ಕಳ ತೂಕವನ್ನು ಪರಿಶೀಲಿಸಿ ಅಪೌಷ್ಟಿಕತೆಯಿಂದ ಹೊರಬರುವ ಮಕ್ಕಳ ಪಟ್ಟಿ ಮಾಡಿ ವರದಿ ಸಲ್ಲಿಸಬೇಕು ಎಂದು ತಿಳಿಸಿದರು.

ಚಾಮರಾಜನಗರ ತಾಲೂಕಿನ ಕಾಡಂಚಿನ, ಹನೂರು ಮತ್ತು ಕೊಳ್ಳೇಗಾಲ ತಾಲೂಕಿನ ಗಿರಿಜನ ಹಾಡಿಗಳ ಕೆಲ ಅಂಗನವಾಡಿಗಳಿಗೆ ಪೌಷ್ಟಿಕ ಆಹಾರ ಸಮರ್ಪಕವಾಗಿ ಪೂರೈಕೆಯಾಗದಿರುವುದು ಕಂಡುಬಂದಿದೆ. ಈ ನಿಟ್ಟಿನಲ್ಲಿ ತಾಲೂಕು ಮಟ್ಟದ ಎಲ್ಲಾ ಅಧಿಕಾರಿಗಳು ಅಂಗನವಾಡಿಗಳಿಗೆ ಖುದ್ದು ಭೇಟಿ ನೀಡಿ, ತಪಾಸಣೆ ನಡೆಸಬೇಕು. ಹಾಜರಾತಿ ಪರಿಶೀಲಿಸಿ, ಪ್ರತಿ ಮೂರು ತಿಂಗಳಿಗೊಮ್ಮೆ ಮಕ್ಕಳ ಆರೋಗ್ಯ ತಪಾಸಣೆ ನಡೆಸಬೇಕು. ಈ ಸಂಬಂಧ ತಾಲೂಕು ಆರೋಗ್ಯಾಧಿಕಾರಿಗಳೊಂದಿಗೆ ಸಮನ್ವಯ ಸಾಧಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶಿಸಿದರು.

ಅಂಗನವಾಡಿಗಳಲ್ಲಿ ಕುಡಿಯುವ ನೀರು, ಶೌಚಾಲಯ, ಕಟ್ಟಡ ಸುತ್ತುಗೋಡೆ, ಸ್ವಚ್ಛತೆ, ವಿದ್ಯುತ್ ವ್ಯವಸ್ಥೆ ಸಮರ್ಪಕವಾಗಿರಬೇಕು. ಅಂಗನವಾಡಿ ಕಟ್ಟಡಕ್ಕೆ ನಿವೇಶನ ಅವಶ್ಯವಿದ್ದಲ್ಲಿ ಊರಾಚೆ ಹೊರತುಪಡಿಸಿ ಊರಿನ ಮಧ್ಯಭಾಗದಲ್ಲಿ ಸೂಕ್ತ ಸ್ಥಳ ನೀಡಲಾಗುವುದು. ಯಾವುದೇ ವಿದ್ಯಾರ್ಥಿನಿಲಯಗಳಿಗೂ ಊರಿನ ಮಧ್ಯಭಾಗದಲ್ಲೇ ನಿವೇಶನ ನೀಡುವಂತೆ ಸೂಚಿಸಲಾಗಿದೆ. ಶಿಥಿಲ ಅಂಗನವಾಡಿ ಕಟ್ಟಡಗಳನ್ನು ಪರಿಶೀಲಿಸಬೇಕು. ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಶೀಘ್ರವಾಗಿ ಪೂರ್ಣಗೊಳಿಸಬೇಕು ಎಂದರು.

ಜಿಪಂ ಸಿಇಓ ಮೋನಾ ರೋತ್ ಮಾತನಾಡಿ, ಅಂಗನವಾಡಿಗಳಿಗೆ ಪರಿಶೀಲನೆಗಾಗಿ ಭೇಟಿ ನೀಡಿದಾಗ ಮಕ್ಕಳು ಹಲ್ಲುಜ್ಜದೆ ಇರುವುದು, ಉಗುರು ಕತ್ತರಿಸದೆ ಕೊಳೆ ತುಂಬಿರುವುದು ಕಂಡುಬಂದಿದೆ. ಅಂಗನವಾಡಿ ಕಾರ್ಯಕರ್ತೆಯರು ಮಕ್ಕಳಿಗೆ ಈ ಬಗ್ಗೆ ತಿಳಿಹೇಳಬೇಕು. ಸ್ವಚ್ಛತೆ ಅರಿವು ಮೂಡಿಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಮಂಜುನಾಥ್, ಶಾಲಾ ಮತ್ತು ಶಿಕ್ಷಣ ಇಲಾಖೆ ಉಪನಿರ್ದೇಶಕ ರಾಮಚಂದ್ರ ರಾಜೇ ಅರಸ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಚಲುವರಾಜು, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಬಿಂದ್ಯಾ, ಲೀಡ್ ಬ್ಯಾಂಕ್ ವ್ಯವಸ್ಥಾಪಕಿ ಸುರೇಖಾ, ವಿವಿಧ ತಾಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಜಿಲ್ಲಾ ಹಾಗೂ ತಾಲೂಕು ಮಟ್ಟದ ಸ್ತ್ರೀ ಶಕ್ತಿ ಒಕ್ಕೂಟದ ಅಧ್ಯಕ್ಷರು, ಪದಾಧಿಕಾರಿಗಳು ಉಪಸ್ಥಿತರಿದ್ದರು.

ಶೋಟೋಕಾನ್ ಕರಾಟೆ ವಿದ್ಯಾರ್ಥಿಗಳಿಗೆ 29 ಪದಕ



ರಾಜ್ಯ ಮಟ್ಟದ ಕರಾಟೆ ಚಾಂಪಿಯನ್‌ಶಿಪ್ ಸ್ಪರ್ಧೆಯಲ್ಲಿ ಪದಕ ಗಳಿಸಿದ ಕೊಳ್ಳೇಗಾಲದ ಶೋಟೋಕಾನ್ ಶಾಲೆ ವಿದ್ಯಾರ್ಥಿಗಳು.

ಕೊಳ್ಳೇಗಾಲ, ನ.13–ಗೋವಾದಲ್ಲಿ ನಡೆದ ರಾಜ್ಯ ಮಟ್ಟದ ಕರಾಟೆ ಚಾಂಪಿಯನ್‌ಶಿಪ್ ಸ್ಪರ್ಧೆಯಲ್ಲಿ ಕೊಳ್ಳೇಗಾಲದ ಶೋಟೋಕಾನ್ ಶಾಲಾ ವಿದ್ಯಾರ್ಥಿಗಳು 3 ಚಿನ್ನ, 8 ಬೆಳ್ಳಿ, 18 ಕಂಚಿನ ಪದಕ ಸೇರಿ ಒಟ್ಟು 29 ಪದಕ ಗಳಿಸಿದ್ದಾರೆ

ಶೋಟೋಕಾನ್ ಶಾಲೆ ವಿದ್ಯಾರ್ಥಿಗಳಾದ ಸ್ಕಂದ, ಶುಭಿತ್, ಸಾಯಿವೈಷ್ಣವಿ ತಲಾ 1 ಚಿನ್ನ, ಅಭಯ್ ಜಯರಾಜ್, ಮೋಹನ್, ಪರೀಕ್ಷಿತ್, ವೈಷ್ಣವಿ ಬಂಗಾರು, ಅಕ್ಷಯ, ಸಚಿನ್ ತಲಾ 1 ಬೆಳ್ಳಿ, ಕವನ, ಬಿ.ಆರ್.ವಿಸ್ಮಿತಾ, ಚಿರಾಯುಷ್, ಸಿದ್ದರಾಜು, ಪರಿಣಿತಾ, ಪ್ರಣವ್ ಜಯಂತ್ ತಲಾ 2 ಕಂಚು, ಜೀವನ್ ನಾಯಕ, ಸುಸ್ಮಿತಾ, ಹಿತೈಷಿ, ಅಮರ್, ವರುಣ್ ಶೆಟ್ಟಿ, ಸೂರಜ್, ಪ್ರಗದೀಶ್, ಪಾವನಿ, ಮಹೇಶ್ ಬಾಬು, ರೋಶಿನಿ, ಸಚಿನ್ ತಲಾ 1 ಕಂಚಿನ ಪದಗಳಿಸಿದ್ದಾರೆ.

ಸಾಧಕ ವಿದ್ಯಾರ್ಥಿಗಳನ್ನು ಶೋಟೋಕಾನ್ ಸ್ಕೂಲ್ ಆಫ್ ಕರಾಟೆ ಇಂಡಿಯಾದ ಕಾರ್ಯದರ್ಶಿ ಕ್ಯೋಶಿ ಯೋಗೇಶ್, ತರಬೇತುದಾರರಾದ ಮುರಳಿ, ಸೆನ್ಸೈ ಸೌಜನ್ಯ ಪ್ರಭಾಕರ್, ಸೆನ್ಸೈ ಚೆಲುವರಾಜ್ ಅಭಿನಂದಿಸಿದ್ದಾರೆ

ಚಾಮರಾಜನಗರ ಸಾಹಿತ್ಯವಾಗಿ ಶ್ರೀಮಂತ ಜಿಲ್ಲೆ



ಚಾಮರಾಜನಗರದ ರೋಟರಿ ಭವನದಲ್ಲಿ ಶಂಕರ ಅಂಕನಶೆಟ್ಟಿಪುರ ಹಾಗೂ ಸೋಮಶೇಖರ ಬಿಸಲ್ವಾಡಿ ಅವರ ಸಂಕಲನಗಳನ್ನು ಲೋಕಾರ್ಪಣೆಗೊಳಿಸಲಾಯಿತು.

ಚಾಮರಾಜನಗರ, ನ13–ಚಾಮರಾಜನಗರವನ್ನು ಹಿಂದುಳಿದ ಜಿಲ್ಲೆಯೆಂದು ತಾತ್ಸಾರದಿಂದ ನೋಡಲಾಗುತ್ತಿದೆ. ಚಾಮರಾಜನಗರ ಆರ್ಥಿಕವಾಗಿ ಹಿಂದುಳಿದಿದ್ದರೂ ಸಾಹಿತ್ಯ ಮತ್ತು ಸಾಂಸ್ಕೃತಿಕವಾಗಿ ಶ್ರೀಮಂತ ಜಿಲ್ಲೆಯಾಗಿದೆ ಎಂದು ಹಿರಿಯ ಸಾಹಿತಿ ಡಾ.ಕೃಷ್ಣಮೂರ್ತಿ ಹನೂರು ಮೆಚ್ಚುಗೆ ವ್ಯಕ್ತಪಡಿಸಿದರು.

ನಗರದ ರೋಟರಿ ಭವನದಲ್ಲಿ ನಡೆದ ಜಿಲ್ಲಾ ಲೇಖಕರ ಸಂಘ ಉದ್ಘಾಟಿಸಿ ಮಾತನಾಡಿದ ಅವರು, ಮಂಟೇಸ್ವಾಮಿ, ಮಹದೇಶ್ವರ ಕಾವ್ಯಗಳ ಕಾರಣದಿಂದ ವಿಶ್ವ ಪ್ರಸಿದ್ಧಿ ಪಡೆದಿರುವ ಜಿಲ್ಲೆ ನೂರಾರು ಸಾಹಿತಿ, ಕವಿಗಳ ಜನ್ಮ ಸ್ಥಳವಾಗಿದೆ. ಲೇಖಕರ ಸಂಘದಿಂದ ಗ್ರಂಥ ಭಂಡಾರ ನಿರ್ಮಿಸಿ ಓದುಗರಿಗೆ ಸಹಕಾರಿಯಾಗಲಿ, ಸಾಹಿತ್ಯ ಕ್ಷೇತ್ರಕ್ಕೆ ಪಾದಾರ್ಪಣೆ ಮಾಡುತ್ತಿರುವ ಯುವ ಕವಿಗಳಿಗೆ ತರಬೇತಿ, ಕಮ್ಮಟ ಏರ್ಪಡಿಸಿ ಗುಣಾತ್ಮಕ ಬರವಣಿಗೆಗೆ ಕಾರಣವಾಗಲಿ ಎಂದು ಆಶಿಸಿದರು.

ಶಂಕರ ಅಂಕನಶೆಟ್ಟಿಪುರ ಅವರ ಕನ್ನಡಿ ಕವನ ಸಂಕಲನ ಹಾಗೂ ಸೋಮಶೇಖರ ಬಿಸಲ್ವಾಡಿ ಅವರ ವಿಮೋಚಕರು ಲೇಖನ ಸಂಕಲನಗಳನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದ ರಾಜ್ಯೋತ್ಸವ ಪುರಸ್ಕೃತ ಪ್ರೊ.ಜಿ.ಎಸ್.ಜಯದೇವ್, ನೋವಿಗೆ ಧ್ವನಿಯಾಗುವ ಸಾಹಿತ್ಯ ರಚನೆಯಾಗಬೇಕು. ಯಾರಿಗೆ ಸಾಹಿತ್ಯ ರಚನೆ ಮಾಡದಿದ್ದರೆ ಸಂತೋಷವಾಗುವುದಿಲ್ಲವೋ ಅಂಥವರು ಬರೆಯುವುದೇ ಬೇಡ. ಕಾವ್ಯಗಳು ಓದುಗರಿಗೆ ಸಂತಸ ಸಂಭ್ರಮ ಹಂಚುತ್ತವೆ. ಏಷ್ಯ ಖಂಡದಲ್ಲಿ ಹುಟ್ಟಿದ ಜೈನ, ಬೌದ್ಧ, ಧರ್ಮಗಳು ಅಹಿಂಸೆಯನ್ನು ಪ್ರತಿಪಾದಿಸಿದವು. ಮನುಷ್ಯನ ಪರ, ಜೀವಪರವಾದ ನಿಲುವನ್ನು ಹೊಂದಿದ್ದವು. ಕಾರಣ ಭಾರತ ಸೇರಿದಂತೆ ಏಷ್ಯಾದ ದೇಶಗಳಲ್ಲಿ ಯುದ್ಧದ ಭೀತಿಗಳು ಇಲ್ಲ. ಭಗವಾನ್ ಬುದ್ಧ ಸಂಭವಿಸಬಹುದಾದ ಯುದ್ಧವನ್ನು ತಡೆಯಲು ಕಾಡಿಗೆ ಹೊರಟರು. ಹೊರಬಂದು ಜಗತ್ತಿಗೆ ಕರುಣೆ, ಅಹಿಂಸೆಯ ಮೌಲ್ಯ ಬೋಧಿಸಿದರು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಲೇಖಕರ ಸಂಘದ ಅಧ್ಯಕ್ಷ ರೇಚಂಬಳ್ಳಿ ದುಂಡಮಾದಯ್ಯ ಮಾತನಾಡಿದರು. ಕಾರ್ಯಕ್ರಮದಲ್ಲಿ ರೋಟರಿ ಸಂಸ್ಥೆಯ ಎಲ್.ನಾಗರಾಜು, ಲೇಖಕರ ಸಂಘದ ಉಪಾಧ್ಯಕ್ಷೆ ಶೀಲಾಸತ್ಯೇಂದ್ರ ಸ್ವಾಮಿ, ಎನ್.ಧನಲಕ್ಷ್ಮೀ, ಡಿ.ಸಿ.ಸುರೇಂದ್ರ, ಗು.ಬಿ.ರಮೇಶ, ಮದ್ದೂರು ದೊರೆಸ್ವಾಮಿ, ಬಾಳಗುಣಸೆ ಮಂಜುನಾಥ್, ಕೆಂಪನಪುರ ಶಿವಕುಮಾರ್, ಡಾ.ನಂಜರಾಜು ಹೊಂಗನೂರು, ಕೆ.ವೆಂಕಟರಾಜು, ಸ್ವಾಮಿ ಪೊನ್ನಾಚಿ, ಶ್ರೀಧರ್, ಡಾ.ಪಿ.ಪ್ರೇಮ, ಜನಶಕ್ತಿ ಸುರೇಶ್ ಇದ್ದರು.

ಕಾವೇರಿ ನೀರಾವರಿ ನಿಗಮದ ಎಂಡಿ, ಇಇ ವಜಾಗೆ ಆಗ್ರಹ



ಸುದ್ದಿಗೋಷ್ಠಿಯಲ್ಲಿ ಗುತ್ತಿಗೆದಾರ ಅಯ್ಯನಪುರ ಶಿವಕುಮಾರ್ ಮಾತನಾಡಿದರು.

ಚಾಮರಾಜನಗರ, ನ.13–ಕಾವೇರಿ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಹಾಗೂ ಕಾರ್ಯಪಾಲಕ ಅಭಿಯಂತರರನ್ನು ಸೇವೆಯಿಂದ ವಜಾಗೊಳಿಸಬೇಕು ಎಂದು ಗುತ್ತಿಗೆದಾರ ಅಯ್ಯನಪುರ ಶಿವಕುಮಾರ್ ಒತ್ತಾಯಿಸಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾವೇರಿ ನೀರಾವರಿ ನಿಗಮದ ನಂಜನಗೂಡು ವಿಭಾಗದ ವಿಶೇಷ ಅಭಿವೃದ್ಧಿ ಯೋಜನೆ ಕಾಮಗಾರಿಗಳ ಬಿಲ್ ಪಾವತಿ ವಿಳಂಬ, ತಾರತಮ್ಯ ಮಾಡುತ್ತಿರುವ ನಿಗಮದ ವ್ಯವಸ್ಥಾಪಕ ನಿರ್ದೇಶಕ ಮಹೇಶ್, ಕಾರ್ಯಪಾಲಕ ಅಭಿಯಂತರ ಕಾವೇರಿ ರಂಗನಾಥ್ ಅವರನ್ನು ಸೇವೆಯಿಂದ ವಜಾಗೊಳಿಸಿ, ತನಿಖೆಗೊಳಪಡಿಸಬೇಕು ಎಂದು ಆಗ್ರಹಿಸಿದರು.

ವಿಶೇಷ ಅಭಿವೃದ್ಧಿ ಯೋಜನೆ ಕಾಮಗಾರಿಗಳ ಬಿಲ್ 25.65 ಕೋಟಿ ರೂ. ಬಾಕಿ ಉಳಿದಿದ್ದು, ಎಸ್‌ಡಿಪಿ ಹಾಗೂ ನಿರ್ವಹಣೆಗೆ ಅನುದಾನ ಇಲ್ಲ ಎಂದು ಹೇಳುತ್ತಾರೆ. ಆದರೆ, ಶೇ.10.15ರಷ್ಟು ಹಣ ಕೊಡುವ ದೊಡ್ಡ ಗುತ್ತಿಗೆದಾರರಿಗೆ ಕಾಮಗಾರಿ ಮಾಡಿದ ತಕ್ಷಣ ಮೊಬೈಲ್ ಮೂಲಕ ಬಿಲ್ ಪಾವತಿಸುತ್ತಾರೆ. ಆದರೆ, ನಮಗೆ ಯಾವುದೇ ಅನುದಾನ ಬಿಡುಗಡೆಯಾಗಿಲ್ಲ ಎಂದು ವಿಳಂಬ ಮಾಡುವ ಮೂಲಕ ತೊಂದರೆ ಕೊಡುತ್ತಿದ್ದಾರೆ ಎಂದು ಆರೋಪಿಸಿದರು.

ಸಾಲ ಮಾಡಿ ಕಾಮಗಾರಿ ನಿರ್ವಹಿಸಿ ವರ್ಷಗಳು ಕಳೆದರೂ ಬಿಲ್ ಆಗಿಲ್ಲ. ಇದರಿಂದ ಗುತ್ತಿಗೆದಾರರು ತುಂಬಾ ಕಷ್ಟದಲ್ಲಿ ಸಿಲುಕಿದ್ದಾರೆ. ಬಿಲ್ ಬಗ್ಗೆ ಚರ್ಚಿಸಲು ಬೆಂಗಳೂರಿಗೆ ಹೋದರೆ ವ್ಯವಸ್ಥಾಪಕ ನಿರ್ದೇಶಕರು ಸಿಗುತ್ತಿಲ್ಲ. ನಿಗಮದ ವ್ಯವಸ್ಥಾಪಕರು, ಕಾರ್ಯಪಾಲಕ ಇಂಜಿನಿಯರ್ ಈಗಾಗಲೇ ಗುತ್ತಿಗೆದಾರರಾದ ವೆಂಕಟಸುಬ್ಬಯ್ಯಗೆ 80 ಲಕ್ಷ ರೂ., ನೃಪತುಂಗ ಎಂ.ಎಸ್.ಕಂಟ್ರಾಕ್ಷನ್‌ಗೆ 25 ಲಕ್ಷ ರೂ. ಬಿಲ್ ಮಾಡಿದ್ದಾರೆ. ಇದನ್ನು ಪ್ರಶ್ನಿಸಿದರೆ ಎಂಡಿ ಆದೇಶದಂತೆ ಬಿಲ್ ಪಾವತಿಸಲಾಗಿದೆ ಎಂದು ಉತ್ತರಿಸುತ್ತಾರೆ ಎಂದು ದೂರಿದರು.

ಸುದ್ದಿಗೋಷ್ಠಿಯಲ್ಲಿ ಎಸ್‌ಸಿ, ಎಸ್‌ಟಿ ಗುತ್ತಿಗೆದಾರರ ಸಂಘದ ತಾಲೂಕು ಅಧ್ಯಕ್ಷ ಚನ್ನಯ್ಯ, ಅಬ್ದುಲ್ ಅಜೀಜ್ (ದೀನಾ), ಗುತ್ತಿಗೆದಾರರಾದ ಎಸ್.ಆರ್.ಗೋವಿಂದರಾಜು, ಗಣೇಶಪ್ರಸಾದ್, ಗುರುಸ್ವಾಮಿ ಹಾಜರಿದ್ದರು.

ನಾಳೆ ಪಿಂಚಣಿದಾರರ ಪ್ರಮಾಣಪತ್ರ ಅಭಿಯಾನ

ಚಾಮರಾಜನಗರ, ನ.13–ಕರ್ನಾಟಕ ಅಂಚೆ ಮತ್ತು ದೂರಸಂಪರ್ಕ ಇಲಾಖೆ ಪಿಂಚಣಿದಾರರ ಸಂಘ ವತಿಯಿಂದ ನ.15ರಂದು ಬೆಳಗ್ಗೆ 10 ಗಂಟೆಗೆ ನಗರದ ರಾಘವೇಂದ್ರ ಚಿತ್ರಮಂದಿರ ರಸ್ತೆಯಲ್ಲಿರುವ ಚೌಡೇಶ್ವರಿ ವಾಣಿಜ್ಯ ಸಂಕೀರ್ಣದಲ್ಲಿ ಪಿಂಚಣಿದಾರರಿಗೆ ಜೀವನ ಪ್ರಮಾಣಪತ್ರ ಅಭಿಯಾನ ಹಮ್ಮಿಕೊಳ್ಳಲಾಗಿದೆ.

ನಗರ ಮತ್ತು ಸುತ್ತಮುತ್ತಲಿನ ರಾಜ್ಯ ಹಾಗೂ ಕೇಂದ್ರ ಸರ್ಕಾರದ ಬ್ಯಾಂಕ್, ಇಪಿಎಫ್ ಕಚೇರಿ, ರೈಲ್ವೆ, ಬಿಎಸ್‌ಎನ್‌ಎಲ್ ಮತ್ತು ಡಿಫೆನ್ಸ್ ಪಿಂಚಣಿದಾರರು ಆಧಾರ್ ಕಾರ್ಡ್, ಪಿಂಚಣಿ ಪುಸ್ತಕ, ಬ್ಯಾಂಕ್ ಅಥವಾ ಅಂಚೆ ಕಚೇರಿ ಪಾಸ್ ಪುಸ್ತಕ ಮತ್ತು ಮೊಬೈಲ್ ನಂಬರ್ ತರಬೇಕು. ಮಾಹಿತಿಗೆ ಚಾಮರಾಜನಗರ ಜಿಲ್ಲಾ ಲೇಖಕರ ಸಂಘದ ಅಧ್ಯಕ್ಷ ರೇಚಂಬಳ್ಳಿ ದುಂಡಮಾದಯ್ಯ ಮೊ.ಸಂ:9901746860 ಅಥವಾ ಅಂಚೆ ನಿವೃತ್ತ ಉಪನಿರ್ದೇಶಕ ಎಸ್.ರಾಜಶೇಖರ ಮೊ.ಸಂ:9013348224ನ್ನು ಸಂಪರ್ಕಿಸಬಹುದು.

ವಕ್ಫ್ ಬೋರ್ಡ್ ವಿಚಾರದಲ್ಲಿ ಸರ್ಕಾರದಿಂದ ರೈತರಿಗೆ ಅನ್ಯಾಯ; ಆರೋಪ



ಮೈಸೂರು ಜಿಲ್ಲಾ ನ್ಯಾಯಾಲಯ ಆವರಣದ ವಕೀಲರ ಸಂಘದ ಸಭಾ ಭವನದಲ್ಲಿ ಬುಧವಾರ ವಕೀಲರು ಸಭೆ ನಡೆಸಿದರು.

ಮೈಸೂರು,ನ.13(ಪಿಎಂ)– ರಾಜ್ಯ ಸರ್ಕಾರ ರೈತರನ್ನು ಒಕ್ಕಲೆಬ್ಬಿಸಿ ವಕ್ಫ್ ಬೋರ್ಡ್‌ಗೆ ಅನುಕೂಲವಾಗುವಂತೆ ಆದೇಶಗಳನ್ನು ಹೊರಡಿಸಿದೆ ಎಂದು ಆರೋಪಿಸಿದ ಮೈಸೂರು ವಕೀಲರ ಸಂಘದ ಸದಸ್ಯರು, ರಾಜ್ಯ ಸರ್ಕಾರ ಕೂಡಲೇ ಸದರಿ ಆದೇಶಗಳನ್ನು ಹಿಂಪಡೆಯಬೇಕು ಎಂದು ಒತ್ತಾಯಿಸಿದರು.

ಮೈಸೂರು ಜಿಲ್ಲಾ ನ್ಯಾಯಾಲಯ ಆವರಣದ ವಕೀಲರ ಸಂಘದ ಸಭಾ ಭವನದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಸಭೆಯಲ್ಲಿ ಸುದೀರ್ಘ ಚರ್ಚೆ ಬಳಿಕ ಸದರಿ ಆದೇಶಗಳನ್ನು ಹಿಂಪಡೆಯಬೇಕೆಂದು ಆಗ್ರಹಿಸಲಾಯಿತು. ಅಲ್ಲದೆ, ಈ ವಿಚಾರದಲ್ಲಿ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲು ವಿಚಾರ ಸಂಕಿರಣಗಳನ್ನು ಆಯೋಜಿಸಬೇಕೆಂದು ನಿರ್ಣಯ ಕೈಗೊಳ್ಳಲಾಯಿತು.

ಕರ್ನಾಟಕ ರಾಜ್ಯ ವಕೀಲರ ಪರಿಷತ್ತಿನ ಸದಸ್ಯ ಬಿ.ಆರ್.ಚಂದ್ರಮೌಳಿ, ಹಿರಿಯ ವಕೀಲ ಆರ್.ಡಿ.ಕುಮಾರ್, ಸಂಘದ ಮಾಜಿ ಕಾರ್ಯದರ್ಶಿ ಬಿ.ಶಿವಣ್ಣ, ವಕೀಲರಾದ ಪ್ರದೀಸ್, ಎಂ.ಬಸವರಾಜ್, ಕೆ.ಎಚ್.ರಮೇಶ್, ಕೃಷ್ಣ, ಅಂದಾನಿ, ಎಸ್.ಲೋಕೇಶ್, ಪಾಲಹಳ್ಳಿ ನಾಗೇಂದ್ರ, ಟಿ.ಪಿ.ಧರ್ಮೇಂದ್ರ, ಆರ್.ಸೋಮಶೇಖರ್, ಎಂ.ಡಿ. ಕುಮಾರ್, ಪುಟ್ಟಸ್ವಾಮಿ, ಗಿರೀಶ್, ಮಲ್ಲಿಕಾರ್ಜುನಸ್ವಾಮಿ, ಗೋಕುಲ್ ಗೋವಾರ್ಧನ್, ಆರಾಧ್ಯ, ಡಿ.ಮಂಜುನಾಥ ಮತ್ತಿತರರು ಪಾಲ್ಗೊಂಡಿದ್ದರು.

ನದಿ ನೀರು ಬಳಕೆಗೆ ಹಸಿರು ಸೆಸ್: ಈಶ್ವರ ಖಂಡ್ರೆ

ಬೆಂಗಳೂರು, ನ.13– ಪಶ್ಚಿಮ ಘಟ್ಟದಲ್ಲಿ ಹುಟ್ಟಿ, ಹರಿಯುವ ನದಿಯ ನೀರು ಬಳಸುವ ನಗರಗಳಿಗೆ ಹಸಿರು ಸೆಸ್ ವಿಧಿಸಲು ಅರಣ್ಯ ಇಲಾಖೆ ಚಿಂತನೆ ನಡೆಸಿದೆ.



ಈ ಕುರಿತು ಪ್ರಸ್ತಾವ ಸಲ್ಲಿಸುವಂತೆ ಇಲಾಖೆಯ ಹೆಚ್ಚುವರಿ ಮುಖ್ಯಕಾರ್ಯದರ್ಶಿಗೆ ಸೂಚನೆ ನೀಡಿರುವ ಅರಣ್ಯ ಸಚಿವ ಈಶ್ವರ ಖಂಡ್ರೆ, ಜೀವವೈವಿಧ್ಯ ತಾಣವಾದ ಪಶ್ಚಿಮಘಟ್ಟ ಹಲವು ನದಿಗಳ ಮೂಲವಾಗಿದೆ. ತುಂಗಾ, ಭದ್ರಾ ಕಾವೇರಿ, ಕಬಿನಿ, ಹೇಮಾವತಿ, ಕೃಷ್ಣಾ, ಮಲಪ್ರಭಾ, ಘಟಪ್ರಭಾ ಸೇರಿದಂತೆ ಹಲವು ನದಿಗಳ ನೀರು ರಾಜ್ಯದ ಹಲವು ನಗರ, ಪಟ್ಟಣ ಪ್ರದೇಶಗಳಿಗೆ ಪೂರೈಕೆ ಮಾಡಲಾಗುತ್ತಿದೆ. ಮುಂದೆಯೂ ರಾಜ್ಯದ ನೀರಿನ ಅಗತ್ಯವನ್ನು ಈ ನದಿಗಳೇ ಪೂರೈಸಬೇಕಾಗುತ್ತದೆ. ಹಾಗಾಗಿ, ಈ ಎಲ್ಲ ನದಿಗಳ ಮೂಲವಾಗಿರುವ ಪಶ್ಚಿಮಘಟ್ಟವನ್ನು ಸಂರಕ್ಷಿಸಲು ಹಸಿರು ಸೆಸ್ ವಿಧಿಸುವ ಅಗತ್ಯವಿದೆ ಎಂದಿದ್ದಾರೆ.

ಮಂಗಾರು ಮಳೆಯ ಮಾರುತಗಳನ್ನು ತಡೆದು ವ್ಯಾಪಕ ಮಳೆ ಸುರಿಸುವಲ್ಲಿ ಪಶ್ಚಿಮಘಟ್ಟ ಗಳು ಮಹತ್ವದ ಪಾತ್ರ ವಹಿಸುತ್ತವೆ. ಪಶ್ಚಿಮಘಟ್ಟದ ನದಿಗಳಿಂದ ನಗರ, ಪಟ್ಟಣಗಳಿಗೆ ಪೂರೈಕೆ ಆಗುವ ನೀರಿನ ಬಳಕೆಯ ಬಿಲ್‌ನಲ್ಲಿ ಕೆಲವು ರೂಪಾಯಿ ಹಸಿರು ಸೆಸ್ ವಿಧಿಸಿ, ಕಾಪು ನಿಧಿ ಸ್ಥಾಪಿಸಬೇಕು. ಈ ಹಣವನ್ನು ಪಶ್ಚಿಮಘಟ್ಟ ಅರಣ್ಯ ಅಭಿವೃದ್ಧಿಗಾಗಿ, ವೃಕ್ಷ ಸಂವರ್ಧನೆಗೆ ಬಳಸಬಹುದು ಎಂದು ಹೇಳಿದ್ದಾರೆ. ಅರಣ್ಯದಂಚಿನ ರೈತರು ಸ್ವಯಂ ಪ್ರೇರಿತವಾಗಿ ಅರಣ್ಯ ಇಲಾಖೆಗೆ ಮಾರಾಟ ಮಾಡಲು ಇಚ್ಛಿಸುವ ಕೃಷಿ ಭೂಮಿಯ ಖರೀದಿಗಾಗಿ, ಅರಣ್ಯ ಸಂರಕ್ಷಿಸಲು ಮತ್ತು ವನ್ಯಜೀವಿ– ಮಾನವ ಸಂಘರ್ಷ ನಿಯಂತ್ರಿಸಲು ರೈಲ್ವೆ ಬ್ಯಾರಿಕೇಡ್ ಅಳವಡಿಕೆಗೂ ಈ ಹಣ ಬಳಸಬಹುದು ಎಂದು ವಿವರ ನೀಡಿದ್ದಾರೆ.

ನೀರಿನ ಬಳಕೆದಾರರು 2 ಅಥವಾ 3ರೂ ಪಾವತಿಸಿದರೆ ಸಾಕು. ಅವರಲ್ಲಿ ಪಶ್ಚಿಮ ಘಟ್ಟದ ಮಹತ್ವದ ಅರಿವು ಮೂಡುತ್ತದೆ. ಸಂಗ್ರಹವಾಗುವ ಹಣವನ್ನು ಅನ್ಯ ಉದ್ದೇಶಕ್ಕೆ ಬಳಸುವುದಿಲ್ಲ ಎಂದು ಸಚಿವ ಈಶ್ವರ್ ಖಂಡ್ರೆ ಭರವಸೆ ನೀಡಿದ್ದಾರೆ.

ವರ್ಗೀಕೃತ ಜಾಹೀರಾತು

ಪ್ರತಿ ಸೋಮವಾರ, ಗುರುವಾರ ಮತ್ತು ಶನಿವಾರ ರೂ. 600 + 30 ಮಾತ್ರ

ಜಾಹೀರಾತಿಗೆ ಸಂಪರ್ಕಿಸಿ 0821–2496522/23

SK CONSTRUCTION
ಹೊಸ ಮನೆ ಕಟ್ಟಬೇಕೆ ಚಿಂತೆ ಬೇಡ ನಿಮ್ಮ ಕೈಗೆಟುಕುವ ಬೆಲೆಯಲ್ಲಿ ಅತಿ ಉತ್ತಮ ಗುಣಮಟ್ಟದಲ್ಲಿ Engineer Plan, 3D Elevation ಸಹಿತ ನಾವೆ ಲೋನ್ ಮಾಡಿ ನಿಮ್ಮ ಕನಸಿನ ಮನೆ ಕಟ್ಟಿಕೊಡುತ್ತೇವೆ.
9620528490

ಜಮೀನು ಮಾರಾಟಕ್ಕಿದೆ
ಮೈಸೂರು–ಮಳವಳ್ಳಿ ಮುಖ್ಯ ರಸ್ತೆಯಲ್ಲಿ ಕಿರುಗಾವಲು ಗ್ರಾಮದ ಮುಖ್ಯ ರಸ್ತೆಯಿಂದ 500 ಮೀಟರ್‌ನಲ್ಲಿ 5 ಎಕರೆ ಜಮೀನು ಮಾರಾಟಕ್ಕಿದೆ. ಆಸಕ್ತರು ತಕ್ಷಣ ಸಂಪರ್ಕಿಸಿ:
7411848108

SITE FOR SALE
30x40, 40x60 Dattagalli Judicial Layout
Mob: 9740088990

ಬೇಕಾಗಿದ್ದಾರೆ
ಸೇವಾಯಾನ ವೃದ್ಧಾಶ್ರಮದಲ್ಲಿ ಕೆಲಸ ಮಾಡಲು ಬೇಕಾಗಿದ್ದಾರೆ
1. ಹೋಂ ನರ್ಸ್ 2. ಅಡುಗೆಯವರು ಸಂಸ್ಥೆಯಲ್ಲೇ ಉಳಿದುಕೊಳ್ಳಬೇಕು.
9535426335 | 9964421482

WANTED
Accountant
Graphic designer
Tata ace driver
Helper boys
9448067939 | 9739569260

ಉಚಿತ ತರಬೇತಿ
ಮನೆಯಿಂದಲೇ ಬಟ್ಟಲು ಸಾಂಬ್ರಾಣಿ ಮತ್ತು ಅಣಬೆ ತಯಾರಿಸಿ ನಮಗೆ ಮರಳಿಸಿ ಪ್ರತಿದಿನ 500 ರಿಂದ 800 ರೂ. ವರೆಗೆ ಗಳಿಸಿ.
ತರಬೇತಿಗಾಗಿ:
7406375196, 9880548596

ಹೆಲ್ತ್ ಕೇರ್ ತರಬೇತಿ
SSLC/PUC ಆದವರಿಗೆ ಡಿಪ್ಲಮೋ ಇನ್ ಹೆಲ್ತ್ ಕೇರ್ ತರಬೇತಿ ಕೊಡಲಾಗುತ್ತದೆ. ತರಬೇತಿ ಪಡೆದವರು ಉತ್ತಮ ಆಸ್ಪತ್ರೆಗಳಲ್ಲಿ ಕೆಲಸ ಮಾಡುತ್ತಿದ್ದಾರೆ. ಸೆಂಟ್ ಮೇರೀಸ್ ಆಸ್ಪತ್ರೆ, ಸಿಲ್ಕ್ ಫ್ಯಾಕ್ಟರಿ ಸರ್ಕಲ್ NIE ಕಾಲೇಜ್ ಪಕ್ಕ, ಮೈಸೂರು.
9916908454

IMKTA - PRE-SCHOOL TEACHER TRAINING
Diploma Courses for SSLC, PU or any Degree Candidates.
Regular / Saturday / Correspondence Courses with practical training. www: imkta.in
ALPHA INTERNATIONAL SCHOOL @ Srirampura
Call: 7829937469
ONLINE TRAINING AVAILABLE

SBIT TRAVELS
Group Tours
Thailand -4N5D
Nov:17th 28th | Dec: 15 | Jan: 09th, 18th
Dubai- 4N5D
Nov:25th, 27th | Dec: 04th, 15th | Jan: 22nd
Singapore & Malaysia 5N6D
Nov: 27
Dec: 1, 3 | Jan:10, 12, 18, 20, 25
9343524127
(Saraswathipuram, Mysuru)



Solar Water Heater SALES & SERVICE
BAJAJ FINSERV
SUNZONE SOLAR SYSTEM
VM Double Road, Kuvempunagar, Mysuru
9845175443

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 7975101020

SITES FOR SALE
1) MUDA 20x30 site 25 Lakhs near JP Nagar, Near Bandipalya, Nanjangud Road.
2) DTCP site for sale 30 Lakhs, on T. Narasipura highway 5 kms from Ring Road.
Mob: 9449989231

ಮೊಬೈಲ್‌ನಲ್ಲಿ ಕೆಲಸ ವಾರದ ಸಂಬಳ
NO TARGET, TYPING WORK
ತಿಂಗಳಿಗೆ ರೂ.10,000 ರಿಂದ ರೂ.25,000 ಗಳಿಸಬಹುದು.
8884439666

SITE FOR SALE
40x52
North Face
40 Ft. Road
M.S. Ramaiah Layout
Mob: 9019746369

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 8618373596

ಮನೆ ಅಡುಗೆ ಕೆಲಸದವರು ಬೇಕಾಗಿದ್ದಾರೆ
ವಿದ್ಯಾರಣ್ಯಪುರಂನಲ್ಲಿ ವಾಸಿಸುವ ಬ್ರಾಹ್ಮಣರು ಅಥವಾ ಆರ್ಯ ವೈಶ್ಯ ವರ್ಗದವರು ಆಸಕ್ತಿ ಇದ್ದರೆ ಕೆಳಗಿರುವ ಫೋನ್ ನಂಬರಿಗೆ ಕರೆ ಮಾಡಿ.
Mob: 9591641224, 9900520298, 8197393199

Change of Name
I, Service No. 2604694M, Rank: HAV, Name: Vokkaligara Puttuswamy Girish, S/o V.G. Puttuswamy, residing at Kaikery Post, Gonikoppal, Kodagu, Karnataka-571213 India. That is my Army service records my wife name entered as V.G. Pushpavathi mistake is lieu of Pushpavathi. V.K. (reason of change) vide affidavit dt. 11-11-2024, before advocate Daya D.B., Kodagu District, Karnataka. This is for kind information of all concerned.
Sd/- Vokkaligara Puttuswamy Girish

ಬ್ರಾಹ್ಮಣ ವರ ಬೇಕಾಗಿದೆ
ಬ್ರಾಹ್ಮಣ ವಧು, ವಯಸ್ಸು 28, SSLC ಕಲಿತಿರುವ / ವಯಸ್ಸು, 34, PUC ಕಲಿತಿರುವ / ವಯಸ್ಸು, 39, ಎಸ್‌ಎಸ್‌ಎಲ್‌ಸಿ ಕಲಿತಿರುವ / ವಯಸ್ಸು, 42, ಪಿಯುಸಿ ಕಲಿತಿರುವ ವಧುವಿಗೆ ವರ ಬೇಕಾಗಿದೆ.
(ಬ್ರಾಹ್ಮಣ ವಧು, ವರರಿಗಾಗಿ ಸಂಪರ್ಕಿಸಿ, ವಿಧವೆ, ವಿಚ್ಛೇದಿತರು ಸಂಪರ್ಕಿಸಬಹುದು).
Mob: 8792731562

WANTED
Marketing Executive for Real Estate office, 10th + education, no age bar. Salary fixed 10,000 + incentive + mobile allowance + petrol allowance.
Mob: 9449089231

ಮಹಿಳಾ ಸಿಬ್ಬಂದಿ ಬೇಕಾಗಿದ್ದಾರೆ
ಡಿಗ್ರಿ ಅಥವಾ PUC ಮಾಡಿರುವ ಮಹಿಳೆಯರಿಗೆ ಅವಕಾಶ, ಕಂಪ್ಯೂಟರ್ ಹಾಗೂ ವಾಟ್ಸಾಪ್ ಬಳಸಲು ಬರಬೇಕು, ಆಸಕ್ತಿ ಇದ್ದಲ್ಲಿ ಕೆಳಗೆ ಕೊಟ್ಟಿರುವ ನಂಬರಿಗೆ ಕರೆ ನೀಡಿ.
8197393199, 9900520298

ಶ್ರೀ ಸಂಜೀವಿನಿ ಗೋಲ್ಡ್ ಕಂಪನಿ
ನೀವು ಗಿರವಿ ಇಟ್ಟು ಬಿಡಿಸಿಕೊಳ್ಳಲಾಗದ ಚಿನ್ನವನ್ನು ನಾವೇ ಬಿಡಿಸಿ ಉಳಿದ ಹಣವನ್ನು ತಕ್ಷಣ ನೀಡುತ್ತೇವೆ. ಒಂದು ಗ್ರಾಂ ಚಿನ್ನಕ್ಕೆ ರೂ. 7600 (24 CT).
Mob: 9108146123

FOR SALE
1. 20x30, 30x40, Sites @ Bogadi, Rainbow School
2. 40x50 SE Crnr 2BHK 4 Houses Near ISKCON Temple
3. 20x30 Site at Vijaya Nagar 4th Stage.
4. Commercial Properties @ Kuvempu Nagar, Saraswati Puram & More.
5. 20x30, Sites & House near Yelwala
30x40 Sites attached to Brahmins Lyt
PRAKRUTHI PROPERTIES
95386 90359, 90359 90359

ತಕ್ಷಣ ಕೆಲಸಕ್ಕೆ ಬೇಕಾಗಿದ್ದಾರೆ
ಮೈಸೂರಿನ ಹೆಸರಾಂತ MNC ಕಂಪನಿಗಳಿಗೆ 7th, 10th, PUC, ITI, Diploma, Any Degree, MA, MBA, M.Com., BA, B.Com. ಆದವರಿಗೆ Cashier, Billing, Data Entry, Production, Packing, Helper, Telecalling, Admin, HR, Driver ಇತ್ಯಾದಿ ಕೆಲಸಗಳಿಗೆ ಯುವಕ–ಯುವತಿಯರು ಬೇಕಾಗಿದ್ದಾರೆ. ESI, PF ನೊಂದಿಗೆ + OT ಸಂಬಳ: 18,000 ದಿಂದ 46,000. ಸಂಪರ್ಕಿಸಿ:
9901493657, 8951413287

Immediate Requirement
Eager to earn money
Part time or Full time
Enthusiastic young or experienced.
Call: 7892124313

ಮನೆ ಮಾರಾಟಕ್ಕಿದೆ
ಮೈಸೂರು ನಗರದಲ್ಲಿರುವ ಅಶೋಕಪುರಂ 4ನೇ ಕ್ರಾಸ್ ಬಡಾವಣೆಯಲ್ಲಿರುವ 19x55 ಅಡಿಗಳಲ್ಲಿ ಕಟ್ಟಿ 1 ವರ್ಷ ಆಗಿರುವ 2 ಬಿಹೆಚ್‌ಕೆ ಹೊಂದಿರುವ 2 ಇಂಡಿಪೆಂಡೆಂಟ್ ಆಗಿ ಸಪರೇಟ್ ಆಗಿರುವ ಉತ್ತರ ಹಾಗೂ ಪೂರ್ವ ದಿಕ್ಕಿನ ಬಾಗಿಲು ಹೊಂದಿರುವಂತ ಹಾಗೂ ಕಾರ್ಪೋರೇಷನ್ ಖಾತೆ ಹಾಗೂ ಎಲ್ಲಾ ರೀತಿಯ ದಾಖಲೆಗಳನ್ನು ಹೊಂದಿರುವ ಮನೆ ಮಾರಾಟಕ್ಕಿದೆ. ಬೆಲೆ ರೂ. 46,00,000.
9019484156, 9739780095

ಟೆಲಿಕಾಲಿಂಗ್ ಮಾಡಲು ಹುಡುಗಿಯರು ಬೇಕಾಗಿದ್ದಾರೆ.
ಸಂಬಳ: 10000
ಸ್ಥಳ: ಚಾಮುಂಡಿಪುರಂ ಮತ್ತು ಎನ್.ಆರ್.ಮೊಹಲ್ಲಾ
Field Executive ಬೇಕಾಗಿದ್ದಾರೆ.
Collection Field (ಸಂಬಳ: 15000)
8150005111
Team manager ಬೇಕಾಗಿದ್ದಾರೆ (ಸಂಬಳ–20000)

ಸೈಟುಗಳು ಮಾರಾಟಕ್ಕಿವೆ
20x30, 30x40 ಶ್ರೀರಾಂಪುರ ರಿಂಗ್ ರೋಡ್ ಮೈಸೂರು
9945321020

ಬೇಕಾಗಿದ್ದಾರೆ
1) ಅನುಭವವುಳ್ಳ ಇಬ್ಬರು ಅರ್ಚಕರು ಬೇಕಾಗಿದ್ದಾರೆ.
2) ಒಬ್ಬರು ಗುಮಾಸ್ತರು ಬೇಕಾಗಿರುತ್ತಾರೆ.
ಸಂಪರ್ಕಿಸಬೇಕಾದ ವಿಳಾಸ:
ಶ್ರೀ ಚಾಮುಂಡೇಶ್ವರಿ ಅಮ್ಮನವರ ದೇವಸ್ಥಾನ ಚಾಮುಂಡಿಪುರಂ, ವಿದ್ಯಾರಣ್ಯಪುರಂ, ಮೈಸೂರು–8
Mob: 9448053321

ಬೇಕಾಗಿದ್ದಾರೆ
ಲೇಡೀಸ್ ಪಿ.ಜಿ. ಯಲ್ಲಿ ಅಡುಗೆ ಹೆಲ್ಪರ್ ಕೆಲಸಕ್ಕೆ ಮಹಿಳೆ ಬೇಕಾಗಿದ್ದಾರೆ,. ಪಿಜಿಯಲ್ಲೇ ಉಳಿಯಬೇಕು.
9535744143, 9986622769

S/W 28x40 ಕಾರ್ನರ್
ಸೈಟು ಮಾರಾಟಕ್ಕಿದೆ 15 ಲಕ್ಷದ 80 ಸಾವಿರಗಳು DTCP 'A' ಖಾತೆ GSS ಲೇಔಟ್, ಟಿವಿಎಸ್ ಫ್ಯಾಕ್ಟರಿ, ತಳೂರು ಹತ್ತಿರ, ಮೈಸೂರು
Mob: 9972557534

SITES FOR SALE
Near Bhugatagalli Check Post and Vajamangala Gate on Bannur Road, all are MUDA approved Layouts
30x40, 40x40, 40x60
LOAN FACILITY AVAILABLE.
Mysore East Properties
Call: 9535830530

ಬೇಕಾಗಿದ್ದಾರೆ
ಪೆಟ್ರೋಲ್ ಬಂಕ್‌ನಲ್ಲಿ ಹೆಲ್ಪರ್ ಮತ್ತು ಕ್ಯಾಷಿಯರ್ ಕೆಲಸ ಮಾಡಲು ಹುಡುಗರು ಮತ್ತು ಹುಡುಗಿಯರು ಬೇಕಾಗಿದ್ದಾರೆ.
ಸ್ಥಳ: ವಿಜಯನಗರ ವಾಟರ್ ಟ್ಯಾಂಕ್ ಹತ್ತಿರ, ಮೈಸೂರು ನಗರ
6364748485

SITE FOR SALE
1. 1065 sqft East facing Vijayanagar 4th Stage, MUDA approved Layout
2. 30x40 West facing Dattagalli
3. 21000sqft alienated land behind Airport, adjacent to Srinagar Layout
9483358399

ವಾಣಿಜ್ಯ ನಿವೇಶನ ಮಾರಾಟಕ್ಕಿದೆ
1) 50x80 ಪಶ್ಚಿಮ ಮುಖ 4ನೇ ಹಂತ, ಅಪೋಲೋ ಆಸ್ಪತ್ರೆ ರಸ್ತೆಮ ಆದಿಚುಂಚನಗಿರಿ 80'ಅಡಿ ರಸ್ತೆ ಕುವೆಂಪುನಗರ ಮೈಸೂರು
2) 45x60 ಉತ್ತರ ಮುಖ ಎನ್.ಬ್ಲಾಕ್ ನಿಯರ್ KSRTC ಡಿಪೋ ಹತ್ತಿರ, ಕುವೆಂಪುನಗರ, ಮೈಸೂರು
9448166798

30x40 AND 40x60 SITES FOR SALE
Vijayanagar 4th Stage, 2nd Phase.
Mob: 7899214181

ಮನೆ ಕೆಲಸಕ್ಕೆ ಮಹಿಳೆ ಬೇಕಾಗಿದ್ದಾರೆ
ಮನೆಯಲ್ಲೇ ಉಳಿದುಕೊಂಡು (24x7), ಮನೆ ಕೆಲಸ, ಅಡುಗೆ ಮತ್ತು ವೃದ್ಧ ದಂಪತಿಗಳ ಆರೈಕೆ ಮಾಡಲು ಮಹಿಳೆ ಬೇಕಾಗಿದ್ದಾರೆ. ಜಾತಿ ಬೇಧವಿಲ್ಲ, ಗ್ರಾಮೀಣ ಮಹಿಳೆಯರಿಗೆ ಮೊದಲ ಆದ್ಯತೆ. ಸಂಬಳ: ರೂ. 16,000. ಸಂಪರ್ಕಿಸಿ:
Mob: 9980733384

Only for enthusiastic people
If you are retired / businessmen / lady entrepreneur, here we have an excellent opportunity. Benefits will be unlimited, business income without investment. Part time & full time also. (Govt. of India approved). First preference for Retd. Officials, senior citizens & housewives. For details contact:
Dattatri - 9845458130
Prakash - 8861918556

Wanted for Rent
2 BHK newly constructed house, G/F or F/F.
Call: 9108923123

ತಕ್ಷಣ ಕೆಲಸಕ್ಕೆ ಬೇಕಾಗಿದ್ದಾರೆ
ಮೇಟಗಳ್ಳಿ ಇಂಡಸ್ಟ್ರಿಯಲ್ ಏರಿಯಾದಲ್ಲಿ ಕೆಲಸ ಮಾಡಲು SSLC, Pass or Fail, PUC, ITI, Any Trade ಹುಡುಗರು ಕೆಲಸಕ್ಕೆ ಬೇಕಾಗಿದ್ದಾರೆ.
ಸಂಬಳ: 15,000/–, ಅನುಕೂಲತೆ : ESI, PF, Canteen ಸೌಲಭ್ಯವಿರುತ್ತದೆ.
6362491336,9611601179
8105651601,7090309148

ತಕ್ಷಣ ಬೇಕಾಗಿದ್ದಾರೆ
1) ಸೆಕ್ಯೂರಿಟಿ ಗಾರ್ಡ್ಸ್ – (ಹೂಟಗಳ್ಳಿ, ಬೆಳವಾಡಿ, ಕೆ.ಆರ್.ಎಸ್, ಬೆಳಗೊಳ)
2) ಹೌಸ್ ಕೀಪಿಂಗ್–ಹೋಟೆಲ್‌ಗೆ (ಒಂಟಿಕೊಪ್ಪಲ್, BMH ಜಯಲಕ್ಷ್ಮಿಪುರಂ)
3) ರಾತ್ರಿ ಪಾಳಯದಲ್ಲಿ ಕೆಲಸಕ್ಕೆ – ಸೆಕ್ಯೂರಿಟಿ ಗಾರ್ಡ್ ಮತ್ತು ಹೌಸ್ ಕೀಪಿಂಗ್ ಹುಡುಗರು
9739166772
9880419847

SITE FOR SALE
40X40 corner Vishwa Manava Enclave Vijayanagar 4th Stage
8050821108

SITE FOR SALE
30x50 site for sale, Treasury Layout, Opp. Park East (Near Dattagalli).
Call: 9880273834

ನಿವೃತ್ತ ನೌಕರರಿಗೆ ಉದ್ಯೋಗಾವಕಾಶ ಸೆಮಿನಾರ್
ವಿಶ್ವಸಾರ್ಹ ಬ್ಯಾಂಕ್ ಸಮೂಹ ಸಂಸ್ಥೆಯಲ್ಲಿ ರಾಜ್ಯ/ಕೇಂದ್ರ ಸರ್ಕಾರಿದ ನಿವೃತ್ತ ನೌಕರರಿಗೆ ಉದ್ಯೋಗ ಅವಕಾಶದ ಸೆಮಿನಾರ್ ಏರ್ಪಡಿಸಲಾಗಿದೆ.
ಸ್ಥಳ: ಮೌರ್ಯ ರೆಸಿಡೆನ್ಸಿ ಹೋಟೆಲ್ ಹರ್ಷ ರಸ್ತೆ, ಲ್ಯಾಂಡ್‌ಮಾರ್ಕ್ ಟಾಕೀಸ್ ಹತ್ತಿರ, ಮೈಸೂರು–01
ದಿನಾಂಕ: 16–11–2024 ಸಮಯ 11 ಗಂಟೆಗೆ
ವಿದ್ಯಾರ್ಹತೆ: SSLC above Any Degree. Age 30 Year & above ದಾಖಲಾತಿಗಳು: 1) ಪಾನ್ ಕಾರ್ಡ್, 2) ಫೋಟೋ 3) ಆಧಾರ್ ಕಾರ್ಡ್ 4) ವಿದ್ಯಾರ್ಹತೆ 5) ಬ್ಯಾಂಕ್ ಪಾಸ್ ಬುಕ್ 1st page
Followed by Lunch
9449068132,7022034200

ಮ್ಯಾಂಗೋ ಟ್ರೀ ಬಡಾವಣೆ
Fully Developed ಸೈಟ್‌ಗಳು ಮಾರಾಟಕ್ಕಿವೆ 30x40 ಅಳತೆ, ಇಲವಾಲ ನಂತರ.
Mob: 9880774395

ಬೇಕಾಗಿದ್ದಾರೆ
Whole Sale ಅಂಗಡಿಗೆ
1) Tally Operator-1Post
2) SSLC Pass ಆಗಿರುವ ಹುಡುಗರು ಅಂಗಡಿಯಲ್ಲಿ ಕೆಲಸ ಮಾಡಲು ಬೇಕಾಗಿದ್ದಾರೆ.
Sri Balaji Agro Traders
9886666230

CHANGE OF NAME
I, VISHAL KUMAR S S/o SHYAMALAL JAIN Residing at # 1207/1, MANASARA ROAD, ITTIGEGUD, MYSORE-570010, HAVE Changed my name From VISHAL KUMAR.S TO VISHAL KUMAR SHYAMALAL JAIN ON my own free nill sworn in before Notary L.N. Rajendran Mysuru vide Affidavit dated 13-11-2024
-Sd/- VISHAL KUMARSHYAMALAL JAIN

ಬೇಕಾಗಿದ್ದಾರೆ
ಬಟ್ಟೆ ಅಂಗಡಿಯಲ್ಲಿ ಕೆಲಸ ಮಾಡಲು ಹುಡುಗರು ಬೇಕಾಗಿದ್ದಾರೆ ವಸತಿ ಸೌಕರ್ಯವಿದೆ
ವೇತನ 15 ರಿಂದ 20 ಸಾವಿರ
8884179981

REQUIRED
OFFICE ASSITANT FOR A DEVETOPER OFFICE PERSON WITH OWN VEHICLE PREFERRED
9483358399

HOUSE FOR SALE
30X40 South East Corner Ground 2 BHK, 1st 1 room Teacher's Layout Near Devegowda Circle Mysore
9980951235

ಬೇಕಾಗಿದ್ದಾರೆ
ಕನಿಷ್ಠ SSLC ಓದಿರುವ ಸುಮಾರು 25 ರಿಂದ 30 ವರ್ಷವುಳ್ಳ ಅಭ್ಯರ್ಥಿಗಳು ರಾಸಾಯನಿಕ ದ್ರಾವಣ ಸಿಂಪಡಿಸಲು (Pestr Control Service) ಬೇಕಾಗಿದ್ದಾರೆ. ದ್ವಿಚಕ್ರ ವಾಹನಗಳು ಉಳ್ಳವರಿಗೆ ಆದ್ಯತೆ ತಿಂಗಳಿಗೆ ರೂ.14000/– ಹಾಗೂ ಇತರೆ ಭತ್ಯೆಗಳಿರುತ್ತದೆ. ಕಂಪ್ಯೂಟರ್ ಜ್ಞಾನ ಹೊಂದಿರುವ ಹಾಗೂ ಆಫೀಸ್‌ನ ಎಲ್ಲಾ ಕೆಲಸ ಮಾಡಲು ಕನಿಷ್ಠ Degree ಓದಿರುವ ಒಬ್ಬ ಹುಡುಗಿ ಬೇಕಾಗಿದ್ದಾರೆ.
9844404232
8792192332

ಸರ್ಕಾರಿ ಕಛೇರಿಯಲ್ಲಿ ಸೆಕ್ಯೂರಿಟಿ ಗಾರ್ಡ್ ಕೆಲಸ ನಿರ್ವಹಿಸಲು ಗಾರ್ಡ್‌ಗಳು ಬೇಕಾಗಿದ್ದಾರೆ.
ಹುದ್ದೆ : ಸೆಕ್ಯೂರಿಟಿ ಗಾರ್ಡ್
ಸ್ಥಳ: ಮೈಸೂರು
ಸಂಪರ್ಕಿಸಬೇಕಾದ ಮೊಬೈಲ್ ಸಂಖ್ಯೆ:
9731251118
8884089499

ಬೇಕಾಗಿದ್ದಾರೆ
ಫರ್ನಿಷಿಂಗ್ ಅಂಗಡಿಯಲ್ಲಿ ಕೆಲಸಕ್ಕೆ ಹುಡುಗರು ಬೇಕಾಗಿದ್ದಾರೆ. ಸಮಯ 10.30 ರಿಂದ ರಾತ್ರಿ 9.00 KR ಆಸ್ಪತ್ರೆ ಹತ್ತಿರ, ಇರ್ವಿನ್ ರಸ್ತೆ, ಮೈಸೂರು
ಸಂಬಳ: 12,000 ಸಾವಿರದಿಂದ 16,000 ಸಾವಿರದವರೆಗೆ
8050744784

WANTED
Wanted Teachers for the reputed CBSE School in Mysore City residential / Non residential for the Subjects Hindi, English and PE to Teach From 6th to 10th, Std
7676522224
8495983613

SITE FOR SALE
(30X40) @ MANUGANAHALLI MYSORE-HUNSUR HIGHWAY 6 KM FROM HINKAL RING ROAD 3 KM FROM YELWAL BUSSTAND. 15 LACS
95388-39926

ತಕ್ಷಣ ಬೇಕಾಗಿದ್ದಾರೆ
ಮೈಸೂರಿನಲ್ಲಿರುವ Govt. registered AW Group of Companyಗೆ SSLC (Pass) PUC, ITI, Any Degree ಆಗಿರುವ 214 ಅಭ್ಯರ್ಥಿಗಳು ಬೇಕಾಗಿದ್ದಾರೆ (ಕನ್ನಡ ಬಲ್ಲರಿಗೆ ಹೆಚ್ಚಿನ ಆದ್ಯತೆ) (ಉಚಿತ ವಸತಿ+ಊಟ+ Promotion)
ವಯೋಮಿತಿ : 18-34 2/yers
ತಿಂಗಳಿಗೆ : 21500–26000
7349699460

ಬೇಕಾಗಿದ್ದಾರೆ
ಮೈಸೂರು ನಗರದಲ್ಲಿರುವ ಸಸ್ಯಾಹಾರಿ ಹೋಟೆಲಿಗೆ ಒಬ್ಬ ಸಸ್ಯಾಹಾರಿ ಅಡುಗೆಯವ, ಸೂಪರ್‌ವೈಸರ್ ಕಮ್ ಕ್ಯಾಷಿಯರ್ ಒಬ್ಬ ಕಾಫಿ ಮಾಡುವವ ಹಾಗೂ ಸಪ್ಲೈಯರ ಬೇಕಾಗಿದ್ದಾರೆ. ರಾತ್ರಿ ತಂಗಲು ವ್ಯವಸ್ಥೆ ಇದೆ.
9916206561

ಮನೆ ಮಾರಾಟಕ್ಕಿದೆ
ಮಹಾಲಕ್ಷ್ಮೀ ಲೇಔಟ್, ನಂಜನಗೂಡು ಅಳತೆ 20x40, ಬೆಲೆ 23 ಲಕ್ಷ ಕೂಡಲೇ ಸಂಪರ್ಕಿಸಿ (ಮೊದಲು ಬಂದವರಿಗೆ ಆದ್ಯತೆ)
9945182325
(Offer on Priority)

ಬೇಕಾಗಿದ್ದಾರೆ
ಕೆಲಸಕ್ಕೆ ಬೇಕಾಗಿದ್ದಾರೆ ಸೆಕ್ಯುರಿಟಿ ಗಾರ್ಡ್ (ಪುರುಷರು): ಬಸ್ತಿಪುರ, ಇನ್ಫೋಸಿಸ್ ಹತ್ತಿರ, ಹೆಬ್ಬಾಳ ಇಂಡಸ್ಟ್ರಿಯಲ್ ಏರಿಯಾ, ದಟ್ಟಗಳ್ಳಿ, ಚಾಮುಂಡಿ ಬೆಟ್ಟ ಹತ್ತಿರಾ, ಜೆಸಿ ನಗರ, ಮೇಟಗಳ್ಳಿ ಇಂಡಸ್ಟ್ರಿಯಲ್ ಏರಿಯಾ, ಬೋಗಾದಿ ಹತ್ತಿರ.
9606808975

ತಕ್ಷಣ ಬೇಕಾಗಿದ್ದಾರೆ
ಬೇಗೂರು, ತೊಂಡುವಾಡಿ, ಸಿಂಧುವಳ್ಳಿಪುರ ಏರಿಯಾದಲ್ಲಿ ಕೆಲಸ ಮಾಡಲು ಸೆಕ್ಯೂರಿಟಿ ಗಾರ್ಡ್‌ಗಳು ಬೇಕಾಗಿದ್ದಾರೆ.
ವಿದ್ಯಾರ್ಹತೆ : SSLC
ಸಂಬಳ: 17,000/-
ESI & PF ಊಟ ತಿಂಡಿ ಸೌಲಭ್ಯವಿರುತ್ತದೆ.
9620667819
9880727819

ಬೇಕಾಗಿದ್ದಾರೆ
ಎಂಎಸ್ ನಾರಾಯಣ ಸ್ವೀಟ್ ಗೆ ಅನುಭವವುಳ್ಳ ಮಾರ್ಕೆಟಿಂಗ್ ವ್ಯಕ್ತಿಗಳು ಹಾಗೂ ಕೌಂಟರ್ ಸೇಲ್ಸ್ ಮ್ಯಾನ್‌ಗಳು ಮತ್ತು (ಟೆಲಿ ಕಾಲರ್ ಫೀಮೇಲ್) ಈ ಕೂಡಲೇ ಬೇಕಾಗಿದ್ದಾರೆ.... ಉತ್ತಮ ಸಂಬಳ ದೊರಕುತ್ತದೆ ಕುವೆಂಪು ನಗರ ಉದಯರವಿ ರೋಡ್ ಅಪೋಸಿಟ್ ರಾಯಲ್ ಎನ್ಫೀಲ್ಡ್ ಶೋರೂಮ್..
ಈ ಕೂಡಲೇ ಕೆಳಕಂಡ ನಂಬರಿಗೆ ಕರೆ ಮಾಡಿ
9686907943
7090700166

ಬೇಕಾಗಿದ್ದಾರೆ
ಹೌಸ್ ಕೀಪಿಂಗ್ ಕೆಲಸಕ್ಕೆ ಬೆಳಿಗ್ಗೆ 8–12 ಗಂಟೆಗೆ ಒಬ್ಬರು ಮಧ್ಯಾಹ್ನ 2–6 ಗಂಟೆಗೆ ಒಬ್ಬರು
9972963390

ನಿವೃತ್ತ ನೌಕರರಿಗೆ ಉದ್ಯೋಗಾವಕಾಶ ಸೆಮಿನಾರ್
ಭಾರತದ ಅತ್ಯಂತ ವಿಶ್ವಾಸಾರ್ಹ ಬ್ಯಾಂಕ್ ಸಮೂಹ ಸಂಸ್ಥೆಯಲ್ಲಿ ಉದ್ಯೋಗ ಮತ್ತು Business ಅವಕಾಶದ ಸೆಮಿನಾರ್ ಏರ್ಪಡಿಸಲಾಗಿದೆ Benifits : Fixed Salary + PF + ESI + ಇತರೆ ಭತ್ಯೆಗಳು ಲಭ್ಯವಿರುತದೆ. ಬೇಕಾಗುವ ದಾಖಲಾತಿಗಳು: 1) ಫೋಟೊ 2) ಪಾನ್‌ಕಾರ್ಡ್ 3) ಆಧಾರ್ ಕಾರ್ಡ್, 4) ಬ್ಯಾಂಕ್ ಪಾಸ್‌ಬುಕ್. ಸ್ಥಳ: ಮೌರ್ಯ ರೆಸಿಡೆನ್ಸಿ, ಶ್ರೀ ಹರ್ಷ ರಸ್ತೆ, ಮೈಸೂರು. ದಿ.16–11–24, ಸಮಯ: ಬೆಳಿಗ್ಗೆ 11.00. Followed by Lunch
9448376423,9886883858

ಸೈಟು ಮಾರಾಟಕ್ಕಿದೆ
30x40 ಸೈಟು ನಂ.8
30x40 ಸೈಟು ನಂ.9
ರಾಮಸ್ವಾಮಿ ಲೇಔಟ್ ಕೊಳ್ಳೇಗಾಲ
ಶ್ರೀ ಸಾಯಿಬಾಬಾ ದೇವಸ್ಥಾನದ ಹತ್ತಿರ
9066164239

ಬೇಕಾಗಿದ್ದಾರೆ
ವೃದ್ಧರು, ರೋಗಿಗಳನ್ನು ಆರೈಕೆ ಮಾಡಲು, ಯುವಕ/ಯುವತಿಯರು, ಮಹಿಳೆಯರು,ವಿಧವೆಯರು/ವಿಚ್ಛೇದಿತೆಯರು ಹೋಮ್ ನರ್ಸ್ ಕೆಲಸಕ್ಕೆ ಬೇಕಾಗಿದ್ದಾರೆ. ನಮ್ಮಲ್ಲೇ ಕಡ್ಡಾಯವಾಗಿ ಉಳಿದು ಕೊಳ್ಳುವರಿಗೆ ಮಾತ್ರ ಅವಕಾಶ. (ಮಹಿಳಾ ಅಡುಗೆ ಭಟ್ಟರು ಕೂಡ ಬೇಕಾಗಿದ್ದಾರೆ) ಸಂಬಳ 15,000 ರಿಂದ 20,000ವರೆಗೆ ಉಚಿತ ಊಟ ಮತ್ತು ವಸತಿ ಸೌಲಭ್ಯವಿರುತ್ತದೆ.
96320 39123

ಬೇಕಾಗಿದ್ದಾರೆ
ಹಳೆ ಆರ್‌ಎಂಸಿ ಸರ್ಕಲ್‌ನ ಪೆಟ್ರೋಲ್ ಬಂಕ್‌ಗೆ ಕ್ಯಾಷಿಯರ್ & ಹೆಲ್ಪರ್ಸ್ (ಪುರುಷ / ಮಹಿಳೆ) ವಯಸ್ಸು : 18 ರಿಂದ 40 ಬೇಕಾಗಿದ್ದಾರೆ.
9035541774

CHANGE OF NAME
I, Yogamba T.D. Residing at No.2600, 5th Cross, 18th Main, Vijayanagara 2nd Stage, Mysore-570017, have changed my Name from YOGAMBA KRISHNA MURTHY to YOGAMBA T.D. on my own free will infront of Notary CHELUVAMBIKA M.B. vide Affidavit Date 11/11/2024 at Mysuru.
Sd/- Yogamba T.D.

ಮೈಸೂರು ಮಿತ್ರ

ಇಂದಿನಿಂದ ದೇಶಾದ್ಯಂತ ರೈತರ ಪ್ರತಿಭಟನೆ



ಮೈಸೂರು ಜಲದರ್ಶಿನಿಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ ನೇತೃತ್ವದಲ್ಲಿ ವಿವಿಧ ರೈತ ಮುಖಂಡರ ಸಭೆ ನಡೆಯಿತು.

ಮೈಸೂರು, ನ.13(ಎಸ್‌ಪಿಎನ್)– ಸಂಯುಕ್ತ ಕಿಸಾನ್ ಮೋರ್ಚಾ ಹಾಗೂ ಕೇಂದ್ರೀಯ ಕಾರ್ಮಿಕ ಸಂಘಟನೆಗಳ ಒಕ್ಕೂಟವಾದ ಜೆಸಿಟಿಯು ರಾಜ್ಯ ಘಟಕದ ವತಿಯಿಂದ ನ.15ರಿಂದ 25 ರವರೆಗೆ ರಾಜ್ಯ ಮತ್ತು ಕೇಂದ್ರ ಸರ್ಕಾರದ ರೈತ, ಕಾರ್ಮಿಕ ಕಾಯ್ದೆಗಳನ್ನು ವಿರೋಧಿಸಿ ದೇಶಾದ್ಯಂತ ಪ್ರತಿಭಟನೆ, ಜಾಥಾ ನಡೆಸಲು ತೀರ್ಮಾನಿಸಿದೆ ಎಂದು ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ ತಿಳಿಸಿದರು.

ಮೈಸೂರು ಜಲದರ್ಶಿನಿಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಪದಾಧಿಕಾರಿಗಳು ಹಾಗೂ ವಿವಿಧ ರೈತ ಮುಖಂಡರ ಸಭೆ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರ ಬಂಡವಾಳಶಾಹಿಗಳ ಜೊತೆ ಕೈಜೋಡಿಸಿ ಶ್ರಮಿಕರ ಹಕ್ಕುಗಳನ್ನು ಕಸಿದುಕೊಳ್ಳಲು ಹೊರಟಿದೆ. ಅಲ್ಲದೆ, ಕರ್ನಾಟಕ ರಾಜ್ಯ ಸರ್ಕಾರವು ಚುನಾವಣೆಗೂ ಮುನ್ನ ನೀಡಿದ ಭರವಸೆಗಳನ್ನು ಈಡೇರಿಸಿಲ್ಲ ಎಂದು ಆರೋಪಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಅಧಿಕಾರಕ್ಕೆ ಬಂದ ತಕ್ಷಣ ಬಿಜೆಪಿ ಅವಧಿಯಲ್ಲಿ ಕಾರ್ಮಿಕರು, ಶ್ರಮಿಕರು ಹಾಗೂ ರೈತರ ವಿರುದ್ಧ ಜಾರಿಗೆ ತಂದಿರುವ ಕಾನೂನುಗಳನ್ನು ವಾಪಸ್ ಪಡೆಯುವುದಾಗಿ ಭರವಸೆ ನೀಡಿತ್ತು. ಅಂತೆಯೇ ಎಪಿಎಂಸಿ ಕಾಯ್ದೆ, ರೈತರಲ್ಲದವರು ಕೃಷಿ ಜಮೀನು ಖರೀದಿಗೆ ಕಡಿವಾಣ ಹಾಕುವುದಾಗಿ ತಿಳಿಸಿತ್ತು. ಆದರೆ, ಕಾಂಗ್ರೆಸ್ ಸರ್ಕಾರ ಯಾವುದೇ ಭರವಸೆಗಳು ಈಡೇರಿಸಿಲ್ಲ ಎಂದು ಟೀಕಿಸಿದರು.

ದೆಹಲಿ ಪ್ರತಿಭಟನೆಗೆ ನಾಲ್ಕು ವರ್ಷ: ಅಲ್ಲದೆ, ದೆಹಲಿಯಲ್ಲಿ ಕೇಂದ್ರ ಸರ್ಕಾರ ಜಾರಿಗೆ ತಂದಿದ್ದ 3 ಕೃಷಿ ಕಾಯ್ದೆ ವಿರೋಧಿಸಿ ಸಂಯುಕ್ತ ಕಿಸಾನ್ ಮೋರ್ಚಾ ಸೇರಿದಂತೆ 700ಕ್ಕೂ ರೈತರು, ಕಾರ್ಮಿಕ ಸಂಘಟನೆಗಳು ನಡೆಸಿದ್ದ ಧರಣಿಗೆ ನಾಲ್ಕು ವರ್ಷ ತುಂಬಿದ್ದ ಹಿನ್ನೆಲೆಯಲ್ಲಿ ದೇಶಾದ್ಯಂತ 500 ಜಿಲ್ಲೆಗಳಲ್ಲಿ ನ.15ರಿಂದ ನ.25ರವರೆಗೆ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ.

ನ.26ರಂದು ಮೈಸೂರಲ್ಲೂ ಪ್ರತಿಭಟನೆ: ಅಂತೆಯೇ ರಾಜ್ಯದ ಎಲ್ಲಾ ಜಿಲ್ಲಾ ಹಾಗೂ ತಾಲೂಕು ಕೇಂದ್ರಗಳಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದ್ದು, ಮೈಸೂರಿನ ಕನಿಷ್ಠ ನೂರಕ್ಕೂ ಹೆಚ್ಚು ಹಳ್ಳಿಗಳಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲು ತೀರ್ಮಾನಿಸಲಾಗಿದೆ. ಅಂತೆಯೇ ಮೈಸೂರಿನಲ್ಲಿ ನ.26ರಂದು ಬೆಳಗ್ಗೆ 10 ಗಂಟೆಗೆ ಪುರಭವನದ ಆವರಣದಲ್ಲಿ ರೈತರು ಜಮಾಯಿಸಿ, ನಂತರ ಗಾಂಧಿ ಚೌಕದಲ್ಲಿ ಪ್ರತಿಭಟನಾ ಸಭೆ ನಡೆಯಲಿದೆ ಎಂದರು.

ವಿವಿಧ ಬೇಡಿಕೆಗಳ ಈಡೇರಿಸಲು ಒತ್ತಾಯ: ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಚುನಾವಣೆ ಸಂದರ್ಭದಲ್ಲಿ ರೈತರಿಗೆ ನೀಡಿರುವ ಭರವಸೆಗಳನ್ನು ಈಡೇರಿಸಬೇಕು. ವಕ್ಫ್ ಕಾಯ್ದೆಯಲ್ಲಿನ ಗೊಂದಲ ಬಗೆಹರಿಸಿ, ರೈತರ ಕೃಷಿ ಜಮೀನುಗಳ ಸ್ವಾಧೀನ ಕೈಬಿಡಬೇಕು. ರೈತ ಹಾಗೂ ಕಾರ್ಮಿಕ ಸಂಘಟನೆಗಳ ಜೊತೆ ಮಾತುಕತೆ ಆರಂಭಿಸಬೇಕು. ರೈತರ ಬೆಳೆಗಳಿಗೆ ಕನಿಷ್ಠ ದರ ಕಾಯ್ದೆಯಾಗಬೇಕು, ಎಲ್ಲಾ ಅಸಂಘಟಿತ ಕಾರ್ಮಿಕರಿಗೂ ಕನಿಷ್ಠ27 ಸಾವಿರ ವೇತನ ಮತ್ತು ಸಾಮಾಜಿಕ ಭದ್ರತೆ ಖಾತ್ರಿಯಾಗಬೇಕು. ದಮನಿತ ಸಮುದಾಯಗಳಿಗೆ ರಕ್ಷಣೆ, ಯುವಜನರಿಗೆ ಉದ್ಯೋಗ ಭದ್ರತೆ ಹಾಗೂ ಸಮಾಜದಲ್ಲಿ ಸೌಹಾರ್ದದ ವಾತಾವರಣ ಖಾತ್ರಿಯಾಗಿಸಲು ಕ್ರಮ ಕೈಗೊಳ್ಳಬೇಕು. ಜಿಎಸ್‌ಟಿ ಮತ್ತು ಸೆಸ್ ಅನ್ನು ತಗ್ಗಿಸುವ ಮೂಲಕ ಬೆಲೆ ಏರಿಕೆಯನ್ನು ಇಳಿಸಬೇಕು ಎಂದು ಒತ್ತಾಯಿಸಿದರು. ಈ ವೇಳೆ ಮುಖಂಡರಾದ ದೇವದಾಸ್, ಚಂದ್ರಶೇಖರ್ ಮೇಟಿ, ಜಗದೀಶ್ ಸೂರ್ಯ, ಉಗ್ರನರಸಿಂಹೇಗೌಡ, ಹೊಸಕೋಟೆ ಬಸವರಾಜು, ಪಿ.ಮರಂಕಯ್ಯ, ಬಾಲಾಜಿ ರಾವ್, ಬಂಕ್ಕಳ್ಳಿ ನಂಜುಂಡಸ್ವಾಮಿ, ಜಗನ್ನಾಥ್ ಸೇರಿದಂತೆ ಇತರೆ ಮುಖಂಡರು ಉಪಸ್ಥಿತರಿದ್ದರು.

ತಿ.ನರಸೀಪುರದಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳ ಉದ್ಘಾಟನೆ



ಮೈಸೂರು ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯಿತಿ ವತಿಯಿಂದ ತಿ.ನರಸೀಪುರ ತಾಲೂಕಿನ ಹೊರಳಹಳ್ಳಿ ಗ್ರಾಮದಲ್ಲಿ ಆಯೋಜಿಸಿದ್ದ ತಿ.ನರಸೀಪುರ ವಿಧಾನಸಭಾ ಕ್ಷೇತ್ರದ 470 ಕೋಟಿ ರೂ. ಮೌಲ್ಯದ 211 ಕಾಮಗಾರಿಗಳ ಮತ್ತು ಕಟ್ಟಡಗಳ ಲೋಕಾರ್ಪಣೆ ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಿದರು. ಚಿತ್ರದಲ್ಲಿ ಸಚಿವರಾದ ಡಾ.ಹೆಚ್.ಸಿ. ಮಹದೇವಪ್ಪ, ಕೆ.ವೆಂಕಟೇಶ್, ಶಾಸಕರುಗಳಾದ ಯತೀಂದ್ರ, ಡಾ. ತಿಮ್ಮಯ್ಯ, ಸಂಸದ ಸುನೀಲ್ ಬೋಸ್ ಇತರರಿದ್ದಾರೆ.

ವಿಜೃಂಭಣೆಯ ಶ್ರೀಮಹದೇಶ್ವರ ಆರಾಧನಾ ಮಹೋತ್ಸವ

ಮಲ್ಲುಂಡಿ, ನ.13– ಕಾರ್ತಿಕ ಮಾಸದ ಪ್ರಯುಕ್ತ ಗ್ರಾಮದಲ್ಲಿ ಶ್ರೀಮಲೆ ಮಹದೇಶ್ವರರ ಆರಾಧನಾ ಮಹೋತ್ಸವ ವಿಜೃಂಭಣೆಯಿಂದ ನಡೆಯಿತು.

ಸೋಮವಾರ ಗ್ರಾಮದಲ್ಲಿ ಅನ್ನಸಂತರ್ಪಣೆ ಏರ್ಪಡಿಸಲಾಗಿತ್ತು. ಮಂಗಳವಾರ ಗ್ರಾಮದ ಹೊರವಲಯದ ಶ್ರೀಮಹದೇಶ್ವರ ದೇವಸ್ಥಾನದ ಬಳಿಯ ಕೆರೆಯಲ್ಲಿ ಗಂಗಾ ಪೂಜೆ ನೆರವೇರಿಸಿ, ವಿವಿಧ ಜಾನಪದ ಕಲಾ ತಂಡಗಳೊಂದಿಗೆ ಬಸವನನ್ನು ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಲಾಯಿತು. ಗ್ರಾಮದ ಬೀದಿಗಳನ್ನು ತಳಿರು ತೋರಣ ಹಾಗೂ ಬಣ್ಣ ಬಣ್ಣದ ದೀಪಗಳಿಂದ ಅಲಂಕರಿಸಲಾಗಿತ್ತು. ಗ್ರಾಮಸ್ಥರು ಶ್ರದ್ಧಾಭಕ್ತಿಯಿಂದ ಬಸವನಿಗೆ ಪೂಜೆ ಸಲ್ಲಿಸಿದರು.



ಮಹದೇಶ್ವರರ ಆರಾಧನಾ ಮಹೋತ್ಸವ ವಿಜೃಂಭಣೆಯಿಂದ ನಡೆಯಿತು.

ಉದ್ಯಮಶೀಲತಾ ಅಭಿವೃದ್ಧಿ ತರಬೇತಿ ಕಾರ್ಯಕ್ರಮ

ಮೈಸೂರು, ನ.13– ಕೌಶಲಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ(ಸಿಡಾಕ್) ಸ್ವಂತ ಉದ್ಯೋಗವನ್ನು ಸ್ಥಾಪಿಸಲು ಇಚ್ಛಿಸುವವರಿಗಾಗಿ 10 ದಿನಗಳ ಉದ್ಯಮಶೀಲತಾ ಅಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ನ.19ರಂದು ಆಯೋಜಿಸಲಾಗಿದೆ.

ತರಬೇತಿಯಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಅನುಸರಿಸಬೇಕಾದ ಕ್ರಮಗಳು, ಸರ್ಕಾರದ ಸ್ವಂತ ಉದ್ಯೋಗ ಯೋಜನೆಗಳು, ಬ್ಯಾಂಕಿನ ವ್ಯವಹಾರ, ಮಾರುಕಟ್ಟೆ ಸಮೀಕ್ಷೆ, ಯೋಜನಾ ವರದಿ ತಯಾರಿಕೆ ಹಾಗೂ ಉದ್ಯಮ ನಿರ್ವಹಣೆ, ಇತ್ಯಾದಿ ವಿಷಯಗಳ ಕುರಿತು ತರಬೇತಿಯನ್ನು ನೀಡಲಾಗುವುದು. 18 ವರ್ಷದಿಂದ 45 ವರ್ಷ ವಯಸ್ಸಿನ ಪುರುಷ ಮತ್ತು ಮಹಿಳೆ ಇಬ್ಬರಿಗೂ ಆದ್ಯತೆ ನೀಡಲಾಗಿದ್ದು, ಆಸಕ್ತ ಅಭ್ಯರ್ಥಿಗಳು ಸಿ.ಟಿ.ಐ ಕಟ್ಟಡದ ಸಿಡಾಕ್ ಜಂಟಿ ನಿರ್ದೇಶಕರ ಕಚೇರಿಯಲ್ಲಿ ಅರ್ಜಿ ಪಡೆದು, ನ.16ರೊಳಗೆ ಸಲ್ಲಿಸಬಹುದು. ಮಾಹಿತಿಗಾಗಿ ದೂ.ಸಂ: 6361611136 ಅಥವಾ 7353474649 ಅನ್ನು ಸಂಪರ್ಕಿಸಬಹುದು.

ಕೆ.ಆರ್.ನಗರ ಸರ್ಕಾರಿ ನೌಕರರ ಸಂಘದ ಚುನಾವಣೆ

ಆರೋಗ್ಯಾಧಿಕಾರಿ ಡಾ.ಡಿ.ನಟರಾಜು ಅವಿರೋಧ ಆಯ್ಕೆ



ನೂತನ ಅಧ್ಯಕ್ಷ ಡಾ.ಡಿ.ನಟರಾಜ್ ಅವರನ್ನು ಗ್ರಾಪಂ ಸದಸ್ಯ ಕೆ.ಪಿ.ಜಗದೀಶ್, ಮತ್ತಿತರರು ಅಭಿನಂದಿಸಿದರು.

ಕೆ.ಆರ್.ನಗರ, ನ.13– ತಾಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾಗಿ ಆರೋಗ್ಯಾಧಿಕಾರಿ ಡಾ.ಡಿ.ನಟರಾಜು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಅಧ್ಯಕ್ಷ ಸ್ಥಾನಕ್ಕೆ ತಾಲೂಕು ಆರೋಗ್ಯಾಧಿಕಾರಿ ಡಾ.ಡಿ.ನಟರಾಜು ಮತ್ತು ಪ್ರೌಢಶಾಲಾ ಶಿಕ್ಷಣ ಇಲಾಖೆಯ ಕೆ.ಮಧುಕುಮಾರ್ ನಾಮಪತ್ರ ಸಲ್ಲಿಸಿದ್ದರು. ಖಜಾಂಚಿ ಸ್ಥಾನಕ್ಕೆ ಕೃಷಿ ಇಲಾಖೆಯ ಹರೀಶ್ ಮತ್ತು ಶಿಕ್ಷಕ ಶಂಕರೇಗೌಡ ಸ್ಪರ್ಧಿಸಿದ್ದರು. ಆದರೆ ಕೆ.ಮಧುಕುಮಾರ್ ಹಾಗೂ ಶಂಕರೇಗೌಡ ನಾಮಪತ್ರ ವಾಪಸ್ ಪಡೆದ ಹಿನ್ನೆಲೆಯಲ್ಲಿ ಚುನಾವಣಾಧಿಕಾರಿ ವೆಂಕಟೇಶ್ ಅವಿರೋಧ ಆಯ್ಕೆಯನ್ನು ಘೋಷಿಸಿದರು. ಪಟ್ಟಣದ ಬಿಆರ್‌ಸಿ ಕೇಂದ್ರದಲ್ಲಿ ಮಾತನಾಡಿದ ವೆಂಕಟೇಶ್, ಇವರೊಂದಿಗೆ ರಾಜ್ಯ ಪರಿಷತ್ ಸದಸ್ಯರಾಗಿ ಕಂದಾಯ ಇಲಾಖೆಯ ಎಸ್.ಆರ್.ಯಶವಂತ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದರು.

ನೂತನ ಅಧ್ಯಕ್ಷ ಡಾ.ಡಿ.ನಟರಾಜು ಅವರನ್ನು ದೊಡ್ಡೆಕೊಪ್ಪಲು ಗ್ರಾಪಂ ಸದಸ್ಯ ಕೆ.ಪಿ.ಜಗದೀಶ್, ನಗರ ಯೋಜನಾ ಪ್ರಾಧಿಕಾರದ ನಿರ್ದೇಶಕ ಕೆ.ಎನ್. ಪ್ರಸನ್ನಕುಮಾರ್ ಮತ್ತಿತರರು ಅಭಿನಂದಿಸಿದರು.

ಶಾಲಾ ಮಕ್ಕಳಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರ



ಶಾಲಾ ವಿದ್ಯಾರ್ಥಿಗಳಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರ ನಡೆಯಿತು.

ಹೆಚ್.ಡಿ.ಕೋಟೆ, ನ.13– ಮೈಸೂರು ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ ಮತ್ತು ಕಾಲೇಜು, ಬಾಲ ರೋಗ ಮತ್ತು ಎನ್‌ಎಸ್‌ಎಸ್ ವಿಭಾಗ ಹಾಗೂ ಹೆಚ್.ಡಿ.ಕೋಟೆ ಲಯನ್ಸ್ ಕ್ಲಬ್ ಸಹಯೋಗದೊಂದಿಗೆ ತಾಲೂಕಿನ ಮಾದಾಪುರದಲ್ಲಿರುವ ಶ್ರೀ ಚಂದ್ರಮೌಳೇಶ್ವರ ಮಲ್ಲಿಕಾರ್ಜುನ ಸ್ವಾಮಿ ಶಾಲೆಯ ಆವರಣದಲ್ಲಿ ಶಾಲಾ ವಿದ್ಯಾರ್ಥಿಗಳಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರ ನಡೆಯಿತು.

ಈ ಸಂದರ್ಭದಲ್ಲಿ ಸ್ತ್ರೀ ರೋಗತಜ್ಞೆ ಡಾ. ಕೆ.ಲಕ್ಷ್ಮಿ ಅವರಾಡಿ ಅವರು, ಹೆಣ್ಣು ಮಕ್ಕಳಲ್ಲಿ ಕಂಡುಬರುವ ಸಮಸ್ಯೆಗಳು ಹಾಗೂ ಪರಿಹಾರದ ಬಗ್ಗೆ ಅರಿವು ಮೂಡಿಸಿದರು.

ಕಾರ್ಯಕ್ರಮದಲ್ಲಿ ಹೆಚ್.ಡಿ.ಕೋಟೆ ಲಯನ್ಸ್ ಕ್ಲಬ್ ತಾಲೂಕು ಅಧ್ಯಕ್ಷ ಬೀಚನಹಳ್ಳಿ ಭಾಸ್ಕರ್, ಲಯನ್ ನಾಗಣ್ಣ, ಆಯುರ್ವೇದ ಕಾಲೇಜಿನ ಡಾ. ಶಶಿಬಿಂದು, ಡಾ. ವಿಶಾಲ್, ಎಸ್.ಕುಮಾರ್, ಡಾ. ಪ್ರೀತಿ, ಡಾ. ವೈಶಾಖಿ, ಡಾ. ಛಾಯ ವಿದ್ಯಾಸಂಸ್ಥೆಯ ಆಡಳಿತ ಅಧಿಕಾರಿ ಮಹೇಶ್, ಮುಖ್ಯ ಶಿಕ್ಷಕರು ಹಾಗೂ ಸಹ ಶಿಕ್ಷಕರು ಭಾಗವಹಿಸಿದ್ದರು.

ನಲ್ಲೂರು ಶ್ರೀ ವೀರಭದ್ರೇಶ್ವರ ಸ್ವಾಮಿಗೆ ಕಾರ್ತಿಕ ಮಾಸದ ವಿಶೇಷ ಪೂಜೆ



ಸರಗೂರು ಕಾರ್ತಿಕ ಮಾಸದ ಅಂಗವಾಗಿ ನಲ್ಲೂರು ಶ್ರೀ ವೀರಭದ್ರೇಶ್ವರ ಸ್ವಾಮಿ ದೇವಾಲಯದಲ್ಲಿ ವಿಶೇಷ ಪೂಜೆ ನಡೆಸಿದ ಭಕ್ತರು

ಸರಗೂರು, ನ.13– ತಾಲೂಕಿನ ಪ್ರಸಿದ್ಧ ನಲ್ಲೂರು ಶ್ರೀ ವೀರಭದ್ರೇಶ್ವರ ದೇವಾಲಯದಲ್ಲಿ ಕಾರ್ತಿಕ ಮಾಸದ ಅಂಗವಾಗಿ ವಿಶೇಷ ಪೂಜೆ ನಡೆಸಲಾಯಿತು,

ದೇವಾಲಯದಲ್ಲಿ ಬೆಳಗಿನ ಜಾವದಿಂದಲೇ ಶ್ರೀ ವೀರಭದ್ರೇಶ್ವರ ಸ್ವಾಮಿಗೆ ಹೋಮ–ಹವನ, ರುದ್ರಾಭಿಷೇಕ ನಡೆಸಿ ವಿವಿಧ ಹೂವಿನಿಂದ ಮೂರ್ತಿಯನ್ನು ಅಲಂಕರಿಸಿ, ವಿಶೇಷ ಪೂಜೆ ನಡೆಸಿ ಮಹಾಮಂಗಳಾರತಿ ಮಾಡಿ ಪ್ರಸಾದ ವಿನಿಯೋಗ ಮಾಡಲಾಯಿತು. ಗೃಹಿಣಿಯರು ನೂರೊಂದು ದೀಪ ಹಚ್ಚಿ, ದೇವರನಾಮ ಹಾಡಿ ಭಕ್ತಿ ಸಮರ್ಪಿಸಿದರು. ಬೆಳಗ್ಗಿನಿಂದ ಸಂಜೆ ತನಕ ನೂರಾರು ಭಕ್ತರು ಶ್ರೀ ವೀರಭದ್ರೇಶ್ವರ ಸ್ವಾಮಿ ದರ್ಶನ ಪಡೆದು ಪುನೀತರಾದರು. ಎಲ್ಲಾ ಭಕ್ತರಿಗೂ ದಾಸೋಹ ನಡೆಸಲಾಯಿತು. ಪೂಜಾ ಸೇವಾರ್ಥದಾರರಾದ ಎಸ್.ಎನ್.ನಾಗರಾಜು, ಎಸ್.ಎನ್.ಶ್ರೀಕಂಠಸ್ವಾಮಿ, ಶ್ರೀಮತಿ ನಾಗರತ್ನಮ್ಮ ಮಕ್ಕಳು ಹಾಗೂ ಬಿ.ಸಿ.ಎಂ.ಸ್ವಾಮಿ ಕುಟುಂಬದವರು ಪೂಜಾ ಸೇವೆ ನಡೆಸಿದರು.

ಪೂಜಾ ಕಾರ್ಯಕ್ರಮದಲ್ಲಿ ವೀರಶೈವ ಸಮಾಜದ ಅಧ್ಯಕ್ಷ ಎಸ್.ಎನ್.ಮೋಹನ್ ಕುಮಾರ್, ಶ್ರೀಕಂಠಸ್ವಾಮಿ, ಹಂಚೀಪುರ ಪುಟ್ಟಣ್ಣ, ಮಹದೇವಸ್ವಾಮಿ, ಮುಂಟಿ ಕುಮಾರ, ಪಟ್ಟಣ ಪಂಚಾಯಿತಿ ಸದಸ್ಯ ವಿರೇಶ್, ಸಮಾಜದ ಹಿರಿಯ ಮುಖಂಡರಾದ ಯೋಗೀಶ್, ಬ್ರುಂಗೀಶ್, ಮಂಜುನಾಥ್, ಟಿ.ಎಂ.ಸುರೇಶ್ ಕುಮಾರ್, ಸುಬ್ಬಣ್ಣ, ಬೆಣ್ಣೆ ಮಂಜು, ಸುಪ್ರೀತ್, ಶರ್ಮ ವಿಶ್ವ, ಕಿರಣ್, ಇಂದ್ರೇಶ್, ಸುಕ್ರೂತ್, ವಿನೋದ್, ಹೇಮಂತ್, ನಾಗನಂದನ್ ಇನ್ನಿತರರಿದ್ದರು.

ಕಣ್ಣಿನ ಯಶಸ್ವಿ ಶಸ್ತ್ರಚಿಕಿತ್ಸೆ ಶಿಬಿರ

ಬನ್ನೂರು, ನ.13– ಪಟ್ಟಣದ ರೋಟರಿ ಸಂಸ್ಥೆ, ಕಾನ್‌ಸಿಂಗ್‌ಜೀ ರಾಜ್‌ಪುರೋಹಿತ್, ಶ್ರೀ ಗೌರಿದೇವಿ , ಲಯನ್ಸ್ ಕ್ಲಬ್ ಆಫ್ ಈರೋಡ್ ಸುಪ್ರೀಮ್, ಕೊಯಮತ್ತೂರು ಕಣ್ಣಿನ ಆಸ್ಪತ್ರೆ ಸಂಯುಕ್ತಾಶ್ರಯದಲ್ಲಿ ನಡೆದ ಕಣ್ಣಿನ ಉಚಿತ ತಪಾಸಣಾ ಶಿಬಿರದಲ್ಲಿ ಶಸ್ತ್ರಚಿಕಿತ್ಸೆಗೆ ಆಯ್ಕೆಯಾದ ಶಿಬಿರಾರ್ಥಿಗಳು ಬುಧವಾರ ಯಶಸ್ವಿಯಾಗಿ ಕಣ್ಣಿನ ಚಿಕಿತ್ಸೆ ಮಾಡಿಸಿಕೊಂಡು ಮನೆಗೆ ವಾಪಸ್ಸಾದರು.




ಶಸ್ತ್ರಚಿಕಿತ್ಸೆ ಮುಗಿಸಿಕೊಂಡು ಮರಳಿದ ಶಿಬಿರಾರ್ಥಿಗಳಿಗೆ ರೋಟರಿ ಮಾಜಿ ಅಧ್ಯಕ್ಷ ಡಾ.ಮಹೇಂದ್ರಸಿಂಗ್‌ಕಾಳಪ್ಪ ಬ್ರೆಡ್ ಮತ್ತು ಹಣ್ಣು ನೀಡಿ ಸ್ವಾಗತಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಿಬಿರಾರ್ಥಿಗಳು, ಕಣ್ಣು ಕಾಣದೆ ಜೀವನವನ್ನು ತುಂಬಾ ಕಷ್ಟದಿಂದ ಸಾಗಿಸುತ್ತಿದ್ದೇವು. ಆದರೆ, ರೋಟರಿ ಮಾಜಿ ಅಧ್ಯಕ್ಷ ಡಾ.ಮಹೇಂದ್ರಸಿಂಗ್ ಕಾಳಪ್ಪ ಏರ್ಪಡಿಸಿದ್ದ ಉಚಿತ ಕಣ್ಣಿನ ತಪಾಸಣಾ ಶಿಬಿರದಲ್ಲಿ ಅವರು ನಮ್ಮ ಕಣ್ಣನ್ನು ನುರಿತ ವೈದ್ಯರಿಗೆ ತೋರಿಸಿ, ಹೆಚ್ಚಿನ ಚಿಕಿತ್ಸೆಗಾಗಿ ಕೊಯಮತ್ತೂರಿಗೆ ಉಚಿತವಾಗಿ ಕಳುಹಿಸಿ, ಶಸ್ತ್ರಚಿಕಿತ್ಸೆ ಮಾಡಿಸಿ ನಮಗೆ ಕಣ್ಣಿನ ದೃಷ್ಟಿ ನೀಡಿದ್ದಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಡಾ.ಮಹೇಂದ್ರಸಿಂಗ್ ಕಾಳಪ್ಪ, ಎಲ್ಲರೂ ಉತ್ತಮ ರೀತಿಯಲ್ಲಿ ಜೀವನ ಸಾಗಿಸಬೇಕು, ಯಾರೂ ಹುಟ್ಟುತ್ತಾ ಕುರುಡರಲ್ಲ, ನಂತರ ದಿನದಲ್ಲಿ ಪರಿಸ್ಥಿತಿಯಿಂದ ಆಗಿರುವಂತ ಸಮಸ್ಯೆಯನ್ನು ನಿವಾರಿಸುವಂತ ಪ್ರಯತ್ನ ಮಾಡಲಾಗಿದೆ ಎಂದು ಹೇಳಿದರು. ನಂತರ ಎಲ್ಲ ಶಿಬಿರಾರ್ಥಿಗಳಿಗೆ ಬ್ರೆಡ್ ಮತ್ತು ಹಣ್ಣು ನೀಡಿ ಸ್ವಾಗತಿಸಿದರು. ಯಾಸೀನ್, ಶಿವಣ್ಣ, ನಾರಾಯಣ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಕಾಡಾನೆ ದಾಳಿ, ಮನೆಯ ಚಾವಣಿ ಧ್ವಂಸ



ಹೆಚ್.ಡಿ.ಕೋಟೆ, ನ.13– ಕಾಡಾನೆಯೊಂದು ಮನೆಯ ಮೇಲೆ ದಾಳಿ ನಡೆಸಿ ಚಾವಣಿಯನ್ನು ಧ್ವಂಸ ಮಾಡಿರುವ ಘಟನೆ ನಡೆದಿದೆ.

ನಾಗರಹೊಳೆ ಹುಲಿ ಸಂರಕ್ಷಣಾ ಪ್ರದೇಶದ ವೀರನಹೊಸಹಳ್ಳಿ ಅರಣ್ಯ ವಲಯದ ತಾಲೂಕಿನ ಚಕೋಡನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಂಜಯ್ಯನ ಕಾಲೋನಿಗೆ ಉದ್ದನೆ ದಂತದ ಒಂಟಿ ಸಲಗ ಬುಧವಾರ ಏಕಾಏಕಿ ನುಗ್ಗಿ ಗ್ರಾಮದ ಪುಟ್ಟಯ್ಯ ಅವರ ಮಗ ಅಶೋಕ್ ಎಂಬುವರ ಮನೆ ಮೇಲೆ ದಾಳಿ ಮಾಡಿ ಮನೆಯ ಚಾವಣಿಯನ್ನು ಧ್ವಂಸ ಮಾಡಿದೆ. ಇದರಿಂದ ಮನೆಯವರು ಮತ್ತು ಕಾಲೋನಿ ನಿವಾಸಿಗಳು ಆತಂಕಗೊಂಡಿದ್ದಾರೆ. ಪರಿಹಾರಕ್ಕೆ ಆಗ್ರಹಿಸಿದ್ದಾರೆ.

ಮಾಹಿತಿ ತಿಳಿಯುತ್ತಿದ್ದಂತೆ ವೀರನಹೊಸಳ್ಳಿ ಅರಣ್ಯ ವ್ಯಾಪ್ತಿಯ ಅರಣ್ಯ ಇಲಾಖೆಯ ಆನೆ ಕಾರ್ಯಪಡೆ, ಹಾಗೂ ಸಿಬ್ಬಂದಿಗಳು ಗ್ರಾಮಸ್ಥರ ಸಹಾಯದಿಂದ ಜನರಿಗೆ ಯಾವುದೇ ಅನಾಹುತ ಆಗದ ರೀತಿಯಲ್ಲಿ ಆನೆಯನ್ನು ಕಾಡಿಗೆ ಅಟ್ಟುವಲ್ಲಿ ಯಶಸ್ವಿಯಾಗಿದ್ದಾರೆ.

ನಾಳೆಯಿಂದ ಸಾವಯವ ಕೃಷಿ ತರಬೇತಿ ಕಾರ್ಯಕ್ರಮ

ನಂಜನಗೂಡು, ನ.13– ತಾಲೂಕಿನ ಸುತ್ತೂರು ಕೃಷಿ ವಿಜ್ಞಾನ ಕೇಂದ್ರದಲ್ಲಿ ರೈತರಲ್ಲಿ ಸಾವಯವ ಕೃಷಿಯನ್ನು ಉತ್ತೇಜಿಸುವ ನಿಟ್ಟಿನಲ್ಲಿ ಭಾರತ ಸರ್ಕಾರದ ಕೃಷಿ ಮತ್ತು ರೈತ ಕಲ್ಯಾಣ ಮಂತ್ರಾಲಯದ ಬೆಂಗಳೂರಿನ ಪ್ರಾದೇಶಿಕ ಸಾವಯವ ಹಾಗೂ ನೈಸರ್ಗಿಕ ಕೇಂದ್ರದ ಸಹಯೋಗದೊಂದಿಗೆ ನ 15 ರಿಂದ ಡಿ.5 ರವರೆಗೆ 21 ದಿನಗಳ ಕಾಲ ಸಾವಯವ ಕೃಷಿ ತರಬೇತಿಯನ್ನು ಹಮ್ಮಿಕೊಳ್ಳಲಾಗಿದೆ.

ರಾಸಾಯನಿಕ ಗೊಬ್ಬರಗಳು ಹಾಗೂ ಕೀಟನಾಶಕಗಳನ್ನು ಬಳಸದೆ ಸಾವಿರಾರು ವರ್ಷಗಳಿಂದ ಕೃಷಿಯನ್ನು ಮಾಡಲಾಗುತ್ತಿತ್ತು. ಹೆಚ್ಚುತ್ತಿರುವ ಜನಸಂಖ್ಯೆಗನುಗುಣವಾಗಿ ಕೃಷಿ ಉತ್ಪನ್ನವನ್ನು ಹೆಚ್ಚಿಸಲು 19ನೆಯ ಶತಮಾನದ ಮಧ್ಯಭಾಗದಿಂದ ರಸಗೊಬ್ಬರಗಳು ಹಾಗೂ ಕೀಟನಾಶಕಗಳನ್ನು ಬಳಸಲು ಪ್ರಾರಂಭಿಸಲಾಯಿತು. ಇದರಿಂದಾಗಿ ಕೃಷಿ ಉತ್ಪನ್ನ ಹೆಚ್ಚಿದರೂ, ದೀರ್ಘಕಾಲದಿಂದ ರಾಸಾಯನಿಕಗಳನ್ನು ಬಳಸಿದ್ದರ ಪರಿಣಾಮ ಗಂಭೀರ ಅಡ್ಡಪರಿಣಾಮಗಳನ್ನು ಎದುರಿಸಬೇಕಾಗಿದೆ.

ಮಣ್ಣಿನ ಫಲವತ್ತತೆ ಕುಸಿತ, ಮನುಷ್ಯರು ಹಾಗೂ ಜಾನುವಾರುಗಳಲ್ಲಿ ಆರೋಗ್ಯ ಕುಸಿತ ಇತ್ಯಾದಿ. ಈ ಕಾರಣಗಳಿಂದಾಗಿ ಸಾವಯವ ಕೃಷಿಯನ್ನು ಉತ್ತೇಜಿಸಲಾಗುತ್ತಿದೆ. ಸ್ಥಳೀಯವಾಗಿ ದೊರಕುವ ಕೊಟ್ಟಿಗೆ ಗೊಬ್ಬರ, ಎರೆಗೊಬ್ಬರ ಮುಂತಾದವುಗಳನ್ನು ಬಳಸಿ ಸಾವಯವ ಕೃಷಿ ಮಾಡಬಹುದಾಗಿದೆ. ಹಂತ ಹಂತವಾಗಿ ರಾಸಾಯನಿಕ ಗೊಬ್ಬರದ ಅವಲಂಬನೆ ಕಡಿಮೆ ಮಾಡಿ ಪರಿಸರ, ಮನುಷ್ಯ ಹಾಗೂ ಜಾನುವಾರುಗಳ ಆರೋಗ್ಯವನ್ನು ಸುಧಾರಣೆ ಸಾವಯವ ಕೃಷಿಯಿಂದ ಸಾಧ್ಯ.

ತರಬೇತಿಯಲ್ಲಿ ಭಾಗವಹಿಸುವ ರೈತರಿಗೆ ವಸತಿ ಸೌಕರ್ಯ ಕಲ್ಪಿಸಲಾಗುವುದು ರೈತ ಉತ್ಪಾದಕ ಸಂಘಗಳ ಸದಸ್ಯರುಗಳು ಹಾಗೂ ಯುವ ರೈತರು ಪಾಲ್ಗೊಳ್ಳಲಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಜೆಎಸ್‌ಎಸ್ ಕೃಷಿ ವಿಜ್ಞಾನ ಕೇಂದ್ರದ ಹಿರಿಯ ವಿಜ್ಞಾನಿ ಮತ್ತು ಮುಖ್ಯಸ್ಥರನ್ನು ಅಥವಾ ಮೊಬೈಲ್ ಸಂಖ್ಯೆ 9380199128ಕ್ಕೆ ಸಂಪರ್ಕಿಸಲು ಪ್ರಕಟಣೆಯಲ್ಲಿ ಕೋರಲಾಗಿದೆ.

ಮಾದಿಗ ಸಮುದಾಯ ಓಟು ಹಾಕುವುದಕ್ಕೆ ಮಾತ್ರ ಸೀಮಿತವೇ...?

ನಿಗಮ ಮಂಡಳಿಗೆ ನೇಮಕ ಮಾಡುವಂತೆ ಆಗ್ರಹಿಸಿದ ಬಿ.ಮರಯ್ಯ ಪ್ರಶ್ನೆ

ತಿ.ನರಸೀಪುರ, ನ.13– ಕಳೆದ ನಲವತ್ತು ವರ್ಷಗಳಿಂದ ರಾಜಕೀಯ ಜೀವನದಲ್ಲಿ ಸಕ್ರಿಯನಾಗಿದ್ದು, ಕಾಂಗ್ರೆಸ್ ಪಕ್ಷ ಹಾಗೂ ಸಿದ್ದರಾಮಯ್ಯನವರಿಗೆ ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿದ್ದೇನೆ. ಆದಾಗ್ಯೂ ಈವರೆಗೆ ಪ್ರಮುಖ ರಾಜಕೀಯ ಅಧಿಕಾರ ನೀಡದೇ ಮಾದಿಗ ಸಮುದಾಯಕ್ಕೆ ಅನ್ಯಾಯ ಮಾಡಲಾಗಿದೆ ಎಂದು ತಾಲೂಕು ಪಂಚಾಯತಿ ಮಾಜಿ ಉಪಾಧ್ಯಕ್ಷ ಬಿ. ಮರಯ್ಯ ಬೇಸರ ವ್ಯಕ್ತಪಡಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯನವರು ಟಿ.ನರಸೀಪುರ ಕ್ಷೇತ್ರದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಲು ತೆರಳುತ್ತಿದ್ದ ಸಂದರ್ಭದಲ್ಲಿ ತಾಲೂಕಿನ ಎಡದೊರೆ ಟೋಲ್‌ಗೇಟ್ ಬಳಿ ಕಾರನ್ನು ನಿಲ್ಲಿಸಿ ತಮ್ಮ ಅಹವಾಲನ್ನು ಸಲ್ಲಿಸಿ ಶೀಘ್ರದಲ್ಲಿ ಯಾವುದಾದರೂ ನಿಗಮ ಮಂಡಳಿಗೆ ತಮ್ಮನ್ನು ಅಧ್ಯಕ್ಷರಾಗಿ ನೇಮಿಸುವ ಮೂಲಕ ಅಧಿಕಾರವನ್ನು ನೀಡುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವರುಣ ವಿಧಾನ ಸಭಾ ಕ್ಷೇತ್ರದಲ್ಲಿ ಮಾದಿಗ ಸಮುದಾಯ 30 ಸಾವಿರ ಜನಸಂಖ್ಯೆ ಹೊಂದಿದ್ದೇವೆ. ನಮ್ಮ ಮಾದಿಗ ಸಮುದಾಯದ ನಾಯಕರಿಗೆ ಒಂದೇ ಒಂದು ನಿಗಮ ಮಂಡಳಿಯ ಅಧ್ಯಕ್ಷರನ್ನಾಗಿ ಮಾಡದಿರುವುದು ದುರಂತದ ವಿಷಯ ಎಂದರು.



ಎಡದೊರೆ ಟೋಲ್‌ಗೇಟ್ ಬಳಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕಾರನ್ನು ನಿಲ್ಲಿಸಿ ತಮ್ಮ ಅಹವಾಲನ್ನು ಸಲ್ಲಿಸುತ್ತಿರುವುದು.

ನಮ್ಮ ಸಮುದಾಯ ಇರುವುದು ಚುನಾವಣೆ ಸಂದರ್ಭದಲ್ಲಿ ಓಟು ಹಾಕುವುದಕ್ಕೆ ಮಾತ್ರ ಸೀಮಿತವೇ ಎಂದು ಪ್ರಶ್ನಿಸಿದರು. ನಮ್ಮನ್ನು ಓಟಿಗೆ ಬಳಸಿಕೊಂಡಂತೆ ರಾಜಕೀಯ ಅಧಿಕಾರವನ್ನು ನೀಡುವ ಮೂಲಕ ಮಾದಿಗ ಸಮುದಾಯಕ್ಕೆ ಎಲ್ಲಾ ರಂಗದಲ್ಲೂ ಅವಕಾಶ ನೀಡಬೇಕೆಂದು ಒತ್ತಾಯಿಸಿದರು.

ಮಾದಿಗ ಸಮುದಾಯಕ್ಕೆ ರಾಜಕೀಯ ಅಧಿಕಾರದ ಪ್ರಾತಿನಿಧ್ಯ ನೀಡಬೇಕೆಂದು ಪ್ರತಿ ಚುನಾವಣಾ ಸಂದರ್ಭದಲ್ಲೂ ಸಿದ್ದರಾಮಯ್ಯರವರು ಹಾಗೂ ಅವರ ಪುತ್ರ ಡಾ.ಯತೀಂದ್ರ ಅವರನ್ನು ನಮ್ಮ ಸಮುದಾಯ ಬೆಂಬಲಿಸುತ್ತಾ ಬರುತ್ತಿದೆ. ಜೊತೆಗೆ ಡಾ.ಹೆಚ್.ಸಿ.ಮಹದೇವಪ್ಪರವರು ಹಾಗೂ ಸಂಸದ ಸುನಿಲ್ ಬೋಸ್ ಅವರನ್ನು ಸಹ ಬೆಂಬಲಿಸುತ್ತಿದೆ. ಇದನ್ನೆಲ್ಲಾ ನಮ್ಮ ನಾಯಕರುಗಳು ಅರ್ಥೈಸಿಕೊಂಡು ನಮ್ಮ ಸಮುದಾಯದ ಜನರ ಕಷ್ಟ ಸುಖಗಳಿಗೆ ಭಾಗಿಯಾಗಲು ರಾಜಕೀಯ ಅಧಿಕಾರ ಬೇಕಾಗಿರುವುದರಿಂದ ನನ್ನನ್ನು ಯಾವುದಾದರೂ ಒಂದು ನಿಗಮ ಮಂಡಳಿಗೆ ಅಧ್ಯಕ್ಷರನ್ನಾಗಿ ಮಾಡಬೇಕೆಂದು ಮನವಿ ಮಾಡುತ್ತೇನೆಂದರು.

ಈ ಸಂದರ್ಭದಲ್ಲಿ ಮರಯ್ಯ ಬೆಂಬಲಿಗರು ನಿಗಮ ಮಂಡಳಿಗೆ ಅಧ್ಯಕ್ಷರನ್ನಾಗಿ ನೇಮಿಸುವಂತೆ ಘೋಷಣೆಗಳನ್ನು ಕೂಗುವ ಮೂಲಕ ಮನವಿ ಮಾಡಿದರು.

ವ್ಯಾಯಾಮ, ಆಹಾರದಿಂದ ಹೃದಯಾಘಾತ ತಡೆಯಬಹುದು

ಹುಣಸೂರು, ನ.13– ಇತ್ತೀಚೆಗೆ ಹೃದಯಾಘಾತ ಪ್ರಕರಣಗಳು ಸಾಮಾನ್ಯವಾಗಿದ್ದು, ತಡೆಗಟ್ಟಲು ಜೀವನ ಕ್ರಮ, ನಿಯಮಿತ ವ್ಯಾಯಾಮ ಹಾಗೂ ಆಹಾರ ಕ್ರಮಗಳನ್ನು ಅನುಸರಿಸುವಂತೆ ಅಪೋಲೋ ಆಸ್ಪತ್ರೆಯ ಹೃದ್ರೋಗ ತಜ್ಞ ಡಾ.ಎಚ್.ಜಿ.ಗೌತಮ್ ಸಲಹೆ ನೀಡಿದರು.

ನಗರದ ಅಪೋಲೋ ಆಸ್ಪತ್ರೆಯಲ್ಲಿ ತಾಲೂಕು ಪತ್ರಕರ್ತರ ಸಂಘದ ಸದಸ್ಯರಿಗೆ ಆಯೋಜಿಸಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಆರೋಗ್ಯದ ಬಗ್ಗೆ ಮಾಹಿತಿ ನೀಡಿ, ರಕ್ತದೊತ್ತಡ, ಅತಿಯಾದ ಕೊಬ್ಬು (ಕೊಲೆಸ್ಟ್ರಾಲ್) ಇದ್ದರೂ ಹೃದಯಾಘಾತ ಸಂಭವಿಸಲಿದೆ. ಇಂತಹ ವೇಳೆ ಸುಮಾರು 15ರಿಂದ 20 ನಿಮಿಷ ಎದೆನೋವು ಕಾಣಿಸಿಕೊಂಡು ಎದೆಹಿಂಡಿದಂತಾಗಲಿದೆ. ತಕ್ಷಣವೇ ಸಮೀಪದ ಆಸ್ಪತ್ರೆಗೆ ಕರೆದೊಯ್ದು ಪ್ರಾಥಮಿಕ ಚಿಕಿತ್ಸೆ ಕೊಡಿಸಬೇಕು. ನಂತರದ ಒಂದು ಗಂಟೆ (ಗೋಲ್ಡನ್ ಅವರ್) ಯೊಳಗೆ ಸೂಕ್ತ ಚಿಕಿತ್ಸೆ ಕೊಡಿಸಬೇಕು ಎಂದು ಸಲಹೆ ನೀಡಿದರು.



ಸಂಘದ ವತಿಯಿಂದ ವೈದ್ಯರನ್ನು ಸನ್ಮಾನಿಸಲಾಯಿತು.

ಮೂಳೆ ತಜ್ಞೆ ಡಾ.ಸಿಂಧೂ ಮಾತನಾಡಿ, 50 ವರ್ಷ ಮೇಲ್ಪಟ್ಟವರಲ್ಲಿ ಹೆಚ್ಚಾಗಿ ಮೂಳೆ ಸವೆತದಿಂದ ಮಂಡಿ ನೋವು, ಕೀಲು ನೋವು ಕಾಣಿಸಿಕೊಳ್ಳುತ್ತಿದೆ. ಈ ಸಮಸ್ಯೆ ನಿವಾರಣೆಗೆ ನಿಯಮಿತ ವ್ಯಾಯಾಮ ಹಾಗೂ ಆಹಾರ ಕ್ರಮವನ್ನು ಅನುಸರಿಸುವುದು ಕಡ್ಡಾಯ ಎಂದರು.

ಅಪೋಲೊ ಡೇ ಕೇರ್ ಸೆಂಟರ್‌ನ ವೈದ್ಯ ಡಾ.ಷಡಕ್ಷರಿ ಮಾತನಾಡಿ, ಅಪೋಲೊ ಆಸ್ಪತ್ರೆಯಲ್ಲಿ ಎಲ್ಲಾ ಕಾಯಿಲೆಗಳ ತಜ್ಞ ವೈದ್ಯರಿದ್ದು ಇತರೆ ಆಸ್ಪತ್ರೆಗಳಿಗಿಂತ ರಿಯಾಯಿತಿ ದರದಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ ಎಂದರು.

ಶಿಬಿರದಲ್ಲಿ 25ಕ್ಕೂ ಹೆಚ್ಚು ಮಂದಿ ಪತ್ರಕರ್ತರಿಗೆ ತಪಾಸಣೆ ಮಾಡಲಾಯಿತು. ಸಂಘದ ವತಿಯಿಂದ ವೈದ್ಯರನ್ನು ಸನ್ಮಾನಿಸಲಾಯಿತು.

ಈ ವೇಳೆ ಡಾ.ಅಶೋಕ್, ಅಪೋಲೊ ಡೇ ಕೇರ್ ಸೆಂಟರ್ ವ್ಯವಸ್ಥಾಪಕ ಕೇಶವ್, ಪತ್ರಕರ್ತರ ಸಂಘದ ಅಧ್ಯಕ್ಷ ಎಚ್.ಆರ್. ಕೃಷ್ಣಕುಮಾರ್, ಪ್ರಧಾನ ಕಾರ್ಯದರ್ಶಿ ನೇರಳಕುಪ್ಪೆ ಮಹದೇವ್, ಜಿಲ್ಲಾ ಸಂಘದ ಗ್ರಾ. ಕಾರ್ಯದರ್ಶಿ ದಾ.ರಾ.ಮಹೇಶ್, ಕಾರ್ಯಕಾರಿ ಸಮಿತಿ ಸದಸ್ಯ ಹನಗೋಡು ನಟರಾಜ್, ಉಪಾಧ್ಯಕ್ಷ ಚಲುವರಾಜ್, ಕಾರ್ಯದರ್ಶಿ ಶಂಕರ್ ಸೇರಿದಂತೆ ಸಂಘದ ಸದಸ್ಯರು ಭಾಗವಹಿಸಿದ್ದರು.

ಕಾಂಗ್ರೆಸ್ ಸರ್ಕಾರದ ಮುಸ್ಲಿಂ ತುಷ್ಟೀಕರಣ ಎಲ್ಲೆ ಮೀರಿದೆ

ಟೆಂಡರ್‌ನಲ್ಲಿ ಶೇ.4 ಮೀಸಲಾತಿ ವಿಚಾರಕ್ಕೆ ಶೋಭಾ ಕರಂದ್ಲಾಜೆ ಆಕ್ರೋಶ

ನವದೆಹಲಿ, ನ.13– ಧರ್ಮದ ಆಧಾರದ ಮೇಲೆ ಮೀಸಲಾತಿ ನೀಡಬಾರದು ಎಂದು ನ್ಯಾಯಾಲಯವೇ ಹೇಳಿದೆ. ಆದರೂ ರಾಜ್ಯ ಕಾಂಗ್ರೆಸ್ ಸರ್ಕಾರ ನಿರಂತರವಾಗಿ ತುಷ್ಟೀಕರಣ ರಾಜಕೀಯ ಮಾಡುತ್ತಿದ್ದು, ಅದು ಎಲ್ಲೆ ಮೀರಿದೆ ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಆಕ್ರೋಶ ಹೊರ ಹಾಕಿದ್ದಾರೆ.

ಟೆಂಡರ್‌ನಲ್ಲಿ ಮುಸ್ಲಿಮರಿಗೆ ಶೇ.4ರಷ್ಟು ಮೀಸಲಾತಿ ವಿಚಾರಕ್ಕೆ ಸಂಬಂಧಿಸಿದಂತೆ ದೆಹಲಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಮುಸ್ಲಿಂ ಸಮುದಾಯಕ್ಕೆ 10,000 ಕೋಟಿ ಕೊಡುವುದಾಗಿ ಸಿದ್ದರಾಮಯ್ಯ ಹೇಳಿದ್ದರು. ಮಾಜಿ ಶಾಸಕ ಇಕ್ಬಾಲ್ ಅನ್ಸಾರಿ, ಸಿದ್ದರಾಮಯ್ಯ ಬಳಿ ನಾನು ಯಾವಾಗಲೇ ಹೋದರೂ ಮುಸ್ಲಿಂ ಅಭಿವೃದ್ಧಿಗೆ ಹಣ ಕೊಡುತ್ತಾರೆ ಎಂದಿದ್ದಾರೆ.

ಪೊಲೀಸ್ ಠಾಣೆಗೆ ಬೆಂಕಿ ಹಾಕಿದ್ದ ಆರೋಪಿಗಳನ್ನು ಖುಲಾಸೆ ಮಾಡಿದರು. ದೇವಸ್ಥಾನಕ್ಕೆ, ಮಠಗಳಿಗೆ ನೀಡಿದ ಜಾಗಕ್ಕೆ ಈಗ ವಕ್ಫ್ ನೋಟಿಸ್ ನೀಡುತ್ತಿದೆ. ಸಂಗೊಳ್ಳಿ ಇಡೀ ಊರು ಈಗ ವಕ್ಫ್ ಆಗಿದೆ. ಈಗ ಟೆಂಡರ್‌ಗಳಲ್ಲೂ ಶೇ.4ರಷ್ಟು ಮೀಸಲಾತಿ ನೀಡಲು ಹೊರಟಿದೆ. ಎಸ್ಸಿ, ಎಸ್ಟಿಗೆ ಸಿಗುತ್ತಿದ್ದ ಮೀಸಲಾತಿಯನ್ನು ತೆಗೆದು ಮುಸ್ಲಿಂ ಸಮುದಾಯಕ್ಕೆ ನೀಡಲು ಸರ್ಕಾರ ಚಿಂತಿಸಿದೆ ಎಂದರು.



ಪ್ರಕರಣ ಬಹಿರಂಗವಾದ ಬಳಿಕ ಸುಳ್ಳು ಆರೋಪ ಎಂದು ಸಿದ್ದರಾಮಯ್ಯ ಅವರು ಹೇಳುತ್ತಾರೆ. ಆದರೆ ಆಗಸ್ಟ್‌ನಲ್ಲಿ ಮುಸ್ಲಿಂ ನಾಯಕರು ಸಿದ್ದರಾಮಯ್ಯ ಅವರಿಗೆ ಮನವಿ ಮಾಡಿದ್ದಾರೆ. ಅದರ ಮೇಲೆ ಇವರು ಕಾನೂನು ಮಾಡಲು ಹೊರಟಿದ್ದಾರೆ. ಕಾನೂನು ಇಲಾಖೆಯ ಇ–ಫೈಲ್‌ನಲ್ಲಿ ಈ ದಾಖಲೆ ಇದೆ. ಎಲ್ಲರನ್ನೂ ಒಟ್ಟಿಗೆ ತೆಗೆದುಕೊಂಡು ಹೋಗಿ ನಮ್ಮದೇನು ಆಕ್ಷೇಪ ಇಲ್ಲ. ಆದರೆ ಒಂದು ವರ್ಗಕ್ಕೆ ಯಾಕೆ ತುಷ್ಟೀಕರಣ ಮಾಡುವುದು ಎಂದು ಪ್ರಶ್ನಿಸಿದರು.

ಕಾನೂನುಬಾಹಿರವಾಗಿ ಜಮೀರ್ ಅಹ್ಮದ್ ವಕ್ಫ್ ಸಭೆ ನಡೆಸಿ, ಅಧಿಕಾರಿಗಳಿಗೆ ಧಮ್ಕಿ ಹಾಕಿ ನೋಟಿಸ್ ಕೊಡಿಸುತ್ತಿದ್ದಾರೆ. ಎಂ.ಬಿ ಪಾಟೀಲ್ ಅವರೇ ನಿಮ್ಮ ಕ್ಷೇತ್ರದಲ್ಲಿ ನೋಡಿ ಇಡೀ ಊರು ವಕ್ಫ್‌ಗೆ ಹೋಗಿದೆ. ಜಮೀರ್ ಅವರು ದೇವೇಗೌಡರ ಕುಟುಂಬ ಖರೀದಿ ಮಾಡುತ್ತೇನೆ ಅಂತಾರೆ. ಸಿದ್ದರಾಮಯ್ಯ ಅವರು ಹಿಂದೆಯೇ ಜಮೀರ್ ರಾಜೀನಾಮೆ ಪಡೆಯಬೇಕಿತ್ತು. ಅಹಿಂದ ನಾಯಕ ನ್ಯಾಯ ಕೊಡುತ್ತಾರೆ ಎಂದು ಎಲ್ಲ ವರ್ಗ ನಿಮ್ಮನ್ನು ಬೆಂಬಲಿಸಿದೆ. ಅವರು ಒಂದು ಕಣ್ಣಿಗೆ ಬೆಣ್ಣೆ ಒಂದು ಕಣ್ಣಿಗೆ ಸುಣ್ಣ ಮಾಡಿದ್ದಾರೆ. ಈಗ ಬಿಜೆಪಿ ಆರೋಪ ಅಂತಾ ಸಿದ್ದರಾಮಯ್ಯ ಅವರು ಹೇಳುತ್ತಾರೆ. ಇದು ಸಿದ್ದರಾಮಯ್ಯ ಅವರಿಗೆ ಶೋಭೆ ತರುವುದಿಲ್ಲ ಎಂದು ಹೇಳಿದರು.

ಅಬಕಾರಿ ಗುತ್ತಿಗೆದಾರರು ಮೊದಲ ಬಾರಿಗೆ ಪ್ರತಿಭಟನೆ ಮಾಡುತ್ತೇವೆ ಎಂದಿದ್ದಾರೆ. ದೇಶದಲ್ಲಿ ಮೊದಲ ಬಾರಿಗೆ ಹೀಗೆ ಹೇಳುತ್ತಿದ್ದಾರೆ. ಗುತ್ತಿಗೆದಾರರಿಂದ 700 ಕೋಟಿಯಷ್ಟು ಸರ್ಕಾರ ವಸೂಲಿ ಮಾಡಿದೆ ಎಂದು ಹೇಳಿದ್ದಾರೆ. ಬೇರೆ ಬೇರೆ ಚುನಾವಣೆಗೆ ದುಡ್ಡು ಕೊಟ್ಟಿದಾಯ್ತು, ಮೋದಿ ಅವರಿಗೆ ಚಾಲೆಂಜ್ ಮಾಡುವ ನೈತಿಕತೆ ಸಿದ್ದರಾಮಯ್ಯ ಅವರಿಗೆ ಇಲ್ಲ. 25 ವರ್ಷದಲ್ಲಿ ಮೋದಿ ಅವರಿಗೆ ಒಂದೇ ಒಂದು ಕಪ್ಪು ಚುಕ್ಕೆ ಇಲ್ಲ. ಸಿದ್ದರಾಮಯ್ಯ ಅವರ ಮೇಲೆ ದಿನಾ ಒಂದು ಕಪ್ಪು ಚುಕ್ಕೆ ಕೂರುತ್ತಿದೆ. ಸಚಿವರ ಪಿಎ ಹೆಸರು ಬರೆದು ಅಧಿಕಾರಿಗಳು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಸಿದ್ದರಾಮಯ್ಯ ಅವರಿಗೆ ಏನೂ ಅನಿಸುವುದಿಲ್ಲವೇ? ಅವರ ಕೈಯಲ್ಲಿ ಅಧಿಕಾರ ಇದೆ ಕೊರೊನಾ ಸೇರಿ ಯಾವ ವಿಚಾರದ ಬಗ್ಗೆಯೂ ತನಿಖೆ ನಡೆಯಲಿ. ಉಪ್ಪು ತಿಂದವರು ನೀರು ಕುಡಿಯಲಿ ಎಂದು ಹರಿಹಾಯ್ದರು.

ಒಳ ಮೀಸಲಾತಿ ಸಂಬಂಧ ವರದಿಗೆ ನ್ಯಾ. ನಾಗಮೋಹನ್ ದಾಸ್ ಆಯೋಗ ರಚನೆ

ಬೆಂಗಳೂರು, ನ.13– ಪರಿಶಿಷ್ಟ ಜಾತಿಯ ಒಳ ಮೀಸಲಾತಿಗೆ ಸಂಬಂಧಿಸಿದಂತೆ ವರದಿ ಸಲ್ಲಿಸಲು ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಹೆಚ್.ಎನ್.ನಾಗಮೋಹನ್ ದಾಸ್ ಅಧ್ಯಕ್ಷತೆಯಲ್ಲಿ ಏಕಸದಸ್ಯ ಆಯೋಗ ರಚಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ಪರಿಶಿಷ್ಟ ಜಾತಿಯಲ್ಲಿ ಒಳ ಮೀಸಲಾತಿ ಕುರಿತು ಸಚಿವ ಸಂಪುಟ ಕೈಗೊಂಡಿದ್ದ ನಿರ್ಣಯದ ಅನ್ವಯ ಆಯೋಗ ರಚಿಸಲಾಗಿದ್ದು, ಕರ್ನಾಟಕದಲ್ಲಿ ಶಿಕ್ಷಣ ಮತ್ತು ಸರ್ಕಾರಿ ಸೇವೆಗಳಲ್ಲಿ ಪರಿಶಿಷ್ಟ ಜಾತಿಯ ವಿವಿಧ ಉಪ ಜಾತಿಗಳಿಗೆ ಸೇರಿದವರ ಪ್ರಾತಿನಿಧ್ಯತೆ ಕುರಿತು ಪ್ರಾಯೋಗಿಕ ಡಾಟಾ (Empirical Data)ದೊಂದಿಗೆ ಪರಿಶಿಷ್ಟ ಜಾತಿಯಲ್ಲಿ ಒಳ ಮೀಸಲಾತಿ ಬಗ್ಗೆ ಸೂಕ್ತ ಶಿಫಾರಸುಗಳೊಂದಿಗೆ 2 ತಿಂಗಳ ಅವಧಿಯೊಳಗಾಗಿ ವರದಿ ಸಲ್ಲಿಸುವಂತೆ ಆದೇಶದಲ್ಲಿ ತಿಳಿಸಲಾಗಿದೆ.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಕಂಗುವಾ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಕಂಗುವಾ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಕಂಗುವಾ (ತ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಸಂಗೀತಾ ಸಂತೋಷ (ಕ)	4 ಪ್ರದರ್ಶನಗಳು
ಗಾಯತ್ರಿ	
ಬಘೀರ (ಕ)	4 ಪ್ರದರ್ಶನಗಳು
ರಾಜಕಮಲ್	
ಅಮರನ್ (ಕ)	4 ಪ್ರದರ್ಶನಗಳು
ಸಂಗಂ	
ಭೈರತಿ ರಣಗಲ್ (ಕ)	4 ಪ್ರದರ್ಶನಗಳು
ಲಿಡೋ	
ಮಟ್ಕಾ (ತೆ)	4 ಪ್ರದರ್ಶನಗಳು
ತಿಬ್ಬಾದೇವಿ	
ಸಿಂಗಂ ಅಗೇನ್ (ಹಿಂ)	4 ಪ್ರದರ್ಶನಗಳು
ಪ್ರಭಾ	
ಬಘೀರಾ (ಕ)	2 ಪ್ರದರ್ಶನಗಳು

ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಜಿ.ಟಿ.ದೇವೇಗೌಡರಿಂದ ಗುದ್ದಲಿಪೂಜೆ...



ಮೈಸೂರಿನ 44ನೇ ವಾರ್ಡ್ ವ್ಯಾಪ್ತಿಯ ಬೋಗಾದಿ ಮುಖ್ಯ ರಸ್ತೆಯಲ್ಲಿ 45 ಲಕ್ಷ ರೂ ವೆಚ್ಚದ ಬಾಕ್ಸ್ ಡ್ರೈನ್ ಕಾಮಗಾರಿ ಹಾಗೂ ಜನತಾನಗರದ 5ನೇ ಕ್ರಾಸ್, 12ನೇ ಕ್ರಾಸ್‌ನಲ್ಲಿ 15 ಲಕ್ಷ ರೂ. ವೆಚ್ಚದ ಡಾಂಬರೀಕರಣ ಕಾಮಗಾರಿಗೆ ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರು ಗುದ್ದಲಿಪೂಜೆ ನೆರವೇರಿಸಿದರು. ಈ ವೇಳೆ ಮಾಜಿ ಕಾರ್ಪೊರೇಟರ್ ಸವಿತಾ ಸುರೇಶ್, ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಸುರೇಶ್, ಉಪ ಆಯುಕ್ತರಾದ ಸತ್ಯಮೂರ್ತಿ, ಲಿಂಗೇಗೌಡ, ಬಸವರಾಜ, ಮಂಜು, ಸೊಸೈಟಿ ಕುಮಾರ್, ಮಂಜು, ನಾರಾಯಣ್, ಕೃಷ್ಣೇಗೌಡ, ರವಿಶಂಕರ್, ಶ್ರೀನಿವಾಸಗೌಡ, ಪ್ರಕಾಶ್, ಮಹಾದೇವ, ಸುನಿಲ್, ಅನಿಲ್ ಹಾಗೂ ಬಡಾವಣೆಗಳ ಹಿರಿಯರು ಮತ್ತು ಮುಖಂಡರು ಉಪಸ್ಥಿತರಿದ್ದರು.

ದಲಿತರ ಮೇಲಿನ ದೌರ್ಜನ್ಯ ಪ್ರಕರಣ
ಜೀವಾವಧಿ ಶಿಕ್ಷೆಗೆ ಗುರಿಯಾಗಿದ್ದ 98 ಮಂದಿಗೆ ಜಾಮೀನು ಮಂಜೂರು

ಧಾರವಾಡ, ನ.13– ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲೂಕಿನ ಮರಕುಂಬಿ ಗ್ರಾಮದಲ್ಲಿ ದಲಿತರ ಮೇಲಿನ ದೌರ್ಜನ್ಯ ಪ್ರಕರಣಕ್ಕೆ ಸಂಬಂಧಿಸಿದಂತೆ ಅಪರಾಧಿಗಳಿಗೆ ಕೊಪ್ಪಳ ನ್ಯಾಯಾಲಯ ಜೀವಾವಧಿ ಶಿಕ್ಷೆ ವಿಧಿಸಿತ್ತು. ಇದೀಗ ಧಾರವಾಡದ ಹೈಕೋರ್ಟ್ ವಿಭಾಗೀಯ ಪೀಠ ಅಪರಾಧಿಗಳಿಗೆ ಜಾಮೀನು ನೀಡಿದೆ.

ಕೊಪ್ಪಳ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯವು 98 ಮಂದಿಗೆ ಜೀವಾವಧಿ ಶಿಕ್ಷೆ ವಿಧಿಸಿ ಆದೇಶ ನೀಡಿತ್ತು. ಆದರೆ ಇದೀಗ 99 ಮಂದಿ ಅಪರಾಧಿಗಳ ಪೈಕಿ 98 ಮಂದಿಗೆ ಧಾರವಾಡದ ಹೈಕೋರ್ಟ್ ಜಾಮೀನು ನೀಡಿದೆ. ಕೊಪ್ಪಳದ ಜಿಲ್ಲಾ ನ್ಯಾಯಾಲಯ ನೀಡಿದ್ದ ಆದೇಶವನ್ನು ಪ್ರಶ್ನಿಸಿ 98 ಮಂದಿ ಅಪರಾಧಿಗಳು ಅ.28ರಂದು ಧಾರವಾಡ ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದರು. ಈ ಕುರಿತಂತೆ ವಿಚಾರಣೆ ನಡೆಸಿದ ಇಬ್ಬರು ನ್ಯಾಯಮೂರ್ತಿಗಳಿದ್ದ ವಿಭಾಗೀಯ ಪೀಠವು 98 ಅಪರಾಧಿಗಳಿಗೆ ಜಾಮೀನು ನೀಡಿದೆ.

ಇದಕ್ಕೆ ಸಂಬಂಧಿಸಿದಂತೆ ವಕೀಲರು ಮಾತನಾಡಿ, ಕೊಪ್ಪಳದ ಜಿಲ್ಲಾ ನ್ಯಾಯಾಲಯ ನೀಡಿದ್ದ ಆದೇಶಕ್ಕೆ ತಡೆ ನೀಡಿರುವ ಧಾರವಾಡ ಹೈಕೋರ್ಟ್, ಪ್ರಕರಣದ ಎ1 ಆರೋಪಿ ಮಂಜುನಾಥ ಎಂಬುವವರನ್ನು ಹೊರತುಪಡಿಸಿ, ಉಳಿದ ಎಲ್ಲಾ ಅಪರಾಧಿಗಳಿಗೆ ಜಾಮೀನು ನೀಡಿದೆ. ಮಂಜುನಾಥ ಜಾಮೀನಿಗೆ ಅರ್ಜಿ ಹಾಕದೇ ಇದ್ದಿದ್ದರಿಂದ ಆತನಿಗೆ ಜಾಮೀನು ದೊರೆತಿಲ್ಲ ಎಂದರು.

ಪ್ರಕರಣದ ಆರೋಪಿಗಳು ಹತ್ತು ವರ್ಷಗಳಿಂದ ಜಾಮೀನು ಷರತ್ತುಗಳನ್ನು ಉಲ್ಲಂಘಿಸಿಲ್ಲ. ಘಟನೆ ಹಾಗೂ ಎಫ್‌ಐಆರ್ ದಾಖಲಾದ ಸಮಯದ ವ್ಯತ್ಯಾಸ ಮತ್ತು ಆರೋಪಿಗಳ ಗುರುತು ಪತ್ತೆ ಮಾಡಿಲ್ಲ ಎಂಬ ಅಂಶಗಳನ್ನು ಹೈಕೋರ್ಟ್ ಪ್ರಮುಖವಾಗಿ ಪರಿಗಣಿಸಿದೆ. ಪ್ರತಿಯೊಬ್ಬರಿಗೂ 50 ಸಾವಿರ ರೂ. ಬಾಂಡ್ ಹಾಗೂ ಒಬ್ಬರ ಶ್ಯೂರಿಟಿ ನೀಡುವಂತೆ ಹೈಕೋರ್ಟ್ ಷರತ್ತು ವಿಧಿಸಿದೆ ಎಂದು ತಿಳಿಸಿದರು.

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಲಕ್ಕಿ ಭಾಸ್ಕರ್ (ತೆ): ಬೆ.10.30ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ವೆನಂ ದಿ ಲಾಸ್ಟ್ ಡ್ಯಾನ್ಸ್ (3ಡಿ)(ಇಂ): ಮ.1.30ಕ್ಕೆ, ಲಕ್ಕಿ ಭಾಸ್ಕರ್ (ಮ): ರಾ.9.55ಕ್ಕೆ
ಸ್ಕ್ರೀನ್ 2	ವೆನಂ ದಿ ಲಾಸ್ಟ್ ಡ್ಯಾನ್ಸ್ (3ಡಿ)(ಇಂ): ಬೆ.10.55ಕ್ಕೆ, ಬ್ಲಡಿ ಬೆಗ್ಗರ್ (ತ): ಮ.1.20ಕ್ಕೆ, ಬ್ರದರ್ (ತ): ಸಂ.4.20ಕ್ಕೆ, ಬಘೀರ (ಕ): ರಾ.7.05ಕ್ಕೆ, ಕ (ತೆ): ರಾ.10.10ಕ್ಕೆ.
ಸ್ಕ್ರೀನ್ 3	ಅಮರನ್ (ತ): ಬೆ10.05ಕ್ಕೆ, ಮ.1.15ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಅನ್ನ (ಕ): ಸಂ.4.30ಕ್ಕೆ
ಸ್ಕ್ರೀನ್ 4	ಬಘೀರ (ಕ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.15ಕ್ಕೆ, ರಾ.10.20ಕ್ಕೆ

ಐನಾಕ್ಸ್ ಮೂವೀಸ್
LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ವೆಟ್ಟೈಯನ್ (ತ): ಮ.1ಕ್ಕೆ, ಎಲ್ಲಿಗೆ ಪಯಣ ಯಾವುದೋ ದಾರಿ (ಕ): ಸಂ.4ಕ್ಕೆ, ಮಾರ್ಟಿನ್ (ಕ): ಸಂ.6.30ಕ್ಕೆ, ವೆಟ್ಟೈಯನ್ (ತ): ರಾ.9.15ಕ್ಕೆ.
ಸ್ಕ್ರೀನ್ 2	ವೆನಂ ದಿ ಲಾಸ್ಟ್ ಡ್ಯಾನ್ಸ್ (3ಡಿ)(ಇಂ): ಮ.1.30ಕ್ಕೆ, ಸಂ.4ಕ್ಕೆ, ರಾ.7ಕ್ಕೆ.
ಸ್ಕ್ರೀನ್ 3	ಯಲಾಕುನ್ನಿ (ಕ): ಮ.1.30ಕ್ಕೆ, ಒಬ್ಬಟ್ಟು (ಕ): ಸಂ.4.30ಕ್ಕೆ, ಉದಾಹರಣೆ (ಕ): ರಾ.7ಕ್ಕೆ, ವೆನಂ ದಿ ಲಾಸ್ಟ್ ಡ್ಯಾನ್ಸ್ (3ಡಿ)(ಇಂ): ರಾ.9.15ಕ್ಕೆ.
ಸ್ಕ್ರೀನ್ 4	ಮಾರ್ಟಿನ್ (ಕ): ಮ.1.10ಕ್ಕೆ, ಯಲಾಕುನ್ನಿ (ಕ): ಮ.3.55ಕ್ಕೆ, ವೆಟ್ಟೈಯನ್ (ತ): ಸಂ.6.30ಕ್ಕೆ, ಪಣಿ (ಮ): ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ಸಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ನಾಳೆಯಿಂದ ಮೈಸೂರಲ್ಲಿ ವಸುಂಧರೋತ್ಸವ

ರಾಷ್ಟ್ರೀಯ ಶಾಸ್ತ್ರೀಯ ಸಂಗೀತ–ನೃತ್ಯಗಳ ಹಬ್ಬ, ಡಾ.ವಸುಂಧರ ಅವರ 75ನೇ ಜನ್ಮ ದಿನೋತ್ಸವ, 50 ವರ್ಷಗಳ ಸಂಗೀತ–ನೃತ್ಯಕಲಾ ಆಚರಣೆ

ಮೈಸೂರು, ನ.13(ಜಿಎ)– ವಸುಂಧರ ಪ್ರದರ್ಶಕ ಕಲೆಗಳ ಕೇಂದ್ರದ ವತಿಯಿಂದ 40ನೇ ವರ್ಷದ ರಾಷ್ಟ್ರೀಯ ಮಟ್ಟದ ಶಾಸ್ತ್ರೀಯ ಸಂಗೀತ–ನೃತ್ಯಗಳ ಹಬ್ಬ, ಡಾ.ವಸುಂಧರ ದೊರೆಸ್ವಾಮಿರವರ 75ನೇ ಜನ್ಮ ದಿನೋತ್ಸವ ಹಾಗೂ 50 ವರ್ಷಗಳ ಸಂಗೀತ–ನೃತ್ಯಕಲಾ ಸೇವೆಯ ಸಂಭ್ರಮ ಆಚರಣೆಯನ್ನು ವಿವಿಧ ಭಾಗಗಳಲ್ಲಿ ನ.15 ರಿಂದ 24ರವರೆಗೆ 'ವಸುಂಧರೋತ್ಸವ' ಆಯೋಜಿಸಲಾಗಿದೆ ಎಂದು ಕೇಂದ್ರದ ಸಂಯೋಜಕಿ ಡಾ.ಭುವನೇಶ್ವರಿ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನ.15ರಂದು ಕಾಮಾಕ್ಷಿ ಆಸ್ಪತ್ರೆ ರಸ್ತೆಯಲ್ಲಿರುವ ವಸುಂಧರ ಭವನದಲ್ಲಿ ಸಂಜೆ 5.30ಕ್ಕೆ ಜಿಎಸ್‌ಎಸ್‌ಎಸ್ ಆಡಳಿತಾಧಿಕಾರಿ ಅನುಪಮ ಬಿ.ಪಂಡಿತ್ ಉದ್ಘಾಟಿಸುವರು. ಮಂಗಳೂರು ಗಣೇಶ ಬೀಡಿಯ ಮ್ಯಾನೇಜಿಂಗ್ ಪಾರ್ಟ್‌ನರ್ ಡಾ.ಎಂ.ಜಗನ್ನಾಥ ಶೆಣೈ, ಖ್ಯಾತ ಸಾಹಿತಿ ಕೆ.ಸಿ.ಶಿವಪ್ಪ ಮುಖ್ಯ ಅತಿಥಿಗಳಾಗಿ ಆಗಮಿಸುವರು. ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ ಅಧ್ಯಕ್ಷ ಶುಭ ಧನಂಜಯ ಅಧ್ಯಕ್ಷತೆ ವಹಿಸಲಿದ್ದಾರೆ. ಈ ವೇಳೆ 'ಡಾ.ವಸುಂಧರ ದೊರೆಸ್ವಾಮಿರವರ ನೃತ್ಯ ಪಯಣದ ವ್ಯಕ್ತಿ ಪಯಣ' ಪುಸ್ತಕ ಬಿಡುಗಡೆ ಮಾಡಲಾಗುವುದು ಎಂದರು.

ಅಂದು ಸಂಜೆ 6 ಗಂಟೆಗೆ ವಿದುಷಿ ಸೌಮ್ಯ ಗೋವಿಂದ ನಾಯ್ಡು, 6.45ಕ್ಕೆ ವಿದ್ವಾನ್ ಸುಧನ್ವ ಎಂ.ಎಲ್ ಮತ್ತು ಎಂ.ಎಸ್. ಸುಮೇದಿನಿ, 7.30ಕ್ಕೆ ವಿದುಷಿ ಮಿತ್ರ ನವೀನ್ ಶಿಷ್ಯ ವೃಂದ ನೃತ್ಯ ಪ್ರದರ್ಶನ ನೀಡಲಿದ್ದಾರೆ. ನ.16ರಂದು ಸಂಜೆ 6 ಗಂಟೆಗೆ ವಿದ್ವಾನ್ ಬದ್ರಿ ದಿವ್ಯ ಭೂಷಣ್, ವಿದ್ವಾನ್ ಡಾ.ಅಂಜನಾ ಭೂಷಣ್, 6.45ಕ್ಕೆ ಆಸ್ಟ್ರೇಲಿಯಾದ ವಿದುಷಿ ವರ್ಷಿಣಿ, 7.30ಕ್ಕೆ ಅಂಕಿತ ಶ್ರೀನಿಧಿ ಮತ್ತು ತಂಡದವರು ಪ್ರದರ್ಶನ ನೀಡಲಿದ್ದಾರೆ. ನ.18ರವರೆಗೆ ವಿವಿಧ ನೃತ್ಯ ಪ್ರದರ್ಶನ ಇರಲಿದ್ದು, ನ.19ರಿಂದ 23ರವರೆಗೆ ಕುವೆಂಪು ನಗರದಲ್ಲಿರುವ ಗಾನಭಾರತೀ ರಮಾಗೋವಿಂದ ಕಲಾ ವೇದಿಕೆಯಲ್ಲಿ ರಾಷ್ಟ್ರೀಯ, ಅಂತರರಾಷ್ಟ್ರೀಯ ನೃತ್ಯ ಕಲಾವಿದರು ಪ್ರದರ್ಶನ ನೀಡಲಿದ್ದಾರೆ ಎಂದು ತಿಳಿಸಿದರು.

ನ.24ರಂದು ಶ್ರೀಗಣಪತಿ ಸಚ್ಚಿದಾನಂದ ಆಶ್ರಮದ ನಾದಮಂಟಪದಲ್ಲಿ 'ಮೈಸೂರು ಕಲಾ ದಿವಸ್' ಆಯೋಜಿಸಿದ್ದು, ಅಂದು ಬೆಳಗ್ಗೆ 9.30ಕ್ಕೆ ಸುಮಾರು 550ಕ್ಕೂ ಹೆಚ್ಚು ಕಲಾವಿದರಿಂದ ನೃತ್ಯ ಪ್ರದರ್ಶನ ನಡೆಯಲಿದೆ. ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಗಣಪತಿ ಸಚ್ಚಿದಾನಂದ ಸ್ವಾಮೀಜಿ, ದತ್ತ ವಿಜಯಾನಂದ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಆಳ್ವಾಸ್ ಸಂಸ್ಥೆಯ ಸಂಸ್ಥಾಪಕ ಡಾ.ಮೋಹನ್ ಆಳ್ವ, ಗಣೇಶ ಬೀಡಿ ಮ್ಯಾನೇಜಿಂಗ್ ಪಾರ್ಟ್‌ನರ್ ಡಾ.ಎಂ.ಜಗನ್ನಾಥ ಶೆಣೈ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಕೇಂದ್ರ ಸಂಗೀತ ನಾಟಕ ಅಕಾಡೆಮಿ ಅಧ್ಯಕ್ಷೆ ಡಾ.ಸಂಧ್ಯಾ ಪುರೇಚಾ ಅಧ್ಯಕ್ಷತೆ ವಹಿಸಲಿದ್ದಾರೆ ಎಂದರು.

ಸುದ್ದಿಗೋಷ್ಠಿಯಲ್ಲಿ ಎಂ.ಪಿ. ವಿದ್ಯಾರಾಣಿ, ಶುಭದಾ ಸುಬ್ರಹ್ಮಣ್ಯಂ, ಟಿ.ಆರ್. ಹರೀಶ್ ಉಪಸ್ಥಿತರಿದ್ದರು.

ದೃಷ್ಟಿ ವಿಕಲಚೇತನ ಮಕ್ಕಳಿಗೆ ಹೃದಯ ತಪಾಸಣೆ



ಕಾವೇರಿ ಹೃದಯ–ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ದಿವ್ಯ ಜ್ಯೋತಿ ಚಾರಿಟಬಲ್ ಟ್ರಸ್ಟ್‌ನ ದೃಷ್ಟಿ ವಿಕಲಚೇತನ ಮಕ್ಕಳಿಗೆ ಉಚಿತ ಹೃದಯ ತಪಾಸಣೆ ಶಿಬಿರ ನಡೆಯಿತು.

ಮೈಸೂರು, ನ.13–ಕಾವೇರಿ ಹೃದಯ ಮತ್ತು ಮಲ್ಟಿಸ್ಪೆಷಾಲಿಟಿ ಆಸ್ಪತ್ರೆ ಆವರಣದಲ್ಲಿ ದಿವ್ಯ ಜ್ಯೋತಿ ಚಾರಿಟಬಲ್ ಟ್ರಸ್ಟ್‌ನ ದೃಷ್ಟಿ ವಿಕಲಚೇತನ ಮಕ್ಕಳಿಗೆ ಉಚಿತ ಹೃದಯ ತಪಾಸಣೆ ಶಿಬಿರ ನಡೆಯಿತು.

ಡಾ.ಚಂದ್ರಶೇಖರ್ ಮಾರ್ಗದರ್ಶನದಲ್ಲಿ ನಡೆದ ಶಿಬಿರವು ದಿವ್ಯ ಜ್ಯೋತಿ ಚಾರಿಟಬಲ್ ಟ್ರಸ್ಟ್‌ನ 50ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಹೃದಯ ತಪಾಸಣೆ ನಡೆಸಲಾಯಿತು. ಈ ವೇಳೆ ಹೃದಯ ತಜ್ಞ ಡಾ.ಟಿ.ಎಸ್. ರವಿಕುಮಾರ್ ಮಾತನಾಡಿ, ವಿಕಲಚೇತನ ಮಕ್ಕಳಿಗೆ ಅಗತ್ಯ ಆರೋಗ್ಯ ಸೇವೆಯನ್ನು ಪಡೆಯಲು ಅನೇಕ ಸವಾಲುಗಳನ್ನು ಎದುರಿಸುತ್ತಾರೆ. ಹಾಗಾಗಿ ಈ ಶಿಬಿರದ ಮೂಲಕ ವಿಶೇಷಚೇತನ ಮಕ್ಕಳಲ್ಲಿ ಹೃದಯ ಸಂಬಂಧಿ ಕಾಯಿಲೆಯಿಂದ ಬಳಲುತ್ತಿರುವ ಮಕ್ಕಳಿಗೆ ಚಿಕಿತ್ಸೆ ನೀಡಲಾಗುತ್ತಿದೆ ಎಂದರು. ಈ ವೇಳೆ ಆಸ್ಪತ್ರೆ ಸಿಬ್ಬಂದಿ, ಹಿರಿಯ ವೈದ್ಯರು ಉಪಸ್ಥಿತರಿದ್ದರು.

ಎಸ್‌ಜೆಸಿಇ ಇಂಜಿನಿಯರಿಂಗ್ ಕಾಲೇಜಲ್ಲಿ ರಾಜ್ಯೋತ್ಸವ



ಎಸ್‌ಜೆಸಿಇ ಕಾಲೇಜಿನಲ್ಲಿ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು.

ಮೈಸೂರು, ನ.13–ಶ್ರೀ ಜಯಚಾಮರಾಜೇಂದ್ರ ಇಂಜಿನಿಯರಿಂಗ್ ಕಾಲೇಜು, ಜೆಎಸ್‌ಎಸ್ ವಿಜ್ಞಾನ ಮತ್ತು ತಂತ್ರಜ್ಞಾನ ವಿವಿಯ ಕಲೆ, ಸಾಹಿತ್ಯ ಸಂಘದ ಸಹಯೋಗದೊಂದಿಗೆ ಕಾಲೇಜು ಆವರಣದಲ್ಲಿ ಇತ್ತೀಚೆಗೆ 69ನೇ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು.

ವಿದ್ಯಾರ್ಥಿ ಕ್ಷೇಮಪಾಲನಾ ಅಧಿಕಾರಿ ಪ್ರೊ.ಎಂ.ಎಸ್.ಸುನಿಲ್‌ಕುಮಾರ್ ಮಾತನಾಡಿ, ವೃತ್ತಿ, ವ್ಯವಹಾರಗಳಿಗಾಗಿ ಯಾವುದೇ ಭಾಷೆಯಲ್ಲಿ ಸಂವಹನ ನಡೆಸುತ್ತಿದ್ದರೂ ಮಾತೃಭಾಷೆ ಕನ್ನಡವನ್ನು ಕಡ್ಡಾಯವಾಗಿ ಕಲಿಯಲು ಪ್ರಯತ್ನಿಸಬೇಕು. ಮಾತೃಭಾಷೆ ಕಲಿಕೆಯಿಂದ ನಮ್ಮಲ್ಲಿ ಈ ನೆಲದ ಭಾವ ಸಂವೇದನೆ ವೃದ್ಧಿಸುತ್ತದೆ ಎಂದು ತಿಳಿಸಿದರು.

ಈ ವೇಳೆ ವಿದ್ಯಾರ್ಥಿನಿ ಇಶಾ ನೃತ್ಯದ ಮೂಲಕ ಕನ್ನಡಾಂಬೆ ಭಾವಚಿತ್ರಕ್ಕೆ ಪುಷ್ಪ ಸಮರ್ಪಿಸಿದರು. ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿಕೊಟ್ಟ ವಿದ್ಯಾರ್ಥಿಗಳಿಗೆ 'ಪಟ್ ಅಂತ ಹೇಳಿ' ಹಾಗೂ ರಸಪ್ರಶ್ನೆ ಸ್ಪರ್ಧೆಗಳಲ್ಲಿ ಭಾಗವಹಿಸಿದ್ದ ಸ್ಪರ್ಧಿಗಳಿಗೆ ಪ್ರಮಾಣ ಪತ್ರ ವಿತರಿಸಲಾಯಿತು. ಸಭೆಯಲ್ಲಿ ಡಾ.ಸುಚೇತನ್ ರಂಗಸ್ವಾಮಿ, ಸುಧನ್ವ ಕುಲಕರ್ಣಿ, ಡಾ.ವಾಣಿಶ್ರೀ ಅರುಣ್, ಜೆಎಸ್‌ಎಸ್ ವಿವಿಯ ಪರೀಕ್ಷಾ ನಿಯಂತ್ರಣ ಅಧಿಕಾರಿ ಡಾ.ಬಿ.ನಂಜುಂಡಸ್ವಾಮಿ, ಅಧಿಕಾರಿಗಳಾದ ಡಾ.ಎಂ.ಎನ್.ನಾಗೇಂದ್ರ ಪ್ರಸಾದ್, ಕಾಲೇಜಿನ ಪ್ರಭಾರ ಪ್ರಾಂಶುಪಾಲ ಡಾ.ಸಿ.ನಟರಾಜು, ಜಿ.ಅನುರಾಗ, ಶರ್ಮಿಲಿ ಸೋಸಲೆ ಉಪಸ್ಥಿತರಿದ್ದರು.

ಮೈಸೂರಿನಲ್ಲಿ ನಾಳೆ ಜನಜಾತೀಯ ಗೌರವ ದಿವಸ್

ಮೈಸೂರು,ನ.13– ಪ್ರಧಾನ ಮಂತ್ರಿಗಳು 150ನೇ ಶ್ರೀ ಬಿರ್ಸಾಮುಂಡಾ ಜಯಂತಿಯ ಜನಜಾತೀಯ ಗೌರವ ದಿವಸ್ ಕಾರ್ಯಕ್ರಮದಲ್ಲಿ ನ.15 ರಂದು ಬಿಹಾರದ ಜಮುಯಿಯಲ್ಲಿ ಭಾಗವಹಿಸಲಿದ್ದಾರೆ. ಸದರಿ ದಿನದಂದು ಬೆಳಿಗ್ಗೆ 9.30 ಗಂಟೆಗೆ ಮೈಸೂರಿನ ಕೇರ್ಗಳ್ಳಿಯಲ್ಲಿರುವ ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯಲ್ಲಿ ದ್ವಿ ಮುಖ ಸಂಪರ್ಕ (2 way Connectivity) ಮೂಲಕ ಕಾರ್ಯಕ್ರಮದ ವೀಕ್ಷಣೆ ಹಾಗೂ ಪ್ರಧಾನ ಮಂತ್ರಿಗಳೊಂದಿಗೆ ಫಲಾನುಭವಿಗಳ ಜೊತೆ ಸಂವಾದವನ್ನು ಆಯೋಜಿಸಲಾಗಿದೆ ಎಂದು ಸಮಗ್ರ ಬುಡಕಟ್ಟು ಅಭಿವೃದ್ಧಿ ಯೋಜನೆಯ ಯೋಜನಾ ಸಮನ್ವಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಫೇಸ್‌ಬುಕ್‌ನಲ್ಲಿ ಜಡ್ಜ್‌ಗೆ ಅವಹೇಳನ: ವಕೀಲನ ಮೇಲಿನ ಕೇಸ್ ರದ್ದತಿಗೆ ಹೈಕೋರ್ಟ್ ನಕಾರ

ಬೆಂಗಳೂರು, ನ.13– ವಾರಣಾಸಿಯ ಜ್ಞಾನವಾಪಿ ಮಸೀದಿಯಲ್ಲಿ ಹಿಂದೂಗಳಿಗೆ ಪೂಜೆಗೆ ಅವಕಾಶ ಕಲ್ಪಿಸಿ ತೀರ್ಪು ಹೊರಡಿಸಿದ ಉತ್ತರ ಪ್ರದೇಶದ ಜಿಲ್ಲಾ ನ್ಯಾಯಾಧೀಶರ ಬಗ್ಗೆ ಫೇಸ್‌ಬುಕ್‌ನಲ್ಲಿ ಅವಹೇಳನಕಾರಿ ಪೋಸ್ಟ್ ಹಾಕಿದ ಆರೋಪದ ಮೇಲೆ ರಾಮನಗರದ ವಕೀಲ ಚಾನ್ ಪಾಷಾ ಐಜೂರ್ ವಿರುದ್ಧ ದಾಖಲಾಗಿರುವ ಎಫ್‌ಐಆರ್ ರದ್ದುಪಡಿಸಲು ಹೈಕೋರ್ಟ್ ನಿರಾಕರಿಸಿದೆ.

ರಾಮನಗರ ಪಟ್ಟಣದ ಗೌಸಿಯಾನಗರ ನಿವಾಸಿಯಾದ ವಕೀಲ ಚಾನ್ ಪಾಷಾ ಐಜೂರ್ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ, ಆರೋಪ ಗಳನ್ನು ಕೈ ಬಿಡಲು ಕೋರಿ ಅರ್ಜಿ ವಿಚಾ ರಣಾ ನ್ಯಾಯಾಲಯದ ಮುಂದೆ ಅರ್ಜಿ ಸಲ್ಲಿಸಿ. ಎಫ್‌ಐಆರ್ ರದ್ದುಪಡಿಸಲ್ಲ. ತಡೆ ಯಾಜ್ಞೆಯೂ ನೀಡಲ್ಲ ಎಂದು ಮೌಖಿಕವಾಗಿ ತಿಳಿಸಿ ಅರ್ಜಿ ಇತ್ಯರ್ಥಪಡಿಸಿದರು.

ನ್ಯಾಯಮೂರ್ತಿಗಳು ನಾನು ಅರ್ಜಿದಾರರ ವಿರುದ್ಧದ ಎಫ್‌ಐಆರ್‌ಗೆ ತಡೆ ನೀಡಲ್ಲ. ಪೋಸ್ಟ್‌ನಲ್ಲಿ ಭಯಾನಕ ಪದಗಳನ್ನು ಬಳಸಿ ದ್ದಾರೆ ಎಂದು ಗರಂ ಆದರು. ಅರ್ಜಿದಾರನ ಪರ ವಕೀಲರು, ಚಾನ್ ಪಾಷಾ ರಾಮನಗರದಲ್ಲಿ ವಕೀಲರಾಗಿದ್ದಾರೆ. ಪ್ರಕರಣ ಕುರಿತಂತೆ ಅವರು ತಮ್ಮ ಫೇಸ್ ಬುಕ್ ಹ್ಯಾಕ್ ಆಗಿದೆ. ಖಾತೆ ದುರ್ಬಳಕೆ ಮಾಡಿದ್ದಾರೆ ಎಂಬುದಾಗಿ ಪೊಲೀಸರಿಗೆ ದೂರು ಸಲ್ಲಿಸಿದ್ದಾರೆ ಎಂದರು. ಈ ವಾದ ಒಪ್ಪದ ನ್ಯಾಯಮೂರ್ತಿಗಳು, ಆದರೂ ಪರವಾಗಿಲ್ಲ. ನಾನು ಮಾತ್ರ ಎಫ್‌ಐಆರ್‌ಗೆ ತಡೆ ನೀಡಲ್ಲ ಹೇಳಿಕೆ ನೀಡುವುದಕ್ಕೂ ಇತಿ–ಮಿತಿ ಇರುತ್ತದೆ. ಈ ರೀತಿ ಹೇಳಿಕೆ ನೀಡಬಹುದೇ? ಏನ್ರಿ ಮೂತ್ರ ಅದು–ಇದು ಎಂದು ಹೇಳುವುದು? ನಿಜ ವಾಗಿಯೂ ಇದು ದುರ್ವರ್ತನೆ. ಪ್ರಕರಣದಲ್ಲಿ ನಾನು ಮಧ್ಯಪ್ರವೇಶಿಸುವುದಿಲ್ಲ ಎಂದರು.

ಬೇಲೆಕೇರಿ ಬಂದರು ಅದಿರು ನಾಪತ್ತೆ ಪ್ರಕರಣ
ಸತೀಶ್ ಸೈಲ್ ಶಿಕ್ಷೆ ಅಮಾನತು

ಬೆಂಗಳೂರು, ನ.13– ಬೇಲೆಕೇರಿ ಬಂದರು ಅದಿರು ನಾಪತ್ತೆ ಪ್ರಕರಣಕ್ಕೆ ಸಂಬಂಧಿಸಿದಂತೆ 7 ವರ್ಷಗಳ ಕಾಲ ಜೈಲು ಶಿಕ್ಷೆಗೆ ಒಳಗಾಗಿದ್ದ ಕಾಂಗ್ರೆಸ್ ಶಾಸಕ ಸತೀಶ್ ಸೈಲ್‌ಗೆ ಬಿಗ್ ರಿಲೀಫ್ ಸಿಕ್ಕಿದೆ. ಸತೀಶ್ ಸೈಲ್ ಹಾಗೂ ಇತರ ಆರೋಪಿಗಳಿಗೆ ಜನ ಪ್ರತಿನಿಧಿಗಳ ವಿಶೇಷ ನ್ಯಾಯಾಲಯ ನೀಡಿದ್ದ ಶಿಕ್ಷೆಯನ್ನು ಅಮಾನತ್ತಿನಲ್ಲಿಟ್ಟು ಹೈಕೋರ್ಟ್ ಆದೇಶಿಸಿದೆ.



ಬೇಲೆಕೇರಿ ಬಂದರಿನಲ್ಲಿದ್ದ ಅದಿರು ನಾಪತ್ತೆ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಚಾರಣೆ ನಡೆಸಿದ್ದ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಒಟ್ಟು ಆರು ಪ್ರಕರಣಗಳಲ್ಲಿ ಶಿಕ್ಷೆ ಘೋಷಣೆ ಮಾಡಿತ್ತು. ಅಲ್ಲದೆ, 44 ಕೋಟಿಗೂ ಅಧಿಕ ದಂಡ ವಿಧಿಸಿತ್ತು. ಒಳಸಂಚು ಆರೋಪದಲ್ಲಿ 5 ವರ್ಷ, ವಂಚನೆ ಪ್ರಕರಣದಲ್ಲಿ 7 ವರ್ಷ, ಕಳ್ಳತನ ಪ್ರಕರಣದಲ್ಲಿ 3 ವರ್ಷ ಶಿಕ್ಷೆ ವಿಧಿಸಿತ್ತು. ಅಲ್ಲದೆ, 4, 5 ಹಾಗೂ 6ನೇ ಪ್ರಕರಣದಲ್ಲಿ ಕೂಡಾ ಶಿಕ್ಷೆಯನ್ನು ವಿಧಿಸಿತ್ತು. ಅತೀ ಹೆಚ್ಚು 7 ವರ್ಷ ಶಿಕ್ಷೆ ಅಂತಿಮವಾಗಿತ್ತು. ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ನೀಡಿದ್ದ ಈ ತೀರ್ಪು ದೊಡ್ಡ ಸದ್ದು ಮಾಡಿತ್ತು.

ಇದೀಗ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರ ಏಕಸದಸ್ಯ ಪೀಠ ಅರ್ಜಿಗಳ ವಿಚಾರಣೆ ನಡೆಸಿ ಮಹತ್ವದ ಆದೇಶ ಪ್ರಕಟಿಸಿದೆ. ಸತೀಶ್ ಸೈಲ್ ಹಾಗೂ ಇತರ ಆರೋಪಿಗಳಿಗೆ ಜನ ಪ್ರತಿನಿಧಿಗಳ ವಿಶೇಷ ನ್ಯಾಯಾಲಯ ನೀಡಿದ್ದ ಶಿಕ್ಷೆಯನ್ನು ಅಮಾನತಿನಲ್ಲಿಡಲು ಹೈಕೋರ್ಟ್ ಆದೇಶ ಮಾಡಿದೆ. ಅಪರಾಧಿಗಳ ಪರವಾಗಿ ವಾದ ಮಂಡಿಸಿದ್ದ ಹಿರಿಯ ವಕೀಲ ಸಿವಿ ನಾಗೇಶ್, ವಿಚಾರಣೆಯ ಹಂತದಲ್ಲಿ ಆರೋಪಿಗಳ ನಡತೆಯನ್ನು ಅರ್ಜಿಯ ವಿಚಾ ರಣೆಯ ಸಂದರ್ಭದಲ್ಲಿ ಪರಿಗಣಿಸಬೇಕು ಎಂದು ಸುಪ್ರೀಂ ಕೋರ್ಟ್ ಹೇಳಿದೆ. ಅಲ್ಲದೆ, ದೋಷಿಗಳಿಗೆ ವಿಧಿಸಿರುವ ದುಬಾರಿ ದಂಡ ಮೊತ್ತವನ್ನು ಪಾವತಿಸುವ ಕುರಿತಾಗಿ ಪೀಠ ವಾದ ಆಲಿಸ ಬೇಕು ಎಂದು ಮನವಿ ಮಾಡಿದ್ದರು.

ಇಷ್ಟೊಂದು ದುಬಾರಿ ಮೊತ್ತವನ್ನು ಪಾವತಿಸಲು ಹೇಗೆ ಸಾಧ್ಯ? ಸತೀಶ್ ಸೈಲ್ ಒಟ್ಟು 15 ಕೋಟಿ ದಂಡವನ್ನು ಪಾವತಿ ಮಾಡಬೇಕಾಗುತ್ತದೆ ಎಂದು ಪೀಠದ ಗಮನ ಸೆಳೆದಿದ್ದರು. ದೋಷಿಗಳ ನಡತೆಯನ್ನು ಪರಿಗಣಿಸಿ ಜಾಮೀನು ನೀಡಬೇಕು ಹಾಗೂ ಶಿಕ್ಷೆಯನ್ನು ರದ್ದು ಪಡಿಸಬೇಕು ಎಂದು ಮನವಿ ಮಾಡಿದ್ದರು. ಆದರೆ ಸಿಬಿಐ ಪರವಾಗಿ ವಾದ ಮಾಡಿದ್ದ ಎಸ್‌ಪಿಪಿ ಪ್ರಸನ್ನಕುಮಾರ್, ಈ ಪ್ರಕರಣದಲ್ಲಿ ಒಟ್ಟಾರೆ ನೋಡಿದರೆ 42 ವರ್ಷ ಶಿಕ್ಷೆಯಾಗಬೇಕಿದೆ. ಈ ನೆಲೆಯಲ್ಲಿ ದಂಡ ಪಾವತಿಯಿಂದ ವಿನಾಯಿತಿ ನೀಡಬಾರದು ಎಂದು ವಾದಿಸಿದರು.

ಕಂಪನಿಗಳಿಗೆ ವಿಧಿಸಿರುವ ಪೂರ್ತಿ ದಂಡದ ಮೊತ್ತವನ್ನು ನ್ಯಾಯಾಲಯದಲ್ಲಿ ಠೇವಣಿ ಇಡಬೇಕು. ಕಂಪನಿಯ ವ್ಯವಸ್ಥಾಪಕ ನಿರ್ದೇಶಕರಿಗೆ ವಿಧಿಸಿರುವ ದುಬಾರಿ ದಂಡದ ಮೊತ್ತದಲ್ಲಿ ಶೇ.25ರಷ್ಟನ್ನು ವಿಚಾರಣಾಧೀನ ನ್ಯಾಯಾಲಯದಲ್ಲಿ ಆರು ವಾರಗಳಲ್ಲಿ ಠೇವಣಿ ಇಡಬೇಕು ಎಂಬ ಷರತ್ತಿಗೆ ಒಳಪಟ್ಟು ವಿಶೇಷ ನ್ಯಾಯಾಲಯ ವಿಧಿಸಿರುವ ಶಿಕ್ಷೆಯನ್ನು ಹೈಕೋರ್ಟ್ ಅಮಾನತುಗೊಳಿಸಿದೆ.

ನ.25, 26ರಂದು ಪ್ರಸಿದ್ಧ ಬಸವನಗುಡಿ ಕಡಲೇಕಾಯಿ ಪರಿಷೆ

ಬೆಂಗಳೂರು: ಪ್ರಸಿದ್ಧ ಬಸವನಗುಡಿ ಕಡಲೇಕಾಯಿ ಪರಿಷೆ ನ.25 ಮತ್ತು 26 ರಂದು ನಡೆಯಲಿದೆ.

ಎರಡು ದಿನಗಳ ಕಾಲ ನಡೆಯಲಿರುವ ಕಡಲೆಕಾಯಿ ಪರಿಷೆಗೆ ವ್ಯಾಪಾರಿಗಳಿಂದ ಸುಂಕ ವಸೂಲಾತಿಗೆ ಬ್ರೇಕ್ ಹಾಕಲು ಮುಜರಾಯಿ ಇಲಾಖೆ ನಿರ್ಧರಿಸಿದೆ. ಸಚಿವ ರಾಮಲಿಂಗಾ ರೆಡ್ಡಿ ಇಂದು ಅಧಿಕಾರಿಗಳ ಜೊತೆ ಸಭೆ ಮಾಡಿ ಕಡಲೆಕಾಯಿ ಪರಿಷೆ ಸಂಬಂಧ ಮಾರ್ಗಸೂಚಿ ಬಿಡುಗಡೆ ಮಾಡಲಿದ್ದಾರೆ. ನ. 15ರಿಂದ ಮಲ್ಲೇಶ್ವರಂ ಕಡಲೆಕಾಯಿ ಪರಿಷೆ ಆರಂಭವಾಗಲಿದ್ದು ಸಂಜೆ 4.30ಕ್ಕೆ ಕೇಂದ್ರದ ಮಾಜಿ ಸಚಿವ ವೀರಪ್ಪಮೊಯ್ಲಿ ಉದ್ಘಾಟಿಸಲಿದ್ದಾರೆ.

ವಯನಾಡಲ್ಲಿ ಶೇ. 62.39 ಮತದಾನ

ವಯನಾಡು, ನ. 13– ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ಸ್ಪರ್ಧಿಸಿರುವ ಕೇರಳದ ವಯನಾಡು ಲೋಕಸಭಾ ಕ್ಷೇತ್ರದಲ್ಲಿ ಶೇ. 62.39ರಷ್ಟು ಮತದಾನ ನಡೆದಿದೆ.



ಸುಮಾರು 14 ಲಕ್ಷ ಮತದಾರರನ್ನು ಹೊಂದಿರುವ ಈ ಕ್ಷೇತ್ರದಲ್ಲಿ 1354 ಮತಗಟ್ಟೆಗಳನ್ನು ಸ್ಥಾಪಿಸಲಾಗಿತ್ತು. ಕಾಂಗ್ರೆಸ್ ಅಭ್ಯರ್ಥಿ ಪ್ರಿಯಾಂಕಾ ಗಾಂಧಿಯವರು ಕಲ್ಪೆಟ್ಟಾ ಮತ್ತು ವೈಥಿರಿ ಪ್ರದೇಶಗಳಿಗೆ ಭೇಟಿ ನೀಡಿದ್ದರು. ಇವರಿಗೆ ಕೇರಳ ಕಾಂಗ್ರೆಸ್ ನಾಯಕರು ಸಾಥ್ ನೀಡಿದ್ದರು. ಇತ್ತೀಚೆಗೆ ವಯನಾಡ್‌ನಲ್ಲಿ ಸಂಭವಿಸಿದ್ದ ಪ್ರಕೃತಿ ವಿಕೋಪದಲ್ಲಿ ಅಂಗವಿಕಲರಾಗಿದ್ದ ಹಲವರು ಮತಗಟ್ಟೆಗೆ ಆಗಮಿಸಿ ಮತದಾನ ಮಾಡಿದ ದೃಶ್ಯ ಕಂಡುಬಂತು.

ದೇಶದ ಗಮನ ಸೆಳೆದಿರುವ ಈ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿ ಪ್ರಿಯಾಂಕಾ ಗಾಂಧಿ. ಭಾರತ ಕಮ್ಯುನಿಷ್ಟ್ ಪಕ್ಷದ ಸತ್ಯನ್ ಮೋಕೆರಿ, ಬಿಜೆಪಿಯಿಂದ ನವ್ಯ ಹರಿದಾಸ್ ಸೇರಿದಂತೆ 16 ಅಭ್ಯರ್ಥಿಗಳು ಕಣದಲ್ಲಿದ್ದರು. ಲೋಕಸಭೆಗೆ ನಡೆದ ಸಾರ್ವತ್ರಿಕ ಚುನಾವಣೆಯಲ್ಲಿ ವಯನಾಡು ಮತ್ತು ರಾಯ್ ಬರೇಲಿ ಕ್ಷೇತ್ರಗಳಲ್ಲಿ ಸ್ಪರ್ಧಿಸಿ ಗೆಲುವು ಸಾಧಿಸಿದ್ದ ರಾಹುಲ್ ಗಾಂಧಿ ರಾಯ್‌ಬರೇಲಿ ಕ್ಷೇತ್ರ ಉಳಿಸಿಕೊಂಡು ವಯನಾಡು ಕ್ಷೇತ್ರಕ್ಕೆ ರಾಜೀನಾಮೆ ನೀಡಿದ್ದರಿಂದ ತೆರವಾದ ಸ್ಥಾನದಲ್ಲಿ ಅವರ ಸಹೋದರೆ ಪ್ರಿಯಾಂಕಾ ಗಾಂಧಿ ಇದೇ ಮೊದಲ ಬಾರಿಗೆ ಚುನಾವಣೆಯಲ್ಲಿ ಸ್ಪರ್ಧಿಸಿದ್ದಾರೆ. ನ. 23ರಂದು ಫಲಿತಾಂಶ ಹೊರ ಬೀಳಲಿದೆ.

ವಿಧಾನಸೌಧಕ್ಕೆ ಬೀಗ ಹಾಕಿ ಹಣದ ಚೀಲ ತಂದು ಚುನಾವಣೆ ಮಾಡಿದ್ದಾರೆ

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಮಾಜಿ ಸಿಎಂ ಬೊಮ್ಮಾಯಿ ವಾಗ್ದಾಳಿ

ಬೆಂಗಳೂರು, ನ.13 (ಕೆಎಂಶಿ)– ರಾಜ್ಯ ಸರ್ಕಾರ ಹದಿನೈದು ದಿನದಿಂದ ವಿಧಾನಸೌಧಕ್ಕೆ ಕೀಲಿ ಹಾಕಿ ಹಣದ ಚೀಲ ತೆಗೆದುಕೊಂಡು ಬಂದು ಚುನಾವಣೆ ಮಾಡಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಜಾಪ್ರಭುತ್ವ ಮೌಲ್ಯಗಳನ್ನು ಗಾಳಿಗೆ ತೂರಿ ಸರ್ಕಾರಿ ಕೆಲಸಗಳನ್ನು ನಿಲ್ಲಿಸಿ ಚುನಾವಣೆ ನಡೆಸಿದ್ದಾರೆ. ಈ ಮೂಲಕ ತಮ್ಮ ರಾಜಕೀಯ ಅಧಃಪತನ ತೋರಿಸಿದ್ದಾರೆ ಎಂದರು. ಉಪಚುನಾವಣೆಯಲ್ಲಿ ಪೊಲೀಸ್ ಅಧಿಕಾರ ದುರುಪಯೋಗ ಮಾಡಿಕೊಂಡ ಬಗ್ಗೆ ಚುನಾವಣಾ ಆಯೋಗಕ್ಕೆ ದೂರು ನೀಡಿದ್ದೇವೆ. ಸೋಲಿನ ಭಯದಲ್ಲಿ ಕಾಂಗ್ರೆಸ್ ತುಷ್ಟೀಕರಣ ಮಾಡುತ್ತಿದೆ. ರಾಗದ್ವೇಷ ಇಲ್ಲದೆ ಕೆಲಸ ಮಾಡುವ ಪ್ರಮಾಣವಚನ ಸ್ವೀಕರಿಸಿ, ಚುನಾವಣೆ ಗೆಲ್ಲಲು ತುಷ್ಟೀಕರಣ ಮಾಡುತ್ತಿದೆ ಎಂದರು.

25ನೇ ವರ್ಷದ ಚಿರಸ್ಮರಣೆ

ಸಿ.ಆರ್.ಯಲ್ಲಮ್ಮ

ಸದಾಕಾಲ ನಿಮ್ಮನ್ನು ಸ್ಮರಿಸುವ ಎಸ್.ವಿ.ಸುಬ್ಬಣ್ಣ & ಸನ್ಸ್ ಗ್ರೂಪ್ ಮತ್ತು ಕುಟುಂಬವರ್ಗದವರು, ಶ್ರೀರಂಗಪಟ್ಟಣ

ಪ್ಲಾಸ್ಟಿಕ್ ಬಳಕೆ ನಿಷೇಧಿಸಿ ಪರಿಸರವನ್ನು ಕಾಪಾಡಿ

ಮೈಸೂರು ಮಿತ್ರ

ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

-ಜಾಹೀರಾತು ವ್ಯವಸ್ಥಾಪಕರು

ಆರ್ಹರಿಗೆ ಉಚಿತ ಹೊದಿಕೆ ವಿತರಣೆ

ಒಂಟಿಯಾಗಿ ಜೀವಿಸುತ್ತಿರುವ ಬಡ ವಿಧವೆ ಮಹಿಳೆಯರಿಗೆ ಉಚಿತವಾಗಿ ಹೊದಿಕೆ ವಿತರಿಸಲು ಉದ್ದೇಶಿಸಲಾಗಿದೆ ಮೊದಲು ಬರುವ 500 ಜನರಿಗೆ ನೀಡಲಾಗುವುದು ಹಾಗೂ ಹೊದಿಕೆ ಬಯಸುವವರು ತಮ್ಮ ರೇಶನ್ ಕಾರ್ಡ್ ಹಾಗೂ ಆಧಾರ್‌ಕಾರ್ಡ್ ಪ್ರತಿ ಹಾಗೂ ಮೂಲ ಪ್ರತಿ ತರಬೇಕು. ತಂದು ಕೊಡಬೇಕಾದ ವಿಳಾಸ : ಭಾವಸಾರ್ ಶ್ರೀ ಗಣೇಶ್ ಟೆಕ್ಸ್‌ಟೈಲ್, ಅಗ್ರಹಾರ, ನೂರೊಂದು ಗಣಪತಿ ಹಿಂಭಾಗದ ಬಸವೇಶ್ವರ ರಸ್ತೆ 5ನೇ ಕ್ರಾಸ್, ಮೈಸೂರು-570004, ಮೊದಲು ಬಂದವರಿಗೆ ಮಾತ್ರ ಆದ್ಯತೆ.

KNC INNOVATIVE GLOBAL SCHOOL & P U COLLEGE MYSURU

WISHES

HAPPY CHILDREN'S DAY

Dr. K N Chandrashekar
Chairman

"TODAY'S CHILDREN ARE TOMORROW'S CITIZEN"

"ಮಕ್ಕಳು ನಮ್ಮ ರಾಷ್ಟ್ರದ ಸಂಪತ್ತು"

"LET US BUILD A STRONG NATION BY PROVIDING FOOD, EDUCATION & PROTECTION TO OUR CHILDREN"

ಹಸಿರು ನಮ್ಮ ಉಸಿರು

